ಸಂಪುಟ: 21, ಸಂಚಿಕೆ: 143, ಪುಟಗಳು: 8, ಶನಿವಾರ, 2 ಮಾರ್ಚ್ 2024 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ನೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

**ಪಂಚಾಂಗ**

(ಶನಿವಾರ 2, ಮಾರ್ಚ್ -2024)

- ಸಂವತ್ಸರ- ಶೋಭಕೃತ್, ಋತು-ಶಿಶಿರ
- ಅಯನ-ಉತ್ತರಾಯಣ, ಮಾಸ- ಮಾಘ
- ಪಕ್ಷ- ಕೃಷ್ಣ, ತಿಥಿ- ಏಕದಶಿ
- ನಕ್ಷತ್ರ- ಹುಬ್ಬಾ
- ರಾಹುಕಾಲ - 09:04AM 10:40 AM
- ಗುಳಿಕಕಾಲ - 05:52 AM 07:28 AM
- ಯಮಗಂಡಕಾಲ - 1:52 PM 3:28 PM

## ಅಫ್ಘಾನಿಸ್ತಾನದಲ್ಲಿ ಭಾರೀ ಹಿಮಪಾತ

# 15 ಸಾವು, 30 ಜನರಿಗೆ ಗಾಯ



**ಕಾಬೂಲ್:** ಕಳೆದ ಮೂರು ದಿನಗಳಿಂದ ಅಫ್ಘಾನಿಸ್ತಾನದ ಹಲವು ಪ್ರಾಂತ್ಯಗಳಲ್ಲಿ ವ್ಯಾಪಕ ಹಿಮಪಾತವಾಗುತ್ತಿದ್ದು, 15 ಜನ ಪ್ರಾಣ ಕಳೆದುಕೊಂಡಿದ್ದಾರೆ. ಹಾಗೂ 30 ಜನರು ಗಾಯಗೊಂಡಿದ್ದಾರೆ ಎಂದು ವರದಿ ಹೇಳಿದೆ. ವರದಿಗಳ ಪ್ರಕಾರ ಬಾಲ್ಖ್ ಮತ್ತು ಫರಿಯಾಬ್ ಪ್ರಾಂತ್ಯಗಳಲ್ಲಿ ಪ್ರಾಣಿಗಳು ಕೂಡ ಸಾವನ್ನಪ್ಪಿದೆ ಎಂದು ಹೇಳಿದೆ. ಸುಮಾರು ಹತ್ತು ಸಾವಿರ ಪ್ರಾಣಿಗಳು ಸಾವನ್ನಪ್ಪಿದೆ ಎಂದು ವರದಿಯಲ್ಲಿ ಹೇಳಲಾಗಿದೆ. ಸಾರ್-ಇ-ಪುಲ್ ನಿವಾಸಿ ಅಬ್ದುಲ್ ಖಾದಿರ್ ಅವರು ಈ ಬಗ್ಗೆ ಮಾಹಿತಿ ನೀಡಿದ್ದಾರೆ. ಜನಸಂಖ್ಯೆ ಹೆಚ್ಚಿರುವ ಪ್ರದೇಶದಲ್ಲಿ ಆತಂಕ ಹೆಚ್ಚಾಗಿದೆ. ಮೂರು ದಿನದಿಂದ ಹಿಮಪಾತ ಹೆಚ್ಚಾಗಿದೆ. ಜಾನುವಾರುಗಳು ಕೂಡ ಸಾವನ್ನಪ್ಪುತ್ತಿದೆ. ಇದರಿಂದ ಇಲ್ಲಿನ ಜನರಲ್ಲಿ ಆತಂಕ ಹೆಚ್ಚಾಗಿದೆ. ಅನೇಕ ರಸ್ತೆಗಳನ್ನು ನಿರ್ಬಂಧಿಸಲಾಗಿದೆ. ಇದರಿಂದ ಯಾವುದೇ ಸಂಪರ್ಕವನ್ನು ಸಾಧಿಸಲು ಸಾಧ್ಯವಾಗುತ್ತಿಲ್ಲ ಎಂದು ಹೇಳಿದ್ದಾರೆ.

ಸರ್ಕಾರದ ನೆರವಿನ ತುರ್ತು ಅಗತ್ಯವಿದೆ. ವಿಶೇಷವಾಗಿ ರಸ್ತೆ ತಡೆ ಮತ್ತು ಜಾನುವಾರು, ಹಾಗೂ ಜನರಿಗೆ ಇಲ್ಲಿ ಸಹಾಯ ಮಾಡಬೇಕಿದೆ ಎಂದು ಮತ್ತೊಬ್ಬ ನಿವಾಸಿ ಅಮಾನುಲ್ಲಾ ಹೇಳಿದ್ದಾರೆ. ಈಗಾಗಲೇ ಅಫ್ಘಾನಿಸ್ತಾನವು ವಿಶೇಷವಾಗಿ ಜಾನುವಾರು ಮಾಲೀಕರಿಗೆ ಪರಿಹಾರವನ್ನು ನೀಡಲು ವಿವಿಧ ಸಚಿವಾಲಯಗಳನ್ನು ಒಳಗೊಂಡ ಸಮಿತಿಯ ರಚನೆ ಮಾಡುವಂತೆ ಹೇಳಿದೆ. ಬಾಲ್ಖ್, ಜಾವ್ಜಾನ್, ಬದ್ಗಿಸ್, ಫರಿಯಾಬ್ ಮತ್ತು ಹೆರಾತ್ ಪ್ರಾಂತ್ಯಗಳಲ್ಲಿ ಜಾನುವಾರು ಮಾಲೀಕರ ಸಾಹಯ ಐವತ್ತು ಮಿಲಿಯನ್ ಅಫ್ಘಾನಿ ಅಧಿಕಾರಿಗಳನ್ನು ನಿಯೋಜಿಸಲಾಗಿದೆ.

## ಲಾಲ್ ಬಾಗ್‌ನಲ್ಲಿ ಪಶ್ಚಿಮ ಘಟ್ಟದ ಕಾಡು ನಿರ್ಮಾಣ

# ಆರು ಎಕರೆ ಜಾಗದಲ್ಲಿ 300ಕ್ಕೂ ಹೆಚ್ಚು ಬಗೆಯ ಗಿಡಗಳು

**ಬೆಂಗಳೂರು:** ನಿತ್ಯ ಹರಿದ್ವರ್ಣದ ಕಾಡುಗಳು ಅಂದ್ರೆ ಯಾರಿಗೆ ತಾನೇ ಇಷ್ಟ ಆಗೋಲ್ಲ ಹೇಳಿ. ದಟ್ಟ ಅಡವಿಯ ಮಧ್ಯೆ ಸ್ವಲ್ಪ ಹೊತ್ತು ಇದ್ದು ಬಂದ್ರೆ ಸಾಕು ಅಂತ ಎಷ್ಟೋ ಜನ ಪಶ್ಚಿಮ ಘಟ್ಟಗಳು, ಮಲೆನಾಡು, ಊಟಿ, ಕೇರಳ, ಆಗೊಂಬೆ ಸೇರಿದಂತೆ ವಿವಿಧೆಡೆ ಪ್ರವಾಸಗಳಿಗೆ ಹೋಗಿ ಬರ್ತಾರೆ. ಆದ್ರೆ ಇನ್ಮುಂದೆ ಈ ವೆಸ್ಟರ್ನ್ ಗಾರ್ಡ್‌ಗಳನ್ನ ನೋಡ್ಬೇಕು ಅಂದ್ರೆ ದೂರದ ಊರಿಗಳಿಗೆ ಹೋಗ್ಬೇಕಿಲ್ಲ. ಬದಲಾಗಿ ನಗರದ ಸಸ್ಯಕಾಶಿ ಲಾಲ್ ಬಾಗ್ ಬಂದ್ರೆ ಸಾಕು. ಇಲ್ಲಿ ನೀವು ಕಾಡಿನ ಅನುಭವ ಪಡೆಯಬಹುದು. ಪುಟ 2



## ರಾಮೇಶ್ವರಂ ಕೆಫೆಯಲ್ಲಿ ಬಾಂಬ್ ಸ್ಫೋಟ

# ನಾಲ್ವರು ಶಂಕಿತರ ವಶ

**ಬೆಂಗಳೂರು:** ಬೆಂಗಳೂರಿನ ರಾಮೇಶ್ವರಂ ಕೆಫೆಯಲ್ಲಿ ಬಾಂಬ್ ಸ್ಫೋಟ ಪ್ರಕರಣ ಸಂಬಂಧ ನಾಲ್ವರು ಶಂಕಿತರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ನಾಲ್ವರನ್ನು ವಶಕ್ಕೆ ಪಡೆದು ಅಜ್ಞಾತ ಸ್ಥಳದಲ್ಲಿ ವಿಚಾರಣೆ ನಡೆಸುತ್ತಿದ್ದಾರೆ. ಗುಪ್ತಚರ ಇಲಾಖೆ ಅಧಿಕಾರಿಗಳು ನಾಲ್ವರ ವಿಚಾರಣೆ ನಡೆಸುತ್ತಿದ್ದಾರೆ.

ಅಬ್ದುಲ್ ಕಲಾಂ ಅವರ ಸ್ಫೂರ್ತಿಯಿಂದ ತೆರೆದಂತಹ ರಾಮೇಶ್ವರಂ ಕೆಫೆ, ಭಾರತದಾದ್ಯಂತ ಬ್ರಾಂಚ್‌ಗಳನ್ನ ಹೊಂದಿದೆ. ರಾಮೇಶ್ವರಂ ಕೆಫೆ ದೇಗುಲದ ಕಾನ್ಸೆಪ್ಟ್ ನಲ್ಲಿ ನಿರ್ಮಾಣವಾಗಿದೆ. ಬೆಂಗಳೂರಿನಲ್ಲೂ ಹಲವು ಬ್ರಾಂಚ್ ಗಳಿದ್ದು, ಜನ ಸಾಮಾನ್ಯರ ಜೊತೆಗೆ ಐಟಿ ಸಿಬ್ಬಂದಿಯ ಹಾಟ್ ಫೇವರೆಟ್ ಕೂಡ ಆಗಿದೆ. ಇಂತಹ ಕೆಫೆಯಲ್ಲಿ ನಿನ್ನೆ(01) ಮಧ್ಯಾಹ್ನ ಊಟದ ಸಮಯಕ್ಕೆ ಸರಿಯಾಗಿ ಬಾಂಬ್ ಬ್ಲಾಸ್ಟ್ ಆಗಿದೆ. ವಿವಿಧ ತನಿಖಾ ತಂಡಗಳು ರಾತ್ರಿಯೆಲ್ಲಾ ತನಿಖೆ ನಡೆಸಿ ಮಾಹಿತಿ ಕಲೆ ಹಾಕಿದ್ದಾರೆ. ಸದ್ಯ ನಾಲ್ವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ.

ರಾಮೇಶ್ವರಂ ಕೆಫೆಯಲ್ಲಿ ಬಾಂಬ್ ಸ್ಫೋಟ ಪ್ರಕರಣ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪೊಲೀಸ್ ಅಧಿಕಾರಿಗಳ ಸಭೆ ಕರೆದಿದ್ದಾರೆ. ಮಧ್ಯಾಹ್ನ 1 ಗಂಟೆಗೆ ಗೃಹಕಚೇರಿ ಕೃಷ್ಣಾದಲ್ಲಿ ಸಭೆ ನಡೆಯಲಿದೆ. ಸಭೆಯಲ್ಲಿ ಪೊಲೀಸ್ ಮಹಾ ನಿರ್ದೇಶಕ ಅಲೋಕ್ ಮೋಹನ್ , ನಗರ ಪೊಲೀಸ್ ಆಯುಕ್ತ ದಯಾನಂದ್ ಸೇರಿ ಹಲವರು ಭಾಗಿಯಾಗಿದ್ದಾರೆ. ಮೈಸೂರಿನಿಂದ ಬೆಂಗಳೂರಿಗೆ ಸಿಎಂ ಸಿದ್ದರಾಮಯ್ಯ ಆಗಮಿಸಿ ಸಭೆಯಲ್ಲಿ ಭಾಗಿಯಾಗಲಿದ್ದಾರೆ.

ಘಟನೆಯಲ್ಲಿ ಗಾಯಗೊಂಡ 9 ಜನರಿಗೂ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಬೆಂಗಳೂರಿನಲ್ಲಿ ಗೃಹ ಇಲಾಖೆ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಸದ್ಯ ಯಾರ ಪ್ರಾಣಕ್ಕೂ ತೊಂದರೆ ಇಲ್ಲ. ಸ್ಥಳದಲ್ಲಿ ಬಾಂಬ್ ಸ್ಯಾಂಪಲ್‌ಗಳನ್ನು ಸಂಗ್ರಹ ಮಾಡಲಾಗಿದೆ. ಸದ್ಯಕ್ಕೆ ಯಾವುದೇ ಮಾಹಿತಿ ಬಂದಿಲ್ಲ. ಇಲಾಖೆಯ ವರದಿ ಬರುವ ತನಕ ಏನು ಹೇಳಲು ಸಾಧ್ಯವಿಲ್ಲ ಎಂದು ತಿಳಿಸಿದರು. ಪುಟ 2




### ಸಿಸಿಟಿವಿಯಲ್ಲಿ ಶಂಕಿತ ಆರೋಪಿ

**ಬೆಂಗಳೂರಿನ ರಾಮೇಶ್ವರಂ ಕೆಫೆಯಲ್ಲಿ ಬಾಂಬ್ ಸ್ಫೋಟ ಪ್ರಕರಣ ಸಂಬಂಧ ಸಿಸಿಟಿವಿಯಲ್ಲಿ ಶಂಕಿತ ಆರೋಪಿಯ ಚಹರೆ, ಚಲನವಲನ ದೃಶ್ಯ ಸೆರೆಯಾಗಿದೆ. ತಲೆ ಮೇಲೆ ಹ್ಯಾಟ್ ಹಾಕಿಕೊಂಡಿರುವ ಶಂಕಿತ ವ್ಯಕ್ತಿಯಿಂದ ಬಾಂಬ್ ಇಡಲಾಗಿದೆ ಎಂಬ ಅನುಮಾನ ವ್ಯಕ್ತವಾಗಿದೆ. ಆರೋಪಿ ಹಾಕಿರುವ ಬಿಳಿ ಬಣ್ಣದ ಹ್ಯಾಟ್ ಮೇಲೆ ನಂಬರ್ 10 ಎಂದು ನಮೂದಿಸಲಾಗಿದೆ. ಸದ್ಯ ಆರೋಪಿಗಾಗಿ ಪೊಲೀಸರು ತೀವ್ರ ತನಿಖೆ ನಡೆಸುತ್ತಿದ್ದಾರೆ.** ಪುಟ 2




## ಮಂಗಳೂರು ಕುಕ್ಕರ್ ಬಾಂಬ್ ಬ್ಲಾಸ್ಟ್‌ಗೂ, ಬೆಂಗಳೂರು ರಾಮೇಶ್ವರಂ ಕೆಫೆ ಸ್ಫೋಟಕ್ಕೂ

# ಸಾಮ್ಯತೆ ಇಲ್ಲ

**ಮೈಸೂರು:** ಮಂಗಳೂರಿನ ಕುಕ್ಕರ್ ಬಾಂಬ್ ಬ್ಲಾಸ್ಟ್‌ಗು , ಬೆಂಗಳೂರಿನ ರಾಮೇಶ್ವರಂ ಕೆಫೆಯಲ್ಲಿ ನಡೆದ ಬ್ಲಾಸ್ಟ್ ಗೂ ಸಾಮ್ಯತೆ ಇಲ್ಲ. ಮಂಗಳೂರಿನಲ್ಲಿ ಕುಕ್ಕರನಲ್ಲಿ ಆದ ಬ್ಲಾಸ್ಟ್, ಬೆಂಗಳೂರಿನಲ್ಲಿ ಯಾವ ಕುಕ್ಕರ್ ನಲ್ಲೂ ಬ್ಲಾಸ್ಟ್ ಆಗಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಮೈಸೂರಿನಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಆರೋಪಿ ಮಾಸ್ಕ್ , ಟೋಪಿ ಹಾಕಿಕೊಂಡು ಬಂದು ಸ್ಫೋಟ ನಡೆಸಿದ್ದಾನೆ. ಆರೋಪಿಯು ಬಸ್ ನಿಂದ ಇಳಿದು ಹೋಟೆಲ್‌ಗೆ ಹೋಗಿದ್ದಾನೆ. ಆರೋಪಿ ಕಪ್ಪು ಬಣ್ಣದ ಮಾಸ್ಕ್ ಹಾಕಿಕೊಂಡು ಬಂದಿದ್ದನು. ಆರೋಪಿ ಟೋಪಿ ಹಾಕಿಕೊಂಡು ಬಂದಿರುವ ದೃಶ್ಯ ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಹೋಟೆಲ್ ನಲ್ಲಿ ತಿಂಡಿಯ ಟೋಕನ್ ತೆಗೆದುಕೊಂಡಿದ್ದಾನೆ. ನಂತರ ಹೋಟೆಲ್ ನಲ್ಲಿ ಕುಳಿತು ಟೈಮರ್ ಫಿಕ್ಸ್ ಮಾಡಿದ್ದಾನೆ. ಟೈಮರ್ ಫಿಕ್ಸ್ ಮಾಡಿ ಇಟ್ಟು ಹೋಟೆಲ್ ನಿಂದ ಹೊರಹೋಗಿದ್ದಾನೆ . ಆರೋಪಿ ಬಸ್ ನಿಂದ ಇಳಿದು ಹೋಗಿರುವ ದೃಶ್ಯಾವಳಿಗಳು ಪತ್ತೆಯಾಗಿವೆ ಎಂದರು. ಪುಟ 2



## ಸಂಕ್ಷಿಪ್ತ ಸುದ್ದಿ

### ಸಿದ್ದರಾಮಯ್ಯ ರಾಜೀನಾಮೆಗೆ ಬಿಜೆಪಿ

# ಆಗ್ರಹ



**ಬೆಂಗಳೂರು:** ಬೆಂಗಳೂರಿನ ಜನಪ್ರಿಯ ರಾಮೇಶ್ವರಂ ಕೆಫೆಯಲ್ಲಿ ಶುಕ್ರವಾರ ನಡೆದ ಸ್ಫೋಟದಲ್ಲಿ 10 ಜನರು ಗಾಯಗೊಂಡ ನಂತರ, ಘಟನೆ ಈಗ ರಾಜಕೀಯ ಬಣ್ಣ ಪಡೆದುಕೊಂಡಿದೆ. ಭಾರತೀಯ ಜನತಾ ಪಕ್ಷವು ಸ್ಫೋಟವನ್ನು ತೀವ್ರವಾಗಿ ಟೀಕಿಸಿದೆ ಮತ್ತು ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ರಾಜೀನಾಮೆಗೆ ಒತ್ತಾಯಿಸಿತು. ಬಿಜೆಪಿ ಪರವಾಗಿ, ''ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಎಂಬುದೇ ಇಲ್ಲ. ಆದರೆ, ಸಿದ್ದರಾಮಯ್ಯ ನೇತೃತ್ವದ ಕರ್ನಾಟಕ ಸರ್ಕಾರ ಘಟನೆಯಲ್ಲಿ ಭಾಗಿಯಾಗಿರುವ ಆರೋಪಿಗಳನ್ನು ಬಿಡುವುದಿಲ್ಲ ಎಂದು ಹೇಳಿದ್ದು, ಸಮಗ್ರ ತನಿಖೆ ನಡೆಯುತ್ತಿದೆ. ವಿರೋಧ ಪಕ್ಷಗಳು ಈ ವಿಚಾರದಲ್ಲಿ ರಾಜಕೀಯ ಮಾಡುವುದನ್ನು ತಪ್ಪಿಸಬೇಕು ಎಂದು ಮುಖ್ಯಮಂತ್ರಿಗಳು ಒತ್ತಾಯಿಸಿದರು. ಪುಟ 2

### ಬಾಂಬ್ ಬ್ಲಾಸ್ಟ್ ಹಿಂದಿದ್ಯಾ ಐಸಿಸ್

# ಕೈವಾಡ



**ಬೆಂಗಳೂರು:** ಇಡೀ ಸಿಲಿಕಾನ್ ಸಿಟಿಯನ್ನೇ ಬೆಚ್ಚಿಬೀಳಿಸಿದ ಕುಂದಲಹಳ್ಳಿಯ ರಾಮೇಶ್ವರಂ ಕೆಫೆಯಲ್ಲಿ ನಡೆದ ಬಾಂಬ್ ಸ್ಫೋಟದ ಹಿಂದೆ ಐಸಿಸ್ ಉಗ್ರರ ಕೈವಾಡ ಇದೆಯಾ ಎಂಬ ಪ್ರಶ್ನೆ ಎದ್ದಿದೆ. ಬಾಂಬ್ ಬ್ಲಾಸ್ಟ್ ಆದ ಸ್ಥಳದಲ್ಲಿ ಸಿಕ್ಕ ವಸ್ತುಗಳ ಪರಿಶೀಲನೆ ನಡೆಸಿದಾಗ ಈ ಅನುಮಾನ ಮೂಡಿದೆ. ಮಂಗಳೂರು ಕುಕ್ಕರ್ ಬ್ಲಾಸ್ಟ್, ಶಿವಮೊಗ್ಗ ಟ್ರಯಲ್ ಬ್ಲಾಸ್ಟ್ ಮಾಡಿದ್ದು ಇದೇ ಐಸಿಸ್ ಉಗ್ರರು ಎಂಬುದು ಬಯಲಾಗಿತ್ತು. ಬೆಂಗಳೂರಿನ ಚರ್ಚ್ ಸ್ಟ್ರೀಟ್ ನಲ್ಲಿ ಈ ಹಿಂದೆ ನಡೆದಿದ್ದ ಸ್ಫೋಟದ ಮಾದರಿಯಲ್ಲೇ ರಾಮೇಶ್ವರಂ ಕೆಫೆಯಲ್ಲಿ ಸ್ಫೋಟ ಸಂಭವಿಸಿದೆ. ಈ ಸ್ಫೋಟದಲ್ಲಿ ಬಳಕೆಯಾಗಿರುವ ಡಿಟೋನೇಟರ್, ಬ್ಯಾಟರಿ ಸೇರಿ ಹಲವು ವಸ್ತುಗಳು ಕುಕ್ಕರ್ ಬ್ಲಾಸ್ಟ್ ನಂತೆಯೇ ಪತ್ತೆಯಾಗಿದೆ. ಪುಟ 2

## ಪಕ್ಷ ಹೇಳಿದ್ರೆ ಖಂಡಿತ ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸುವೆ

# ಅಣ್ಣಾಮಲೈ ಅಭಿಮತ



**ಚೆನ್ನೈ:** ತಮಿಳುನಾಡು ಬಿಜೆಪಿ ರಾಜ್ಯಾಧ್ಯಕ್ಷ ಕೆ ಅಣ್ಣಾಮಲೈ ಅವರು ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸುವ ಬಗ್ಗೆ ಮಾತನಾಡಿದ್ದಾರೆ. ಆದರೆ ನಮ್ಮ ಪಕ್ಷದ ಹಿರಿಯರು ಯಾವ ನಿರ್ಧಾರ ತೆಗೆದುಕೊಳ್ಳುತ್ತಾರೆ ಅದಕ್ಕೆ ನಾನು ಬದ್ಧ ಎಂದು ಹೇಳಿದ್ದಾರೆ. ಈ ಹಿಂದೆ ಅಣ್ಣಾಮಲೈ ಲೋಕಸಭೆಯಲ್ಲಿ ಸ್ಪರ್ಧಿಸುತ್ತಾರೆ ಎಂಬ ಮಾತುಗಳು ಕೇಳಿ ಬಂದಿತ್ತು. ಇದೀಗ ಆ ಊಹಾಪೋಹಗಳಿಗೆ ತೆರೆ ಎಳೆದಿದ್ದಾರೆ. ವೈಯಕ್ತಿಕ ಪೂರ್ವಾಗ್ರಹ ಅಥವಾ ಬಿಜೆಪಿಯಲ್ಲಿ ನನಗೆ ಆ ಸ್ಥಾನ ಬೇಕು ಈ ಸ್ಥಾನಬೇಕು ಎಂಬ ಬೇಡಿಕೆಯನ್ನು ನಾನು ಇಟ್ಟಿಲ್ಲ. ಅದು ನನಗೆ ಇಷ್ಟವೂ ಇಲ್ಲ ಎಂದು ಹೇಳಿದ್ದಾರೆ.

ಪಕ್ಷ ಏನು ಹೇಳಿದರೂ ನಾನು ಅದನ್ನು ಪಾಲಿಸಬೇಕು, ಅದು ಪಕ್ಷದ ಸ್ವಭಾವವಾಗಿದೆ. ಇಂದು ಪಕ್ಷವು ರಾಜ್ಯ ಮಟ್ಟದ ಯಾತ್ರೆಯನ್ನು (ಎನ್ ಮನ್ನಾ ಎನ್ ಮಕ್ಕಳು) ಪೂರ್ಣಗೊಂಡಿದೆ ಎಂದು ಹೇಳಿದ್ದಾರೆ. ರಾಜ್ಯದಲ್ಲಿ ಪಕ್ಷದ ಬೆಳವಣಿಗೆಯನ್ನು ಖಚಿತಪಡಿಸಿಕೊಳ್ಳಲು ಬಿಜೆಪಿ ನನಗೆ ಕೆಲವು ಜವಾಬ್ದಾರಿಯನ್ನು ನೀಡಿದೆ. ಅದನ್ನು ನಾನು ಈಗಾಗಲೇ ಪ್ರಾರಂಭಿಸಿದ್ದೇನೆ ಎಂದು ಹೇಳಿದ್ದಾರೆ. ಪುಟ 2

## ಚೀನಾ ಜೈವಿಕ ಭಯೋತ್ಪಾದನೆಗೆ ಕೆನಡಾ ಸಾಥ್

# ಪ್ರಧಾನಿ ಜಸ್ಟಿನ್ ಟ್ರುಡೋ ವಿರುದ್ಧ ಗಂಭೀರ ಆರೋಪ

**ಒಟ್ಟಾವಾ:** ವಿನಪೆಗ್ ನಲ್ಲಿರುವ ಅತಿ ಭದ್ರತೆಯ ಪ್ರಯೋಗಾಲಯಕ್ಕೆ ಚೀನಾದವರ ನುಸುಳುವಿಕೆಗೆ ಅವಕಾಶ ನೀಡಿದ್ದು, ನಂತರ ಅದಕ್ಕೆ ಸಂಬಂಧಿಸಿದ ದಾಖಲೆಗಳನ್ನು ಮುಚ್ಚಿಡಲು ಯತ್ನಿಸಿದ್ದಾರೆ ಎಂದು ಕೆನಡಾ ಪ್ರಧಾನ ಮಂತ್ರಿ ಜಸ್ಟಿನ್ ಟ್ರುಡೋ ವಿರುದ್ಧ ಅಲ್ಲಿನ ಪ್ರತಿಪಕ್ಷಗಳು ಆರೋಪಿಸಿವೆ. ಪ್ರತಿಪಕ್ಷದ ನಾಯಕ ಪಿಯರೆ ಪೊಲಿವರೆ ಅವರು ಪ್ರಯೋಗಾಲಯದೊಳಗೆ ನುಸುಳಲು ಚೀನಾಕ್ಕೆ ಅನುಮತಿ ನೀಡಲಾಗಿದೆ ಎಂದು ಗಂಭೀರ ಆರೋಪ ಮಾಡಿದ್ದಾರೆ. ಅಲ್ಲದೆ, ಅಪಾಯಕಾರಿ ವೈರಸ್‌ಗಳನ್ನು ನಿರ್ವಹಿಸುವ ಪ್ರಯೋಗಾಲಯಕ್ಕೆ ಚೀನಾದವರ ಪ್ರವೇಶಕ್ಕೆ ಅನುಮತಿ ನೀಡುವ ಮೂಲಕ ಆ ದೇಶದ ಜೈವಿಕ ಭಯೋತ್ಪಾದನೆಗೆ ಸಹಕಾರ ನೀಡಲಾಗುತ್ತಿದೆ ಎಂದು ಟೀಕಿಸಿದ್ದಾರೆ.



ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ವಿರೋಧ ಪಕ್ಷದ ನಾಯಕ, ಅತ್ಯಂತ ಸೂಕ್ಷ್ಮ ಪ್ರಯೋಗಾಲಯದಲ್ಲಿ ಭಾರಿ ಭದ್ರತಾ ಉಲ್ಲಂಘನೆಯಾಗಿರುವುದನ್ನು ಟ್ರುಡೋ ಸರ್ಕಾರವು ಮುಚ್ಚಿಡುತ್ತಿದೆ ಎಂಬುದಕ್ಕೆ ಸಂಬಧಿಸಿದ ದಾಖಲೆಗಳನ್ನು ಪ್ರದರ್ಶಿಸಿದ್ದಾರೆ.

ಅತ್ಯಂತ ಅಪಾಯಕಾರಿ ವೈರಸ್‌ಗಳು ಮತ್ತು ರೋಗಕಾರಕಗಳನ್ನು ಪ್ರಯೋಗಾಲಯದಲ್ಲಿ ಅಧ್ಯಯನ ಮಾಡಲಾಗುತ್ತದೆ ಮತ್ತು ನಿರ್ವಹಿಸಲಾಗುತ್ತದೆ. ಟ್ರುಡೋ ಸರ್ಕಾರದ ರೋಗಕಾರಕಗಳ ಮುಖ್ಯಸ್ಥರು ಜೈವಿಕ ಶಸ್ತ್ರಾಸ್ತ್ರಗಳು ಮತ್ತು ಜೈವಿಕ ಭಯೋತ್ಪಾದನೆಗೆ ಕುಖ್ಯಾತಿ ಪಡೆದಿರುವ ಚೀನಾದ ಪೀಪಲ್ಸ್ ಲಿಬರೇಶನ್ ಆರ್ಮಿಯ ಸದಸ್ಯರೊಂದಿಗೆ ಸಹಕರಿಸುತ್ತಿದ್ದಾರೆ ಎಂದು ಪಿಯರೆ ಪೊಲಿವರೆ ಆರೋಪಿಸಿದ್ದಾರೆ.

## ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ

# ಹೈ ಅಲರ್ಟ್



**ಬೆಂಗಳೂರು:** ರಾಮೇಶ್ವರಂ ಕೆಫೆಯಲ್ಲಿ ಶುಕ್ರವಾರ ಬಾಂಬ್ ಸ್ಫೋಟವಾದ (ಹಿನ್ನೆಲೆಯಲ್ಲಿ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಭದ್ರತಾ ಪಡೆ ಹಾಗೂ ಪೊಲೀಸರು ಹೈ ಅಲರ್ಟ್ ಆಗಿದ್ದಾರೆ. ವಿಮಾನ ನಿಲ್ದಾಣಕ್ಕೆ ಬಂದು ಹೋಗುವ ವಾಹನಗಳ ಮೇಲೆ ಹದ್ದಿನಕಣ್ಣು ಇಟ್ಟಿದ್ದಾರೆ. ಪುಟ 2

# ಕಡು ಬಡತನ ತೊಡೆದು ಹಾಕಿದ ಭಾರತ

**ನವದೆಹಲಿ:** ತೀವ್ರ ಅಥವಾ ಕಡು ಬಡತನವನ್ನು ತೊಡೆದು ಹಾಕುವ ನಿಟ್ಟಿನಲ್ಲಿ ಭಾರತ ಅತ್ಯುತ್ತಮ ಸಾಧನೆ ಮಾಡಿರುವುದು ಅಂಕಿ ಅಂಶಗಳಿಂದ ತಿಳಿದು ಬಂದಿದೆ. 2022 23ನೇ ಸಾಲಿನ ಅನುಭೋಗಿ / ಬಳಕೆಯ ವೆಚ್ಚ ದತ್ತಾಂಶವನ್ನು ಬಿಡುಗಡೆ ಮಾಡಲಾಗಿದ್ದು, ಇದು 10 ವರ್ಷ ಅವಧಿಯ ಬಡತನ ಸಂಬಂಧಿತ ಸಮೀಕ್ಷೆ ಆಧಾರಿತ ಮಾಹಿತಿಯನ್ನು ಒದಗಿಸಿದೆ. ಈ ಹಿಂದಿನ ಅಧಿಕೃತ ಸಮೀಕ್ಷೆಯನ್ನು 2011 12ನೇ ಸಾಲಿನಲ್ಲಿ ನಡೆಸಲಾಗಿತ್ತು.

ಭಾರತವು ಅನುಭೋಗಿ ಅಥವಾ ಬಳಕೆಯ ವೆಚ್ಚಗಳನ್ನು ಅಂದಾಜು ಮಾಡಲು ಎರಡು ವಿಭಿನ್ನ ವಿಧಾನಗಳನ್ನು ಅನುಸರಿಸುತ್ತಿದೆ. ಅವುಗಳು ಯೂನಿಫಾರ್ಮ್ ರಿಕಾಲ್ ಪಿರಿಯಡ್ ಮತ್ತು ಅಕ್ಯುರೇಟ್ ಮಾಡಿಫೈಡ್ ಮಿಕ್ಸೆಡ್ ರಿಕಾಲ್ ಪಿರಿಯಡ್ ಆಗಿವೆ.

30 ದಿನಗಳ ಅವಧಿಗೆ ಕುಟುಂಬಗಳು ಮಾಡಿದ ವೆಚ್ಚದ ಕುರಿತು ಕೇಳಿದ ಪ್ರಶ್ನೆಗಳಿಗೆ ದೊರೆತ ಉತ್ತರದ ಆಧಾರದಲ್ಲಿ ಯುಆರ್ ಪಿ ವಿಧಾನ ವರದಿ ಸಿದ್ದಪಡಿಸಲಾಗಿದೆ. ಬೇಗನೆ ಹಾಳಾಗುವ ಸರಕುಗಳಿಗೆ ಸಂಬಂಧಿಸಿದಂತೆ ಕೇಳಲಾದ ಪ್ರಶ್ನೆಗಳಿಗೆ ದೊರೆತ ಉತ್ತರಗಳನ್ನು ಬಳಸಿಕೊಂಡು ಎಂಎಂಆರ್‌ಪಿ ವಿಧಾನದ ವರದಿ ಸಿದ್ಧಪಡಿಸಲಾಗಿದೆ. ಹಿಂದೆಲ್ಲ ಈ ಎರಡೂ ವಿಧಾನಗಳಲ್ಲಿ ಸಮೀಕ್ಷೆ ನಡೆಸುತ್ತಿದ್ದ ಭಾರತ ಈ ಬಾರಿ ಇತರ ದೇಶಗಳ ಗುಣಮಟ್ಟ ಮಾನದಂಡ ಆಧಾರಿತ ಎಂಎಂಆರ್ ಪಿ ವಿಧಾನವನ್ನೇ ಆಯ್ಕೆ ಮಾಡಿಕೊಂಡಿತ್ತು ಎಂದು 'ಬ್ರೂಕಿಂಗ್ ಡಾಟ್ ಎಜು' ವರದಿ ಮಾಡಿದೆ. ಪುಟ 2



**ಲೋಕಸಭಾ ಚುನಾವಣೆ 2024**

# ತಂತ್ರಜ್ಞಾನ ಬಳಸಿ ಅಭ್ಯರ್ಥಿಗಳ ಆಯ್ಕೆ

**ನವದೆಹಲಿ:** ಏಪ್ರಿಲ್-ಮೇ ತಿಂಗಳಿನಲ್ಲಿ ಲೋಕಸಭೆ ಚುನಾವಣೆ ನಡೆಯುವ ನಿರೀಕ್ಷೆಯಿದೆ. ಚುನಾವಣೆ ಅಧಿಸೂಚನೆಗೂ ಮೊದಲೇ ಬಿಜೆಪಿ ಒಟ್ಟು 543 ಲೋಕಸಭಾ ಸ್ಥಾನಗಳಿಗೆ ಅಭ್ಯರ್ಥಿಗಳ ಆಯ್ಕೆಗೆ ವ್ಯಾಪಕ ಚರ್ಚೆ ನಡೆಸಿದೆ. ಈ ಬಾರಿ ಬಿಜೆಪಿ ಅತ್ಯಾಧುನಿಕ ತಂತ್ರಜ್ಞಾನ ಮತ್ತು ಹೊಸ ಮಾದರಿ ತಂತ್ರದ ಮೂಲಕ ಅಭ್ಯರ್ಥಿಗಳನ್ನ ಅಖಾಡಕ್ಕಿಳಿಸಲಿದೆ. 400ಕ್ಕೂ ಅಧಿಕ ಸ್ಥಾನಗಳಲ್ಲಿ ಗೆಲ್ಲಲೆಂದೇ ಶುಕ್ರವಾರ (ಮಾರ್ಚ್ .01) ರಂದು ದೆಹಲಿಯಲ್ಲಿ ಪ್ರಧಾನಿ ಮೋದಿ ನೇತೃತ್ವದಲ್ಲಿ ಸಭೆ ನಡೆದಿದ್ದು, ತಂತ್ರ ಹೆಣೆಯಲಾಗಿದೆ. ಅಭ್ಯರ್ಥಿಗಳ ಆಯ್ಕೆಗೆ ಬಿಜೆಪಿ ಈ ಬಾರಿ ತಂತ್ರಜ್ಞಾನದ ಮೊರೆ ಹೋಗಿದೆ.

ಮುಖ್ಯವಾಗಿ ಅಭ್ಯರ್ಥಿಗಳ ಆಯ್ಕೆಗೆ ನಮೋ ಆಯಪ್ ಪರಿಚಯಿಸಿ, ಪ್ರತಿ ಕ್ಷೇತ್ರದಲ್ಲೂ ಬಿಜೆಪಿಯ ಮೂರು ಜನಪ್ರಿಯ ನಾಯಕರು ಮತ್ತು ಹಾಲಿ ಸಂಸದರ ಕುರಿತು ಸಾರ್ವಜನಿಕರ ಅಭಿಪ್ರಾಯ ಪಡೆಯಲಾಗಿದೆ. ಬಿಜೆಪಿ ಕಳೆದೆರಡು ವರ್ಷದಿಂದ ಪ್ರತಿ ಸಂಸದೀಯ ಕ್ಷೇತ್ರದ ವರದಿಗಳನ್ನು ಸಮೀಕ್ಷಾ ಏಜೆನ್ಸಿಗಳಿಂದ ಕೇಳಿ ಪಡೆದಿದೆ. ಅಲ್ಲದೆ ಪ್ರತಿ ಲೋಕಸಭೆ ಕ್ಷೇತ್ರಕ್ಕೆ ತೆರಳಿ ವರದಿಗಳ ಸಂಗ್ರಹ ಮತ್ತು ಹಾಲಿ ಸಂಸದರ ಕಾರ್ಯವೈಖರಿ ಬಗ್ಗೆ ಮೌಲ್ಯಯುತ ಒಳನೋಟ ಒದಗಿಸುವ ಜವಾಬ್ದಾರಿಯನ್ನ ಸಚಿವರಿಗೆ ವಹಿಸಲಾಗಿತ್ತು. ಸಚಿವರು ಮತ್ತು ಸಂಘಟನೆಯಿಂದ ಪಡೆದ ವರದಿಯನ್ನು ರಾಜ್ಯಮಟ್ಟದ ಚುನಾವಣಾ ಸಮಿತಿ ಸಭೆಯಲ್ಲಿರಿಸಲಾಗಿತ್ತು. ಜತೆಗೆ ಸಂಘಟನೆಯ ಪ್ರಧಾನ ಕಾರ್ಯದರ್ಶಿಗಳು ಆರ್‌ಎಸ್‌ಎಸ್‌ನ ಪ್ರತಿಕ್ರಿಯೆಯನ್ನೂ ಪಡೆಯುತ್ತಿದ್ದರು.



ಹೀಗೆ ರಾಜ್ಯ ಚುನಾವಣಾ ಸಮಿತಿಗಳು ಸಿದ್ದಪಡಿಸಿದ ಪಟ್ಟಿಯನ್ನ ಪ್ರತಿ ರಾಜ್ಯದ ಕೋರ್ ಗ್ರೂಪ್, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ, ಗೃಹ ಸಚಿವ ಅಮಿತ್ ಶಾ ಮತ್ತು ಸಂಘಟನೆಯ ಪ್ರಧಾನ ಕಾರ್ಯದರ್ಶಿ ಬಿ ಎಲ್ ಸಂತೋಷ್ ಜತೆಗೆ ಸಭೆ ನಡೆಸಿ ಚರ್ಚಿಸಲಾಗಿದೆ. ಕೇಂದ್ರ ಚುನಾವಣಾ ಸಮಿತಿ ಸಭೆಗೂ ಮುನ್ನ ಪ್ರಧಾನಿ ನಿವಾಸದಲ್ಲಿ ಮೋದಿ, ಶಾ ಮತ್ತು ನಡ್ಡಾ ಸುದೀರ್ಘ ಸಭೆ ನಡೆಸಿದ್ದರು. ಅಲ್ಲೂ ಕೂಡ ಅಭ್ಯರ್ಥಿಗಳ ಹೆಸರು ಚರ್ಚೆಯಾಗಿದೆ. ಬಳಿಕ ಕೇಂದ್ರ ಚುನಾವಣಾ ಸಮಿತಿ ಸಭೆಯಲ್ಲಿ ರಾಜ್ಯವಾರು ಅಭ್ಯರ್ಥಿಗಳ ಹೆಸರು ಚರ್ಚಿಸಲಾಗಿದೆ. ಗೆಲ್ಲುವವರು ಬೇರೆ ಪಕ್ಷದದಲ್ಲಿದ್ದರೂ ಅವರನ್ನು ಬಿಜೆಪಿಗೆ ಕರೆತರಲೆಂದೇ ಪ್ರತಿ ರಾಜ್ಯ ಮತ್ತು ಕೇಂದ್ರ ಮಟ್ಟದ ಸೇರ್ಪಡೆ ಸಮಿತಿಗಳನ್ನು ರಚಿಸಲಾಗಿದೆ. ಪ್ರತಿ ಕ್ಷೇತ್ರದಲ್ಲೂ ಬಿಜೆಪಿ ಫೈಟ್ ಮಾಡುತ್ತೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ. ಪುಟ 2

## ಗೃಹ ಸಚಿವರ ರಾಜೀನಾಮೆಗೆ ಯತ್ನಾಳ್ ಆಗ್ರಹ

**ಬೆಂಗಳೂರು:** ಮೊನ್ನೆ ಪಾಕಿಸ್ತಾನ ಪರ ಘೋಷಣೆ, ಇಂದು ರಾಮೇಶ್ವರಂ ಕೆಫೆಯಲ್ಲಿ ಬ್ಲಾಸ್ಟ್ ನಡೆದಿದೆ. ಈ ಹಿನ್ನೆಲೆಯಲ್ಲಿ ಗೃಹ ಸಚಿವ ಜಿ. ಪರಮೇಶ್ವರ್ ಅವರು ರಾಜೀನಾಮೆ ನೀಡುವಂತೆ ಇಡೀ ಕರ್ನಾಟಕ ಆಗ್ರಹಿಸುತ್ತಿದೆ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದ್ದಾರೆ. ರಾಮೇಶ್ವರಂ ಕೆಫೆಯಲ್ಲಿ ನಡೆದ ಸ್ಫೋಟ ಸಂಬಂಧ ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿರುವ ಶಾಸಕರು, ಬೆಂಗಳೂರಿನ ರಾಮೇಶ್ವರಂ ಕೆಫೆಯಲ್ಲಿ ನಡೆದ ಸ್ಫೋಟದ ಬಗ್ಗೆ ರಾಷ್ಟ್ರೀಯ ತನಿಖಾ ಸಂಸ್ಥೆಯಿಂದ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದ್ದಾರೆ.

ಗ್ರಾಹಕರು ಬಿಟ್ಟು ಹೋಗಿದ್ದ ಬ್ಯಾಗ್‌ನಿಂದ ಸ್ಫೋಟ ಸಂಭವಿಸಿದೆ. ಯಾವುದೇ ಸಿಲಿಂಡರ್ ಸ್ಫೋಟವಾಗಿಲ್ಲ. ಕೆಲ ದಿನಗಳ ಹಿಂದೆ ಪಾಕಿಸ್ತಾನದ ಪರ ಘೋಷಣೆ ಕೂಗಿದವರನ್ನು ಕಾಂಗ್ರೆಸ್ ಪಕ್ಷ ಸಮರ್ಥಿಸಿಕೊಂಡಿತ್ತು. ಹೀಗಾಗಿ ಗೃಹ ಸಚಿವ ಪರಮೇಶ್ವರ್ ರಾಜೀನಾಮೆಗೆ ಕರ್ನಾಟಕ ಆಗ್ರಹ ಮಾಡುತ್ತಿದೆ ಎಂದು ಬರೆದುಕೊಂಡಿದ್ದಾರೆ.

**ರಾಮೇಶ್ವರಂ ಕೆಫೆಯಲ್ಲಿ ಬ್ಲಾಸ್ಟ್:** ನಗರದ ಪ್ರಮುಖ ಹೋಟೆಲ್‌ಗಳಲ್ಲಿ ಒಂದಾಗಿರುವ ಬ್ರೂಕ್‌ಫೀಲ್ಡ್ ರಾಮೇಶ್ವರಂ ಕೆಫೆಯಲ್ಲಿ ಶುಕ್ರವಾರ ಮಧ್ಯಾಹ್ನ 1:05ಕ್ಕೆ ಕೆಫೆಯ ಕೈ ತೊಳೆಯುವ ಜಾಗದಲ್ಲಿಈ ಸ್ಫೋಟ ಸಂಭವಿಸಿದೆ. ಸ್ಥಳದಲ್ಲಿ ಬ್ಯಾಟರಿ, ಬೋಲ್ಟ್‌ಗಳು ಪತ್ತೆಯಾಗಿದೆ. ಪೊಲೀಸರ ಜೊತೆ ಸ್ಥಳಕ್ಕೆ ವಿಧಿ ವಿಜ್ಞಾನ ಪ್ರಯೋಗಾಲಯದ ಅಧಿಕಾರಿಗಳು, ಭಯೋತ್ಪಾದನಾ ನಿಗ್ರಹ ದಳ ಭೇಟಿ ನೀಡಿದ್ದು ಪರಿಶೀಲನೆ ನಡೆಯುತ್ತಿದೆ. ಘಟನೆಯಲ್ಲಿ ಐವರು ಗಾಯಗೊಂಡಿದ್ದು, ಗಾಯಾಳುಗಳನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಪ್ರಾಥಮಿಕ ಹಂತದಲ್ಲಿ ಸಿಲಿಂಡರ್ ಸ್ಫೋಟದಿಂದ ಘಟನೆ ನಡೆದಿದೆ ಎನ್ನಲಾಗಿತ್ತು. ಆದರೆ ಇಲ್ಲಿ ಸಿಲಿಂಡರ್ ಸ್ಫೋಟ ಸಂಭವಿಸಿಲ್ಲ ಎಂದು ಸ್ಥಳೀಯರು ಮಾಹಿತಿ ನೀಡಿದ್ದಾರೆ. ಹೀಗಾಗಿ ವಿವಿಧ ಆಯಾಮಗಳಲ್ಲಿ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

## ಪಾಕ್ ಪರ ಘೋಷಣೆ ಎಫ್‌ಎಸ್‌ಎಲ್ ವರದಿ ಇನ್ನೂ ಬಂದಿಲ್ಲ

**ಬೆಂಗಳೂರು:** ವಿಧಾನಸೌಧದಲ್ಲಿ ಪಾಕ್ ಘೋಷಣೆ ಪ್ರಕರಣದಲ್ಲಿ ವಿಧಿವಿಜ್ಞಾನ ಪ್ರಯೋಗಾಲಯದ ವರದಿ ಇನ್ನೂ ಬಂದಿಲ್ಲ ವರದಿ ಇನ್ನೂ ವರದಿ ಬರಬೇಕು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು ವರದಿ ಬಂದ ಮೇಲೆ ಕೂಡಲೇ ಕ್ರಮ ತೆಗೆದುಕೊಳ್ಳುತ್ತೇವೆ. ಈಗಾಗಲೇ 7 ಮಂದಿಯನ್ನು ಕರೆದು ತನಿಖೆ ಮಾಡಿ ವಾಯ್ಸ್ ರೆಕಾರ್ಡ್ ಸಹಾ ಮಾಡಿದ್ದೇವೆ. ಧ್ವನಿ ತಾಳೆಯಾಗಬೇಕು.ಒಂದು ವಾಹಿನಿಯದ್ದು ಅಲ್ಲ ಸಾಕಷ್ಟು ಕ್ಲಿಪ್ ಇದೆ. ಎಲ್ಲವನ್ನೂ ಪರೀಕ್ಷೆ ಮಾಡಬೇಕಾಗುತ್ತದೆ ಎಂದರು.

ಸರ್ಕಾರಕ್ಕೆ ಜಾತಿ ಗಣತಿ ವರದಿ ಸಲ್ಲಿಕೆ ಮಾಡಿದ ವಿಚಾರಕ್ಕೆ ಪ್ರತಿಕ್ರಿಯಿಸಿ, ವರದಿಯಲ್ಲಿ ಏನಿದೆ ಗೊತ್ತಿಲ್ಲ. ಕ್ಯಾಬಿನೆಟ್ ಏನು ನಿರ್ಧಾರ ತೆಗೆದುಕೊಳ್ಳುತ್ತದೆ ಅದರಂತೆ ಮುಂದುವರಿಯೋಣ ಎಂದು ಸಿಎಂ ಹೇಳಿದ್ದಾರೆ. ಡೇಟಾ ಹೊರಗೆ ಬರುವವರೆಗೂ ಏನೂ ಹೇಳಲಾಗದು ಎಂದು ಹೇಳಿದರು. ಜಾತಿ ಗಣತಿ ವರದಿಗೆ ಲಿಂಗಾಯತ, ಒಕ್ಕಲಿಗ ನಾಯಕರು ವಿರೋಧ ವ್ಯಕ್ತಪಡಿಸುತ್ತಿರುವ ವಿಚಾರಕ್ಕೆ ಪ್ರತಿಕ್ರಿಯಿಸಿ, ಅವರಿಗೆ ಸಂಖ್ಯೆ ಕಡಿಮೆ ಇರಬಹುದು ಎಂಬ ಆತಂಕ ಇರಬಹುದು. ಈಗ ನೀಡಿರುವ ವರದಿ ಆಯೋಗದ ವರದಿ ಅಂತ ರಿಪೋರ್ಟ್ ಅಂತ ಆಗುತ್ತದೆ. ಕಾಂತರಾಜ್ ವರದಿ, ಜಯಪ್ರಕಾಶ್ ಹೆಗಡೆ ವರದಿ ಅಂತ ಬರುವುದಿಲ್ಲ ಎಂದಿದ್ದಾರೆ.

# ಬಿಜೆಪಿಯವರು ನಮಗೆ ದೇಶಭಕ್ತಿ ಹೇಳಿಕೊಡಬೇಕಿಲ್ಲ



**ಹಾಸನ:** ವಿಧಾನಸೌಧದಲ್ಲಿ ಪಾಕ್ ಪರ ಘೋಷಣೆ ಕೂಗಿದ ಆರೋಪಕ್ಕೆ ಸಂಬಂಧಿಸಿದಂತೆ ಧ್ವನಿ ಪರೀಕ್ಷೆ ಮಾಡಿದ ವಿಧಿ ವಿಜ್ಞಾನ ಪ್ರಯೋಗಾಲಯದ ವರದಿ ಬಂದ ಕೂಡಲೇ ಅದನ್ನು ಬಹಿರಂಗಪಡಿಸುತ್ತೇವೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ಸರಿಸುಮಾರು 1,344 ಕೋಟಿ ರೂ. ವೆಚ್ಚದ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಲು ಸಿಎಂ ಸಿದ್ದರಾಮಯ್ಯ ಅವರಿಂದು ಹಾಸನಕ್ಕೆ ಆಗಮಿಸಿದ್ದಾರೆ. ಕಾರ್ಯಕ್ರಮಕ್ಕೆ ಚಾಲನೆ ನೀಡುವ ಮುನ್ನ ಹಾಸನ ಹೊರವಲಯದ ಬೂವನಹಳ್ಳಿ ಹೆಲಿಪ್ಯಾಡ್‌ನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿ, ವಿಧಾನಸೌಧದಲ್ಲಿ ಪಾಕ್ ಪರ ಘೋಷಣೆ ಕೂಗಿದ ಆರೋಪಕ್ಕೆ ಸಂಬಂಧಿಸಿದಂತೆ ಧ್ವನಿ ಪರೀಕ್ಷೆ ಮಾಡಿದ ವಿಧಿ ವಿಜ್ಞಾನ ಪ್ರಯೋಗಾಲಯ ವರದಿಯ ಬಗ್ಗೆ ಮಾತನಾಡಿದ್ದಾರೆ.

ಎಫ್‌ಎಸ್‌ಎಲ್ ವರದಿ ಬಹಿರಂಗ ಪಡಿಸುವಂತೆ ವಿಪಕ್ಷ ನಾಯಕ ಆರ್.ಅಶೋಕ್ ಒತ್ತಾಯ ವಿಚಾರಕ್ಕೆ ಪ್ರತಿಕ್ರಿಯಿಸಿ, ವರದಿ ಬಂದ ಕೂಡಲೇ ಬಹಿರಂಗ ಮಾಡ್ತಿವಿ. ಯಾರೇ ಆದ್ರೂ ಭಾರತದ ಪರ ಇಲ್ಲದೇ, ಬೇರೆ ದೇಶದ ಮೇಲೆ ನಿಷ್ಠೆ ಇದ್ದರೆ ಅಂತಹವರ ವಿರುದ್ಧ ಕಠಿಣವಾದ ಕ್ರಮ ಕೈಗೊಳ್ಳುತ್ತೇವೆ. ದೇಶ ಭಕ್ತಿಯನ್ನು ನಮಗೆ ಬಿಜೆಪಿಯವರು ಹೇಳಿ ಕೊಡಬೇಕಿಲ್ಲ. ಕಾಂಗ್ರೆಸ್ ಪಕ್ಷಕ್ಕೆ ದೇಶ ಭಕ್ತಿ ಹೇಳಿ ಕೊಡಬೇಕಾ? ದೇಶಕ್ಕೆ ಸ್ವಾತಂತ್ರ್ಯ ತಂದು ಕೊಟ್ಟವರು ಯಾರು? ಬಿಜೆಪಿಯವರು ರಾಜಕೀಯಕ್ಕೋಸ್ಕರ ಏನೋ ಹೇಳ್ತಾರೆ ಎಂದು ವಾಗ್ದಾಳಿ ನಡೆಸಿದ್ದಾರೆ.

ಲೋಕಸಭಾ ಅಭ್ಯರ್ಥಿಗಳ ಪಟ್ಟಿ ಬಿಡುಗಡೆಗೆ ಸಂಬಂಧಿಸಿದಂತೆ ಮಾತನಾಡಿ, ಲೋಕಸಭಾ ಅಭ್ಯರ್ಥಿಗಳ ಪಟ್ಟಿ ಶೀಘ್ರವೇ ಬಿಡುಗಡೆ ಮಾಡ್ತಿವಿ. ಅಭ್ಯರ್ಥಿಗಳ ಆಯ್ಕೆ ಬಗ್ಗೆ ಗೊಂದಲ ಇಲ್ಲ. ಎಲ್ಲರೂ ಒಗ್ಗಟ್ಟಾಗಿದ್ದಾರೆ ಎಂದು ತಿಳಿಸಿದ್ದಾರೆ. ಇನ್ನೂ 'ಕಾಂತರಾಜು' ಜಾತಿಜನಗಣತಿ ವರದಿ ಸ್ವೀಕರಿಸಿದ್ದಕ್ಕೆ ಹಲವರಿಂದ ವಿರೋಧ ವ್ಯಕ್ತವಾದ ವಿಚಾರಕ್ಕೆ ಪ್ರತಿಕ್ರಿಯಿಸಿ, ವರದಿಯನ್ನು ಈಗ ಸ್ವೀಕರಿಸಿದ್ದೇನೆ, ಅದರಲ್ಲಿ ಏನಿದೆ ಅಂತ ಗೊತ್ತಿಲ್ಲ. ಕ್ಯಾಬಿನೆಟ್ ಮುಂದೆ ಮಂಡಿಸಿ ಅದರಲ್ಲಿ ಏನಿದೆ ಎಂಬ ಬಗ್ಗೆ ಚರ್ಚೆ ಮಾಡ್ತಿವಿ ಎಂದಿದ್ದಾರೆ.

ಬಿಜೆಪಿ ಶಾಸಕರು ರಾಜ್ಯಪಾಲರಿಗೆ ದೂರು ನೀಡಿದ ವಿಚಾರಕ್ಕೆ ಪ್ರತಿಕ್ರಿಯಿಸಿ, ರಾಜ್ಯಸಭಾ ಚುನಾವಣೆಯಲ್ಲಿ ಬಿಜೆಪಿಯ ಇಬ್ಬರು ಶಾಸಕರಲ್ಲಿ ಒಬ್ಬರು ಕಾಂಗ್ರೆಸ್‌ಗೆ ವೋಟ್ ಹಾಕಿದ್ರು, ಇನ್ನೊಬ್ಬರು ಗೈರು ಆಗಿದ್ದರು. ಅದನ್ನು ಮುಚ್ಚಿಕೊಳ್ಳುವ ಪ್ರಯತ್ನ ಮಾಡ್ತಿದ್ದಾರೆ. ಅವರಿಗೆ ಎಲ್ಲಾ ಎಂಎಲ್‌ಎಗಳನ್ನು ಒಗ್ಗಟ್ಟಾಗಿ ಇಟ್ಟುಕೊಳ್ಳಲು ಆಗಲಿಲ್ಲ. ಅವರ ಅನೈತಿಕ ಮೈತ್ರಿಯನ್ನು ಜನ ಒಪ್ಪಲ್ಲ. ಇದುವರೆಗೂ ಯಾವುದೇ ಕಾರಣಕ್ಕೂ ಕೋಮುವಾದಿಗಳ ಜೊತೆ ಹೋಗಲ್ಲ ಅಂತ ಹೇಳ್ತಿದ್ದ ಜೆಡಿಎಸ್ ಈಗ ಯಾಕೆ ಮೈತ್ರಿ ಮಾಡಿಕೊಂಡಿದ್ದಾರೆ ಎಂದು ಅಸಮಾಧಾನ ಹೊರಹಾಕಿದ್ದಾರೆ.

## ಸಿದ್ದರಾಮಯ್ಯ ಎಲ್ಲಿ ನಮ್ಮ ಅಭಿಪ್ರಾಯ ಕೇಳುತ್ತಾರೆ?



**ಬೆಂಗಳೂರು:** ಸರ್ಕಾರ ಸ್ವೀಕರಿಸಿರುವ ಜಾತಿ ಗಣತಿ ವರದಿ ವೈಜ್ಞಾನಿಕವಾಗಿ ಇಲ್ಲ ಎಂದು ಪುನರುಚ್ಚರಿಸಿರುವ ಕಾಂಗ್ರೆಸ್ ಪಕ್ಷದ ಹಿರಿಯ ನಾಯಕ ಶಾಮನೂರು ಶಿವಶಂಕರಪ್ಪ, ಅದು ಹೇಗೆ ಅವೈಜ್ಞಾನಿಕವಾಗಿದೆ ಎಂಬುದನ್ನು ಸಾಬೀತುಪಡಿಸಿ ತೋರಿಸುತ್ತೇವೆ ಎಂದು ಹೇಳಿದ್ದಾರೆ. ಜತೆಗೆ, ಸಿಎಂ ಸಿದ್ದರಾಮಯ್ಯ ಎಲ್ಲಿ ನಮ್ಮ ಮಾತು ಕೇಳುತ್ತಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ಜಾತಿಗಣತಿಯನ್ನು ಸರ್ಕಾರ ಸ್ವೀಕರಿಸಿದ್ದು ತಪ್ಪು ಅಲ್ಲ. ಆದರೆ ಅದು ವೈಜ್ಞಾನಿಕವಾಗಿರಬೇಕು. ಲಿಂಗಾಯತ ಸಮುದಾಯದಲ್ಲಿ ಸಾಕಷ್ಟು ಉಪಪಂಗಡಗಳು ಇವೆ. ನಮ್ಮ ಸಮುದಾಯದ ಜನಸಂಖ್ಯೆ ಕಡಿಮೆ ತೋರಿಸಿರುವ ಮಾಹಿತಿ ಇದೆ ಎಂದರು.

ಆಯೋಗದ ಅಧ್ಯಕ್ಷರು ನಮ್ಮ ವರದಿ ವೈಜ್ಞಾನಿಕವಾಗಿ ಇದೆ ಎನ್ನುತ್ತಾರೆ. ಆದರೆ, ಅದು ಹೇಗೆ ಅವೈಜ್ಞಾನಿಕವಾಗಿದೆ ಎಂಬುದನ್ನು ಸಾಬೀತು ಮಾಡುತ್ತೇವೆ. 9 ವರ್ಷದ ಹಿಂದಿನ ಸರ್ವೆಯನ್ನು ಈಗ ವರದಿ ಸಲ್ಲಿಸಲಾಗಿದೆ. ಮನೆಯಲ್ಲೇ ಕುಳಿತು ಜಾತಿಗಣತಿ ವರದಿ ತಯಾರಿಸಿದ ಮಾಹಿತಿ ಇದೆ. ಸರ್ಕಾರ ಮತ್ತೊಮ್ಮೆ ವೈಜ್ಞಾನಿಕವಾಗಿ ಜಾತಿಗಣತಿ ನಡೆಸಬೇಕು ಎಂದು ಅವರು ಆಗ್ರಹಿಸಿದರು.

ಈಗ ಸ್ವೀಕರಿಸಿರುವ ಜಾತಿ ಗಣತಿ ವರದಿಯನ್ನು ಸರ್ಕಾರ ಏನು ಮಾಡುತ್ತದೆ ಎಂದು ನೋಡುತ್ತೇವೆ. ನಾವು ಸುಮ್ಮನೆ ಕೂರುವುದಿಲ್ಲ. ವೈಜ್ಞಾನಿಕವಾಗಿ ಇನ್ನೊಮ್ಮೆ ಜಾತಿ ಗಣತಿ ಮಾಡಬೇಕು. 9 ವರ್ಷದ ಹಳೆಯದನ್ನು ಈಗ ತಂದಿದ್ದಾರೆ. ಕಾಂತರಾಜು ವರದಿಯನ್ನು ಈಗ ಅವರು ತಂದುಕೊಟ್ಟಿದ್ದಾರೆ. ನಮ್ಮ ಜನಸಂಖ್ಯೆ 2 ಕೋಟಿಗೂ ಹೆಚ್ಚಿದೆ. ಉದ್ದೇಶಪೂರ್ವಕವಾಗಿ ಮಾಡಿದ್ದಾರೆ ಎನಿಸುತ್ತದೆ. ಈ ವರದಿಯನ್ನು ಮೂಲೆಗೆ ಹಾಕಬೇಕು ಎಂದು ಶಿವಶಂಕರಪ್ಪಮ ಆಗ್ರಹಿಸಿದ್ದಾರೆ.

ಈ ವರದಿಯಿಂದ ಜಾತಿ ಜಾತಿಗಳ ನಡುವೆ ಸಂಘರ್ಷ ಆಗುತ್ತದೆ. ಜಾತಿ ಜಾತಿಗಳ ನಡುವೆ ಅವರು ಥೂ ಬಿಡ್ತಿದ್ದಾರೆ. ನಾವು ಎಸ್‌ಸಿ ಎಸ್‌ಟಿ ವಿರುದ್ಧವಿಲ್ಲ, ಆದರೆ ನಮ್ಮ ಸಂಖ್ಯೆ ಡಬಲ್ ಇದೆ ಎಂದು ಅವರು ಹೇಳಿದರು.

ಜಾತಿ ಗಣತಿ ವರದಿ ಸ್ವೀಕಾರದಿಂದ ಕಾಂಗ್ರೆಸ್‌ಗೆ ಸಮಸ್ಯೆ ಆಗಲಿದೆಯಾ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಶಾಮನೂರು ಶಿವಶಂಕರಪ್ಪ, ನಾನು ಈಗ ಏನನ್ನೂ ಕೂಲಂಕಷವಾಗಿ ಹೇಳಲು ಹೋಗುವುದಿಲ್ಲ. ಸಿಎಂ ಸಿದ್ದರಾಮಯ್ಯ ನಮ್ಮ ಅಭಿಪ್ರಾಯಗಳಿಗೆ ಎಲ್ಲಿ ಮನ್ನಣೆ ಕೊಡುತ್ತಾರೆ ಎಂದು ಮರು ಪ್ರಶ್ನೆ ಹಾಕಿದರು.

ಈ ಮಧ್ಯೆ, ಜಾತಿ ಗಣತಿಗೆ ಅನೇಕ ಮಠಾಧಿಪತಿಗಳಿಂದಲೂ ವಿರೋಧ ವ್ಯಕ್ತವಾಗಿದೆ. ತುಮಕೂರು ಜಿಲ್ಲೆಯ ಹಲವು ಮಠಾಧಿಪತಿಗಳು ಜಾತಿ ಗಣತಿಗೆ ವಿರೋಧ ವ್ಯಕ್ತಪಡಿಸಿದ್ದು, ಜಾತಿ ಗಣತಿ ವರದಿ ಅವೈಜ್ಞಾನಿಕವಾಗಿದೆ ಎಂದಿದ್ದಾರೆ. ಯಾರೂ ನಮ್ಮನ್ನು ಬಂದು ಮಾಹಿತಿ ಕೇಳಿಲ್ಲ. ನಮ್ಮ ಮಠದ ಅಕ್ಕಪಕ್ಕದ ಮನೆಗಳಲ್ಲೂ ಮಾಹಿತಿ ಕೇಳಿಲ್ಲ. ಹಾಗಾಗಿ ಅದು ವೈಜ್ಞಾನಿಕವಾಗಿದೆ ಎಂದು ನಂಬಲು ಸಾಧ್ಯವಿಲ್ಲ ಎಂದು ಬೆಟ್ಟಹಳ್ಳಿ ಮಠದ ಚಂದ್ರಶೇಖರ್ ಸ್ವಾಮೀಜಿ, ಗೊಲ್ಲಹಳ್ಳಿ ಮಠದ ವಿಭವವಿದ್ಯಾಶಂಕರ ಸ್ವಾಮೀಜಿ, ತಮ್ಮಡಿಹಳ್ಳಿ ಮಠದ ಅಭಿನವ ಮಲ್ಲಿಕಾರ್ಜುನ ದೇಸಿಕೇಂದ್ರ ಸ್ವಾಮಿಜಿ ಹೇಳಿದ್ದಾರೆ.

## ಪ್ರಿಯಾಂಕ್ ಖರ್ಗೆ ಉಸ್ತುವಾರಿಯಲ್ಲಿ ಕೊಲೆ ಸುಲಿಗೆಗಳದ್ದೇ ದರ್ಬಾರು



**ಬೆಂಗಳೂರು:** ಕಲಬುರಗಿ ಸಂಸದ ಉಮೇಶ್ ಜಾಧವ್ ಬೆಂಬಲಿಗ, ಬಿಜೆಪಿ ಮುಖಂಡ ಗಿರೀಶ್ ಚಕ್ರ ಕೊಲೆಯಾದ ಬೆನ್ನಲ್ಲೇ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಕರ್ನಾಟಕ ಬಿಜೆಪಿ ವಾಗ್ದಾಳಿ ನಡೆಸಿದೆ. ಟ್ರೋಲ್ ಮಿನಿಸ್ಟರ್ ಪ್ರಿಯಾಂಕ್ ಖರ್ಗೆ ಉಸ್ತುವಾರಿ ಅವಧಿಯಲ್ಲಿ ಜಿಲ್ಲೆಯಲ್ಲಿ ಕೊಲೆ ಸುಲಿಗೆಗಳದ್ದೇ ದರ್ಬಾರು ನಡೆಯುತ್ತಿದೆ ಎಂದು ಬಿಜೆಪಿ ಆಕ್ರೋಶ ವ್ಯಕ್ತಪಡಿಸಿದೆ. ಈ ವಿಚಾರವಾಗಿ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಸಂದೇಶ ಪ್ರಕಟಿಸಿರುವ ಬಿಜೆಪಿ, ಸಚಿವರ ವಿರುದ್ಧ ಟೀಕಾ ಪ್ರಹಾರ ನಡೆಸಿದೆ.

'ಟ್ರೋಲ್ ಮಿನಿಸ್ಟರ್ ಪ್ರಿಯಾಂಕ್ ಖರ್ಗೆ ಅವರ ಉಸ್ತುವಾರಿ ಅವಧಿಯಲ್ಲಿ ಕಲಬುರಗಿಯಲ್ಲಿ ಕೇವಲ ಕೊಲೆ-ಸುಲಿಗೆಗಳದ್ದೇ ದರ್ಬಾರು. ಪ್ರಿಯಾಂಕ್ ಉಸ್ತುವಾರಿ ಸಚಿವರಾದ ಈ 10 ತಿಂಗಳಲ್ಲಿ ಬಿಜೆಪಿ ಕಾರ್ಯಕರ್ತರು, ಮುಖಂಡರು ಸಾಲು ಸಾಲಾಗಿ ಹತ್ಯೆಗೀಡಾಗುತ್ತಿದ್ದಾರೆ. ಇದಕ್ಕೆ ಕಲಬುರಗಿಯನ್ನು ತಮ್ಮ ಪುಂಡ ಪೋಕರಿ ಪಟಾಲಂಗೆ ಒಪ್ಪಿಸಿರುವ ಸಚಿವ ಪ್ರಿಯಾಂಕ್ ಖರ್ಗೆಯವರೇ ನೇರ ಹೊಣೆ. ಮಹಾಂತಪ್ಪ ಆಲೂರೆಯವರ ಹತ್ಯೆ ಬೆನ್ನಲ್ಲೇ ಮತ್ತೊಬ್ಬ ಬಿಜೆಪಿ ಮುಖಂಡ ಗಿರೀಶ್ ಚಕ್ರರವರನ್ನು ಸಹ ಹತ್ಯೆಗೈಯಲಾಗಿದೆ' ಎಂದು ಬಿಜೆಪಿ ಉಲ್ಲೇಖಿಸಿದೆ.

ಸಿಎಂ ಸಿದ್ದರಾಮಯ್ಯ ಅವರೇ, ಕಲಬುರಗಿಯಲ್ಲಿ ಕಾನೂನು ಸುವ್ಯವಸ್ಥೆಯನ್ನು ಸಂಪೂರ್ಣ ಹಳ್ಳ ಹಿಡಿಸಿರುವ ಸಚಿವ ಪ್ರಿಯಾಂಕ್ ಖರ್ಗೆಯವರನ್ನು ಮೊದಲು ಸಂಪುಟದಿಂದ ವಜಾ ಮಾಡಿ ಎಂದು ಬಿಜೆಪಿ ಆಗ್ರಹಿಸಿದೆ.

ಗಿರೀಶ್ ಚಕ್ರ ಅವರನ್ನು ಅಫಜಲಪುರ ತಾಲೂಕಿನ ಸಾಗನೂರು ಗ್ರಾಮದಲ್ಲಿ ಭೀಕರವಾಗಿ ಹತ್ಯೆ ಮಾಡಲಾಗಿದೆ. ಕೆಲವು ದಿನಗಳ ಹಿಂದೆಯಷ್ಟೇ ಬಿಎಸ್‌ಎನ್‌ಎಲ್ ಸಲಹಾ ಸಮಿತಿ ನಿರ್ದೇಶಕರನ್ನಾಗಿ ಗಿರೀಶ್ ಅವರನ್ನು ಸಂಸದ ಉಮೇಶ್ ಜಾಧವ್ ನೇಮಕ ಮಾಡಿದ್ದರು. ಈ ಹಿನ್ನೆಲೆಯಲ್ಲಿ ಪಾರ್ಟಿ ಕೊಡುವುದಾಗಿ ನಂಬಿಸಿ ಗಿರೀಶ್ ಚಕ್ರ ಅವರನ್ನು ಸ್ನೇಹಿತರೇ ಜಮೀನಿಗೆ ಕರೆಸಿದ್ದರು. ಜಮೀನಿಗೆ ಬಂದ ಗಿರೀಶ್ ಕಣ್ಣಿಗೆ ಖಾರದ ಪುಡಿ ಎರಚಿ ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿ ಬರ್ಬರವಾಗಿ ಹತ್ಯೆ ಮಾಡಲಾಗಿತ್ತು.

ಗಿರೀಶ್ ಚಕ್ರ ಕೊಲೆ ಆರೋಪಿಗಳನ್ನು ತಕ್ಷಣವೇ ಬಂಧಿಸಿ ಕ್ರಮ ಕೈಗೊಳ್ಳುವಂತೆ ಸಂಸದ ಉಮೇಶ್ ಜಾಧವ್ ಸೇರಿದಂತೆ ಬಿಜೆಪಿ ನಾಯಕರು ಸರ್ಕಾರವನ್ನು ಆಗ್ರಹಿಸಿದ್ದಾರೆ. ಜತೆಗೆ, ಗಿರೀಶ್ ಚಕ್ರ ಅಗಲುವಿಕೆಗೆ ಪಕ್ಷದ ನಾಯಕರು ಸಂತಾಪ ಸೂಚಿಸಿದ್ದಾರೆ.

## ಜಾತಿಗಣತಿ ವರದಿಯನ್ನು ಸರ್ಕಾರ ಅನುಷ್ಠಾನಕ್ಕೆ ತರಬಾರದು

**ಬೆಂಗಳೂರು:** ಜಯಪ್ರಕಾಶ್ ಹೆಗ್ಡೆ ಅವರ ಸಮಿತಿಯು ಸಲ್ಲಿಸಿರುವ ಜಾತಿಗಣತಿ ವರದಿಯನ್ನು ರಾಜ್ಯ ಸರ್ಕಾರ ಅನುಷ್ಠಾನಕ್ಕೆ ತರಬಾರದು ಎಂದು ರಾಜ್ಯ ಒಕ್ಕಲಿಗರ ಮೀಸಲಾತಿ ಹೋರಾಟ ಸಮಿತಿ ಒತ್ತಾಯಿಸಿದೆ.

ಕಾಂತರಾಜು ಅವರ ಸಮಿತಿಯ ವರದಿಯನ್ನ ಜಯಪ್ರಕಾಶ್ ಹೆಗ್ಡೆ ಅವರ ಸಮಿತಿ ನಿನ್ನೆ ರಾಜ್ಯ ಸರ್ಕಾರಕ್ಕೆಸಲ್ಲಿಕೆ ಮಾಡಿದೆ. ಈ ವರದಿಯನ್ನ ಸರ್ಕಾರ ಅನುಷ್ಠಾನಕ್ಕೆ ತರಬಾರದು. ಇದು 10 ವರ್ಷಗಳ ಹಳೆಯ ಸಮೀಕ್ಷೆಯ ವರದಿ. ಈ ವರದಿಯ ಮೇಲೆ ಸರ್ಕಾರ ಯಾವುದೇ ನಿರ್ಧಾರ ಕೈಗೊಂಡರೂ ನಮ್ಮ ಒಕ್ಕಲಿಗ ಸಮಾಜ ಒಪ್ಪುವುದಿಲ್ಲ, ಮುಂದೆ ಉಗ್ರ ಸ್ವರೂಪದ ಹೋರಾಟ ಮಾಡಬೇಕಾಗುತ್ತೆ ಎಂದು ಸರ್ಕಾರಕ್ಕೆ ಸಮಿತಿ ಎಚ್ಚರಿಕೆ ನೀಡಿದೆ.

ಸರ್ಕಾರ ವರದಿಯನ್ನ ತಿರಸ್ಕರಿಸಬೇಕು. ಹೊಸದೊಂದು ಸಮಿತಿ ಮಾಡಿ ಸಾಮಾಜಿಕ-ಆರ್ಥಿಕ ಗಣತಿ ಮಾಡಿಸಿ. ಈ ವರದಿ ಔಟ್‌ಡೇಟ್ ಆಗಿದೆ. ಇದರಿಂದ ಯಾವುದೇ ನ್ಯಾಯ ಸಿಗುವುದಿಲ್ಲ. ಇದರಿಂದ ಜನರಲ್ಲಿ ಬಿರುಕು ಮೂಡುತ್ತದೆ. ಸರ್ಕಾರ ಈ ರೀತಿ ಆಗದಂತೆ ನಿಗಾವಹಿಸಬೇಕು ಎಂದು ಆಗ್ರಹಿಸಿದೆ. ನಾವು ನಮ್ಮ ಸಮಾಜದ ನಾಯಕರು ನಿರ್ಮಲಾನಾಂದನಾಥ ಸ್ವಾಮಿಗಳ ನೇತೃತ್ವದಲ್ಲಿ ಸಭೆ ಮಾಡಿ ಸರ್ಕಾರಕ್ಕೆ ಮತ್ತೊಮ್ಮೆ ಮನವಿ ಮಾಡುತ್ತೇವೆ. ಸರ್ಕಾರ ಇದನ್ನ ಸ್ವೀಕರಿಸಿ ಕಾರ್ಯರೂಪಕ್ಕೆ ತರುವ ಯೋಜನೆ ಮಾಡಿದ್ರೆ ಹೋರಾಟ ಮಾಡಲೇಬೇಕಾಗುತ್ತದೆ ಎಂದು ಸಮಿತಿಯ ಅಧ್ಯಕ್ಷ ಶ್ರೀಕಂಠಯ್ಯ, ಸಂಚಾಲಕ ನಾಗರಾಜ್ ಎಚ್ಚರಿಸಿದ್ದಾರೆ.

## ಹೆಚ್ಚು ಬಗೆಯ ಗಿಡಗಳು

ಸಿಲಿಕಾನ್ ಸಿಟಿ ದಿನದಿಂದ ದಿನಕ್ಕೆ ಕಾಂಕ್ರೀಟ್ ಕಾಡಾಗಿ ಮಾರ್ಪಾಡಾಗುತ್ತಿದೆ. ಈ ಮಧ್ಯೆ ಹಸಿರೀಕರಣಕ್ಕೆ ಹೆಚ್ಚು ಒತ್ತು ಕೊಡುವುದೇ ಕಡಿಮೆಯಾಗಿ ಹೋಗಿದೆ. ಸದ್ಯ ಲಾಲ್ ಬಾಗ್ ತೋಟಗಾರಿಕೆ ಇಲಾಖೆ ಪಾಳು ಬಿದ್ದ ಜಾಗದಲ್ಲಿ 6 ಎಕರೆಯ ಕಲ್ಲು ಬಂಡೆಯಂತಹ ಪ್ರದೇಶದಲ್ಲಿ 300ಕ್ಕೂ ಹೆಚ್ಚು ಬಗೆಯ ನಿತ್ಯ ಹರಿದ್ವರ್ಣ ಗಿಡಗಳನ್ನ ಹಾಕಿದ್ದು, ಪಶ್ಚಿಮ ಘಟ್ಟದ ರೀತಿ ಅಭಿವೃದ್ಧಿ ಪಡಿಸಲು ಮುಂದಾಗಿದೆ. ಈಗಾಗಲೇ ಈ ಗಿಡಗಳನ್ನ ಹಾಕಿ 5 ರಿಂದ 6 ತಿಂಗಳು ಕಳೆದಿದ್ದು, ಇನ್ನು ಐದು ವರ್ಷದಲ್ಲಿ ಈ ಗಿಡಗಳು ದೊಡ್ಡದಾಗಿ ಬೆಳೆಯಲಿವೆ.

ದಟ್ಟ ಕಾಡಿನಂತೆಯೇ ನಿರ್ಮಾಣವಾಗಲಿವೆ. ಇನ್ನು ಇಲ್ಲಿ ಉಳುಗೇರಿ, ಪುತ್ರಂಜೀವ, ಎಣ್ಣೆ ಮರ, ಗಾರ್ಸಿನಿಯಾ, ಮ್ಯಾಂಗೋ ಸ್ಟೀನ್, ನವಿಲಾಡಿ, ದೂಪದ ಮರ, ಡಯಾಸ್ ಸ್ಪರಸ್, ಪಾಲ್ಸ ಹಣ್ಣು, ಸ್ರೋಪ್ ಪೈನ್, ಅಂಟುವಾಳ, ಮಡ್ಡಿ ದೀಪದ ಮರ, ಸ್ಪೈಸ್ ಮರಗಳು, ರುದ್ರಾಕ್ಷಿ ಮರ, ತಾರೇ ಮರ, ಆರ್ ಡಿಸಿಯಾ ಎಮಿಲಿಸಿಸ್ ಸೇರಿದಂತೆ ಹಲವು ಅಪರೂಪದ ಗಿಡಗಳನ್ನು ಹಾಕಲಾಗಿದೆ. ಈ ಗಿಡಗಳು ಅಳಿವಿನಂಚಿನಲ್ಲಿದ್ದು, ಹೊಸ ವೈವಿಧ್ಯತೆಯನ್ನ ಸೃಷ್ಟಿಮಾಡಲು ತೋಟಾಗಾರಿಕಾ ಇಲಾಖೆ ಮುಂದಾಗಿದೆ.

ಈ ಫಾರೆಸ್ಟ್ ನಿರ್ಮಿಸಲು ಒಟ್ಟು 45 ಲಕ್ಷದಷ್ಟು ಖರ್ಚು ಮಾಡಿದ್ದು, ಸದ್ಯ ಬಾಟಾನಿಕಲ್ ಗಾರ್ಡನ್ ಬಗ್ಗೆ ಸಂಶೋಧನೆ ಮಾಡುವ ವಿದ್ಯಾರ್ಥಿಗಳಿಗೆ ನೋಡುವುದಕ್ಕೆ ಅವಕಾಶ ಮಾಡಿಕೊಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ಇಲ್ಲಿ ಮರಗಳು ದೊಡ್ಡದಾದ ನಂತರ ಪ್ರವಾಸಿಗರು ನೋಡಲು ಅವಕಾಶ ಮಾಡಿಕೊಡಲಾಗುತ್ತೆ. ಪಕ್ಷಿಗಳು ಜೀವಿಸಲು ಅನುಕೂಲವಾಗುವ ರೀತಿಯಲ್ಲಿ ಪಶ್ಚಿಮ ಘಟ್ಟದ ಕಾಡನ್ನ ನಿರ್ಮಿಸಲಾಗುತ್ತಿದೆ.

## 30 ಜನರಿಗೆ ಗಾಯ

ಕೃಷಿ, ನೀರಾವರಿ ಮತ್ತು ಜಾನುವಾರು ಸಚಿವಾಲಯದ ತಾಲಿಬಾನ್-ನೇಮಕ ವಕ್ತಾರ ಮಿಸ್ಬಾಹುದ್ದೀನ್ ಮುಸ್ತೀನ್ ಎಲ್ಲಾ ಪ್ರಾಂತ್ಯಗಳಲ್ಲಿ ರಚಿಸಲಾದ ಸಮಿತಿಗಳ ತ್ವರಿತ ಪ್ರತಿಕ್ರಿಯೆಯನ್ನು ಮಾಡಲಿದೆ. ಈ ಸಮಿತಿಗಳು ನಿರ್ಬಂಧಿತ ರಸ್ತೆಗಳನ್ನು ತೆರೆಯಲು, ಸಂಕಷ್ಟಕ್ಕೆ ಒಳಗಾದ ಜನರಿಗೆ ಆಹಾರ ಮತ್ತು ಮೇವನ್ನು ವಿತರಿಸಲು ಹಾಗೂ ಭಾರೀ ಹಿಮಪಾತದಲ್ಲಿ ಸಿಲುಕಿರುವವರನ್ನು ಜನರನ್ನು ರಕ್ಷಿಸುವ ಕೆಲಸ ಮಾಡಲಿದೆ ಎಂದು ಹೇಳಿದ್ದಾರೆ.

ಇದನ್ನು ಅಫ್ಘಾನ್ ರೆಡ್ ಕ್ರೆಸೆಂಟ್ ಸೊಸೈಟಿಯ ವಕ್ತಾರ ಇರ್ಫಾನುಲ್ಲಾ ಶರಫ್ಜೋಯ್ ಮಾತನಾಡಿ, ಚಳಿಗಾಲದ ಸೇವಾ ಸಿಬ್ಬಂದಿಗಳು ಈಗಾಗಲೇ ಬದ್ಗಿಸ್, ಘೋರ್, ಫರಾಹ್, ಕಂದಹಾರ್, ಹೆಲ್ಮಂಡ್, ಜಾವ್ಜಾನ್ ಮತ್ತು ನುರಿಸ್ತಾನ್‌ನಂತಹ ಪ್ರಾಂತ್ಯಗಳಲ್ಲಿ ಸಹಾಯವನ್ನು ಮಾಡುತ್ತಿದ್ದಾರೆ ಎಂದು ಹೇಳಿದ್ದಾರೆ.

## ನಾಲ್ವರು ಶಂಕಿತರ ವಶ

ಭಯೋತ್ಪಾದನೆ, ಉಗ್ರರು, ಬಾಂಬು, ಬಾಂಬ್ ಸ್ಫೋಟ ಮೊದಲಾದ ಸಂಗತಿಗಳು ಜನರಲ್ಲಿ ಹುಟ್ಟಿಸುವ ಭಯ ಮತ್ತು ಆತಂಕ ಅಂಥದ್ದು. ಇದನ್ನು ನಾವ್ಯಾಕೆ ಹೇಳ್ತಿದ್ದೀವಿ ಅಂದರೆ, ನಿನ್ನೆ ಐಟಿಪಿಎಲ್ ರಸ್ತೆಯ ಬ್ರೂಕ್‌ಫೀಲ್ಡ್ ಪ್ರದೇಶದಲ್ಲಿರುವ ರಾಮೇಶ್ವರಂ ಕೆಫೆಯಲ್ಲಿ ಕಡಿಮೆ ತೀವ್ರತೆಯ ಐಇಡಿ ಬಾಂಬ್ ಸ್ಫೋಟಗೊಂಡು 10 ಜನರು ಗಾಯಗೊಂಡಿದ್ದು ಈಗ ದೇಶದೆಲ್ಲೆಡೆ ಸುದ್ದಿಯಾಗಿದೆ. ಅದಕ್ಕೆ ಸಂಬಂಧಿಸಿದಂತೆ ತನಿಖೆ ಯುದ್ಧೋಪಾದಿಯಲ್ಲಿ ನಡೆಯುತ್ತಿದೆ ಆ ವಿಚಾರ ಬೇರೆ. ನಾವು ಇಲ್ಲಿ ಹೇಳಹೊರಟಿರುವ ವಿಷಯವೆಂದರೆ ಘಟನೆಯು ಬೆಂಗಳೂರಿ ನಿವಾಸಿಗಳಲ್ಲಿ ಸೃಷ್ಟಿಸಿರುವ ಆತಂಕ. ಬ್ಲಾಸ್ಟ್ ನಡೆದಿದ್ದು ರಾಮೇಶ್ವರಂ ಕೆಫೆಯ ಬ್ರೂಕ್‌ಫೀಲ್ಡ್ ಬ್ಯಾಂಚ್ನಲ್ಲಿ, ಆದರೆ, ನಗರದಲ್ಲಿ ಈ ಹೋಟೆಲ್ ಮಾಲೀಕರ ಮೂರು ಶಾಖೆಗಳಿದ್ದು ಅವುಗಳಲ್ಲಿ ಗ್ರಾಹಕರ ಸಂಖ್ಯೆ ಗಣನೀಯವಾಗಿ ತಗ್ಗಿದೆ.

ದೃಶ್ಯಗಳಲ್ಲಿ ಕಾಣುತ್ತಿರುವ ಕೆಫೆಯ ರಾಜಾಜಿನಗರ ಬ್ರ್ಯಾಂಚ್ ಸೇರಿದಂತೆ ಇಂದಿರಾನಗರ ಮತ್ತು ಜೆಪಿ ನಗರದಲ್ಲೂ ಕೆಫೆಯ ಬ್ರ್ಯಾಂಚ್ ಗಳಿವೆ. ಶನಿವಾರಗಳಂದು ರಜಾ ದಿನವಾಗಿರುವುದರಿಂದ ರಾಜಾಜಿನಗರದ ಈ ಕೆಫೆ ಗ್ರಾಹಕರಿಂದ ಗಿಜಿಗುಡುತಿತ್ತು, ಆದರೆ ಇವತ್ತು ಎಂದಿನ ಅರ್ಧದಷ್ಟು ಗ್ರಾಹಕರು ಕೂಡ ಇಲ್ಲಿ ಕಾಣಸಿಗರು. ಅದಕ್ಕೇ ನಾವು ಹೇಳಿದ್ದು, ಬಾಂಬ್ ಸ್ಫೋಟ ಜನರಲ್ಲಿ ಸೃಷ್ಟಿಸುವ ಆತಂಕವೇ ಅಂಥದ್ದು. ಬೇರೆ ಬ್ರ್ಯಾಂಚ್ ಗಳಲ್ಲೂ ವ್ಯಾಪಾರ ತಗ್ಗಿದೆ ಎಂಬ ಮಾಹಿತಿ ಲಭ್ಯವಾಗಿದೆ.

**ಕೇರಳ, ತಮಿಳುನಾಡಿನಲ್ಲಿ ಶೋಧ:** ಪ್ರಕರಣ ಸಂಬಂಧ ಸದ್ಯ 10 ತಂಡಗಳಿಂದ ತೀವ್ರ ತನಿಖೆ ನಡೆಯುತ್ತಿದೆ. ಬ್ಲಾಸ್ಟ್ ಪ್ರಕರಣ ಸಂಬಂಧ ಕೇರಳ, ತಮಿಳುನಾಡು ಹಾಗೂ ಕರ್ನಾಟಕದ ವಿವಿಧ ಭಾಗಗಳಲ್ಲಿ ಆರೋಪಿಗಾಗಿ ತೀವ್ರ ಶೋಧಕಾರ್ಯ ನಡೆಸಲಾಗುತ್ತಿದೆ. ಶುಕ್ರವಾರ ಸಂಜೆಯೇ ತನಿಖಾ ತಂಡ ತಮಿಳುನಾಡು ಹಾಗೂ ಕೇರಳಾಗೆ ಹೋಗಿದೆ.

ಈ ಹಿಂದಿನ ಬಾಂಬ್ ಬ್ಲಾಸ್ಟ್ ಪ್ರಕರಣಗಳಲ್ಲಿ ಭಾಗಿಯಾಗಿದ್ದ ಆರೋಪಿಗಳನ್ನು ಕೂಡ ವಿಚಾರಣೆ ನಡೆಸಲಾಗುತ್ತಿದೆ. ರಾಮೇಶ್ವರ ಕೆಫೆಯ ಪ್ರಮುಖ ಬ್ರಾಂಚ್ ತಮಿಳುನಾಡು ಇದೆ. ಹೀಗಾಗಿ ಅಲ್ಲಿಯೂ ಆಡಳಿತ ಮಂಡಳಿಯ ಕೆಲ ಸಿಬ್ಬಂದಿಯನ್ನು ಅಧಿಕಾರಿಗಳು ವಿಚಾರಣೆ ನಡೆಸುತ್ತಿದ್ದಾರೆ.

**ರವೆ ಇಡ್ಲಿ ತಿಂದ ಬಾಂಬ್ ಇಟ್ಟು ಹೋದ:** ತನ್ನ ಚಹರೆ ಎಲ್ಲೂ ಬೀಳದಿರಲಿ ಅಂತಾ ಶಂಕಿತ ಉಗ್ರ, ಮುಖಕ್ಕೆ ಮಾಸ್ಕ್ ಕಣ್ಣಿಗೆ ಕೂಲಿಂಗ್ ಗ್ಲಾಸ್, ತಲೆ ಮೇಲೆ ವೈಟ್ ಹ್ಯಾಟ್ ಹಾಕಿಕೊಳ್ಳುವ ಮೂಲಕ ಮೊದಲೇ ಪ್ರೀ ಪ್ಲಾನ್ ಮಾಡಿಕೊಂಡು ಕೆಫೆಗೆ ಎಂಟ್ರಿ ಕೊಟ್ಟಿದ್ದಾನೆ. ಜೊತೆಗೆ ಬಲಭುಜದ ಹಿಂಬದಿಗೆ ಕಪ್ಪು ಬಣ್ಣದ ಬ್ಯಾಗ್ ಹಾಕಿಕೊಂಡು ಹೋಟೆಲ್ ಗೆ ಬಂದಿರುವ ಆರೋಪಿ ಹೋಟೆಲ್ ನಲ್ಲಿ ತಿಂಡಿ ತಿಂದು ಸಾಗುವ ಎಕ್ಸ್‌ಕ್ಲೂಸಿವ್ ಫೋಟೋ ಹಾಗೂ ವಿಡಿಯೋಗಳು ಸಿಕ್ಕಿದೆ.

ಟೋಕನ್ ತೆಗೆದುಕೊಂಡ ಶಂಕಿತ ರವೆ ಇಡ್ಲಿ ತಿಂದು ಹ್ಯಾಡ್ ವಾಶಿಂಗ್‌ಗೆ ಹೋಗಿದ್ದಾನೆ. ಹ್ಯಾಂಡ್ ವಾಶ್ ಮಾಡಿ ಬ್ಯಾಗ್ ಅಲ್ಲೇ ಇಟ್ಟು ಬೈಕ್‌ನಲ್ಲಿ ತೆರಳಿದ್ದಾನೆ. ಆತ ಹೋದ ಸುಮಾರು ಒಂದು ಗಂಟೆಯ ಬಳಿಕ ಈ ಬ್ಯಾಗ್ ಬ್ಲಾಸ್ಟ್ ಆಗಿದೆ. ಸದ್ಯ ಬೈಕ್ ಮಾಲೀಕ ಯಾರು..ಷ ಬೈಕ್ ಎಲ್ಲಿನದ್ದು ಎಂಬುದರ ಬಗ್ಗೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

## ಸಿಸಿಟಿವಿಯಲ್ಲಿ ಶಂಕಿತ ಆರೋಪಿ

ತನ್ನ ಚಹರೆ ಎಲ್ಲೂ ಬೀಳದಿರಲಿ ಅಂತಾ ಶಂಕಿತ ಉಗ್ರ ಮುಖಕ್ಕೆ ಮಾಸ್ಕ್ ಕಣ್ಣಿಗೆ ಕೂಲಿಂಗ್ ಗ್ಲಾಸ್, ತಲೆ ಮೇಲೆ ವೈಟ್ ಹ್ಯಾಟ್ ಹಾಕಿಕೊಳ್ಳುವ ಮೂಲಕ ಮೊದಲೇ ಪ್ರೀ ಪ್ಲಾನ್ ಮಾಡಿಕೊಂಡು ಕೆಫೆಗೆ ಎಂಟ್ರಿ ಕೊಟ್ಟಿದ್ದಾನೆ. ಜೊತೆಗೆ ಬಲಭುಜದ ಹಿಂಬದಿಗೆ ಕಪ್ಪು ಬಣ್ಣದ ಬ್ಯಾಗ್ ಹಾಕಿಕೊಂಡು ಹೋಟೆಲ್ ಗೆ ಬಂದಿರುವ ಆರೋಪಿ ಹೋಟೆಲ್ ನಲ್ಲಿ ತಿಂಡಿ ತಿಂದು ಸಾಗುವ ಎಕ್ಸ್‌ಕ್ಲೂಸಿವ್ ಫೋಟೋ ಕೂಡ ಸಿಕ್ಕಿದೆ.

ಟೋಕನ್ ತೆಗೆದುಕೊಂಡ ಶಂಕಿತ ರವೆ ಇಡ್ಲಿ ತಿಂದು ಹ್ಯಾಡ್ ವಾಶಿಂಗ್‌ಗೆ ಹೋಗಿದ್ದಾನೆ. ಹ್ಯಾಂಡ್ ವಾಶ್ ಮಾಡಿ ಬ್ಯಾಗ್ ಅಲ್ಲೇ ಇಟ್ಟು ಬೈಕ್‌ನಲ್ಲಿ ತೆರಳಿದ್ದಾನೆ. ಆತ ಹೋದ ಸುಮಾರು ಒಂದು ಗಂಟೆಯ ಬಳಿಕ ಈ ಬ್ಯಾಗ್ ಬ್ಲಾಸ್ಟ್ ಆಗಿದೆ. ಸದ್ಯ ಬೈಕ್ ಮಾಲೀಕ ಯಾರು..ಷ ಬೈಕ್ ಎಲ್ಲಿನದ್ದು ಎಂಬುದರ ಬಗ್ಗೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

## ಸಾಮ್ಯತೆ ಇಲ್ಲ

ವ್ಯಕ್ತಿಯ ಗುರುತು ಪತ್ತೆ ಹಚ್ಚುವ ಕಾರ್ಯ ನಡೆಯುತ್ತಿದೆ. ವ್ಯಕ್ತಿಯ ಗುರುತು ಪತ್ತೆ ಹಚ್ಚುವ ಕಾರ್ಯ ನಡೆಯುತ್ತಿದೆ. ಇದು ಓರ್ವ ವ್ಯಕ್ತಿಯ ಕೃತ್ಯವಾ ಅಥವಾ ಸಂಘಟನೆಯ ಕೃತ್ಯವಾ ಗೊತ್ತಿಲ್ಲ, ಭಯೋತ್ಪಾದಕ ಕೃತ್ಯನಾ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ಪ್ರಕರಣದ ಬಗ್ಗೆ ಪೊಲೀಸರು ತನಿಖೆ ಮುಂದುವರಿಸಿದ್ದಾರೆ ಎಂದು ತಿಳಿಸಿದರು.

ವಿಧಾನಸೌಧದಲ್ಲಿ ಪಾಕಿಸ್ತಾನ್ ಜಿಂದಾಬಾದ್ ಘೋಷಣೆ ಆರೋಪಕ್ಕೆ ಸಂಬಂಧಿಸಿದಂತೆ ಇನ್ನೂ ಎಫ್‌ಎಸ್‌ಎಲ್ ವರದಿ ಬಂದಿಲ್ಲ, ತಪ್ಪು ಸಾಬೀತಾದರೆ ನಾವು ಯಾರನ್ನೂ ರಕ್ಷಣೆ ಮಾಡುವುದಿಲ್ಲ. ಇದರಲ್ಲಿ ಯಾರನ್ನೂ ರಕ್ಷಣೆ ಮಾಡುವ ಪ್ರಶ್ನೆಯೇ ಇಲ್ಲ, ವರದಿ ಬಂದರೆ ಆರೋಪಗಳಿಗೆ ಏನೂ ಉತ್ತರ ಕೊಡಲಿ ಎಂದರು.

ಅಲ್ಪಸಂಖ್ಯಾತ ತುಷ್ಟೀಕರಣದಿಂದ ಇಂತಹ ಕೃತ್ಯ ನಡೆದಿದೆ ಎಂಬ ಬಿಜೆಪಿ ನಾಯಕರ ಆರೋಪ ವಿಚಾರಕ್ಕೆ ಸಂಬಂಧಿಸಿದಂತೆ, ಬಿಜೆಪಿಯ ಕಾಲದಲ್ಲಿ ಆದ ಬಾಂಬ್ ಬ್ಲಾಸ್ಟ್ ಗಳಿಗೆ ಏನು ಕಾರಣ ಅದು ಅಲ್ಪಸಂಖ್ಯಾತರ ತುಷ್ಟೀಕರಣವಾ ಬಿಜೆಪಿ ರಾಜಕೀಯಕ್ಕಾಗಿ ಇಂತಹ ಹೇಳಿಕೆ ನೀಡುತ್ತಿದೆ. ಅಲ್ಪಸಂಖ್ಯಾರಿಗೂ ಇದಕ್ಕೂ ಏನು ಸಂಬಂಧ ಬಿಜೆಪಿ ಇದನ್ನು ರಾಜಕೀಯ ಮಾಡುತ್ತಿದೆ ಅಷ್ಟೆ. ಈ ವಿಚಾರದಲ್ಲಿ ರಾಜಕೀಯ ಯಾರು ಮಾಡಬಾರದು ಎಂದು ಮನವಿ ಮಾಡಿದರು.

## ಹೈ ಅಲರ್ಟ್

ಎರಡೂ ಟರ್ಮಿನಲ್ ಒಳಗಡೆ ಪ್ರವೇಶಿಸುವವರ ಮೇಲೆ,

## ಮೊದಲನೇ ಪುಟದಿಂದ...

ಅಂಗಡಿ ಮುಂಗಟ್ಟುಗಳ ಮೇಲೂ ನಿಗಾ ಇರಿಸಿದ್ದಾರೆ. ವಿಐಪಿ ಲೈನ್ ನಲ್ಲಿ ಪಾರ್ಕಿಂಗ್ ಅವಧಿಯನ್ನು ಅರ್ಧ ಗಂಟೆಯಿಂದ 5 ರಿಂದ 10 ನಿಮಿಷಕ್ಕೆ ಇಳಿಸಿದ್ದಾರೆ. ಭದ್ರತಾ ಸಿಬ್ಬಂದಿಯ ಸಂಖ್ಯೆಯನ್ನು ಹೆಚ್ಚಳ ಮಾಡಿದ್ದಾರೆ. ರಾತ್ರ-ಹಗಲು ಮೂರು ಪಾಳಯದಲ್ಲಿ ಸಿಬ್ಬಂದಿ ಕಾರ್ಯ ನಿರ್ವಹಿಸುತ್ತಿದ್ದಾರೆ.

## ಗಂಭೀರ ಆರೋಪ

ವಿರೋಧ ಪಕ್ಷದ ನಾಯಕ ಬಹಿರಂಗಪಡಿಸಿದ ದಾಖಲೆಗಳು, ಚೀನಾದ ಅಧಿಕಾರಿಗಳಿಗೆ ಪ್ರಯೋಗಾಲಯ ಪ್ರವೇಶಿಸಲು ಮತ್ತು ಸೂಕ್ಷ್ಮ ಮಾಹಿತಿಗೆ ಪ್ರವೇಶವನ್ನು ಪಡೆಯಲು ಅನುಮತಿಸಲಾಗಿರುವುದನ್ನು ತೋರಿಸಿದೆ. ಇದು ಕೆನಡಾದ ರಾಷ್ಟ್ರೀಯ ಭದ್ರತೆಯ ಬಗ್ಗೆ ಕಳವಳ ಸೃಷ್ಟಿಸಿದೆ.

**ವಿನಪೆಗ್ ಲ್ಯಾಬ್‌ನಲ್ಲಿ ನಡೆದಿದ್ದೇನು:** 2019 ರಲ್ಲಿ ವಿಜ್ಞಾನಿಗಳಾದ ಡಾ. ಕ್ರಿಯಾಂಗ್‌ಗುವೂ ಕಿಯು ಮತ್ತು ಅವರ ಪತಿ ಕಡಿಂಗ್ ಚೆಂಗ್ ಅವರನ್ನು ಪ್ರಯೋಗಾಲಯದ ಕರ್ತವ್ಯಗಳಿಂದ ವಜಾಗೊಳಿಸಲಾಗಿತ್ತು. ಆದರೂ ಅವರು ಅಲ್ಲಿ ಕಾರ್ಯನಿರ್ವಹಿಸುತ್ತಿದ್ದರು. ನಂತರ ಅವರನ್ನು 2021ರಲ್ಲಿ ಅಧಿಕೃತವಾಗಿ ವಜಾಗೊಳಿಸಲಾಗಿತ್ತು. ಇತ್ತೀಚೆಗಷ್ಟೇ ಅವರ ವಜಾ ಕುರಿತ ಮಾಹಿತಿಯನ್ನು ಸರ್ಕಾರ ಅಧಿಕೃತವಾಗಿ ಬಹಿರಂಗಪಡಿಸಿತ್ತು. ಆ ವಿಜ್ಞಾನಿಗಳಿಬ್ಬರು ಚೀನಾದೊಂದಿಗೆ ವೈಜ್ಞಾನಿಕ ಮಾಹಿತಿಯನ್ನು ಉದ್ದೇಶಪೂರ್ವಕವಾಗಿ ಹಂಚಿಕೊಂಡಿದ್ದಾರೆ ಎಂಬುದು ಗುಪ್ತಚರ ಇಲಾಖೆ ತನಿಖೆಯಿಂದ ತಿಳಿದುಬಂದಿದೆ. ಇದು ಒಟ್ಟಾರೆಯಾಗಿ ಕೆನಡಾ ಸರ್ಕಾರಕ್ಕೆ ಅತ್ಯಂತ ಗಂಭೀರವಾದ ಸಮಸ್ಯೆ ಸೃಷ್ಟಿಸುವುದರ ಜತೆಗೆ ಅಪಾಯವನ್ನೂ ತಂದೊಡ್ಡಿದೆ ಎಂದು ಪ್ರತಿಪಕ್ಷ ನಾಯಕರು ಆರೋಪಿಸಿದ್ದಾರೆ.

**ಭಾರತಕ್ಕೂ ತಪ್ಪಿದ್ದಲ್ಲ ಆತಂಕ:** ಅತ್ಯಂತ ರಹಸ್ಯ ಮತ್ತು ಅಪಾಯಕಾರಿ ಜೈವಿಕ ಮಾಹಿತಿಯನ್ನು ಚೀನಾ ಜೊತೆ ಹಂಚಿಕೊಂಡಿರುವುದು ನಿಜವೇ ಆಗಿದ್ದಲ್ಲಿ ಪರೋಕ್ಷವಾಗಿ ಅದು ಭಾರತಕ್ಕೂ ಆತಂಕಕಾರಿ ವಿಚಾರವೇ ಆಗಿದೆ. ಸಿಖ್ ಪ್ರತ್ಯೇಕತಾವಾದ ಮತ್ತು ಅದಕ್ಕೆ ಸಂಬಂಧಿಸಿದ ಭಯೋತ್ಪಾದನೆ ಚಟುವಟಿಕೆಗಳಿಗೆ ಕುಮ್ಮಕ್ಕು ನೀಡಿದ ಆರೋಪ ಎದುರಿಸುತ್ತಿರುವ ಕೆನಡಾ ಜತೆಗಿನ ಭಾರತದ ಬಾಂಧವ್ಯ ಕಳೆದ ಕೆಲವು ತಿಂಗಳುಗಳಿಂದ ಹದಗೆಟ್ಟಿದೆ. ಈ ಎಲ್ಲ ದೃಷ್ಟಿಕೋನದಿಂದಲೂ ಕೆನಡಾ ಚೀನಾ ಬಾಂಧವ್ಯವನ್ನು ಗಮನಿಸಬೇಕಾಗುತ್ತದೆ ಎಂಬುದು ವಿದೇಶಾಂಗ ನೀತಿ ಮತ್ತು ಭದ್ರತಾ ವಿಶ್ಲೇಷಕರ ಅಭಿಪ್ರಾಯವಾಗಿದೆ.

## ಅಣ್ಣಾಮಲೈ ಅಭಿಮತ

ಮುಂಬರುವ ಲೋಕಸಭೆ ಸ್ಪರ್ಧೆಯ ಬಗ್ಗೆ ತಿಳಿಸಿದ ಅವರು, ನಾಳೆ ಬೆಳಿಗ್ಗೆ ಪಕ್ಷ ಅದನ್ನು ಮಾಡು ಎಂದು ಹೇಳಿದರೆ ನಾನು ಅದನ್ನು ಮಾಡುತ್ತೇನೆ ಎಂದು ಹೇಳಿದರು. ನಾನು ಊಹಾಪೋಹಗಳಿಗೆ ಪ್ರತಿಕ್ರಿಯಿಸಲು ಹೋಗುವುದಿಲ್ಲ, ನಮ್ಮ ಹಿರಿಯ ರಾಷ್ಟ್ರೀಯ ನಾಯಕತ್ವವು ಯಾವುದೇ ನಿರ್ಧಾರವನ್ನು ತೆಗೆದುಕೊಂಡರೂ, ಅದನ್ನು ಪಾಲಿಸುವುದು ಮತ್ತು ಅದನ್ನು ತಮಿಳುನಾಡಿನಲ್ಲಿ ಕಾರ್ಯಗತಗೊಳಿಸುವುದು ನನ್ನ ಕರ್ತವ್ಯ ಎಂದು ಅಣ್ಣಾಮಲೈ ಹೇಳಿದ್ದಾರೆ.

ಬಿಜೆಪಿಯ ವಿರುದ್ಧ ಉದಯನಿಧಿ ಅವರ ಕಟು ಟೀಕೆಗಳ ಬಗ್ಗೆ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಅಣ್ಣಾಮಲೈ ಅವರ ಮಾತು ಚುನಾವಣೆಯಲ್ಲಿ ಯಾವುದೇ ಪರಿಣಾಮ ಬೀರುವುದಿಲ್ಲ. ಇನ್ನು ಅವರಲ್ಲಿ ಡಿಎಂಕೆ ನಾಯಕರ ಸಿನಿಮಾದ ಬಗ್ಗೆ ಕೇಳಿದಾಗ ಅದು ರಾಜ್ಯ ಸಚಿವರ ''ವಿಫಲ ನಟ'' ಎಂದು ಹೇಳಿದರು. ಉದಯನಿಧಿ ಅವರು ರಾಜಕೀಯದಲ್ಲಿದ್ದವರು ತಮ್ಮ ಅಜ್ಜ (ದಿವಂಗತ ಎಂ ಕರುಣಾನಿಧಿ) ಮತ್ತು ತಂದೆ (ಎಂಕೆ ಸ್ಟಾಲಿನ್) ಹೆಸರಿನಲ್ಲಿ ಅವರು ಏನು ಸಮಾಜ ಸೇವೆ ಮಾಡಿದ್ದಾರೆ ಎಂದು ಪ್ರಶ್ನೆ ಮಾಡಿದ್ದಾರೆ.

ಸ್ಟಾಲಿನ್ ಅವರ ಜನ್ಮದಿನದಂದು ಚೈನೀಸ್ ಭಾಷೆಯಲ್ಲಿ ಬಿಜೆಪಿ ಶುಭಾಶಯ ಕೋರಿದ್ದಾರೆ ಈ ಬಗ್ಗೆ ನಿಮ್ಮ ಅಭಿಪ್ರಾಯ ಏನು ಎಂದು ಮಾಧ್ಯಮಗಳು ಪ್ರಶ್ನಿಸಿದೆ. ಇದಕ್ಕೆ ಅಣ್ಣಾಮಲೈ ಅವರು ಇದರಲ್ಲಿ ಯಾವುದೇ ಆಕ್ಷೇಪಾರ್ಹವಾಗಿಲ್ಲ ಎಂದು ಹೇಳಿದರು. ಇಂತಹ ಅನೇಕ ಪೋಸ್ಟ್ ಗಳನ್ನು ಅವರು ಕೂಡ ಹಾಕಿದ್ದಾರೆ ಎಂದು ಅಣ್ಣಾಮಲೈ ಹೇಳಿದ್ದಾರೆ.

## ಅಭ್ಯರ್ಥಿಗಳ ಆಯ್ಕೆ

**ಬಿಜೆಪಿ ಮಿತ್ರ ಪಕ್ಷಗಳಿಗೆ ಎಷ್ಟೆಷ್ಟು ಸ್ಥಾನ:** ಈ ಬಾರಿ ಚುನಾವಣೆಗೆ ಕನಿಷ್ಠ 60-70 ಹಾಲಿ ಸಂಸದರಿಗೆ ಕೊಕ್ ಕೊಡಲಾಗುತ್ತೆ. ಮೂರು ಬಾರಿ ಗೆದ್ದಿರುವ ಹಲವು ಹಳೆಯ ಸಂಸದರ ಜಾಗದಲ್ಲಿ ಹೊಸ ಮುಖಗಳಿಗೆ ಅವಕಾಶ ನೀಡಲಾಗುತ್ತಿದೆ. ಆದಾಗ್ಯೂ, ಹೆಚ್ಚಿನ ಒಬಿಸಿ ಸಂಸದರ ಟಿಕೆಟ್‌ಗಳನ್ನು ಕಡಿತಗೊಳಿಸದಿರಲು ಸಭೆಯಲ್ಲಿ ನಿರ್ಧರಿಸಲಾಗಿದೆ. 2019ರಲ್ಲಿ 303 ಬಿಜೆಪಿ ಸಂಸದರಲ್ಲಿ ಒಟ್ಟು 85 ಒಬಿಸಿ ಸಂಸದರು ಗೆದ್ದು ಬಂದಿದ್ದರು. ಯುಪಿಯಲ್ಲಿ ಬಿಜೆಪಿ 6 ಸ್ಥಾನಗಳನ್ನಷ್ಟೇ ತನ್ನ ಮಿತ್ರಪಕ್ಷಗಳಿಗೆ ಬಿಟ್ಟುಕೊಡಲಿದೆ. ಇದರಲ್ಲಿ ತಲಾ 2 ಸ್ಥಾನಗಳು ಅಪ್ನಾ ದಳ ಮತ್ತು ಆರ್‌ಎಲ್‌ಡಿಗೆ ಮತ್ತು ತಲಾ ಒಂದು ಸ್ಥಾನ ನಿಶಾದ್ ಪಕ್ಷ ಮತ್ತು ಓಂಪ್ರಕಾಶ್ ರಾಜ್‌ಭರ್ ಪಕ್ಷಕ್ಕೆ ಮೀಸಲಾಗಿರಲಿವೆ. ಅತ್ತ ಅಸ್ಸಾಂನಲ್ಲಿ ಬಿಜೆಪಿ ತನ್ನ ಮಿತ್ರಪಕ್ಷಗಳಿಗೆ 3 ಸ್ಥಾನಗಳನ್ನು, ಎಜಿಪಿಗೆ 2 ಸ್ಥಾನ ಮತ್ತು ಯುಪಿಪಿಎಲ್‌ಗೆ ಒಂದು ಸ್ಥಾನ ಬಿಟ್ಟುಕೊಡಲು ನಿರ್ಧರಿಸಿದೆ.

ಹಾಗೇ ಹರಿಯಾಣದ ಎಲ್ಲ 10 ಸ್ಥಾನಗಳಲ್ಲೂ ಬಿಜೆಪಿ ಏಕಾಂಗಿ ಹೋರಾಟ ನಡೆಸಲಿದೆ. ಜಾರ್ಖಂಡ್‌ನಲ್ಲಿ ಬಿಜೆಪಿ ತನ್ನ ಮಿತ್ರಪಕ್ಷ ಎಜೆಎಸ್‌ಯುಗೆ ಒಂದು ಸ್ಥಾನ ಕೊಡಲಿದೆ. ಇನ್ನು, ಬಿಹಾರದಲ್ಲಿ ಜೆಡಿಯು, ಚಿರಾಗ್ ಪಾಸ್ವಾನ್‌ರ ಎಲ್‌ಜೆಪಿ, ಪಶುಪತಿ ಪರಸ್ ನೇತೃತ್ವದ ಎಲ್‌ಜೆಪಿ, ಉಪೇಂದ್ರ ಕುಶ್ವಾಹಾ ಮತ್ತು ಜಿತನ್ ರಾಮ್ ಮಾಂಝಿ ಜತೆಗೆ ಸೀಟು ಹಂಚಿಕೆ ಅಂತಿಮ ಹಂತದಲ್ಲಿದೆ. ಅತ್ತ ಮಹಾರಾಷ್ಟ್ರದಲ್ಲಿ ಶಿಂಧೆ ಬಣದ ಶಿವಸೇನೆ ಮತ್ತು ಎನ್‌ಸಿಪಿ ಜತೆ ಸೀಟು ಹಂಚಿಕೆ ಇನ್ನೂ ಮುಗಿದಿಲ್ಲ.

ಬಿಜೆಪಿಯ ಈ ನಾಗಾಲೋಟಕ್ಕೆ ಇಂಡಿಯಾ ಮೈತ್ರಿಕೂಟ ಎಷ್ಟರಮಟ್ಟಿಗೆ ತಡೆವೊಡ್ಡುತ್ತೆ ಅನ್ನೋದು ಮಿಲಿಯನ್ ಡಾಲರ್ ಪ್ರಶ್ನೆಯಾಗಿದೆ.

## ತೊಡೆದು ಹಾಕಿದ ಭಾರತ

ಯುಆರ್ ಪಿ ವಿಧಾನದಲ್ಲಿ ಸಮೀಕ್ಷೆ ಮಾಡಿದ್ದ 1977-78ನೇ ಸಾಲಿನ ಬಡತನ ವರದಿ ಮತ್ತು 2011-12ನೇ ಸಾಲಿನ ವರದಿಯನ್ನು ತುಲನೆ ಮಾಡಿಕೊಂಡು 2022-23ನೇ ಸಾಲಿನ ವರದಿಯನ್ನು ಎಂಎಂಆರ್ ಪಿ ವಿಧಾನದಲ್ಲಿ ಸಿದ್ಧಪಡಿಸಲಾಗಿದೆ. ಕಡಿಮೆ ಮತ್ತು ಮಧ್ಯಮ ಆದಾಯದ ದೇಶಗಳಿಗೆ ವಿಶ್ವಬ್ಯಾಂಕ್ ನಿಗದಿಪಡಿಸಿದ ಮಾನದಂಡದ ಪ್ರಕಾರ ಬಡತನದ ಅಂದಾಜು ಮಾಡಲಾಗಿದೆ ಎಂದು ವರದಿ ತಿಳಿಸಿದೆ.

**ದತ್ತಾಂಶಗಳು ಹೇಳುವುದೇನು?:** ರಿಯಲ್ ಪರ್ ಕ್ಯಾಪಿಟಾ ಕನ್ಸಂಪ್ಷನ್ ಗ್ರೋತ್ (ನೈಜ ಸಮಯದ ತಲಾ ಆದಾಯ ವೆಚ್ಚದ ಬೆಳವಣಿಗೆ) 2011-12ರಿಂದ ವಾರ್ಷಿಕ ಶೇ 2.9ರ ಬೆಳವಣಿಗೆ ದಾಖಲಿಸಿದೆ. ಗ್ರಾಮೀಣ ಪ್ರದೇಶದಲ್ಲಿ ಇದು ಶೇ 3.1ರ ಬೆಳವಣಿಗೆ ದಾಖಲಿಸಿದೆ. ಒಟ್ಟಾರೆಯಾಗಿ ನಗರ ಪ್ರದೇಶಕ್ಕಿಂತ ಗ್ರಾಮೀಣ ಪ್ರದೇಶದ ವೆಚ್ಚದ ಸಾಮರ್ಥ್ಯದ ಪ್ರಮಾಣ ಹೆಚ್ಚಾಗಿರುವುದು ಅಂಕಿಅಂಶಗಳಿಂದ ತಿಳಿದುಬಂದಿದೆ.

ವಿಶ್ವಬ್ಯಾಂಕ್ ಅಂದಾಜಿಸಿರುವ ಅಂಕಿಅಂಶಗಳ ಮಾನದಂಡದ ಪ್ರಕಾರ, ಸಮೀಕ್ಷೆಯಲ್ಲಿ ಭಾರತದ ಬಡವರ ಸಂಖ್ಯೆಯು ಗಮನಾರ್ಹವಾಗಿ ಕಡಿಮೆಯಾಗಿದೆ ಎಂಬುದನ್ನು ದತ್ತಾಂಶಗಳು ತೋರಿಸಿವೆ.

## ಆಗ್ರಹ

ಕರ್ನಾಟಕ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಮಾತನಾಡಿ, ಈ ಪ್ರಕರಣದ ತನಿಖೆಯನ್ನು ಎನ್‌ಐಎಗೆ ವಹಿಸಬೇಕು. ಸಿಎಂ ಹೊಣೆ ಹೊತ್ತು ಕೂಡಲೇ ರಾಜೀನಾಮೆ ನೀಡಬೇಕು. ಕರ್ನಾಟಕ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಅವರು ರಾಮೇಶ್ವರಂ ಕೆಫೆ ಸ್ಫೋಟ ಘಟನೆಯ ಬಗ್ಗೆ ಸಿದ್ದರಾಮಯ್ಯ ಸರ್ಕಾರವನ್ನು ಟೀಕಿಸಿದರು ಮತ್ತು ಆಡಳಿತಾರೂಢ ಕಾಂಗ್ರೆಸ್ ಪಕ್ಷವು ತನ್ನ ಮನಸ್ಥಿತಿಯನ್ನು ಬದಲಾಯಿಸಬೇಕಾಗಿದೆ ಮತ್ತು ಕಾನೂನು ಮತ್ತು ಸುವ್ಯವಸ್ಥೆಯನ್ನು ಅಸ್ಥಿರಗೊಳಿಸಲು ಪ್ರಯತ್ನಿಸುತ್ತಿರುವ ಇಂತಹ ನೀಚ ಶಕ್ತಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಆರ್ ಅಶೋಕ್, ಮನಸ್ಥಿತಿ ಬದಲಾಗಬೇಕು. ಅವರು (ಕರ್ನಾಟಕ ಸರ್ಕಾರ) 'ಬ್ರಾಂಡ್ ಬೆಂಗಳೂರು' ಎನ್ನುತ್ತಿದ್ದಾರೆ, ಆದರೆ ಅದು 'ಬಾಂಬ್ ಬೆಂಗಳೂರು' ಆಗಲಿದೆ. ಸರಕಾರ ಗಂಭೀರ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡುತ್ತೇನೆ. ಇಲ್ಲಿ ಕಾನೂನು ಸುವ್ಯವಸ್ಥೆ ಇಲ್ಲ. ಈ ಸರ್ಕಾರ ಸರಿಯಾಗಿ ನಡೆಯುತ್ತಿಲ್ಲ. ಹಿಂದಿನ ಸರ್ಕಾರದ ಅವಧಿಯಲ್ಲೂ ಹಲವು ಸ್ಫೋಟಗಳು ನಡೆದಿವೆ ಎಂದು ಕರ್ನಾಟಕ ಸಿಎಂ ಸಿದ್ದರಾಮಯ್ಯ ಸಮರ್ಥಿಸಿಕೊಂಡರು.

ಈ ಘಟನೆ ನಡೆದಿರುವುದು ನಮ್ಮ ಸರ್ಕಾರದಲ್ಲಿ. ಇದರಲ್ಲಿ ಭಾಗಿಯಾದವರ ವಿರುದ್ಧ ಶಿಸ್ತು ಹಾಗೂ ಕಠಿಣ ಕ್ರಮ ಕೈಗೊಳ್ಳಲಾಗುವುದು. ಈ ವಿಚಾರದಲ್ಲಿ ರಾಜಕೀಯ ಮಾಡಬಾರದು.

## ಕೈವಾಡ

ಹೀಗಾಗಿ ಐಸಿಸ್ ಸಂಘಟನೆ ಈ ಕೃತ್ಯದ ಹಿಂದೆ ಇರುವ ಶಂಕೆ ವ್ಯಕ್ತವಾಗುತ್ತಿದೆ.

**ಪ್ಲಾಸ್ಟಿಕ್ ಕವರ್ ಬಳಕೆ:** ಬಾಂಬ್ ಬ್ಲಾಸ್ಟ್ ಪ್ರಕರಣದಲ್ಲಿ ಟಿಫನ್ ಬಾಕ್ಸ್ ಬದಲಿಗೆ ಪ್ಲಾಸ್ಟಿಕ್ ಕವರ್ ಬಳಕೆ ಮಾಡಲಾಗಿದೆ. ಗಟ್ಟಿಯಾದ ಪ್ಲಾಸ್ಟಿಕ್ ಕವರ್ ನಲ್ಲಿ ಶಂಕಿತ ಎರಡು ಕಂಟೇನರ್ ಮಾಡಿದ್ದ. ಈ ಎರಡೂ ಕಂಟೇನರ್ ಬ್ಯಾಗ್ ನ ಒಳಗೆಯೇ ಇತ್ತು. ಒಂದಾದ ಬಳಿಕ ಮತ್ತೊಂದು ಸ್ಫೋಟವಾಗುವಂತೆ ಟೈಂ ಸೆಟ್ಟಿಂಗ್ ಮಾಡಿದ್ದಾನೆ ಎಂಬ ಮಾಹಿತಿ ಲಭ್ಯವಾಗಿದೆ.

ಕಪ್ಪು ಕಲರ್ ಬ್ಯಾಗ್ ಅಲ್ಲಿಯೇ ಎರಡು ಕಂಟೇನರ್ ಇಟ್ಟಿದ್ದ. ಇದು ಸ್ಫೋಟಗೊಂಡು ಸಂಪೂರ್ಣವಾಗಿ ಮೇಲ್ಛಾವಣಿಯ ಕಡೆಗೆ ಚದುರಿತ್ತು. ಮೇಲ್ಛಾವಣಿಗೆ ನಟ್, ಬೋಲ್ಟ್ ಗಳೆಲ್ಲ ಹೊಡೆದಿದ್ದವು. ಸುತ್ತಮುತ್ತ ಚದುರದೇ ಇದ್ದ ಕಾರಣ ಭಾರೀ ಅಪಾಯ ತಪ್ಪಿದೆ. ಟಿಫನ್ ಬಾಕ್ಸ್ ನ ಯಾವುದೇ ಮಾದರಿಯೂ ಪತ್ತೆಯಾಗಿಲ್ಲ. ಶಂಕಿತ ಹೊರನಡೆದ ಒಂದು ಗಂಟೆ ಅವಧಿಯಲ್ಲೇ ಬ್ಲಾಸ್ಟ್ ಆಗಿದೆ.

## ಹೆಚ್‌ಎಎಲ್ ಠಾಣೆಯಲ್ಲಿ ಎಫ್‌ಐಆರ್ ದಾಖಲು



**ಬೆಂಗಳೂರು:** ರಾಮೇಶ್ವರಂ ಕೆಫೆಯಲ್ಲಿ ನಡೆದ ಭೀಕರ ಸ್ಫೋಟಕ್ಕೆ ಸಂಬಂಧಿಸಿದಂತೆ ಘಟನಾ ಸ್ಥಳಕ್ಕೆ ಎನ್‌ಎಸ್‌ಜಿ ಕಮಾಂಡೋಸ್ ಆಗಮಿಸಿ ಪರಿಶೀಲನೆ ನಡೆಸಿದ್ದಾರೆ. ಬಾಂಬ್ ಬ್ಲಾಸ್ಟ್ ಪ್ರಕರಣದ ಕುರಿತು ಹೆಚ್‌ಎಎಲ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ.

ಐಪಿಸಿ ಸೆಕ್ಷನ್ 307 (ಕೊಲೆ ಯತ್ನ), 471 (ಸುಳ್ಳು ಸ್ಪಷ್ಟನೆಯ ದಸ್ತಾವೇಜನ್ನು ನೈಜವಾದುದೆಂದು ಬಳಸುವುದು) ಮತ್ತು ಯುಎಪಿಯ 16 (ಭಯೋತ್ಪಾದಕ ಕೃತ್ಯ), 18 (ಪಿತೂರಿ) ಹಾಗೂ 38 (ಭಯೋತ್ಪಾದಕ ಸಂಘಟನೆಗೆ ಸಂಬಂಧಿಸಿದ ಅಪರಾಧ) ಮತ್ತು ಎಕ್ಸ್‌ಪ್ಲೋಸಿವ್ ಸಬ್ಸ್ಟೆನ್ಸ್ ಆಕ್ಟ್ 3 (ಜೀವಕ್ಕೆ ಅಥವಾ ಆಸ್ತಿಗೆ ಅಪಾಯನ್ನುಂಟುಮಾಡುವ ಸ್ಫೋಟ) ಮತ್ತು 4 (ಜೀವಕ್ಕೆ ಹಾನಿಯುಂಟುಮಾಡುವ ಉದ್ದೇಶದಿಂದ ಸ್ಫೋಟಕ ತಯಾರಿಕೆ) ಸೆಕ್ಷನ್‌ಗಳ ಅಡಿಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಶುಕ್ರವಾರ ಮಧ್ಯಾಹ್ನ ಕೆಫೆಯಲ್ಲಿ ಸ್ಫೋಟಗೊಂಡಿದ್ದು, ಘಟನೆಯಲ್ಲಿ ಓರ್ವ ಮಹಿಳೆ ತೀವ್ರವಾಗಿ ಗಾಯಗೊಂಡಿದ್ದಾರೆ. ಘಟನೆಯಲ್ಲಿ ಒಟ್ಟು 9 ಮಂದಿ ಗಾಯಗೊಂಡಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಓರ್ವ ಶಂಕಿತನನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಕೆಫೆಯ ಒಳಗಡೆ ಸ್ಫೋಟಕವನ್ನು ಇರಿಸಿ ಬಳಿಕ ಬೈಕ್‌ನಲ್ಲಿ ತೆರಳಿದ್ದ ಶಂಕಿತನ ಬೈಕ್ ಮಾಹಿತಿಯನ್ನು ಆಧರಿಸಿ ಆತನನ್ನು ವಶಕ್ಕೆ ಪಡೆದು ಅಜ್ಞಾತ ಸ್ಥಳದಲ್ಲಿ ವಿಚಾರಣೆ ನಡೆಸಲಾಗುತ್ತಿದೆ.

ಕಪ್ಪು ಬ್ಯಾಗ್ ಬೆನ್ನಿಗೆ ಹಾಕಿಕೊಂಡು ಬಂದಿದ್ದ ಬಾಂಬರ್ ರಾಮೇಶ್ವರಂ ಕೆಫೆಯಲ್ಲಿ ತಿಂಡಿ ತಿಂದು ಕೈತೊಳೆದ ಬಳಿಕ ಬ್ಯಾಗ್ ಅನ್ನು ಅಲ್ಲೇ ಬಿಟ್ಟು ಹೋಗಿದ್ದಾನೆ. ಸಿಸಿಟಿವಿಯಲ್ಲಿ ಆತನ ಪ್ರತಿಯೊಂದು ಚಲನವಲನಗಳು ಸೆರೆಯಾಗಿದ್ದು, ಸಿಸಿಟಿವಿ ದೃಶ್ಯಾವಳಿಯನ್ನು ಆಧರಿಸಿ ಪೊಲೀಸರು ತನಿಖೆಯನ್ನು ತೀವ್ರಗೊಳಿಸಿದ್ದಾರೆ.

# ಚಾಮುಂಡೇಶ್ವರಿ ತಾಯಿಗೆ, ಉತ್ತನಹಳ್ಳಿ ತ್ರಿಪುರ ಸುಂದರಿ ದೇವಿಗೆ ಮರೀಗೌಡ ಪೂಜೆ

**ಮೈಸೂರು :** ಮೈಸೂರು ಜಿಲ್ಲಾ ಪಂಚಾಯಿತ್ತಿ ಮಾಜಿ ಅಧ್ಯಕ್ಷ ಕೆ.ಮರೀಗೌಡ ಅವರು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರಾಗಿ ಮೂಡಾ ಆಯುಕ್ತ ದಿನೇಶ್‌ಕುಮಾರ್ ರವರಿಂದ ಅಧಿಕಾರ ಸ್ವೀಕರಿಸಿದರು.

ಕೆ. ಮರೀಗೌಡ ಅವರು ಚಾಮುಂಡಿ ಬೆಟ್ಟದಲ್ಲಿ ಚಾಮುಂಡೇಶ್ವರಿ ತಾಯಿಗೆ ಹಾಗೂ ಉತ್ತನಹಳ್ಳಿ ತ್ರಿಪುರ ಸುಂದರಿ ದೇವಿಗೆ ಪತ್ನಿ ಜಯಶ್ರೀಯೊಂದಿಗೆ ಪೂಜೆ ಸಲ್ಲಿಸಿ ನಂತರ ಮೂಡಾದಲ್ಲಿ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡು ಮಾತನಾಡಿದ ಅವರು ನನ್ನ ನೆಚ್ಚಿನ ನಾಯಕರಾದ ಮುಖ್ಯಮಂತ್ರಿ ಸಿದ್ದರಾಮಯ್ಯರವರ ಆಶೀರ್ವಾದದಿಂದ ಉಪಮುಖ್ಯಮಂತ್ರಿ ಪಿ.ಕೆ. ಶಿವಕುಮಾರ್ ಮಂತ್ರಿಗಳಾದ ಡಾ. ಹೆಚ್.ಸಿ ಮಹಾದೇವಪ್ಪ, ಕೆ.ವೆಂಕಟೇಶ್ ಹಾಗೂ ಶಾಸಕರ ಸಹಕಾರದಿಂದ ನಾನು ಅಧ್ಯಕ್ಷನಾಗಿ ಅಧಿಕಾರ ವಹಿಸಿಕೊಂಡಿದ್ದೇನೆ. ಕಳೆದ 40 ವರ್ಷದ ರಾಜಕಾರಣದಲ್ಲಿ ಗ್ರಾ.ಪಂ ನಿಂದ ಬಂದು ತಾ.ಪಂ ಅಧ್ಯಕ್ಷನಾಗಿ, ಜಿ.ಪಂ ಅಧ್ಯಕ್ಷನಾಗಿ, ಉಪಾಧ್ಯಕ್ಷನಾಗಿ, ಕೆಪಿಸಿಸಿ ಸದಸ್ಯನಾಗಿ ಸಿದ್ದರಾಮಯ್ಯನವರು ಹಾಗೂ ಪಕ್ಷ ಹೇಳಿದಂತೆ ಇದುವರೆಗೆ ಕೆಲಸ ಮಾಡಿಕೊಂಡು ಬಂದಿದ್ದೇನೆ. ಮೈಸೂರು ನಗರದ ಅಭಿವೃದ್ಧಿ ಸಿದ್ದರಾಮಯ್ಯರವರ ಕೊಡುಗೆ ಅಪಾರವಾಗಿದೆ.



ಅದರಂತೆ ನಾನು ಸಹ ಮೂಡಾ ಅಧ್ಯಕ್ಷನಾಗಿ ಬಡವರಿಗೆ ಬೀದಿ, ಬದಿ ವ್ಯಾಪಾರಿಗಳಿಗೆ, ಕೂಲಿಕಾರ್ಮಿಕರಿಗೆ, ಆಟೋಚಾಲಕರಿಗೆ, ಡ್ರೈವರ್‌ಗಳಿಗೆ ಕೈಗೆಟುಕುವ ದರದಲ್ಲಿ ಸಾಮಾಜಿಕ ನ್ಯಾಯದಡಿಯಲ್ಲಿ ಸುಮಾರು 25 ಸಾವಿರ ಮನೆಗಳನ್ನು ನಿರ್ಮಾಣ ಮಾಡುವ ಗುರಿ ಇಟ್ಟುಕೊಂಡಿದ್ದೇನೆ.

ಈಗಾಗಲೇ ಮೂಡಾದಿಂದ ಜಾಗವನ್ನು ಗುರುತಿಸಿದ್ದಾರೆ. ಬಂಡಿಪಾಳ್ಯ ಎಪಿಎಂಸಿ ಬಳಿ ಹಾಗೂ ಮಣಿಪಾಲ್ ಆಸ್ಪತ್ರೆ ಬಳಿ ಮೇಲುಸೇತುವೆ ನಿರ್ಮಾಣ ಹಾಗೂ ಖಾಸಗಿ ಬಡಾವಣೆ ಹಾಗೂ ಮೂಡಾ ಬಡಾವಣೆಗಳಿಗೆ ಮೂಲಭೂತ ಸೌಲಭ್ಯ ಒದಗಿಸುವುದರೊಂದಿಗೆ, ಮೈಸೂರು ನಗರದ ಸಮಗ್ರ ಅಭಿವೃದ್ಧಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯರವರೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯರಾದ ಡಾ. ತಿಮ್ಮಯ್ಯ, ಜಿಲ್ಲಾಕಾಂಗ್ರೆಸ್ ಅಧ್ಯಕ್ಷ ಡಾ. ಬಿ.ಜೆ. ವಿಜಯ್ ಕುಮಾರ್, ಅಹಿಂದಾ ಮುಖಂಡ ಮಡೆ ಶಿವರಾಂ, ಮಂಜುಳಾ ಮಾನಸ, ಜಿ.ಪಂ ಮಾಜಿ ಸದಸ್ಯರಾದ ಪಟೇಲ್ ಜವರೇಗೌಡ, ಮಾರ್ಚಳ್ಳಿ ಶಿವರಾಮ್, ಜವರಪ್ಪ, ಕೆ.ಬಿ. ಸ್ವಾಮಿ, ಕೂರ್ಗಳ್ಳಿ ಮಹದೇವ್, ಹೇಮಾವತಿ ಶಿವಕುಮಾರ್, ನಾರಾಯಣ, ಕಾಂಗ್ರೆಸ್ ಸೇವಾದಳ ಮಾಜಿ ಅಧ್ಯಕ್ಷ ಜಯರಾಮೇಗೌಡ, ನಗರ ಪಾಲಿಕೆ ಮಾಜಿ ಸದಸ್ಯ ಶಿವಣ್ಣ, ಬಿ.ಎಂ ನಟರಾಜ್, ಗೋಪಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ.ಗುರುಸ್ವಾಮಿ, ಎಪಿಎಂಸಿ ಮಾಜಿ ಅಧ್ಯಕ್ಷರಾದ ಹೊಸಹುಂಡಿ ರಘು, ಬಂಡಿಪಾಳ್ಯ ಬಸವರಾಜು, ಮೈದನಹಳ್ಳಿ ಶಿವಣ್ಣ, ತಾ.ಪಂ ಮಾಜಿ ಸದಸ್ಯರಾದ ಮಾರ್ಬಳ್ಳಿ ಕುಮಾರ್, ಎಂ.ಟಿ ರವಿಕುಮಾರ್, ಸಿ.ಎಂ ಸಿದ್ದರಾಮೇಗೌಡ, ಜಿ.ಕೆ ಬಸವಣ್ಣ, ಗ್ರಾ.ಪಂ ಅಧ್ಯಕ್ಷೆ ನಾಗಮ್ಮ, ಗ್ರಾ.ಪಂ ಮಾಜಿ ಅಧ್ಯಕ್ಷರಾದ ಭರತ್ ಕಾಳಯ್ಯ, ಉದ್ಬೂರು ಕೃಷ್ಣ, ಶಿವಣ್ಣ, ನಾಗವಾಲ ನರೇಂದ್ರ, ಮಾಕಿ ಮಹದೇವ್, ದೊಡ್ಡಹುಂಡಿ ಸೋಮಣ್ಣ, ಹಿನಕಲ್ ಹೊನ್ನಪ್ಪ, ಲಕ್ಷ್ಮಣ್ ಪ್ರಭು, ಕಾಮನಕೊಪ್ಪಲು ಕರೀಗೌಡ, ಮುಖಂಡರಾದ ಹರೀಶ್ ಮೊಗಣ್ಣ, ಜೆ.ಜೆ ಆನಂದ, ಶಾಂತಯ್ಯ, ರವಿ, ಕೃಷ್ಣಕುಮಾರ್ ಸಾಗರ್, ಹಿನಕಲ್ ಪ್ರಕಾಶ್, ಸಣ್ಣಸ್ವಾಮಿ, ನಾಡನಗಹಳ್ಳಿ ರವಿ, ಶಿಂಶಾ ದಿನೇಶ್, ದನಗಳ್ಳಿ ಬಸವರಾಜ್, ಅಕ್ಕಿ ಶಿವಣ್ಣ, ಓಲೆ ಸಿದ್ದು ಹಾಜರಿದ್ದರು.

# ಜಿಪಂ ಸಿಇಓ ರಿಂದ ತಾಲ್ಲೂಕು ಇಓಗಳ ಪ್ರಗತಿ ಪರಿಶೀಲನೆ

**ಮೈಸೂರು:** ಜಿಲ್ಲಾ ಪಂಚಾಯತಿ ಕಚೇರಿಯ ಮಿನಿ ಸಭಾಂಗಣದಲ್ಲಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಎಲ್ಲಾ ತಾಲ್ಲೂಕು ಕಾರ್ಯ ನಿರ್ವಾಹಕ ಅಧಿಕಾರಿಗಳ ಮಾಸಿಕ ಪ್ರಗತಿ ಪರಿಶೀಲನಾ ಸಭೆ ನಡೆಯಿತು. ಸಭೆಯಲ್ಲಿ ಮಾತನಾಡಿದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಕೆ.ಎಂ.ಗಾಯಿತ್ರಿ ಅವರು ಮ-ನರೇಗಾ ಯೋಜನೆಯಡಿಯಲ್ಲಿ ಕಡಿಮೆ ಮಾನವ ದಿನಗಳನ್ನು ಸಾಧಿಸಿರುವ ಗ್ರಾಮ ಪಂಚಾಯಿತಿಗಳಿಗೆ ಹೆಚ್ಚು ಮಾನವ ದಿನಗಳನ್ನು ಸಾಧಿಸಲು ಸೂಚನೆ ನೀಡಿದರು. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಕಾಮಗಾರಿಗಳ ಪ್ರಗತಿ, ಶಿಶುಪಾಲನಾ ಕೇಂದ್ರ ಪ್ರಗತಿ, ಎನ್‌ಎಮ್‌ಎಮ್‌ಎಸ್ ಪ್ರಗತಿ, ಸಾಮಾಜಿಕ ಪರಿಶೋಧನೆ ಪ್ರಗತಿ, ಸ್ವ ಸಹಾಯ ಸಂಘಗಳ ವರ್ಕ್ ಶೆಡ್, ಹಾಗೂ ಸ್ವಚ್ಛ ಭಾರತ್ ಅಭಿಯಾನ, ವೈಯಕ್ತಿಕ ಶೌಚಾಲಯ, ಸಮುದಾಯ ಶೌಚಾಲಯ ಕುರಿತು ಚರ್ಚಿಸಿದರು. ಜಲಜೀವನ್ ಮಿಷನ್ ಕುಡಿಯುವ ನೀರು ಯೋಜನೆಯಡಿ ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ವಹಣೆ, ತುರ್ತು ಕುಡಿಯುವ ನೀರಿನ ಘಟಕಗಳ ನಿರ್ವಹಣೆ ಸೇರಿದಂತೆ ಇತರೆ ವಿಷಯಗಳ ಕುರಿತು ಪ್ರಗತಿ ಪರಿಶೀಲಿಸಲಾಯಿತು. ಪಿಆರ್ ಇಡಿ ಪ್ರಗತಿ, ತೆರಿಗೆ ಪರಿಷ್ಕರಣೆ, ತೆರಿಗೆ ವಸೂಲಾತಿ, ಡಿಜಿಟಲ್ ಗ್ರಂಥಾಲಯ, ಸಕಾಲ ಯೋಜನೆ, ಸರ್ಕಾರಿ ಸಿಬ್ಬಂಧಿ, ಗ್ರಾ.ಪಂ ಇ-ಹಾಜರಾತಿ ಪ್ರಗತಿ, ಆಸ್ತಿ ಸಮೀಕ್ಷೆ ಹಾಗೂ 14 ಮತ್ತು 15ನೇ ಹಣಕಾಸಿನ ಪ್ರಗತಿ ಕುರಿತು ಚರ್ಚಿಸಲಾಯಿತು. ಸಭೆಯಲ್ಲಿ ಉಪಕಾರ್ಯದರ್ಶಿ(ಆಡಳಿತ) ಸವಿತಾ, ಮುಖ್ಯ ಲೆಕ್ಕಾಧಿಕಾರಿ ಸಿದ್ದಗಂಗಮ್ಮ, ಎಲ್ಲಾ ತಾಲ್ಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳು, ಅನುಷ್ಠಾನ ಇಲಾಖೆಯ ಅಧಿಕಾರಿಗಳು, ಸಹಾಯಕ ನಿರ್ದೇಶಕರು (ಗ್ರಾ.ಉ) ಸೇರಿದಂತೆ ಇತರೆ ಅಧಿಕಾರಿಗಳು ಹಾಜರಿದ್ದರು.



# ವಿದ್ಯಾರ್ಥಿಗಳಿಗೆ ಆಲ್ ದಿ ಬೆಸ್ಟ್ ಹೇಳಿದ ಕೃಷ್ಣರಾಜ ಯುವ ಬಳಗ

**ಮೈಸೂರು:** ಇಂದಿನಿಂದ ದ್ವಿತೀಯ ಪಿಯುಸಿ ಪರೀಕ್ಷೆ ಪ್ರಾರಂಭವಾಗಿದ್ದು, ನಂಜುಮಳಿಗೆಯಲ್ಲಿರುವ ಗೋಪಾಲಸ್ವಾಮಿ ಶಿಕ್ಷಣ ಸಂಸ್ಥೆಯ ಕಾಲೇಜಿನ ಸೆಂಟರ್ ನಲ್ಲಿ ಪರೀಕ್ಷೆ ಎದುರಿಸುತ್ತಿರುವ ವಿದ್ಯಾರ್ಥಿಗಳಿಗೆ ಗುಲಾಬಿ ಹೂ ನೀಡಿ ಕೃಷ್ಣರಾಜ ಯುವ ಬಳಗದ ಸದಸ್ಯರು ಶುಭ ಕೋರಿದರು.

ವಿದ್ಯಾರ್ಥಿಗಳಿಗೆ ಗುಡ್ ಲಕ್ ಹೇಳಿ, ಮೈಸೂರಿಗೆ ಉನ್ನತ ಫಲಿತಾಂಶ ಬರಲೆಂದು ಹಾರೈಸಿದರು. ನಿಮ್ಮೊಂದಿಗೆ ನಾವಿದ್ದೇವೆಂದು ವಿದ್ಯಾರ್ಥಿಗಳಿಗೆ ಅಭಯ ನೀಡಿದರು. ನಂತರ ಮಾತನಾಡಿದ ಕೆಆರ್ ಬ್ಯಾಂಕ್ ಉಪಾಧ್ಯಕ್ಷ ಬಸವರಾಜ್ ಬಸಪ್ಪ ಮಾತನಾಡಿ, ಪರೀಕ್ಷೆ ಸಂಭ್ರಮದಿಂದ ಬರೆಯಿರಿ. ವಿದ್ಯಾರ್ಥಿಗಳು ಪರೀಕ್ಷೆಯನ್ನು ಸಂಭ್ರಮದಿಂದ ಬರೆದರೆ ನಿರೀಕ್ಷೆಗಿಂತಲೂ ಹೆಚ್ಚಿನ ಅಂಕಗಳನ್ನು ಪಡೆಯಬಹುದು. ವಿದ್ಯಾರ್ಥಿಗಳು ಪರೀಕ್ಷೆ ಶತ್ರು ಎಂದು ಪರಿಗಣಿಸಿದರೆ ವರ್ಷವಿಡೀ ಕಲಿತ ಪಾಠಗಳೆಲ್ಲ ಮರೆತು ಹೋಗುತ್ತವೆ. ಯಾವುದೇ ಕಾರಣಕ್ಕೂ ಪರೀಕ್ಷೆ ಭೂತ ಎಂದುಕೊಳ್ಳಬೇಡಿ. ಹಬ್ಬದ ರೀತಿಯಲ್ಲಿ ಸಂಭ್ರಮಿಸಿ ವಿದ್ಯಾರ್ಥಿಗಳಿಗೆ ಆತ್ಮಸ್ಥೈರ್ಯ ಪೋಷಕರು ತುಂಬಬೇಕು ಎಂದರು.

ಸಂಕುಚಿತ ಮನೋಭಾವದಿಂದ ಸುಮ್ಮನೆ ಕುಳಿತರೆ ಆತ್ಮವಂಚನೆ ಮಾಡಿಕೊಂಡಂತಾಗುತ್ತದೆ ದೊಡ್ಡ ದೊಡ್ಡ ಸಂಶೋಧನೆಗಳು ಹುಟ್ಟಿಕೊಂಡಿದ್ದೇ ಪ್ರಶ್ನೆಗಳಿಂದ ಎನ್ನುವುದನ್ನು ವಿದ್ಯಾರ್ಥಿಗಳು ಅರಿತುಕೊಳ್ಳಬೇಕು. ಪರೀಕ್ಷೆ ಒಂದು ಸಂಭ್ರಮ ಎನ್ನುವುದರ ಜೊತೆಗೆ ಆಂತರಿಕವಾಗಿ ನೀವು ಮೊದಲು ಪ್ರಶ್ನೆ ಮಾಡಿಕೊಳ್ಳಿ. ಪರೀಕ್ಷೆ ಎಂಬ ಭಯ, ಒತ್ತಡದಿಂದ ಮೊದಲು ಹೊರ ಬನ್ನಿ. ಇಲ್ಲವಾದಲ್ಲಿ ನೀವು ಕಲಿತ ಎಲ್ಲ ಪಾಠಗಳು ಮರೆತು ಬಿಡಬಹುದು ಎಂತಹ ಕಠಿಣ ಸಂದರ್ಭದಲ್ಲಿಯೂ ನೀವು ಕೀಳರಿಮೆ ಇಟ್ಟುಕೊಳ್ಳಬಾರದು. ಪೋಷಕರು ಕೂಡ ಮಕ್ಕಳ ಮೇಲೆ ನಂಬಿಕೆ ಇಡಬೇಕು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಕೆಪಿಸಿಸಿ ಸದಸ್ಯರಾದ ನಜರ್ಬಾದ್ ನಟರಾಜ್, ಗೌರಿಶಂಕರ್ ನಗರದ ಶಿವಕುಮಾರ್, ತೀರ್ಥ ಕುಮಾರ, ಮಂಜುನಾಥ್, ದಯಾನಂದ್, ನವೀನ್ ಕೆಂಪಿ, ನಟರಾಜ್, ಕಂಸಾಳೆ ರವಿ ಹಾಗೂ ಇನ್ನಿತರರು ಹಾಜರಿದ್ದರು.



## ಜಿಲ್ಲಾಧಿಕಾರಿ ಡಾ.ಕೆ.ವಿ ರಾಜೇಂದ್ರ ಎಚ್ಚರಿಕೆ

# ನೀತಿ ಸಂಹಿತೆ ಉಲ್ಲಂಘಿಸಿದರೆ ಕ್ರಮ

**ಮೈಸೂರು:** ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಭಾಗಿಯಾಗುವ ಪ್ರತಿಯೊಬ್ಬ ಅಧಿಕಾರಿ ಹಾಗೂ ಸಿಬ್ಬಂದಿಗಳು ಮಾದರಿ ನೀತಿ ಸಂಹಿತೆ ಪಾಲನೆಯ ಬಗ್ಗೆ ನಿಗಾ ವಹಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಕೆ.ವಿ ರಾಜೇಂದ್ರ ಅವರು ತಿಳಿಸಿದರು.

ಅವರು ಇಂದು ಜಿಲ್ಲಾ ಪಂಚಾಯತ್ ದೇವರಾಜು ಅರಸ್ ಸಭಾಂಗಣದಲ್ಲಿ ಲೋಕಸಭಾ ಸಾರ್ವತ್ರಿಕ ಚುನಾವಣೆ -2024 ರ ಚುನಾವಣಾ ಕರ್ತವ್ಯದಲ್ಲಿ ನಿರತರಾಗುವ ವಿವಿಧ ಹಂತದ ಅಧಿಕಾರಿಗಳಿಗೆ ಕರ್ತವ್ಯಗಳು ಹಾಗೂ ಜವಾಬ್ದಾರಿಗಳ ಕುರಿತು ಮಾತನಾಡಿದರು.

ಎಫ್‌ಎಸ್, ಎಸ್‌ಎಸ್‌ಟಿ, ವಿಎಸ್‌ಟಿ, ವಿವಿಟಿ ತಂಡ ಹಾಗೂ ಪೊಲೀಸ್ ಸೆಕ್ಟರ್‌ಗಳಿಗೆ ನಿಯೋಜನೆಗೊಳ್ಳುವ ಅಧಿಕಾರಿಗಳು ಚುನಾವಣಾ ವಿಷಯಗಳನ್ನು ಗಂಭೀರವಾಗಿ ಪರಿಗಣಿಸಬೇಕು. ಚುನಾವಣಾ ಆಯೋಗದ ನಿರ್ದೇಶನಗಳನ್ನು ತಿಳಿದುಕೊಂಡು ಪಾಲಿಸಬೇಕು ಎಂದರು.

ಬರುವ ಲೋಕಸಭೆ ಚುನಾವಣೆಯನ್ನು ಮುಕ್ತ ಹಾಗೂ ನ್ಯಾಯಸಮ್ಮತವಾಗಿ ನಡೆಯಲು ನಿಗಧಿಪಡಿಸಿರುವ ವೆಚ್ಚದಂತೆ ಅಭ್ಯರ್ಥಿಗಳು ಹಣ ವೆಚ್ಚ ಮಾಡುತ್ತಿರುವ ಬಗ್ಗೆ ತೀವ್ರ ನಿಗಾ ಇಡಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಚುನಾವಣೆ ಕರ್ತವ್ಯವನ್ನು ನಿಷ್ಪಕ್ಷ ಹಾಗೂ ನ್ಯಾಯ ಸಮ್ಮತವಾಗಿ ನಡೆಸುವ ಹಿನ್ನೆಲೆಯಲ್ಲಿ ನಿಯೋಜನೆಗೊಂಡ ಎಲ್ಲ ತಂಡಗಳೂ ಹೆಚ್ಚು ಗಮನ ವಹಿಸಬೇಕು. ಚುನಾವಣಾ ಆಯೋಗದ ಮಾರ್ಗಸೂಚಿಯಂತೆ ದಾಖಲಿಸಿ ಇಟ್ಟುಕೊಂಡು ಕಾಲಕಾಲಕ್ಕೆ ಈ ಕುರಿತು ವರದಿಯನ್ನು ಕಳುಹಿಸಬೇಕು ಎಂದರು.

ಚುನಾವಣಾ ಮಾದರಿ ನೀತಿ ಸಂಹಿತೆ ಜಾರಿಯಾದರೆ, ಎಂಸಿಸಿ ತಂಡಗಳು ಉಲ್ಲಂಘನೆ ಆಗದಂತೆ ಎಚ್ಚರ ವಹಿಸಬೇಕು. ಸಹಾಯಕ ವೆಚ್ಚ ವೀಕ್ಷಕರು, ಫ್ಲೈಯಿಂಗ್ ಸ್ಕ್ವಾಡ್‌ಗಳು, ವೀಡಿಯೋ ಸರ್ವೆಲನ್ಸ್, ವೀಡಿಯೋ ವಿವ್ಹಿಂಗ್ ತಂಡಗಳು, ಸ್ಟ್ಯಾಟಿಕ್ ಸರ್ವೆಲನ್ಸ್ ತಂಡಗಳು ಇನ್ನೂ ಜಾಗೃತರಾಗಿ ಕಾರ್ಯನಿರ್ವಹಿಬೇಕು. ಒಟ್ಟಾರೆ ಮುಕ್ತ, ನ್ಯಾಯಸಮ್ಮತ ಚುನಾವಣೆ ನಡೆಸಲು ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸಬೇಕು ಎಂದರು. ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಯನ್ವಯ ತಮ್ಮ ತಮ್ಮ ಜವಾಬ್ದಾರಿಗಳನ್ನು ಪ್ರಾಮಾಣಿಕವಾಗಿ ನಿರ್ವಹಿಸಬೇಕಿದೆ. ಸಹಾಯಕ ಚುನಾವಣಾಧಿಕಾರಿಗಳು ತಮ್ಮ ವ್ಯಾಪ್ತಿಗೆ ಬರುವ ತಂಡಗಳ ಅಧಿಕಾರಿಗಳಿಗೆ ಸೂಕ್ತ ತರಬೇತಿ ಮತ್ತು ಮಾರ್ಗದರ್ಶನ ನೀಡಬೇಕು. ಈ ಹಿನ್ನೆಲೆಯಲ್ಲಿ ಅಭ್ಯರ್ಥಿ ಹಾಗೂ ರಾಜಕೀಯ ಪಕ್ಷಗಳಿಗೆ ನಿಗದಿಯಾಗುವ ಚುನಾವಣಾ ವೆಚ್ಚದ ಕುರಿತು ಸರಿಯಾದ ಲೆಕ್ಕಪತ್ರಗಳು ಇರಬೇಕು. ಈ ಸಂಬಂಧ ಯಾವುದೇ ಗೊಂದಲಕ್ಕೆ ಒಳಗಾಗದೇ ಎಲ್ಲ ದಾಖಲೆಗಳನ್ನು ಸರಿಯಾಗಿ ನಿರ್ವಹಿಸಬೇಕು ಎಂದು ಹೇಳಿದರು.



ಚುನಾವಣೆ ಘೋಷಣೆಯಾದ ತಕ್ಷಣ ಜಿಲ್ಲೆಯಲ್ಲಿ ರಾಜಕೀಯ ಪಕ್ಷಗಳ ಬ್ಯಾನರ್, ಫ್ಲೆಕ್ಸ್ ಹಾಗೂ ವಿವಿಧ ಇಲಾಖೆಗಳ ವೆಬ್‌ಸೈಟ್‌ಗಳನ್ನು ಪಟ್ಟಿ ಮಾಡಿಕೊಂಡು ವೆಬ್ ಸೈಟ್ ಗಳಲ್ಲಿರುವ ಸಚಿವರು ಹಾಗೂ ಜನಪ್ರತಿನಿಧಿಗಳ ಭಾವಚಿತ್ರ ತೆರವುಗೊಳಿಸುವಂತೆ ಸಂಬಂಧ ಪಟ್ಟ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲೆಯಲ್ಲಿ ಗುರುತಿಸಲಾಗಿರುವ ಮತಗಟ್ಟೆಗಳಲ್ಲಿ ಕುಡಿಯುವ ನೀರು, ಶೌಚಾಲಯ, ವಿಕಲಚೇತನರು, ಅಶಕ್ತರು ಪ್ರವೇಶಿಸಲು ಅನುಕೂಲವಾಗುವಂತೆ ರ್‍ಯಾಂಪ್ ವ್ಯವಸ್ಥೆ ಮಾಡಬೇಕು. ಈ ಹಿಂದೆ ಯಾವ ಮತಗಟ್ಟೆ ಕಟ್ಟಡಗಳಲ್ಲಿ ಸೌಲಭ್ಯ ಇದೆ. ಯಾವ ಕಟ್ಟಡಗಳಲ್ಲಿ ಇಲ್ಲ ಎಂಬ ಬಗ್ಗೆ ಪಟ್ಟಿ ಮಾಡಿ ಮೂಲಸೌಕರ್ಯ ಕಲ್ಪಿಸಬೇಕು. ಆ ಪ್ರಕಾರ ಶೌಚಾಲಯ, ರ?ಯಾಂಪ್ ನಿರ್ಮಾಣ ಮಾಡಲಾಗಿದೆಯೇ ಎಂಬ ಬಗ್ಗೆ ಪರಿಶೀಲಿಸಬೇಕು.

ಚೆಕ್‌ಪೋಸ್ಟ್ ಸ್ಥಾಪನೆ ಇನ್ನಿತರ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲು ಈಗಲೇ ಕಾರ್ಯಪ್ರವೃತ್ತವಾಗಬೇಕು ಹಾಗೂ ಅಗತ್ಯ ಸಿದ್ಧತೆಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು ಎಂದು ಅವರು ತಿಳಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಎಂ ಗಾಯಿತ್ರಿ ಅವರು ಮಾತನಾಡಿ ಚುನಾವಣೆ ಕೆಲಸವನ್ನು ಹಗುರವಾಗಿ ಪರಿಗಣಿಸಬಾರದು. ಇಡೀ ತಂಡವಾಗಿ ಹೊಣೆಗಾರಿಕೆಯಿಂದ ಕೆಲಸ ನಿರ್ವಹಿಸಿದರೆ ಯಶಸ್ವಿಯಾಗಲು ಸಾಧ್ಯವಾಗಲಿದೆ. ಹಾಗಾಗಿ ಪ್ರತಿಯೊಬ್ಬರೂ ನಿಯೋಜಿಸಿದ ಕರ್ತವ್ಯವನ್ನು ಯಾವುದೇ ಲೋಪ ಇಲ್ಲದೆ ನಿರ್ವಹಿಸಬೇಕು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ದಿನೇಶ್, ಪ್ರಾಚ್ಯವಸ್ತು ಸಂಗ್ರಹಾಲಯ ಇಲಾಖೆಯ ಆಯುಕ್ತರಾದ ದೇವರಾಜು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಹೊಲಕ್ಕೆ ಹಸು-ಎತ್ತುಗಳು ನುಗ್ಗಿತೆಂದು ಮಚ್ಚಿನಿಂದ ಹಲ್ಲೆ ನಡೆಸಿದ ಟಿಬೇಟಿಯನ್ ರೈತ

**ಹನೂರು:** ಹೊಲಕ್ಕೆ ಹಸು-ಎತ್ತುಗಳು ನುಗ್ಗಿತೆಂದು ಮಚ್ಚಿನಿಂದ ಮೂಕ ಪ್ರಾಣಿಗಳ ಮೇಲೆ ಹಲ್ಲೆ ನಡೆಸಿ ವಿಕೃತಿ ಮೆರೆದ ಅಮಾನವೀಯ ಘಟನೆ ಹನೂರು ತಾಲೂಕಿನಲ್ಲಿ ನಡೆದಿದೆ. ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಒಡೆಯರಪಾಳ್ಯ ಟಿಬೇಟಿಯನ್ ಕಾಲೋನಿಯಲ್ಲಿ ಕೆಲ ದುಷ್ಕರ್ಮಿಗಳು ಹೊಲಕ್ಕೆ ನುಗ್ಗಿದವೆಂದು ಎಂಟಕ್ಕೂ ಹೆಚ್ಚು ಎತ್ತು ಹಾಗೂ ಹಸುಗಳ ಮೇಲೆ ಮಚ್ಚಿನಿಂದ ಹಲ್ಲೆ ನಡೆಸಿದ್ದಾರೆ. ಮಾಂಸ ಕಿತ್ತು ಬಂದಿದ್ದು ರಕ್ತ ಸುರಿಯುತ್ತಿರುವ ಸ್ಥಿತಿಯಲ್ಲಿ ದನಗಳು ಕಂಡು ಬಂದಿದೆ. ಗುಂಡಿಮಾಳ ರೈತರ ದನಕರುಗಳು ಟಿಬೇಟಿಯನ್ ರೈತನ ಜೋಳದ ಹೊಲಕ್ಕೆ ಮೇಯಲು ಹೋಗಿದ್ದವು. ಈ ವೇಳೆ ಟಿಬೇಟಿಯನ್ ರೈತ ಕಿಟುಪ್ ದನಕರುಗಳ ಮೇಲೆ ಮನಸೋ ಇಚ್ಛೆ ಮಚ್ಚಿನಿಂದ ಹಲ್ಲೆ ನಡೆಸಿದ್ದಾರೆ. ಈ ದಾಳಿಯಲ್ಲಿ ಕೊಂಬು, ಬಾಲ, ಕಾಲು ಹೀಗೆ ದನಕರಗಳ ಅಂಗಾಂಗಗಳಿಗೆ ಮಚ್ಚೇಟು ಬಿದ್ದಿದೆ. ಜೀವನೋಪಾಯಕ್ಕಾಗಿ ಈ ದನಕರುಗಳನ್ನೇ ಅವಲಂಬಿಸಿರುವ ಗುಂಡಿಮಾಳ ರೈತರು ಕಣ್ಣೀರು ಹಾಕುತ್ತಿದ್ದಾರೆ.



# ಕೆಂಪನಪುರ ಸಮೀಪ ಕುರಿಗಳಮೇಲೆ ಚಿರತೆ ದಾಳಿ

ಚಾಮರಾಜನಗರ: ಚಿರತೆ ದಾಳಿಗೆ ಕುರಿಗಳು ಬಲಿಯಾದ ಘಟನೆ ಚಾಮರಾಜನಗರ ತಾಲ್ಲೂಕಿನ ಕೆಂಪನಪುರ ಸಮೀಪ ಕುದರೆ ಹಳ್ಳದಲ್ಲಿ ಶುಕ್ರವಾರ ನಡೆದಿದೆ. ರೈತಯೊಬ್ಬರು ಕುರಿಗಳನ್ನು ಮೇಯಿಸಲು ಗ್ರಾಮದ ಹೊರ ವಲಯಕ್ಕೆ ಬೆಳಗ್ಗೆ ಕುರಿಗಳನ್ನು ಕರೆದೊದ್ದಿದ್ದರು. ಕುರಿಗಳ ಮೇಲೆ ಹಟಾತ್



ದಾಳಿ 2 ಕುರಿಗಳನ್ನು ಕೊಂದು ಹಾಕಿರುವುದು ಕಂಡುಬಂದಿದೆ ಅಲ್ಲೇ ಇದ್ದ ರೈತ ಗಾಬರಿಯಿಂದ ಗ್ರಾಮಸ್ಥರಿ ತಿಳಿಸಿದ್ದಾರೆ. ಕುರಿಗಳು ಕೆಂಪನಪುರ ಗ್ರಾಮದ ಮರಿನಂಜಯ್ಯ ಹಾಗೂ ಸುಶಿಯಪ್ಪ ಅವರಿಗೇ ಸೇರಿದ್ದು ಎಂದು ತಿಳಿದುಬಂದಿದೆ.

ಇತ್ತೀಚಿನ ದಿನಗಳಲ್ಲಿ ಕಾಡು ಪ್ರಾಣಿಗಳಿಂದ ಕಾಡಂಚಿನ ಗ್ರಾಮದವರಿಗೆ ತೊಂದರೆಯಾಗುತ್ತಿದೆ. ಕಷ್ಟಪಟ್ಟು ಹಣ ನೀಡಿ ಕುರಿಗಳನ್ನು ತಂದಿದ್ದೇವೆ ಮೇಯಿಸಲು ಹೋದಗಾ ಕಾಡು ಪ್ರಾಣಿಗಳು ಏಕಾಏಕಿ ದಾಳಿ ನಡೆಸಿ ಕುರಿಗಳನ್ನು ಕೊಂದರೆ ಏನುಮಾಡೊದು. ನಮಗೆ ಅರಣ್ಯ ಇಲಾಖೆಯಿಂದ ಪರಿಹಾರ ನೀಡಬೇಕೆಂದು ಗ್ರಾಮ ಪಂಚಾಯಿತಿ ಸದಸ್ಯರಾದ ಮಹದೇವಸ್ವಾಮಿ ತಿಳಿಸಿದ್ದಾರೆ. ಗ್ರಾಮ ಸರ್ಕಾರಿ ನಿವೃತ್ತ ನೌಕರರ ಚೆನ್ನಬಸವಯ್ಯ ಅವರು ಅರಣ್ಯ ಇಲಾಖೆಯವರು ತಕ್ಷಣ ಬೋನ್ ಇಟ್ಟು ಚಿರತೆಯನ್ನು ಸೆರೆಯಿಯಲು ಆಗ್ರಹಿಸಿದ್ದಾರೆ.

# ಕೆ.ಶಿವರಾಂ ಅವರಿಗೆ ಶ್ರದ್ಧಾಂಜಲಿ

**ಚಾಮರಾಜನಗರ:** ನಿಧನರಾದ ನಿವೃತ್ತ ಐಎಎಸ್ ಅಧಿಕಾರಿ, ನಟ ಕೆ.ಶಿವರಾಂ ಅವರಿಗೆ ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಸಭೆಯಲ್ಲಿ ಕೆ.ಶಿವರಾಂ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದ್ದ ಪಕ್ಷದ ಎಸ್‌ಸಿ ಮೋರ್ಚಾದ ಜಿಲ್ಲಾಧ್ಯಕ್ಷ ಮೂಡಹಳ್ಳಿ ಮೂರ್ತಿ ಮಾತನಾಡಿ, ನಿವೃತ್ತ ಐಎಎಸ್ ಅಧಿಕಾರಿ, ಬಿಜೆಪಿ ಮುಖಂಡರಾದ ಕೆ.ಶಿವರಾಂ ಅವರು ಚಾಮರಾಜನಗರ ಮೀಸಲು ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಲು ತಂಭಾ ಆಶೆಯನ್ನಿಟ್ಟುಕೊಂಡಿದ್ದರು. ಕಳೆದ ಚುನಾವಣೆಯಲ್ಲಿ ಹಲವಾರು ಹಳ್ಳಿಗಳಿಗೆ ಭೇಟಿಕೊಟ್ಟು ಜನಮನ್ನಣೆ ಗಳಿಸಿಕೊಂಡಿದ್ದರು ಎಂದರು. ಕನ್ನಡದಲ್ಲಿ ಮೊಟ್ಟಮೊದಲ ಬಾರಿಗೆ ಐಎಎಸ್ ಪಾಸ್ ಮಾಡಿ ಸುಮಾರು 35 ವರ್ಷಗಳ ಕಾಲ ರಾಜ್ಯದಲ್ಲಿ ಐಎಎಸ್ ಅಧಿಕಾರಿಯಾಗಿ ಸೇವೆ ಸಲ್ಲಿಸಿ ಹಿಂದುಳಿದ ವರ್ಗಗಳು, ಎಸ್‌ಸಿ, ಎಸ್‌ಟಿ ಜನರ ಕಲ್ಯಾಣಕ್ಕಾಗಿ ಅನೇಕ ಯೋಜನೆಗಳನ್ನು ಜಾರಿ ಮಾಡಿದ್ದರು. ಅವರ ಆತ್ಮಕ್ಕೆ ಶಾಂತಿ ನೆಲೆಸಲಿ, ಅವರ ಕುಟುಂಬಕ್ಕೆ ದು:ಖ ಭರಿಸುವ ಶಕ್ತಿ ನೀಡಲಿ ಎಂದು ಆಶಿಸಿದರು. ಸಭೆಯಲ್ಲಿ ಬಿಜೆಪಿ ಎಸ್‌ಟಿ ಮೋರ್ಚಾದ ಜಿಲ್ಲಾಧ್ಯಕ್ಷ ಚಂದ್ರಶೇಖರ್, ಶಿವುರಾಮಸಮುದ್ರ, ಚನ್ನಬಸಪ್ಪ, ಪರಮೇಶ್, ನಗರಸಭಾ ಮಾಜಿ ಸದಸ್ಯ ಬಸವರಾಜು, ಪಿ.ರಂಗಸ್ವಾಮಿ, ವೇಣುಗೋಪಾಲ್, ಗೋವಿಂದರಾಜು, ರಾಜೇಶ್, ಶಿವಮಲ್ಲು ಇತರರು ಭಾಗವಹಿಸಿದ್ದರು.




# ಚಾ.ನಗರದಲ್ಲೂ ರೈತರ ಬಂಧನ

**ಚಾಮರಾಜನಗರ:** ಪಂಜಾಬ್, ಹರಿಯಾಣ ರಾಜ್ಯ ಗಳಲ್ಲಿ ರೈತರ ಮೇಲೆ ಕೇಂದ್ರ ಸರ್ಕಾರ ಪೊಲೀಸ್ ದೌರ್ಜನ್ಯ ನಡೆಸುತ್ತಿರುವುದನ್ನು ಖಂಡಿಸಿ ರಾಜ್ಯ ರೈತ ಸಂಘಟನೆಗಳ ಒಕ್ಕೂಟ, ರಾಜ್ಯ ಕಬ್ಬು ಬೆಳೆಗಾರರ ಸಂಘದ ಕಾರ್ಯಕರ್ತರು ಜಿಲ್ಲಾ ಕಾರ್ಯದರ್ಶಿ ಎಚ್ ಮೂಕಹಳ್ಳಿ ಮಹದೇವಸ್ವಾಮಿ ಅವರ ನೇತೃತ್ವದಲ್ಲಿ ನಗರದ ರೈಲ್ವೆ ನಿಲ್ದಾಣದಲ್ಲಿ ಪ್ರತಿಭಟನೆ ನಡೆಸಿ, ರೈಲು ತಡೆ ಪ್ರತಿಭಟನೆಗೆ ಯತ್ನಿಸಿದ ರೈತರನ್ನು ಪೊಲಿಸರು ಬಂಧಿಸಿ ಬಿಡುಗಡೆ ಮಾಡಿದರು.

ನಗರದ ರೈಲ್ವೆ ನಿಲ್ದಾಣದಲ್ಲಿ ಜಮಾಯಿಸಿದ್ದ ಪ್ರತಿಭಟನಾ ಕಾರರು ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ರೈಲು ತಡೆದು ಪ್ರತಿಭಟನೆ ನಡೆಸಲು ಮುಂದಾದಾಗ ಸ್ಥಳದಲ್ಲಿದ್ದ ಪೊಲೀಸರು ಪ್ರತಿಭಟನಾಕಾರರ ಮನವೊಲಿಸಲು ಯತ್ನಿಸಿದರೂ ಪ್ರಯೋಜನವಾಗಲಿಲ್ಲ. ಬಳಿಕ ಪೊಲೀಸರು ಪ್ರತಿಭಟನಾನಿರತ ರೈತರನ್ನು ಬಂಧಿಸಿ ಬಿಡುಗಡೆ ಮಾಡಿದರು. ಪ್ರತಿಭಟನೆ ನೇತೃತ್ವ ವಹಿಸಿದ್ದ ಜಿಲ್ಲಾ ಕಾರ್ಯದರ್ಶಿ ಎಚ್.ಮೂಕಹಳ್ಳಿ ಮಹದೇವಸ್ವಾಮಿ ಮಾತನಾಡಿ, ಕೇಂದ್ರ ಸರ್ಕಾರಕ್ಕೆ ಬಂಡವಾಳಶಾಹಿಗಳ ಸಾಲ ಮನ್ನಾ ಮಾಡಲು ಹೆಚ್ಚಿನ ಕಾಳಜಿ ಇರುತ್ತದೆ. ಆದರೆ, ರೈತರ ಸಾಲ ಮನ್ನಾ ವಿಚಾರ, ಸ್ವಾಮಿನಾಥನ್ ವರದಿ, ಬೆಂಬಲ



ಬೆಲೆ, ರೈತರಿಗೆ ಪಿಂಚಣಿ ನೀಡುವ ಯೋಜನೆ, ಬೆಳೆ ವಿಮೆ ಪದ್ದತಿ, ಪ್ರಾಣ ತ್ಯಾಗ ಮಾಡಿದ 750 ರೈತ ಕುಟುಂಬಕ್ಕೆ ಸರ್ಕಾರದ ನೆರವು ಸೇರಿದಂತೆ ಇತರೆ ಕ್ರಮಗಳ ಕುರಿತು ಕೇಂದ್ರ ಸರ್ಕಾರ ವಿಫಲವಾಗಿದೆ ಎಂದರು. ರೈತರು ನ್ಯಾಯ ಕೇಳಿದರೆ ಗೋಲಿಬಾರ್ ಮಾಡುತ್ತಾರೆ. ಇದು ದೇಶದ ರೈತನಿಗೆ ಮಾಡುವ ಅಪಮಾನವಾಗಿದೆ. ಪೊಲೀಸರ ದಾಳಿಯ ಮೂಲಕ ರೈತರನ್ನು ಸಾಯಿಸುತ್ತಿದ್ದಾರೆ. ಕೂಡಲೇ ಕೇಂದ್ರ ಸರ್ಕಾರ ಎಚ್ಚೆತ್ತುಕೊಳ್ಳಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ರೈತರು ದೇಶದ ಬೀದಿ ಬೀದಿಗಳಲ್ಲಿ ಧರಣಿ ನಡೆಸುತ್ತಾರೆ. ಅಲ್ಲದೇ ಮುಂದಿನ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಬೇಕಾಗುತ್ತದೆ ಎಂದು ದೂರಿದರು. ಪ್ರತಿಭಟನೆಯಲ್ಲಿ ಸಂಘದ ಜಿಲ್ಲಾ ಉಪಾಧ್ಯಕ್ಷ ಶಿವಮೂರ್ತಿ, ಕಾರ್ಯಾಧ್ಯಕ್ಷ ಉಡಿಗಾಲ ರೇವಣ್ಣ, ತಾಲೂಕು ಅಧ್ಯಕ್ಷ ಸತೀಶ್, ಕಾರ್ಯದರ್ಶಿ ಸುಂದ್ರಪ್ಪ, ಉಪಾಧ್ಯಕ್ಷ ಶಿವಸ್ವಾಮಿ, ಯಳಂದೂರು ತಾಲೂಕು ಅಧ್ಯಕ್ಷವ ಷಡಕ್ಷರಿ, ಕೊಳ್ಳೇಗಾಲ ಅಧ್ಯಕ್ಷ ಇಂದುವಾಡಿ ಮಾದೇಶ್, ಉಡಿಗಾಲ ರಘು, ನಾಗಣ್ಣ, ಮಹೇಶ್, ವೀರನಪುರ ನವೀನ್, ಗುರುಪ್ರಸಾದ್ ಇತರರು ಭಾಗವಹಿಸಿದ್ದರು.

# ಕಾಡಾನೆ ದಾಳಿಗೆ ವೃದ್ಧ ಸಾವು

**ಕೊಳ್ಳೇಗಾಲ:** ಕಾಡಾನೆಯೊಂದು ನಡೆಸಿದ ದಾಳಿಯಲ್ಲಿ ವೃದ್ಧನೊಬ್ಬ ಮೃತಪಟ್ಟ ಘಟನೆ ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶದ ವ್ಯಾಪ್ತಿಯಲ್ಲಿ ಗುರುವಾರ ನಡೆದಿದೆ. ತಾಲ್ಲೂಕಿನ ಕರಳಕಟ್ಟೆ ಗ್ರಾಮದ ನಿವಾಸಿ ಸಣ್ಣಮಾದ (72) ಆನೆ ದಾಳಿಯಿಂದ ಮೃತಪಟ್ಟವರಾಗಿದ್ದಾರೆ. ಬೆಳಿಗ್ಗೆ 8 ಗಂಟೆ ಸಮಯದಲ್ಲಿ ಕಳಕಟ್ಟೆ ಗ್ರಾಮಕ್ಕೆ ಕಾಡಾನೆಯೊಂದು ಬಂದಿದೆ. ಸಣ್ಣಮಾದ ಅವರು ಪತ್ನಿ ಜಡೆ ಮಾದಮ್ಮ, ನಾದಿನಿ ರಂಗಮ್ಮ ಜೊತೆ ಮೇಗಲದೊಡ್ಡಿಗೆ ತೆರಳುತ್ತಿದ್ದ ಸಂದರ್ಭದಲ್ಲಿ ಆನೆ ದಾರಿ ಮಧ್ಯೆ ನಿಂತಿತ್ತು. ಆನೆಯಿಂದ ತಪ್ಪಿಸಿಕೊಳ್ಳಲು ಸಣ್ಣಮಾದ ಸೇರಿದಂತೆ ಮೂವರೂ ಓಡಿದರು.ಸಣ್ಣ ಮಾದ ಅವರನ್ನು ಅಟ್ಟಿಸಿದ ಆನೆ ದಾಳಿ ಮಾಡಿದೆ. ಪರಿಣಾಮ ವೃದ್ಧ ಸಾವನ್ನಪ್ಪಿದ್ದಾರೆ. ಉಳಿದವರು ಕೂದಲೆಳೆ ಅಂತರದಿಂದ ಪಾರಾಗಿದ್ದಾರೆ. ಸ್ಥಳಕ್ಕೆ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ನಂದಕುಮಾರ್, ಡಿಆರ್ ಎಫ್‌ಓ ಮಹೇಶ್ ಸೇರಿದಂತೆ ಅರಣ್ಯ ಇಲಾಖೆ ಸಿಬ್ಬಂದಿ ಹಾಗೂ ಗ್ರಾಮಾಂತರ ಪೊಲೀಸ್ ಠಾಣೆ ಪಿಎಸ್‌ಐ ಗಣೇಶ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಎಸಿಎಫ್ ನಂದಕುಮಾರ್ ಭೇಟಿ ನೀಡಿದ ವೇಳೆ ಗ್ರಾಮಸ್ಥರು, ಸಣ್ಣ ಮಾದ ಅವರ ಕುಟುಂಬಕ್ಕೆ ಪರಿಹಾರ ನೀಡುವಂತೆ ಆಗ್ರಹಿಸಿದರು. ಇದಕ್ಕೆ ?ಇಲಾಖೆಯಿಂದ ಸಿಗುವ ಪರಿಹಾರ ಮತ್ತು ಸೌಲಭ್ಯಗಳನ್ನು ಸಣ್ಣಮಾದ ಅವರ ಕುಟುಂಬಕ್ಕೆ ಸಿಗುವಂತೆ ಮಾಡಲಾಗುವುದು? ಎಂದು ಭರವಸೆ ನೀಡಿದರು.



# ರೈಲು ತಡೆ ನಡೆಸಲು ಯತ್ನ: ರೈತರ ಬಂಧನ-ಬಿಡುಗಡೆ

**ಮೈಸೂರು:** ರಾಜ್ಯ ಕಬ್ಬು ಬಳೆಗಾರರ ಸಂಘ ಹಾಗು ಜಿಲ್ಲಾ ಕಬ್ಬು ಬೆಳೆಗಾರರ ಸಂಘದ ರೈತರು ಮೈಸೂರಿನ ರೈಲು ನಿಲ್ದಾಣದಲ್ಲಿ ರೈಲು ತಡೆ ನಡೆಸಲು ಯತ್ನಿಸಿದ ರೈತರನ್ನು ಪೊಲೀಸರು ತಡೆದಿದ್ದಾರೆ.

ಈ ವೇಳೆ ರೈತರು ಮತ್ತು ಪೊಲೀಸರ ನಡುವೆ ನೂಕಾಟ ತಳ್ಳಾಟ ನಡೆದು ಮಾತಿನ ಚಕಮಕಿ ನಡೆಯಿತು.

ನಂತರ ಪೊಲೀಸರು ಬಂಧನ ಮಾಡಲು ಯತ್ನಿಸಿದಾಗ ರೈತರು ರೈಲ್ವೆ ಗೇಟ್ ಮುಂಭಾಗ ಕುಳಿತು ಕೇಂದ್ರ ಸರ್ಕಾರದ ರೈತ ವಿರೋಧಿ ನೀತಿಯನ್ನು ಖಂಡಿಸಲು ನಾವು ರೈಲು ತಡೆ ನಡೆಸಲು ಬಂದಿದ್ದೇವೆ. ನಾವು ಗೂಂಡಾಗಳಲ್ಲ ದೇಶ ದ್ರೋಹಿಗಳಲ್ಲ ನಾವೇನು ಲೂಟಿ ಮಾಡಲು ಬಂದಿಲ್ಲ ನಮ್ಮನ್ನು ಏಕೆ ತಡೆದಿದ್ದೀರಿ. ನಮ್ಮ ರೈಲು ನಿಲ್ದಾಣಕ್ಕೆ ನಾವು ಹೋಗಲು ನಮಗೆ ಹಕ್ಕಿಲ್ಲವೇ ಎಂದು ರೈಲ್ವೆ ಪೊಲೀಸರ ವಿರುದ್ಧ ಪ್ರತಿಭಟನೆಕಾರರು ಆಕ್ರೋಶ ವ್ಯಕ್ತಪಡಿಸಿದರು.

ರೈಲು ನಿಲ್ದಾಣಕ್ಕೆ ನುಗ್ಗಲು ಯತ್ನಿಸಿದಾಗ ಪೊಲೀಸರು ರೈತರನ್ನು ಬಂಧಿಸಿ ಸಿ ಎ ಆರ್ ಮೈದಾನಕ್ಕೆ ಕರೆದೊಯದು ನಂತರ ಸಂಜೆ ವೇಳೆಗೆ ಬಿಡುಗಡೆ ಮಾಡಿದರು.

ರೈತರು ನ್ಯಾಯ ಕೇಳಿದರೆ ಗೋಲಿಬಾರ್ ಮಾಡುತ್ತಾರೆ, ಇದು ದೇಶದ ರೈತರಿಗೆ ಮಾಡುವ ಅಪಮಾನವಾಗಿದೆ. ರೈತರು ಗುಲಾಮರು ಅಲ್ಲ ಬಿಕ್ಷುಕರು ಅಲ್ಲ ನಿಮಗೆ ಅಧಿಕಾರ ಶಾಶ್ವತ ಅಲ್ಲ ಕೂಡಲೇ ಸಮಸ್ಯೆ ಬಗೆಹರಿಸಿ ಅನ್ನದಾತನ ಋಣ ತೀರಿಸಿ ಎಂದು




ಚಳವಳಿ ಮೂಲಕ ಆಕ್ರೋಶ ವ್ಯಕ್ತಪಡಿಸಿದರು.

ದೆಹಲಿಯಲ್ಲಿ ನಡೆಯುತ್ತಿರುವ ಸಂಯುಕ್ತ ಕಿಸಾನ್ ಮೋರ್ಚಾ (ರಾಜಕೀಯತರ) ಸಂಘಟನೆಯ ಹೋರಾಟದ ರೈತರು ಯಾರು ದೇಶ ದ್ರೋಹಿಗಳಲ್ಲ. ನಾವು ರೈತ ಮುಖಂಡರಾದ ಕುರುಬೂರು ಶಾಂತಕುಮಾರ್ ನೇತೃತ್ವದಲ್ಲಿ ದೆಹಲಿಗೆ ಹೋಗುವಾಗ ಮಾರ್ಗ ಮಧ್ಯದಲ್ಲಿ ಮಧ್ಯ ಪ್ರದೇಶದ ಭೂಪಾಲ್ ನಲ್ಲಿ ರೈಲು ತಡೆದು ಪೊಲೀಸರ ಮೂಲಕ ಬಂಧಿಸಿ ದೆಹಲಿಗೆ ಹೋಗಲು ಬಿಡದೆ ಮೂರು ದಿನದ ನಂತರ ಕರ್ನಾಟಕಕ್ಕೆ ವಾಪಸ್ ಕಳಿಸುತ್ತಾರೆ, ದೆಹಲಿಯಲ್ಲಿ ಹೋರಾಟ ಮಾಡುವ ಪಂಜಾಬ್, ಹರಿಯಾಣ ರೈತರನ್ನು ದೇಶ ವಿರೋಧಿಗಳು ಎನ್ನುತ್ತಾರೆ. ಇದರ ಅರ್ಥ ಏನು ? ರೈತರು ಸಮಸ್ಯೆ ಬಗೆಹರಿಯುವ ತನಕ ಚಳುವಳಿಯಿಂದ ಹಿಂದೆ ಸರಿಯುವುದಿಲ್ಲ ಎಂದು ಎಚ್ಚರಿಕೆ ನೀಡುತ್ತಿದ್ದೇವೆ ಎಂದರು. ಪಂಜಾಬ್, ಹರಿಯಾಣ, ಉತ್ತರ ಪ್ರದೇಶ, ರಾಜಸ್ಥಾನ, ರೈತರ ಹೋರಾಟಕ್ಕೆ ನಾವು ಸದಾ ಜೊತೆಯಾಗಿರುತ್ತೇವೆ ಎಂದು ಎಚ್ಚರಿಕೆ ನೀಡಿದರು.

ಕೃಷಿ ಉತ್ಪನ್ನಗಳ ಬೆಂಬಲ ಬೆಲೆ ಖಾತರಿ ಕಾನೂನು ಜಾರಿ ಮಾಡದಿದ್ದರೆ ಚುನಾವಣೆಯಲ್ಲಿ ಕೇಂದ್ರ ಸರ್ಕಾರದ ಮರಣ ಶಾಸನವನ್ನು ರೈತರು ಬರೆಯುತ್ತೇವೆ. ಕೇಂದ್ರ ಸರ್ಕಾರಕ್ಕೆ ಬಂಡವಾಳ ಶಾಹಿಗಳ ಸಾಲ ಮನ್ನಾ ಮಾಡಲು ಹೆಚ್ಚಿನ ಕಾಳಜಿ ಇರುತ್ತದೆ, ಆದರೆ ರೈತರ ಸಾಲ ಮನ್ನಾ ವಿಚಾರ ಡಾ. ಎಂ ಎಸ್ ಸ್ವಾಮಿನಾಥನ್ ವರದಿ ಬೆಂಬಲ ಬೆಲೆ, ಡಬ್ಲ್ಯೂ ಟಿ ಓ ಒಪ್ಪಂದ, ರೈತರಿಗೆ ಪಿಂಚಣಿ ನೀಡುವ ಯೋಜನೆ, ಬೆಳೆ ವಿಮೆ ಪದ್ಧತಿ, ಕಳೆದ ವರ್ಷ ಹೋರಾಟದಲ್ಲಿ ಪ್ರಾಣತ್ಯಾಗ ಮಾಡಿದ 750 ರೈತ ಕುಟುಂಬಕ್ಕೆ ಸರ್ಕಾರದ ನೆರವು, ಕ್ರಮ ಕೈಗೊಳ್ಳುವಲ್ಲಿ ಕೇಂದ್ರ ಸರ್ಕಾರ ವಿಫಲವಾಗುತ್ತಿದೆ ಎಂದು ಕಿಡಿಕಾರಿದರು. ಚಳವಳಿಯಲ್ಲಿ ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಅತ್ತಹಳ್ಳಿ ದೇವರಾಜ್,ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬರಡನಪುರ ನಾಗರಾಜ್, ಕಿರಗಸೂರು ಶಂಕರ್, ಜಿಲ್ಲಾ ಉಪಾಧ್ಯಕ್ಷ ಮಾರ್ಬಳ್ಳಿ ನೀಲಕಂಠಪ್ಪ, ಮುಖಂಡ ರಾದ ಹೆಗ್ಗೂರು ರಂಗರಾಜು,ಬನ್ನೂರು ಸೂರಿ,ಬಿಪಿ ಪರಶಿವಮೂರ್ತಿ, ಕುರುಬೂರು ಸಿದ್ದೇಶ್, ದೇವನೂರು ವಿಜಯೇಂದ್ರ, ಕುರುಬೂರು ಪ್ರದೀಪ್, ಕಿರಗಸೂರು ಪ್ರಸಾದ್ ನಾಯಕ್,ಉಮೇಶ್, ಕಾಟೂರು ಮಹಾದೇವಸ್ವಾಮಿ, ನಾಗೇಶ್, ಶ್ರೀಕಂಠ, ನಂಜುಂಡಸ್ವಾಮಿ, ವರಕೋಡು ನಾಗೇಶ್, ಪಿ ರಾಜು, ಅಂಬಳೆ ಮಂಜುನಾಥ್, ಕೋಟೆ ಸುನಿಲ್, ಕೊಡನಹಳ್ಳಿ ಪ್ರಕಾಶ್, ಸೋಮಶೇಖರ್, ಚೇತನ್, ಶಂಭು, ಶಾಂತರಾಜ್, ಶಿವಮೂರ್ತಿ, ಮಂಜುನಾಥ್, ಶಿವಕುಮಾರ್, ನೂರಕ್ಕೂ ಹೆಚ್ಚು ರೈತರು ಭಾಗವಹಿಸಿದ್ದರು.

# ದೇವಾಲಯಗಳು ಶೋಷಣೆಯ ಕೇಂದ್ರಗಳಾಗಬಾರದು

**ವಿಜಯಪುರ:** ಎಲ್ಲಿಯೇ ಆಗಲಿ ದೇವಾಲಯಗಳು ಧಾರ್ಮಿಕ ಕೇಂದ್ರಗಳಾಗಬೇಕಾಗಿದ್ದು, ಸಾರ್ವಜನಿಕರ ನೆಮ್ಮದಿಯ ತಾಣಗಳಾಗಬೇಕೆ ಹೊರತು, ಶೋಷಣೆಯ ಕೇಂದ್ರಗಳ ಆಗಬಾರದೆಂದು ಶ್ರೀ ಮಹರ್ಷಿ ವಾಲ್ಮೀಕಿ ಗುರುಪೀಠಾಧ್ಯಕ್ಷರಾದ ಶ್ರೀ ಪ್ರಸನ್ನಾನಂದಪುರಿ ಮಹಾ ಸ್ವಾಮೀಜಿಗಳು ತಿಳಿಸಿದರು. ಇಲ್ಲಿನ ಮಂಡಿಬೆಲೆ ರಸ್ತೆಯ ಶ್ರೀ ಮಹರ್ಷಿ ವಾಲ್ಮೀಕಿ ಉದ್ಯಾನವನದಲ್ಲಿ ವಾಲ್ಮೀಕಿ ನಾಯಕ ಸಂಘದ ವತಿಯಿಂದ ಏರ್ಪಡಿಸಲಾಗಿದ್ದ ಶ್ರೀ ಮಹರ್ಷಿ ವಾಲ್ಮೀಕಿ ದೇವಸ್ಥಾನ ಉದ್ಘಾಟನಾ ಕಾರ್ಯಕ್ರಮದ ಸಾನಿಧ್ಯ ವಹಿಸಿ, ಮಾತನಾಡುತ್ತಿದ್ದರು. ಮನುಷ್ಯರು ಜಾತಿಯ ಕಾರಣದಿಂದ ಶ್ರೇಷ್ಠರಾಗುವುದು. ನೀತಿಯ ಕಾರಣದಿಂದ ಶ್ರೇಷ್ಠರಾಗಬೇಕು. ಧರ್ಮದ ಮೂಲ ತ್ಯಾಗವಾಗಿದ್ದು, ಹಣ, ಅಧಿಕಾರ, ಲಾಲಸೆಗಳಿಂದ ಹಪಹಪಿಸುವವರು ಧರ್ಮವನ್ನು ಎತ್ತಿ ಹಿಡಿಯಲು ಸಾಧ್ಯವಿಲ್ಲವೆಂದು ತಿಳಿಸಿದರು. ವಿಧಾನ ಪರಿಷತ್ತಿನ ಮಾಜಿ ವಿರೋಧಪಕ್ಷದ ನಾಯಕರಾಗಿದ್ದ ವಿ ಎಸ್ ಉಗ್ರಪ್ಪರವರು ಮಾತನಾಡುತ್ತಾ, ರಾಮ, ಲಕ್ಷ್ಮಣ ಸೀತೆ ಇವರು ಕ್ಷತ್ರಿಯರಾಗಿದ್ದು ಮಾಂಸಾಹಾರಿಗಳಾಗಿದ್ದರು. ಸೀತೆ ತನ್ನ ಪತಿಯೊಂದಿಗೆ 14 ವರ್ಷ ವನವಾಸ ಹೋಗುವ ಸಂದರ್ಭದಲ್ಲಿ ತಮ್ಮನ್ನು ಏನೂ ತೊಂದರೆಯಾಗದೆ ಕಾಪಾಡಬೇಕೆಂದು ಗಂಗಾಮಾತೆಯಲ್ಲಿ ಹರಕೆ ಹೊತ್ತುಕೊಂಡು, ನಾವು ಬಂದ ನಂತರ ಗಂಗೆಗೆ ಅವಶ್ಯಕವಾದಷ್ಟು ಮಾಂಸಾಹಾರ ಹಾಗೂ ಮದ್ಯವನ್ನು ನೈವೇದ್ಯ ಮಾಡುವುದಾಗಿ ತಿಳಿಸಿದ್ದರು. ಚಲನಚಿತ್ರ ನಟ ಶಶಿಕುಮಾರ್ ಮಾತನಾಡಿ, ಜನಾಂಗದಲ್ಲಿ ಒಗ್ಗಟ್ಟು ಅತಿ ಮುಖ್ಯವಾಗಿದ್ದು ಯಾರು ಯಾರಿಗೂ ಒತ್ತಾಸೆಯಾಗಿರುವುದಿಲ್ಲವೆಂದು, ನಮ್ಮ ಕಾಲ ಮೇಲೆ ನಾವು ನಿಲ್ಲುವಂತಹವರಾಗಬೇಕೆಂದು, ಸಮಾಜಕ್ಕೆ ನಮ್ಮಿಂದ ಸಾಧ್ಯವಾದಂತಹ ಕಾಣಿಕೆ ನೀಡುವಂತವರಾಗಬೇಕೆಂದು ತಿಳಿಸಿದರು. ಖಜಾಂಚಿ ರವಿಶಂಕರ್‌ರವರು ಮಾತನಾಡಿ, ಜನಾಂಗದಲ್ಲಿ ಒಗ್ಗಟ್ಟು ಪ್ರಮುಖವಾಗಿದ್ದು, ಹೆಚ್ಚಿನ ಜನ ಭಾಗವಹಿಸಿರುವ ಬಗ್ಗೆ ಖೇದ ವ್ಯಕ್ತ ಪಡಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪುರಸಭಾ ಅಧ್ಯಕ್ಷರಾದ ವಿಮಲ ಬಸವರಾಜು ವಹಿಸಿದ್ದು, ಪುರಸಭಾ ಉಪಾಧ್ಯಕ್ಷರಾದ ಎಂ ಕೇಶವಪ್ಪ, ಸದಸ್ಯರಾದ ಎ.ಆರ್. ಹನೀಫುಲ್ಲ, ಮಂಜುಳಾ ಮುನಿರಾಜು, ಸುಷ್ಮಾ ಮಹೇಶ್, ಮಾಜಿ ಪುರಸಭಾ ಸದಸ್ಯ ಸಂಪತ್ ಕುಮಾರ್, ದೇವನಹಳ್ಳಿ ತಾಲೂಕು ವಾಲ್ಮೀಕಿ ನಾಯಕ ಸಂಘದ ಅಧ್ಯಕ್ಷರಾದ ನಾಗೇಶ್ ಬಾಬು, ಮಾಜಿ ಅಧ್ಯಕ್ಷರಾದ ವೇಣುಗೋಪಾಲ್ ನಾಯಕ್, ಟೌನ್ ಮಹರ್ಷಿ ವಾಲ್ಮೀಕಿ ನಾಯಕ ಸಂಘದ ಅಧ್ಯಕ್ಷರಾದ ಮಟನ್ ಶ್ರೀರಾಮ್ ರವರು, ಗೌರವಾಧ್ಯಕ್ಷರಾದ ನಿವೃತ್ತ ಕೆಎಸ್ ಆರ್ಟಿಸಿ ನೌಕರ ಪಿ ನಾರಾಯಣಸ್ವಾಮಿ, ಉಪಾಧ್ಯಕ್ಷರಾದ ಓಂ ಶಕ್ತಿ ಮುನಿಕೃಷ್ಣಪ್ಪ ರವರು, ಪ್ರಧಾನ ಕಾರ್ಯದರ್ಶಿ ಸಿಎಂ ರಾಮು, ಸಂಘಟನಾ ಕಾರ್ಯದರ್ಶಿ ಎಲ್ ಪಾಂಡುರಂಗ, ಮುಖಂಡರಾದ ಎಲ್ ಮುನಿರಾಜು, ಮಟನ್ ರಮೇಶ್, ನಿವೃತ್ತ ಮುಖ್ಯೋಪಾಧ್ಯಾಯರಾದ ಕೆಜಿ ಚಂದ್ರಶೇಖರ್, ಹಾಗೂ ವಿಜಯಪುರ ಪಟ್ಟಣದ ಹಾಗೂ ದೇವನಹಳ್ಳಿ ತಾಲೂಕಿನ ವಾಲ್ಮೀಕಿ ನಾಯಕ ಸಂಘದ ಹಲವಾರು ಮುಖಂಡರುಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದು, ಉಪಸ್ಥಿತರಿದ್ದರು. ಕಾರ್ಯಕ್ರಮಕ್ಕೆ ಮುನ್ನ ಶ್ರೀ ವಾಲ್ಮೀಕಿ ಮಹರ್ಷಿಯ ಭಾವಚಿತ್ರವನ್ನು ಸಪ್ತಾಶ್ವಗಳ ರಥೋತ್ಸವದ ಮೂಲಕ ಪಟ್ಟಣದ ಮುಖ್ಯ ಬೀದಿಗಳಲ್ಲಿ ಮಹಿಳೆಯರ ಪೂರ್ಣ ಕುಂಭ, ಜಾನಪದ ಕಲಾತಂಡಗಳೊಂದಿಗೆ ಮೆರವಣಿಗೆ ನಡೆಸಲಾಯಿತು.



# ಸಾಯಿಬಾಬಾ ದೇವಾಲಯದ ದ್ವಾರ ಬಾಗಿಲು ಉದ್ಘಾಟನೆ

**ಮಾಲೂರು :** ಧರ್ಮೋದ್ದೇಶ ಕಾರ್ಯಗಳನ್ನು ಮಾಡುವುದರಿಂದ ಸಕಾಲಕ್ಕೆ ಮಳೆ ಬೆಳೆ ಯಾಗಿ ಲೋಕಕಲ್ಯಾಣವಾಗಿ ಜನ ಜಾನುವರುಗಳು ಸುಭಿಕ್ಷೆಯಿಂದಇರಲು ಸಾಧ್ಯ.ಎಂದು ಸಮಾಜ ಸೇವಕ ಕ್ಷೇತ್ರನಹಳ್ಳಿ ಕೆ.ಸಿ.ವೆಂಕಟೇಶ್ ಗೌಡ ತಿಳಿಸಿದರು. ಮಾಲೂರು ಪಟ್ಟಣದಅರಲೇರಿರಸ್ತೆಯಲ್ಲಿರುವ ಶ್ರೀಶಿರಡಿ ಸಾಯಿಬಾಬಾ ದೇವಾಲಯದದ್ವಾರ ಬಾಗಿಲು ಉದ್ಘಾಟನೆ ಮಾಡಿ ಮಾತನಾಡಿದರು. ನಾನು ನನ್ನತಂದೆತಾಯಿ ಹಿರಿಯರ ಮಾರ್ಗದರ್ಶನದಂತೆ ನಡೆಯುವತ್ತಾಬರುತಿದ್ದುಅವರ ಹಾದಿಯಲ್ಲಿರೂಢಿ ಸಂಪ್ರದಾಯಗಳನ್ನು ಪಾಲಿಸಿ ಕೊಂಡು ನನ್ನದುಡಿಮೆಯಒಂದು ಪಾಲನ್ನುಧಾನ, ಧರ್ಮ, ದೇವರು ದೇವಾಲಯಗಳ ಅಭಿವೃದ್ಧಿ ಸೇವೆಗಳು ಬಡವರಿಗೆಅರೋಗ್ಯಚಿಕಿತ್ಸೆಗೆ,ಸಹಾಯ ವಿದ್ಯಾರ್ಥಿಗಳ ಓದಿಗೆ ಪ್ರೋತ್ಸಾಹ,ಗಳಂತಹ ಸಮಾಜ ಸೇವಾ ಕಾರ್ಯಗಳನ್ನು ಮಾಡುತ್ತಾ ಬರುತಿದ್ದೇನೆ. ಅದರಂತೆ ಮಾಲೂರುಪಟ್ಟಣದ ಶ್ರೀ ಶಿರಡಿ ಸಾಯಿಬಾಬಾ ದೇವಾಲಯಕ್ಕೆರಾಜಗೋಪುರ ನಿರ್ಮಾಣ ಮಾಡಿಸಿ ದೇವರ ಆಶೀರ್ವಾದಕ್ಕೆ ಪಾತ್ರನಾಗಿದ್ದೇನೆಎಂದು ಹೇಳಿದರು. ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ಗೀತಮ್ಮ ವೆಂಕಟೇಶ್‌ಗೌಡ, ದೇವಾಲಯದ ಸಮಿತಿಯ ಸದಸ್ಯ ಆರ್‌ಸಿ ಅಪ್ಪಾಜಿಗೌಡ, ಮುಖಂಡರಾದ ಶೆಟ್ಟಿಹಳ್ಳಿ ರಾಮಮೂರ್ತಿ, ದಿನ್ನ ಹಳ್ಳಿ ರಮೇಶ, ಮಧು ಸೇರಿದಂತೆಇನ್ನಿತರರುಇದ್ದರು.



# ಪಾಕಿಸ್ತಾನ ಜಿಂದಾಬಾದ್ ಘೋಷಣೆಯ ವಿರುದ್ಧ ಜೆಡಿಎಸ್ ಪ್ರತಿಭಟನೆ

**ಕೋಲಾರ :** ವಿಧಾನಸೌಧದಲ್ಲಿ ಆವರಣದಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದು ಘೋಷಣೆ ಕೂಗಿರುವುದು ಖಂಡನಾರ್ಹವಾಗಿದ್ದು ತಪ್ಪಿತಸ್ಥರ ವಿರುದ್ಧ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ಜೆಡಿಎಸ್ ಪಕ್ಷದ ಕಾರ್ಯಕರ್ತರು ನಗರದ ಮೆಕ್ಕೆ ವೃತ್ತದಲ್ಲಿ ಗುರುವಾರ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಮುಖಂಡ ಸಿಎಂಆರ್ ಶ್ರೀನಾಥ್ ಮಾತನಾಡಿ ರಾಜ್ಯಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸೈಯದ್ ನಾಸೀರ್ ಹುಸೇನ್ ಅವರ ಗೆಲುವಿನ ಸಂದರ್ಭದಲ್ಲಿ ಅವರ ಬೆಂಬಲಿಗರು ಪಾಕಿಸ್ತಾನ ಜಿಂದಾಬಾದ್' ಎಂದು ಕೂಗಿರುವುದು ಪ್ರಜಾಪ್ರಭುತ್ವ.ಮತ್ತು ಸಂವಿಧಾನಕ್ಕೆ ಮಾಡಿದ ಅಪಮಾನವಾಗಿದೆ ಕೂಡಲೇ ಎನ್‌ಐ ತನಿಖೆ ನಡೆಸಬೇಕು ಘೋಷಣೆ ಕೂಗುವ ಸಂದರ್ಭದಲ್ಲಿ ಇತರೆ ಕಾಂಗ್ರೆಸ್ ಮುಖಂಡರು ಅಲ್ಲಿದ್ದರೂ ಕೂಡ ಅದನ್ನು ತಡೆಯುವ ಕೆಲಸ ಮಾಡಲಿಲ್ಲ ಜೊತೆಗೆ ಕೆಲವು ರಾಜ್ಯದ ಪ್ರಭಾವಿ ಸಚಿವರು ಘೋಷಣೆಯನ್ನು ಸಮರ್ಥನೆ ಮಾಡಿಕೊಳ್ಳಲು ಹೊರಟಿದ್ದಾರೆ ಇದು ಅವರಿಗೆ ನಾಚಿಕೆಗೇಡಿನ ಸಂಗತಿಯಾಗಿದೆ ಎಂದು ಕಿಡಿಕಾರಿದರು.

ಕಾಂಗ್ರೆಸ್ ಪಕ್ಷವು ದೇಶದಲ್ಲಿ ಸಂವಿಧಾನವನ್ನು ರಕ್ಷಣೆ ಮಾಡುತ್ತೇವೆ ಎಂದು ಗುತ್ತಿಗೆ ಪಡೆದವರ ರೀತಿಯಲ್ಲಿ ಪ್ರಚಾರ ಗಿಟ್ಟಿಸಿಕೊಳ್ಳಲು ಹೊರಟಿದ್ದಾರೆ ಆದರೆ ಅವರೇ ಇವತ್ತು



ಸಂವಿಧಾನ ಮತ್ತು ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಅಗೌರವ ಅಪಮಾನ ಮಾಡಿದ್ದಾರೆ ಕೂಡಲೇ ನಾಸೀರ್ ಹುಸೇನ್ ಅವರ ರಾಜ್ಯಸಭಾ ಸದಸ್ಯತ್ವವನ್ನು ರದ್ದುಗೊಳಿಸಬೇಕು ಈ ಪ್ರಕರಣದ ತನಿಖೆ ಪೂರ್ಣಗೊಳ್ಳುವವರೆಗೆ ನಾಸೀರ್ ಹುಸೇನ್ ಅವರಿಗೆ ಯಾವುದೇ ಕಾರಣಕ್ಕೂ ಪ್ರಮಾಣ ವಚನ ಸ್ವೀಕರಿಸಲು ಅವಕಾಶ ಕಲ್ಪಿಸಬಾರದು ಇದನ್ನು ಪ್ರಶ್ನಿಸಿದ ಮಾಧ್ಯಮದವರ ಮೇಲೆ ದರ್ಪ ತೋರಿರುವುದು ಪ್ರಜಾಪ್ರಭುತ್ವದ ನಾಲ್ಕನೇ ಅಂಗಕ್ಕೆ ಮಾಡಿದ ಅಪಮಾನವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕೋಚಿಮುಲ್ ನಿರ್ದೇಶಕ ವಡಗೂರು ಡಿ.ವಿ ಹರೀಶ್ ಮಾತನಾಡಿ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಪಾಕಿಸ್ತಾನ ಜಿಂದಾಬಾದ್ ಘೋಷಣೆಯಿಂದ ದೇಶದ 140 ಕೋಟಿ ಜನರಿಗೆ ಮಾಡಿದ ಅವಮಾನವಾಗಿದೆ ಕೇವಲ ಒಂದು ಸಮುದಾಯವನ್ನು ಒಲೈಕೆ ಮಾಡುವ ನಿಟ್ಟಿನಲ್ಲಿ ಸರಕಾರವು ಕೂಡ ಈ ಘೋಷಣೆಯನ್ನು ಸಮರ್ಥನೆ ಮಾಡಿಕೊಳ್ಳಲು ಹೊರಟಿದೆ ವಿಧಾನಸೌಧದಲ್ಲಿಯೇ ಇಂತಹ ಘಟನೆ ನಡೆದಿದ್ದು ಸರಕಾರಕ್ಕೆ ಕಣ್ಣು ಕಿವಿ ಇದೆಯೇ ಎಂದು ಪ್ರಶ್ನೆ ಮಾಡಬೇಕಾಗಿದೆ ರಾಜ್ಯದ ಜನ ಕಾಂಗ್ರೆಸ್ ಪಕ್ಷಕ್ಕೆ ಲೋಕಸಭಾ ಚುನಾವಣೆಯಲ್ಲಿ ತಕ್ಕ ಪಾಠವನ್ನು ಕಲಿಸಲಿದ್ದಾರೆ ಎಂದರು.

ಈ ಸಂದರ್ಭದಲ್ಲಿ ರಾಜ್ಯ ಒಕ್ಕಲಿಗ ಸಂಘದ ನಿರ್ದೇಶಕ ಡಿ.ಕೆ ರಮೇಶ್ ಮಾತನಾಡಿ ಒಕ್ಕೂಟ ವ್ಯವಸ್ಥೆಯಲ್ಲಿ ಜನರ ಸಮಸ್ಯೆಗಳನ್ನು ಬಗೆಹರಿಸಲು ರಾಜ್ಯ ಕಾಂಗ್ರೆಸ್ ಸರಕಾರ ವಿಫಲವಾಗಿದೆ ಅದರಿಂದಲೇ ಅಶಾಂತಿ ತರುವ ಘಟನೆಗಳನ್ನು ಕಾರ್ಯಕರ್ತರ ಮೂಲಕ ಮಾಡಿಸಲು ಹೊರಟಿದ್ದಾರೆ ದೇಶದ್ರೋಹ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ತಪ್ಪಿತಸ್ಥರ ವಿರುದ್ಧ ಕ್ರಮ ವಹಿಸಬೇಕು ಮುಂದಿನ ಪ್ರತಿಯೊಂದು ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರದಿಂದ ದೂರವಿಡಬೇಕು ಎಂದರು.

ಈ ಪ್ರತಿಭಟನೆ ನೇತೃತ್ವವನ್ನು ಜೆಡಿಎಸ್ ಜಿಲ್ಲಾ ಕಾರ್ಯಾಧ್ಯಕ್ಷ ಬಣಕನಹಳ್ಳಿ ನಟರಾಜ್, ತಾಲೂಕು ಅಧ್ಯಕ್ಷ ಬಾಬು ಮೌನಿ, ಮಾಜಿ ಅಧ್ಯಕ್ಷ ಮೂರಂಡಹಳ್ಳಿ ಗೋಪಾಲಪ್ಪ, ಟಿಎಪಿಸಿಎಂಎಸ್ ಅಧ್ಯಕ್ಷ ವಡಗೂರು ರಾಮು, ಪಿಎಲ್ಡಿ ಬ್ಯಾಂಕ್ ಅಧ್ಯಕ್ಷ ಯಲವಾರ ಸೊಣ್ಣೇಗೌಡ, ನಗರಸಭೆ ಸದಸ್ಯರಾದ ರಾಕೇಶ್, ಮಂಜುನಾಥ್, ಮುಖಂಡರಾದ ಬಲಿಜ ಸಂಘದ ತೋಟಗಳ ಅಶೋಕ್, ಕಲಾ ರಮೇಶ್, ವಿಜಿಗೌಡ, ದಿಂಬ ನಾಗರಾಜ್ ಗೌಡ, ಚಂಬೆ ರಾಜೇಶ್, ಪುಸ್ತಿ ನಾರಾಯಣಸ್ವಾಮಿ, ಶಬರೀಷ್, ಜಡೇರಿ ಗೋಪಾಲಗೌಡ, ಸೌದ್ ಶರೀಫ್, ಅಮ್ಮನಲ್ಲೂರು ರಮೇಶ್, ಜಯನಗರ ಕಾರ್ತಿಕ್, ಮುಂತಾದವರು ವಹಿಸಿದ್ದರು.

## ಮಂಡ್ಯ ವಿಧಾನಸಭಾ ಶಾಸಕ ಪಿ. ರವಿಕುಮಾರ್ ಸಲಹೆ

# ಜನತಾದರ್ಶನ ಸದ್ಬಳಕೆ ಆಗಲಿ

**ಮಂಡ್ಯ:** ಜನರ ಮನೆ ಬಾಗಿಲಿಗೆ ಬಂದು ಸಮಸ್ಯೆಗಳನ್ನು ಪರಿಹರಿಸುವ ಸಲುವಾಗಿ ಕೀಲಾರ ಗ್ರಾಮದಲ್ಲಿ ಇದೇ ಮೊದಲನೇ ಬಾರಿಗೆ ವಿವಿಧ ಇಲಾಖೆಯ ಅಧಿಕಾರಿಗಳನ್ನೊಳಗೊಂಡಂತೆ ಜನತಾದರ್ಶನ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಇದರ ಸದುಪಯೋಗವನ್ನು ಎಲ್ಲ ಜನರು ಪಡೆದುಕೊಳ್ಳಬೇಕು ಎಂದು ಮಂಡ್ಯ ವಿಧಾನಸಭಾ ಶಾಸಕ ಪಿ. ರವಿಕುಮಾರ್ ಅವರು ಎಂದರು.

ಕೆರಗೋಡು 1 ಮತ್ತು 2 ನೇ ಹೋಬಳಿ ಕೀಲಾರ ಗ್ರಾಮದಲ್ಲಿ ನಡೆದ ಜನತಾದರ್ಶನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಸರ್ಕಾರದ ಹಲವಾರು ಯೋಜನೆಗಳ ಮೂಲಕ ಜನಸಾಮಾನ್ಯರಿಗೆ ವಿವಿಧ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಶಂಕರೇಗೌಡ ಬೀದಿಯ ಅಭಿವೃದ್ಧಿಗಾಗಿ 70 ಲಕ್ಷ ರೂ ವೆಚ್ಚವನ್ನು ನೀಡಲಾಗಿದ್ದು, ಶೀಘ್ರದಲ್ಲೇ ಜನಸಾಮಾನ್ಯರು ತಿರುಗಾಡಬಹುದು. ಕಾವೇರಿ ನಿಗಮದಿಂದ 8 ಕೋಟಿ ರೂ ವೆಚ್ಚದಲ್ಲಿ ಸುತ್ತಮುತ್ತಲಿನ ಕೆರೆಕಟ್ಟೆ ಹಾಗೂ ಪಿಕಪ್ ನಾಲೆಗಳ ಅಭಿವೃದ್ಧಿಗೊಳಿಸಲಾಗುವುದು ಎಂದರು.

ಮಂಡ್ಯ ವಿಧಾನಸಭಾ ಕ್ಷೇತ್ರದಿಂದ ಒಟ್ಟು 1 ಕೋಟಿ ರೂ ಮೊತ್ತದಲ್ಲಿ ಅಭಿವೃದ್ಧಿ ಕಾರ್ಯಗಳು ಟೆಂಡರ್ ಹಂತದಲ್ಲಿದ್ದು, ಶೀಘ್ರದಲ್ಲೇ ಪೂರ್ಣಗೊಳಿಸಲಾಗುವುದು. ಕೆರಗೋಡು ಹೋಬಳಿಯನ್ನು ಮುಂದಿನ 4 ವರ್ಷದಲ್ಲಿ ಸಮಗ್ರ ಅಭಿವೃದ್ಧಿಯನ್ನು ಮಾಡಲಾಗುವುದು. ಜೊತೆಗೆ ಭ್ರಷ್ಟಾಚಾರವನ್ನು ನಿರ್ಮೂಲನೆಗೊಳಿಸಲಾಗುವುದು ಎಂದರು. ಜಿಲ್ಲೆಯಲ್ಲಿ ಹೊಸ ಶುಗರ್ ಫ್ಯಾಕ್ಟರಿಯನ್ನು 500 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡಲಾಗುವುದು. ಲೋಕಸಭಾ ಚುನಾವಣೆ ಮುಗಿದ ನಂತರ ಹೊಸ ಶುಗರ್ ಫ್ಯಾಕ್ಟರಿ ನಿರ್ಮಿಸಲು ಗುದ್ದಲಿ ಪೂಜೆಯನ್ನು ನೆರವೇರಿಸಲಾಗುವುದು ಎಂದರು.

ಜನತಾದರ್ಶನ ಕಾರ್ಯಕ್ರಮದ ಮೂಲಕ ಸಾರ್ವಜನಿಕರಿಂದ ಸ್ವೀಕೃತವಾಗುವ ಅರ್ಜಿಗಳನ್ನು ಕಾನೂನಿನ ವ್ಯಾಪ್ತಿಯೊಳಗೆ ಪರಿಹರಿಸುವ ವ್ಯವಸ್ಥೆ ಮಾಡಲಾಗಿದ್ದು, ಇದರ ಸದುಪಯೋಗವನ್ನು ಎಲ್ಲಾ ಜನಸಾಮಾನ್ಯರು ಪಡೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ. ಕುಮಾರ ಅವರು ತಿಳಿಸಿದರು.

ಜನರು ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ತಾಲೂಕು, ಜಿಲ್ಲಾ ಕೇಂದ್ರದಲ್ಲಿ ಅಧಿಕಾರಿಗಳನ್ನು ಭೇಟಿ ಮಾಡಲು ಅಲೆಯುವುದನ್ನು ಹೋಗಲಾಡಿಸುವ ಸಲುವಾಗಿ ಜನತಾದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಆಡಳಿತ ವ್ಯವಸ್ಥೆಯ ಸುತ್ತ ಜನರು



ಸುತ್ತಬಾರದು, ಜನರ ಸುತ್ತ ಆಡಳಿತ ವ್ಯವಸ್ಥೆ ಇರಬೇಕು ಎಂಬುದು ಜನತಾದರ್ಶನ ಕಾರ್ಯಕ್ರಮದ ಉದ್ದೇಶವಾಗಿದೆ ಎಂದರು.

ಈ ಹಿಂದೆ ತಾಲೂಕು ಮಟ್ಟದಲ್ಲಿ 2 ಜನತಾದರ್ಶನ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಒಟ್ಟು 3 ಜನತಾದರ್ಶನ ಕಾರ್ಯಕ್ರಮವನ್ನು ಶಾಸಕರು ಯಶಸ್ವಿಗೊಳಿಸಿದ್ದಾರೆ. ಜನರ ಸಮಸ್ಯೆಗಳನ್ನು ಆಲಿಸುವುದರ ಜೊತೆಗೆ ಸರ್ಕಾರದ ವಿವಿಧ ಯೋಜನೆಗಳ ಸವಲತ್ತನ್ನು ಕೂಡ ಈ ವೇದಿಕೆ ಮೂಲಕ ನೀಡಲಾಗುತ್ತಿದೆ ಎಂದರು

ಸರ್ಕಾರದ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪಿದಾಗ ಮಾತ್ರ, ಯೋಜನೆಯ ಸಾರ್ಥಕತೆ, ಸಫಲತೆ ದೊರೆಯುತ್ತದೆ. ಸರ್ಕಾರದ ಐದು ಗ್ಯಾರಂಟಿ ಯೋಜನೆಗಳ ಬಗ್ಗೆ ಈಗಾಗಲೇ ಜನಸಾಮಾನ್ಯರಿಗೆ ತಿಳಿದಿದ್ದು, ಅದರ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದರು.

ರೈತರು ಮೃತಪಟ್ಟ ನಂತರ ವಾರಸುದಾರರು ಖಾತೆಯನ್ನು ತಮ್ಮ ಹೆಸರಿಗೆ ಮಾಡಿಸಿಕೊಳ್ಳಲು ತಾಲೂಕು ಕಚೇರಿಗೆ ಅಲೆಯಬಾರದು ಎಂಬ ನಿಟ್ಟಿನಲ್ಲಿ, ಕಂದಾಯ ಇಲಾಖೆಗೆ ಸಂಬಂಧಿಸಿದಂತೆ ಪೌತಿ ಖಾತೆ ಆಂದೋಲನವನ್ನು ಜಿಲ್ಲಾದ್ಯಂತ ಮಾಡಲಾಗುತ್ತಿದೆ. ಪೌತಿ ಖಾತಾ ಆಂದೋಲನವನ್ನು ಜನರು ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

ಜಿಲ್ಲೆಯಲ್ಲಿರುವ ಎಲ್ಲಾ ತಾಲೂಕುಗಳನ್ನು ಬರಪೀಡಿತ ತಾಲೂಕು ಎಂದು ಪರಿಗಣಿಸಲಾಗಿದೆ. ರಾಜ್ಯ ಸರ್ಕಾರವು ಜಿಲ್ಲೆಯ 77,000 ರೈತರಿಗೆ 14 ಕೋಟಿ ರೂ ಹಣವನ್ನು ಬೆಳೆ ಪರಿಹಾರವಾಗಿ ಮೊದಲ ಹಂತದಲ್ಲಿ ತಲಾ ರೂ 2000 ದಂತೆ ನೇರವಾಗಿ ರೈತರ ಖಾತೆಗೆ ವರ್ಗಾವಣೆ ಮಾಡಲಾಗಿದೆ ಎಂದರು.

ಜಿಲ್ಲೆಯ ಗ್ರಾಮ ಪಂಚಾಯಿತಿಗಳಲ್ಲಿ ಈ ಸ್ವತ್ತು ನೀಡುವ ಅಭಿಯಾನವನ್ನು ಸಿಇಓ ಅವರು ವಿಶೇಷ ಆಸಕ್ತಿ ವಹಿಸಿ ಜಿಲ್ಲೆಯಾದ್ಯಂತ ಹಮ್ಮಿಕೊಂಡಿದ್ದಾರೆ. ಜನರು ಸಂಪೂರ್ಣವಾಗಿ ಯೋಜನೆಯ ಸಫಲತೆಯನ್ನು ಪಡೆದುಕೊಳ್ಳಬೇಕು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಕಳೆದ ಆರು ತಿಂಗಳುಗಳಲ್ಲಿ ತಹಶೀಲ್ದಾರ ಕೋರ್ಟ್ ನಲ್ಲಿರುವ 8000 ಪ್ರಕರಣಗಳನ್ನು ಜಿಲ್ಲಾಧಿಕಾರಿ,ಅಪರ ಜಿಲ್ಲಾಧಿಕಾರಿ, ತಹಶೀಲ್ದಾರರ ಸಮ್ಮುಖದಲ್ಲಿ ಇತ್ಯರ್ಥಪಡಿಸಿ ಕಂಪ್ಯೂಟರ್ ನಲ್ಲಿ ದಾಖಲೀಕರಣ ಮಾಡಿ, ರಾಜ್ಯದಲ್ಲಿ ಮಂಡ್ಯ ಜಿಲ್ಲೆಯು ಮೊದಲ ಸ್ಥಾನದಲ್ಲಿದೆ. ಕಂದಾಯ ಇಲಾಖೆಯಲ್ಲಿ ಇನ್ನು ಸಾಕಷ್ಟು ಸಮಸ್ಯೆಗಳನ್ನು, ಜನರು ಹೊತ್ತು ತರುತ್ತಿದ್ದು ಶೀಘ್ರದಲ್ಲೇ ಅದನ್ನು ಇತ್ಯರ್ಥ ಪಡಿಸಲಾಗುವುದು ಎಂದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶೇಖ್ ತನ್ವೀರ್ ಆಸಿಫ್, ತಹಶೀಲ್ದಾರ್ ಬಿರಾದರ್ , ಎ.ಎಸ್.ಪಿ ತಿಮ್ಮಯ್ಯ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಬೂದನೂರು ಉತ್ಸವ

**ಮಂಡ್ಯ:** ಬೂದನೂರು ಉತ್ಸವವು ಮಾರ್ಚ್ 2 ಮತ್ತು 3ರಂದು ನಡೆಯಲಿದ್ದು, ಶ್ರೀ ಕಾಶಿವಿಶ್ವನಾಥ ಮತ್ತು ಅನಂತಪದ್ಮನಾಭ ದೇವಾಲಯಗಳು ವಿಶ್ವಮಟ್ಟದಲ್ಲಿ ಪ್ರಸಿದ್ಧಿ ಪಡೆಯಲು ಎಲ್ಲರ ಸಹಕಾರ ಮುಖ್ಯ ಎಂದು ಮಂಡ್ಯ ವಿಧಾನಸಭಾ ಶಾಸಕರಾದ ಪಿ. ರವಿಕುಮಾರ್ ಅವರು ತಿಳಿಸಿದರು.

ಹೊಸ ಬೂದನೂರು ಗ್ರಾಮದಲ್ಲಿ ತಮ್ಮ ನೇತೃತ್ವದಲ್ಲಿ ಬೂದನೂರು ಉತ್ಸವ ಕಾರ್ಯಕ್ರಮದ ಬಗ್ಗೆ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಪ್ರವಾಸೋದ್ಯಮ ಇಲಾಖೆಯ ಸಹಯೋಗದಲ್ಲಿ ಮಾರ್ಚ್ 02 ಶನಿವಾರ ಹಾಗೂ 03 ಭಾನುವಾರದಂದು ಬೂದನೂರು ಉತ್ಸವ ಕಾರ್ಯಕ್ರಮವನ್ನು ಸಂಜೆ 5 ಗಂಟೆಗೆ ಹಮ್ಮಿಕೊಳ್ಳಲಾಗಿದೆ. ಕೃಷಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ನಗರ ಅಭಿವೃದ್ಧಿ ಸಚಿವ ಭೈರತಿ ಸುರೇಶ್,ವಿಧಾನಪರಿಷತ್ ಶಾಸಕರಾದ ಮರಿತಿಬ್ಬೇಗೌಡ, ಮಧು ಜಿ. ಮಾದೇಗೌಡ, ದಿನೇಶ್ ಗೂಳಿಗೌಡ, ಮಳವಳ್ಳಿ ಶಾಸಕ ಪಿ.ಎಂ ನರೇಂದ್ರಸ್ವಾಮಿ, ಶ್ರೀರಂಗಪಟ್ಟಣದ ಶಾಸಕ ಮತ್ತು ಚಾಮುಂಡೇಶ್ವರಿ ವಿದ್ಯುತ್ ನಿಗಮದ ಅಧ್ಯಕ್ಷರಾದ ಎ.ಬಿ ರಮೇಶ್ ಬಂಡಿಸಿದ್ದೇಗೌಡ, ಸಹಕಾರ ಸಚಿವ ರಾಜಣ್ಣ, ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣ್ಣಯ್ಯ, ಮದ್ದೂರು ಶಾಸಕ ಕೆ.ಎಂ ಉದಯ್, ಕೆ ಆರ್ ಪೇಟೆ ಶಾಸಕ ಎಚ್.ಟಿ ಮಂಜು ಅವರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಲಾಗಿದೆ ಎಂದರು.

ಸಂಜೆ 6.15 ಗಂಟೆಗೆ ಕಾರ್ಯಕ್ರಮದ ವೇದಿಕೆ ಬಳಿ ಕಾರ್ಯಕ್ರಮದ ಮುಖ್ಯ ಆಕರ್ಷಣೆಯಾದ ಶ್ರೀ ಕಾಶಿವಿಶ್ವನಾಥ ದೇವರಿಗೆ ವಿಶ್ವ ಪ್ರಸಿದ್ಧಿ ಪಡೆದಿರುವ ಕಾಶಿಯಿಂದ 16 ಜನರ ತಂಡದಿಂದ ಗಂಗಾರತಿಯು ನಡೆಯಲಿದೆ ಎಂದರು.

ಮಾ.02 ರಂದು ಸಂಜೆ 5.00 ಗಂಟೆಗೆ ಹೊಸಬೂದನೂರು ಗ್ರಾಮದ ಪ್ರವೇಶ ದ್ವಾರದಿಂದ ಶ್ರೀ ಕಾಶಿವಿಶ್ವನಾಥ ಮತ್ತು ಅನಂತಪದ್ಮನಾಭ ದೇವಾಲಯದವರೆಗೆ ಮೆರವಣಿಗೆ ನಡೆಯಲಿದೆ. ಸಂಜೆ 6.00 ಗಂಟೆಗೆ ಶ್ರೀ ಕಾಶಿವಿಶ್ವನಾಥ ಮತ್ತು ಅನಂತಪದ್ಮನಾಭ ದೇವಾಲಯದಲ್ಲಿ ಪೂಜೆ ನಡೆಯಲಿದೆ. ಸಂಜೆ 6.30 ಕ್ಕೆ ಮುಖ್ಯ ವೇದಿಕೆಯಲ್ಲಿ ಕಾರ್ಯಕ್ರಮದ ಅಧಿಕೃತ ಉದ್ಘಾಟನೆ ಹಾಗೂ ಸಭಾ ಕಾರ್ಯಕ್ರಮಗಳು ನಡೆಯಲಿವೆ. ಸಂಜೆ 7.30 ಗಂಟೆಗೆ ಸಾಧು ಕೋಕಿಲಾ ಮತ್ತು ತಂಡದವರಿಂದ ರಸಮಂಜರಿ ಕಾರ್ಯಕ್ರಮವು ನಡೆಯಲಿದೆ.

ಮಾರ್ಚ್ 03 ರಂದು ಸಂಜೆ 5.00 ಗಂಟೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳ ಸಮಾರೋಪ ಸಮಾರಂಭ ಕಾರ್ಯಕ್ರಮವು ನಡೆಯಲಿದೆ. 6 ಗಂಟೆಗೆ ಶಾಲಾ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದೆ. 6.15 ಕ್ಕೆ ಸ್ಥಳೀಯ ಕಲಾ ತಂಡದವರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದೆ. 7.30 ಗಂಟೆಗೆ ಅರ್ಜುನ್ ಜನ್ಯ ಮತ್ತು ತಂಡದವರಿಂದ ರಸಮಂಜರಿ ಕಾರ್ಯಕ್ರಮ ನಡೆಯಲಿದ್ದು, ವಿವಿಧ ಚಲನಚಿತ್ರ ಹಾಗೂ ಧಾರಾವಾಹಿಗಳ ನಟ ನಟಿಯರಿಂದ ನೃತ್ಯ ಪ್ರದರ್ಶನವಿರುತ್ತದೆ ಎಂದರು.

ತಾಲ್ಲೂಕಿನ 8 ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು, ಉಪಾಧ್ಯಕ್ಷರು, ಮುಖಂಡರುಗಳನ್ನು ಸೇರಿದಂತೆ ಕಾರ್ಯಕ್ರಮವು ಯಶಸ್ವಿಯಾಗಲಿದ್ದು, ಪ್ರತಿ ವರ್ಷವೂ ಇನ್ನುಮುಂದೆ ಬೂದನೂರು ಉತ್ಸವವು 2 ದಿನಗಳ ಕಾಲ ನಡೆಯುತ್ತದೆ ಎಂದು ತಿಳಿಸಿದರು.

ಬೂದನೂರು ಉತ್ಸವಕ್ಕೆ 100 ಅಡಿಯ ಬೃಹತ್ ವೇದಿಕೆಯನ್ನು ಸಜ್ಜುಗೊಳಿಸುವುದರ ಜೊತೆಗೆ, 8000 ಚೇರ್ ಗಳ ವ್ಯವಸ್ಥೆ ಹಾಗೂ 15,000 ಜನರು ಸೇರಲು ಅನುಕೂಲ ಮಾಡಲಾಗಿದೆ. ಪೋಲಿಸ್ ಬಂದೋಬಸ್ತ್ ಹಾಗೂ ವಾಹನಗಳ ನಿಲುಗಡೆಗೆ ಊರಿನ ಮುಖ್ಯ ದ್ವಾರದ ಬಳಿ ಹಾಗೂ ವೇದಿಕೆಯ ಮುಂಭಾಗ 2 ಕಡೆ ಪಾರ್ಕಿಂಗ್ ವ್ಯವಸ್ಥೆಯನ್ನು ಮಾಡಲಾಗುವುದು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಇಲಾಖೆಯಿಂದ ಪ್ರಥಮ ಚಿಕಿತ್ಸೆ ವ್ಯವಸ್ಥೆ ಮಾಡಲಾಗಿದೆ ಎಂದರು.

ಹೊಸ ಬೂದನೂರು ಗ್ರಾಮದಲ್ಲಿರುವ ಕಾಶಿ ವಿಶ್ವನಾಥ ದೇವಾಲಯ ಹಾಗೂ ಅನಂತ ಪದ್ಮನಾಭ ದೇವಾಲಯಗಳನ್ನು ಚೋಳರು ನಿರ್ಮಿಸಿದ್ದು, 1,000 ವರ್ಷಗಳಿಗಿಂತ ಹೆಚ್ಚಿನ ಐತಿಹಾಸಿಕ ಇತಿಹಾಸವಿದೆ. ಕೇರಳದ ಅನಂತಪದ್ಮನಾಭ ದೇವಾಲಯವನ್ನು ಬಿಟ್ಟರೆ ಕರ್ನಾಟಕದಲ್ಲಿ ದಕ್ಷಿಣ ಭಾಗದ ಪ್ರಾಚೀನ ಅನಂತಪದ್ಮನಾಭ ದೇವಾಲಯ ಜಿಲ್ಲೆಯ ಹೊಸಬೂದನೂರು ಗ್ರಾಮದಲ್ಲಿರುವುದು ಹೆಮ್ಮೆಯ ವಿಷಯವಾಗಿದೆ. ಶ್ರೀ ಕಾಶಿವಿಶ್ವನಾಥ ಮತ್ತು ಅನಂತಪದ್ಮನಾಭ ದೇವಾಲಯಗಳಿಗೆ ಮುಂದಿನ ವರ್ಷ ಪ್ರವಾಸೋದ್ಯಮ ಇಲಾಖೆಯ ಜೊತೆ ಚರ್ಚಿಸಿ ಹೈಟೆಕ್ ಸ್ಪರ್ಶ ನೀಡಿ, ಮುಂದಿನ ವರ್ಷ ಎರಡು ದೇವಾಲಯಗಳ ಸಮಗ್ರ ಅಭಿವೃದ್ಧಿಯಾಗುವುದು ಎಂದರು.



**ವಿಜಯಪುರ ಪಟ್ಟಣದ ಸರ್ಕಾರಿ ಹೆಣ್ಣು ಮಕ್ಕಳ ಪ್ರೌಢಶಾಲೆಯಲ್ಲಿ ಸುದೀರ್ಘಕಾಲದಿಂದ ದ್ವಿತೀಯ ದರ್ಜೆ ಗುಮಾಸ್ತರಾಗಿ ಕಾರ್ಯನಿರ್ವಹಿಸುತ್ತಿದ್ದ ಕಮಲಮ್ಮ ರವರು ಗುರುವಾರದಂದು ನಿವೃತ್ತಿ ಹೊಂದಿದರು. ಶಾಲಾ ಅಭಿವೃದ್ಧಿ ಸಮಿತಿ, ಶಾಲಾ ಮುಖ್ಯೋಪಾಧ್ಯಾಯರು ಹಾಗೂ ಶಿಕ್ಷಕ ವೃಂದದವರು ಕಮಲಮ್ಮ ರವರನ್ನು ಅಭಿನಂದಿಸಿ ನೆನಪಿನ ಕಾಣಿಕೆ ವಿತರಿಸಿದರು. ಈ ಸಂದರ್ಭದಲ್ಲಿ ಶಾಲಾ ಅಭಿವೃದ್ಧಿ ಸಮಿತಿಯ ಕೆಬಿಎಸ್ ಬಸವರಾಜು, ಸೂರ್ಯಪ್ರಕಾಶ್, ವಿ ವಿಶ್ವನಾಥ್, ಪಿ ಮುರಳಿಧರ್, ನಾರಾಯಣಪುರ ಪ್ರೌಢಶಾಲೆ ಮುಖ್ಯೋಪಾಧ್ಯಾಯ ಪಿಎನ್ ಕೊಟ್ರೇಶ್, ವೆಂಕಟೇಶ್, ರಾಜು ಅವಳೇಕರ್, ಶಿಕ್ಷಕರುಗಳಾದ ನಾಗರಾಜ್, ಆರತಿ ಪತ್ತಾರ್, ಗಿರಿಜಾಂಬ ಹಾಗೂ ಕಮಲಮ್ಮ ರವರ ತಾಯಿ ಅನಸೂಯಮ್ಮ ಸಹೋದರ ರಮೇಶ್ ರವರುಗಳು ಉಪಸ್ಥಿತರಿದ್ದರು**

# ನಟ ಕೆ. ಶಿವರಾಂ ಅವರಿಗೆ ಶ್ರದ್ಧಾಂಜಲಿ

**ಚಾಮರಾಜನಗರ:** ನಿವೃತ್ತ ಐಎಎಸ್ ಅಧಿಕಾರಿ, ನಟ ಹಾಗೂ ಬಿಜೆಪಿ ಮುಖಂಡ ಕೆ. ಶಿವರಾಂ ಅವರಿಗೆ ಛಲವಾದಿ ಮಹಾಸಭಾದ ತಾಲೂಕು ಸಮಿತಿ ವತಿಯಿಂದ ನಗರದ ಹೌಸಿಂಗ್ ಬೋರ್ಡ್ ನಲ್ಲಿರುವ ಡಾ.ಬಿ.ಆರ್. ಅಂಬೇಡ್ಕರ್ ಉದ್ಯಾನವನದ ಮುಂಭಾಗದಲ್ಲಿ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಕಾರ್ಯಕ್ರನದಲ್ಲಿ ಛಲವಾದಿ ಮಹಾಸಭಾದ ತಾಲೂಕು ಅಧ್ಯಕ್ಷ ನಾಗಣ್ಣ, ಉಪಾಧ್ಯಕ್ಷ ಬಸವಣ್ಣ, ಗೌರವ ಅಧ್ಯಕ್ಷ ಶಿವನಂಜಯ್ಯ,ನಿವೃತ್ತ ಎಎಸ್‌ಐ ಸಿದ್ದರಾಜು, ನಾಗೇಂದ್ರ, ಮಸಣಾಪುರ ನಾಗರಾಜು, ಬಸವರಾಜು, ಡ್ರೈವರ್ ಬಸವರಾಜು, ಶುಭೋಧಯ ಸಿದ್ದರಾಜು, ಬಸವಣ್ಣ ಹಾಜರಿದ್ದರು.



# ವಿಜ್ಞಾನ ಬೆಳೆಯಲಿ ಅಜ್ಞಾನ ಅಳಿಯಲಿ

**ವಿಜಯಪುರ:** ಪಟ್ಟಣದ ಪ್ರಗತಿ ಆಂಗ್ಲ ಪ್ರಾಥಮಿಕ ಪಾಠ ಶಾಲೆಯ ಆವರಣದಲ್ಲಿ ರಾಷ್ಟ್ರೀಯ ವಿಜ್ಞಾನ ದಿನವನ್ನು ಆಚರಿಸಲಾಯಿತು.

ಪ್ರಗತಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ|| ಎನ್. ನಾಗರಾಜ್ ರವರು ಮಾತನಾಡಿ, ಎಚ್ಚರಿಕೆಯ ಕ್ರಮಬದ್ಧ ಪ್ರಯತ್ನಗಳಿಲ್ಲದೇ ವೈಜ್ಞಾನಿಕ ಆವಿಷ್ಕಾರ ಅಸಂಭವ. ರಾಮನ್ ಮತ್ತು ರಾಮನ್ ಪರಿಣಾಮ ಇದಕ್ಕೆ ಅತ್ಯುತ್ತಮ ನಿದರ್ಶನ. ಅಜ್ಞಾನ ಅಳಿಯಲಿ, ವಿಜ್ಞಾನ ಬೆಳೆಯಲಿ, ವಿಜ್ಞಾನ ಬೆಳವಣಿಗೆಯಿಂದ ಅಜ್ಞಾನ ಅಳಿಯಲು ಸಾಧ್ಯ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಪೋಷಕರಾದ ಮಲ್ಲಿಕಾರ್ಜುನ ರವರು ಮಾತನಾಡಿ, ಸಿ.ವಿ ರಾಮನ್ ರವರ ಕೊಡುಗೆ ಸಮಾಜಕ್ಕೆ ಅಪಾರವಾಗಿದೆ. ನೀವು ಸಹ ಸಿ .ವಿ ರಾಮನ್ ಹಾಗೆ ಒಳ್ಳೆಯ ವಿಜ್ಞಾನಿಗಳಾಗಿ ರಾಷ್ಟ್ರಕ್ಕೆ ಉತ್ತಮವಾದ ಕೊಡುಗೆಯನ್ನು ನೀಡುವಂತಹ ವಿದ್ಯಾರ್ಥಿಗಳಾಗಿ ಎಂಬುದನ್ನು ತಿಳಿಸಿದರು.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲಾ ಮುಖ್ಯೋಪಾಧ್ಯಾಯದರಾದ ಜೆ.ಎನ್ ಪ್ರಕಾಶ್ ಅವರು ವಹಿಸಿದ್ದು, ಮಾತನಾಡಿ, ಅಜ್ಞಾನವನ್ನು ಅಳಿಸಿ.. ಸುಜ್ಞಾನದ ಕಡೆಗೆ ನಡೆಸುವುದೇ.. ವಿಜ್ಞಾನ ಎಂದು ಹೇಳುತ್ತಾ..ಸಿ .ವಿ .ರಾಮನ್ ರವರು ವಿಜ್ಞಾನ ವಿಭಾಗದಲ್ಲಿ ನೊಬೆಲ್ ಪ್ರೈಸ್ ಗೆದ್ದ ಭಾರತದ ಏಕೈಕ ವ್ಯಕ್ತಿ. ಇವರ ಆದರ್ಶಗಳು, ಇವರು ಮಾಡಿದಂತಹ ಸಾಧನೆ ನಿಮ್ಮೆಲ್ಲರಿಗೂ ಮಾರ್ಗದರ್ಶಕವಾಗಲಿ ನೀವು ಕೂಡ ಸಿ.ವಿ ರಾಮನ್ ಹಾಗೆ ರಾಷ್ಟ್ರಕ್ಕೆ ಒಳ್ಳೆಯ ಕೊಡುಗೆ ನೀಡುವ ವಿಜ್ಞಾನಿಗಳಾಗಿ ಎಂದು ಮುಖ್ಯೋಪಾಧ್ಯಾಯರು ವಿದ್ಯಾರ್ಥಿಗಳಿಗೆ ತಿಳಿಸಿದರು.

ಪ್ರಗತಿ ಕೈಗಾರಿಕಾ ತರಬೇತಿ ಕೇಂದ್ರದ ಪ್ರಾಂಶುಪಾಲರಾದ ಹರೀಶ್ ಕುಮಾರ್ ರವರು ಮಾತನಾಡಿ, ವಿದ್ಯಾರ್ಥಿಗಳಾದ ನೀವು ಏಷ್ಯಾದಲ್ಲಿ ಪ್ರಥಮವಾಗಿ ನೊಬೆಲ್ ಪ್ರಶಸ್ತಿ ಪಡೆದ ಮೊದಲ ವ್ಯಕ್ತಿ ಸಿ,ವಿ ರಾಮನ್ ರವರು ಹಾಕಿಕೊಟ್ಟಂತಹ ಅಡಿಪಾಯದಲ್ಲಿ ನೀವು ಕೂಡ ರಾಷ್ಟ್ರಕ್ಕೆ ಕೊಡುಗೆ ನೀಡುವಂತಹ ವ್ಯಕ್ತಿಗಳಾಗಬೇಕು ಎಂದು ತಿಳಿಸಿದರು.

ಪ್ರಗತಿ ಪ್ರೌಢ ಶಾಲೆಯ ಮುಖ್ಯ ಶಿಕ್ಷಕರಾದ ವಿ .ಬಸವರಾಜ್‌ರವರು ಮಾತನಾಡಿ, ಈ ವರ್ಷದ ವಿಜ್ಞಾನ ದಿನಾಚರಣೆಯ ಥೀಮ್ ಏನೆಂದರೆ ವಿಕ್ಷಿತ್ ಭಾರತ್ ಗಾಗಿ ಸ್ಥಳೀಯ ಜ್ಞಾನಗಳು ವಿಷಯದೊಂದಿಗೆ 2024 ರ ರಾಷ್ಟ್ರೀಯ



ವಿಜ್ಞಾನ ದಿನಾಚರಣೆಯನ್ನು ಆಚರಿಸಲಾಗುತ್ತದೆ ಎಂದು ತಿಳಿಸಿದರು.

7ನೇ ತರಗತಿಯ ವಿದ್ಯಾರ್ಥಿಯಾದ ಕೀರ್ತನ. ಆರ್ ರಾಮನ್ ಎಫೆಕ್ಟ್ ನ್ನು ಎಲ್ಲಿ ಬಳಕೆ ಮಾಡುತ್ತಾರೆ. ಮತ್ತು ರಾಮನ್ ಎಫೆಕ್ಟ್ ರ ಮಹತ್ವ ಬಗ್ಗೆ ತಿಳಿಸಿಕೊಟ್ಟರು.

ಪ್ರಗತಿ ಶಾಲೆಯ ಆವರಣದಲ್ಲಿ 1ನೇ ತರಗತಿ ಯಿಂದ 7ನೇ ತರಗತಿಯ ವರೆಗಿನ ಎಲ್ಲಾ ವಿದ್ಯಾರ್ಥಿಗಳಿಂದ ವಿಜ್ಞಾನಕ್ಕೆ ಸಂಬಂಧಪಟ್ಟಂತೆ ಚಂದ್ರಯಾನ-03, ನ್ಯೂಟನ್ ಡಿಸ್ಕ್, ಬೆಂಕಿ ಉರಿಯುವುದಕ್ಕೆ ಗಾಳಿಯ ಅವಶ್ಯಕತೆ ಇದೆ, ಕಚ್ಚಾಮನೆ ಮತ್ತು ಪಕ್ಕಾ ಮನೆ , ಲೈಫ್ ಕೇರ್ ಹಾಸ್ಪಿಟಲ್ , ಶಕ್ತಿಯ ಮೂಲ ,ನೀರಿನ ಮೂಲಗಳು,ನೀರಿನಕಾರಂಜಿ, ಸಾರಿಗೆಯ ವಿಧಾನಗಳು, ರೇಷ್ಮೆ ಇತಿಹಾಸ, ಹಸಿರುಮನೆ ಪರಿಣಾಮ, ಹೃದಯದ ರಕ್ತ ಪರಿಚಲನೆ, ರೋಬರ್ಟ್ ,ಮಾಲಿನ್ಯಗಳು, ಗಾಲಿಗಿರಿಣಿ, ವರ್ಮಿಕಾಂಪೋಸ್ಟ್ , ಎರೆ ಹುಳ ಗೊಬ್ಬರ ,ಹನಿ ನೀರಾವರಿ ಪದ್ಧತಿ,ಆಮ್ಲ ಮಳೆ , ಹಲ್ಲುಗಳು ಚಿತ್ರಣ, ನ್ಯೂಟನ್ನ ಮೊದಲ ನಿಯಮ, ಜ್ವಾಲಾಮುಖಿ, ಹೈಡ್ರೋ ಎಲೆಕ್ಟ್ರಿಕ್ ಪವರ್ ಡ್ಯಾಮ್, ಎಟಿಎಂ, ಮಳೆ ಎಚ್ಚರಿಕೆ ಯೋಜನೆ, ಕ್ವಿಜ್ ಬೋರ್ಡ್,ಡ್ರೋನ್ ಕ್ಯಾಮೆರಾ, ಕಂಡಕ್ಟರ್ಸ್ ಅಂಡ್ ಇನ್ಸುಲೇಟರ್ , ಸೌರ ಕುಕ್ಕರ್, ಪೆರಿಸ್ಕೋಪ್, ಹೋಲೋಗ್ರಾಮ್ , ಕ್ಷಿಪಣಿ ಉಡಾವಣೆಗಳು, ಇಂತಹ ಹಲವಾರು ರೀತಿಯ ವಿವಿಧ ವಸ್ತು ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿತ್ತು.

# ಅಪ್ರಾಪ್ತ ಬಾಲಕಿಯ ಮೇಲೆ ಅತ್ಯಾಚಾರ ನಡೆಸಿದ ಅಪರಾಧಿಗೆ ಶಿಕ್ಷೆ

**ಮಂಡ್ಯ:** ಅಪ್ರಾಪ್ತ ಬಾಲಕಿ ಮೇಲೆ ಅತ್ಯಾಚಾರ ನಡೆಸಿದ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಆರೋಪಿಗೆ 17 ವರ್ಷ ಶಿಕ್ಷೆ ಹಾಗೂ ಎಪ್ಪತ್ತು ಸಾವಿರ ದಂಡ ವಿಧಿಸಿ ಮಂಡ್ಯ ಅಧಿಕ ಸೇಷನ್ ಮತ್ತು ತ್ವರಿತ ಗತಿ ನ್ಯಾಯಾಲಯದ ವಿಶೇಷ ನ್ಯಾಯಾಧೀಶರಾದ ಕೆ.ಎ. ನಾಗಜ್ಯೋತಿ ಅವರು ತೀರ್ಪು ನೀಡಿದ್ದಾರೆ. ನಾಗಮಂಗಲ ತಾಲೂಕಿನ ಕೆ ಹೊಸಳ್ಳಿ ಗ್ರಾಮ. ಹಾಲಿವಾಸ: ಮಂಡ್ಯ ತಾಲೂಕಿನ ಸಾತನೂರು ಗ್ರಾಮದ ಲೇಟ್ ಗಂಗಾಧರರವರ ಮಗ ಸಂಪತ್. ಕೆ.ಜಿ ಶಿಕ್ಷೆಗೆ ಒಳಗಾದ ಆರೋಪಿ.

ಕಳೆದ 2015 ನವೆಂಬರ್ 6ರಂದು ಆರೋಪಿ ಸಂಪತ್ ಕೆಜಿ 36 ವರ್ಷ, ಈತ 13 ವರ್ಷದ ಅಪ್ರಾಪ್ತ ವಯಸ್ಸಿನ ಬಾಲಕಿ ಶಾಲೆಗೆ ಹೋಗುವಾಗ ಮತ್ತು ಬರುವುದನ್ನು ನೋಡಿಕೊಂಡಿದ್ದು, ಎಂದಿನಂತೆ ಅಪ್ರಾಪ್ತ ಬಾಲಕಿ 2015 ನವೆಂಬರ್ 6 ರಂದು ಬೆಳಿಗ್ಗೆ ಶಾಲೆಗೆ ಹೋಗಿದ್ದು, ಮತ್ತೆ ಅದೇ ದಿನ ಬಾಲಕಿ ಶಾಲೆ ಮುಗಿಸಿಕೊಂಡು ಮಂಡ್ಯದ ಕಾಳಿಕಾಂಬ ದೇವಸ್ಥಾನದ ಹತ್ತಿರ ಹೋಗುತ್ತಿದ್ದಾಗ ಆರೋಪಿ ಮೋಟರ್ ಸೈಕಲ್ ನಲ್ಲಿ ಬಂದು ಬಾಲಕಿಯನ್ನು ನಿಲ್ಲಿಸಿ ತಂಗಿಗೆ ಸೈಕಲ್ ತೆಗೆದುಕೊಂಡಿದ್ದೇನೆ ಅದನ್ನು ಮನೆಗೆ ತೆಗೆದುಕೊಂಡು ಹೋಗಲು ಸಹಾಯ ಮಾಡು ಎಂದು ಹೇಳಿ ಬಾಲಕಿಯನ್ನು ಸೈಕಲನ್ನು ದೇವಸ್ಥಾನದ ಕಾಂಪೌಂಡ್ ಒಳಗೆ ನಿಲ್ಲಿಸಿ ಬಾಲಕಿಯನ್ನು ಬಲವಂತದಿಂದ ಮಂಡ್ಯದಿಂದ ಸುಮಾರು 8-10 ಕಿ. ಮೀ. ದೂರದಲ್ಲಿರುವ ಕೆರಗೋಡು ಹೋಬಳಿ ಹಂಪಾಪುರದ ಬಳಿ ಇರುವ ನೀಲಗಿರಿ ಮರದ ಫಾರೆಸ್ಟ್ ನ ನಿರ್ಜನ ಪ್ರದೇಶಕ್ಕೆ ಕೆ. ಎ.51-ವಿ-5681 ಹೀರೋ ಹೋಂಡಾ ಸ್ಪ್ಲೆಂಡರ್ ಬೈಕ್ ನಲ್ಲಿ ಕರೆದುಕೊಂಡು ಹೋಗಿ, ಕಾಡಿನೊಳಗೆ ಆರೋಪಿಯ ಬಳಿ ಇದ್ದ ಚಾಕುವನ್ನು ಬಾಲಕಿಗೆ ತೋರಿಸಿ ಹೆದರಿಸಿ ಅಪ್ರಾಪ್ತ ಬಾಲಕಿಗೆ ಲೈಂಗಿಕ ಕಿರುಕುಳವನ್ನು ನೀಡಿದ್ದನು.

ನಂತರ ಸದರಿ ಆರೋಪಿಯನ್ನು ಮಂಡ್ಯಪೂರ್ವ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿದ ಹಿಂದಿನ ಪಿ ಎಸ್ ಐ ಇವರು ದ್ರವರು ಮಂಡ್ಯ ಪೂರ್ವ ಪೊಲೀಸ್ ಠಾಣೆಯ ಮೊ. ನಂ.68/2016 ಕಲಂ 394 ರಲ್ಲಿ ಆರೋಪಿಯನ್ನು ದಸ್ತಗಿರಿ ಮಾಡಿ ವಿಚಾರಣೆಗೆ ಒಳಪಡಿಸಿದಾಗ ಸದರಿ ಆರೋಪಿ ಪತ್ತೆ ಕಾರ್ಯಕ್ಕೆ ಸಹಾಯವಾಗಿರುತ್ತದೆ.ನಂತರ ಪ್ರಕರಣವನ್ನು ಕೆರಗೋಡು ಪೊಲೀಸ್ ಠಾಣೆಗೆ ವರ್ಗಾವಣೆಯನ್ನು ನೀಡಿದ್ದು ಭಾದಸಂ 366(ಎ), 376, 511, 506 ಐಪಿಸಿ ಕಲಂ 4,7,8,12 ಪೋಕ್ಸೋ ಕಾಯ್ದೆ ಅಡಿ ಅಂದಿನ ಸರ್ಕಲ್ ಇನ್ಸ್ಪೆಕ್ಟರ್ ಸುರೇಶ್ ಕುಮಾರ್ ಬಿ.ಕೆ ರವರು ತನಿಖೆಯನ್ನು ಪೂರ್ಣಗೊಳಿಸಿ ನ್ಯಾಯಾಲಯಕ್ಕೆ ದೋಷಾರೋಪಣ ಪತ್ರವನ್ನು ಸಲ್ಲಿಸಿದರು.

ಈ ಪ್ರಕರಣವು ಸ್ಪೆಷಲ್ ಕೇಸ್ ಸಂಖ್ಯೆ: 120/2017 ರಂತೆ ( ಕೆರಗೋಡು ಪೊಲೀಸ್ ಠಾಣಾ ಮೊ. ನಂ. 184/2015) ವಿಚಾರಣೆ ನಡೆಸಿದ ಮಂಡ್ಯದ ಮಾನ್ಯ ಅಧಿಕ ಸತ್ರ ಮತ್ತು ತ್ವರಿತ ಗತಿ ಎರಡನೇ ನ್ಯಾಯಾಲಯದ ವಿಶೇಷ ನ್ಯಾಯಾಧೀಶರಾದ ನಾಗಜ್ಯೋತಿ. ಕೆ. ಎಂ. ರವರ ಮುಂದೆ ವಿಚಾರಣೆ ನಡೆದು ಆರೋಪ ಸಾಬೀತಾದ ಹಿನ್ನಲೆ 2024 ಫೆಬ್ರವರಿ 22 ರಂದು ಅಂತಿಮ ತೀರ್ಪನ್ನು ಪ್ರಕಟಿಸಿ ಆರೋಪಿ ಸಂಪತ್ ಕೆ.ಜಿ. ಈತನಿಗೆ ಭಾದಂಸಂ ಕಲಂ 366 ಅಡಿಯಲ್ಲಿನ ಅಪರಾಧಕ್ಕೆ ಮೂರು ವರ್ಷಗಳ ಕಠಿಣ ಕಾರಾಗೃಹ ಶಿಕ್ಷೆ ಮತ್ತು 30000 ರೂಗಳ ದಂಡ, ದಂಡ ಪಾವತಿಸಲು ತಪ್ಪಿದಲ್ಲಿ ಮೂರು ತಿಂಗಳ ಸಾದಾ ಶಿಕ್ಷೆಯನ್ನು ಹಾಗೂ ಭಾದಂಸಂ ಕಲಂ 376(2)(ಐ ) ಅಡಿಯಲ್ಲಿನ ಅಪರಾಧಕ್ಕೆ 12 ವರ್ಷಗಳ ಕಠಿಣ ಕಾರಾಗೃಹ ಶಿಕ್ಷೆ ಮತ್ತು 40,000 ದಂಡ, ದಂಡ ಪಾವತಿಸಲು ತಪ್ಪಿದ್ದಲ್ಲಿ ಮೂರು ತಿಂಗಳು ಸಾದಾ ಶಿಕ್ಷೆ ಹಾಗೂ ಭಾದಂಸಂ ಕಲಂ 506 ಅಡಿಯಲ್ಲಿನ ಅಪರಾಧಕ್ಕೆ ಎರಡು ವರ್ಷಗಳ ಸಾಧಕಾರಾಗೃಹ ಶಿಕ್ಷೆಯನ್ನು ವಿಧಿಸಿ ತೀರ್ಪು ನೀಡಿರುತ್ತಾರೆ. ಅಭಿಯೋಜನೆಯ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕರಾದ ಶ್ರೀ ಹೆಬ್ಬಕವಾಡಿ ನಾಗರಾಜುರವರು ವಾದ ಮಂಡಿಸಿದ್ದರು ಎಂದು ಮಂಡ್ಯ 2 ನೇ ವಿಶೇಷ ಶೀಘ್ರಗತಿ ನ್ಯಾಯಾಲಯದ ವಿಶೇಷ ಸರ್ಕಾರಿ ಅಭಿಯೋಜಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶ್ರೀಗಂಧ ಬೆಳೆಯಿಂದ ರೈತರ ಅರ್ಥಿಕ ಸದೃಢತೆ : ಜಿಲ್ಲಾಧಿಕಾರಿ

**ಚಾಮರಾಜನಗರ:** ರೈತರ ಅರ್ಥಿಕ ಸದೃಢತೆಗೆ ಶ್ರೀಗಂಧ ಪೂರಕ ಬೆಳೆಯಾಗಿದ್ದು, ಶ್ರೀಗಂದ ಬೆಳೆ ಬೆಳೆಯುವ ಕುರಿತು ಜಿಲ್ಲೆಯ ರೈತರಿಗೆ ಹೆಚ್ಚಿನ ಅರಿವು ಮೂಡಿಸಬೇಕಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಅಭಿಪ್ರಾಯಪಟ್ಟರು.

ನಗರದ ಜಿಲ್ಲಾಡಳಿತ ಭವನದ ಅವರಣದಲ್ಲಿರುವ ಉದ್ಯಾನವನದಲ್ಲಿ ತೋಟಗಾರಿಕೆ ಇಲಾಖೆ, ಅರಣ್ಯ ಇಲಾಖೆ ಹಾಗೂ ಅಖಿಲ ಕರ್ನಾಟಕ ಶ್ರೀಗಂಧ ಮತ್ತು ವನಕೃಷಿ ಬೆಳೆಗಾರರ ಸಂಘದ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಶ್ರೀಗಂಧ ಬೆಳೆಗಾರರ ಜೊತೆ ಸಮಾಲೋಚನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಖಿಲ ಕರ್ನಾಟಕ ಶ್ರೀಗಂಧ ಮತ್ತು ವನಕೃಷಿ ಬೆಳೆಗಾರರ ಸಂಘದ ಗೌರವಾಧ್ಯಕ್ಷರು ಹಾಗೂ ಪದಾಧಿಕಾರಿಗಳು ಶ್ರೀಗಂಧ ಬೆಳೆಯುವ ಬಗ್ಗೆ ರೈತರಲ್ಲಿ ಅರಿವು ಮೂಡಿಸಲು ರಾಜ್ಯದ ಪ್ರತಿ ಜಿಲ್ಲೆಯಲ್ಲಿಯೂ ಪ್ರವಾಸ ಮಾಡುತ್ತಿದ್ದು, ರೈತರ ಸಂಕಷ್ಟ ನಿವಾರಣೆಗಾಗಿ ಚಾಮರಾಜನಗರ ಜಿಲ್ಲೆಗೂ ಭೇಟಿ ನೀಡಿರುವುದು ಆರೋಗ್ಯಕಾರಿ ಬೆಳವಣಿಗೆಯಾಗಿದೆ. ಮುಂದಿನ ದಿನಗಳಲ್ಲಿ ಶ್ರೀಗಂಧ ಬೆಳೆಯುವ ರೈತರನ್ನು ಪ್ರೋತ್ಸಾಹಿಸಲು ಕ್ರಮ ವಹಿಸಲಾಗುವುದು ಎಂದರು. ಬೆಳೆಗಳಿಗೆ ಕಾಡುಪ್ರಾಣಿಗಳ ಹಾವಳಿ ಹಾಗೂ ಮಾನವ-ಪ್ರಾಣಿಗಳ ಸಂಘರ್ಷ ನಿರಂತರವಾಗಿದ್ದು, ಇದರ ಹೊರತಾಗಿಯೂ ಸಹ ರೈತರು ತಮ್ಮ ಜಮೀನುಗಳಲ್ಲಿ ಇತರೆ ಬೆಳೆಗಳ ಜೊತೆಗೆ ಶ್ರೀಗಂಧ ಬೆಳೆಯುವಂತೆ ಜಾಗೃತಿ (ಐ.ಇ.ಸಿ) ಚಟುವಟಿಕೆಗಳ ಮೂಲಕ ಉತ್ಸಾಹಿ ರೈತರನ್ನು ಪ್ರೇರೇಪಿಸಬೇಕಾಗಿದೆ. ಜಿಲ್ಲೆಯ 16 ಹೋಬಳಿ ವ್ಯಾಪ್ತಿಯ ಗ್ರಾಮಗಳಲ್ಲಿ ನಡೆಯುವ ಗ್ರಾಮಸಭೆಗಳಲ್ಲಿ ರೈತರು ಹಾಗೂ ರೈತ ಮಹಿಳೆಯರನ್ನು ಸೇರಿಸಿ ಶ್ರೀಗಂಧ ಬೆಳೆಯುವ ಕುರಿತು ಸೂಕ್ಷ್ಮ ಕಾರ್ಯಯೋಜನೆ ರೂಪಿಸಬೇಕಾದ ಅಗತ್ಯವಿದೆ ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು. ಜಿಲ್ಲೆಯಲ್ಲಿ ನರೇಗಾದಡಿಯಲ್ಲಿ ಶ್ರೀಗಂಧ ಸಸಿಗಳ ಬೇಡಿಕೆ ಎಷ್ಟಿದೆ ಎಂಬುದರ ಮಾಹಿತಿ ಕಲೆಹಾಕಬೇಕು. ವೈಯಕ್ತಿಕ ಕಾಮಗಾರಿಗಳ ಪಟ್ಟಿಯಲ್ಲಿ ಒಂದು



ವರ್ಷದ ಮೊದಲೇ ಶ್ರೀಗಂಧ ಸಸಿ ಪಡೆಯಲು ರೈತರು ನೊಂದಣಿಯಾಗಬೇಕು. ಈ ಬಗ್ಗೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಮಾಹಿತಿ ಸಂಗ್ರಹಿಸಿ ಕ್ರಿಯಾಯೋಜನೆ ತಯಾರಿಸಬೇಕು. ಈ ನಿಟ್ಟಿನಲ್ಲಿ ಎಲ್ಲಾ ಹಂತಗಳಲ್ಲಿಯೂ ಜಿಲ್ಲಾಡಳಿತ ಸಹಕಾರ ನೀಡಲಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ಅಖಿಲ ಕರ್ನಾಟಕ ಶ್ರೀಗಂಧ ಮತ್ತು ವನಕೃಷಿ ಬೆಳೆಗಾರರ ಸಂಘದ ಗೌರವಾಧ್ಯಕ್ಷರು ಹಾಗೂ ನಿವೃತ್ತ ಐ.ಎ.ಎಸ್ ಅಧಿಕಾರಿಯವರಾದ ಕೆ. ಅಮರನಾರಾಯಣ ಅವರು ಮಾತನಾಡಿ ಚಾಮರಾಜನಗರ ಮೈಸೂರಿನ ಅವಿಭಾಜ್ಯ ಅಂಗವಾಗಿದ್ದಾಗ ಜಿಲ್ಲೆಯಲ್ಲಿ ಶ್ರೀಗಂಧ ಬೆಳೆ ಹೆಚ್ಚಾಗಿತ್ತು. ಈಗ ಅದರ ಸಂಖ್ಯೆ ಕ್ಷೀಣವಾಗಿದೆ. ದೀರ್ಘಕಾಲಿಕ ಬೆಳೆಯಾಗಿರುವ ಶ್ರೀಗಂಧ ಅತ್ಯಂತ ಬೆಲೆ ಬಾಳುವ ಮರವಾಗಿದ್ದು, ಸಾವಿರ ವರ್ಷಗಳವರೆಗೂ ಬೇಡಿಕೆ ಇರುತ್ತದೆ. ರೈತರು ಶ್ರೀಗಂಧ ಬೆಳೆಯುವುದರಿಂದ ಪರಿಸರ ಅಭಿವೃದ್ಧಿಯಾಗಲಿದೆ. ಒಂದು ಶ್ರೀಗಂಧ ಮರ ಒಂದು ಸಾವಿರ ಮರಗಳನ್ನು ಹುಟ್ಟು ಹಾಕಬಲ್ಲದು. ಶ್ರೀಗಂಧ ಬೆಳೆಯಲು 2001-02ರಿಂದಲೂ ಸರ್ಕಾರ ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದರು.

ಶ್ರೀಗಂದ ಬೆಳೆಯಲು ಜನರು ಭಯ ಬೀಳುವ ಪರಿಸ್ಥಿತಿ ಎದುರಾಗಿದೆ. ಸರ್ಕಾರದ ಮಟ್ಟದಲ್ಲಿ ಪತ್ರವ್ಯವಹಾರ ನಡೆಸಿ ಶ್ರೀಗಂಧ ಬೆಳೆಯ ಉನ್ನತಿಗಾಗಿ ಭದ್ರಬುನಾದಿ ಹಾಕುತ್ತಿರುವ ಮೊದಲ ಮಹಿಳಾ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಎಂದರೆ ತಪ್ಪಾಗಲಾರದು. ಕೃಷಿ ಬೆಳೆಗಳ ಜೊತೆಗೆ ಶ್ರೀಗಂಧ ಬೆಳೆಯಲು ಅರಣ್ಯ ಇಲಾಖೆ ರೈತರಿಗೆ ಅನುಮತಿ ನೀಡಿ ನೆರವಾಗಬೇಕು. ಶ್ರೀಗಂಧವನ್ನು ತೋಟಗಾರಿಕಾ ಬೆಳೆಯಾಗಿಸಲು ಸರ್ಕಾರದಿಂದ ಅನುಮತಿ ನಿರೀಕ್ಷಿಸಲಾಗಿದೆ. ಕೃಷಿ ಅರಣ್ಯ ಯೋಜನೆ ಜಾರಿಗೊಂಡಿದ್ದರೂ ಅನೇಕ ರೈತರಿಗೆ ಶ್ರೀಗಂಧ ಬೆಳೆಯ ಬಗ್ಗೆ ಅರಿವಿನ ಕೊರತೆ ಇದೆ. ರೈತರಿಗೆ ಶ್ರೀಗಂಧ ಮರ ಕತ್ತರಿಸಲು, ಸಾಗಾಣಿಕೆ, ಶೇಖರಣೆ ಹಾಗೂ ಮಾರಾಟ ಮಾಡಲು ನಿರ್ಬಂಧವಿದೆ. ಈ ನಿರ್ಬಂಧಗಳನ್ನು ಸಡಿಲಿಸಲು ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ ಎಂದು ಅಮರನಾರಾಯಣ ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲೆಯ ವಿವಿಧ ಭಾಗಗಳಿಂದ ಹಾಗೂ ಇತರೆ ಜಿಲ್ಲೆಯಿಂದ ಆಗಮಿಸಿದ್ದ ರೈತರೊಂದಿಗೆ ಶ್ರೀಗಂಧ ಬೆಳೆ, ಕಟಾವು, ಮಾರಾಟ, ಸಂವಾದ ನಡೆಯಿತು. ರೈತರು ಶ್ರೀಗಂಧ ಬೆಳೆಯಲು ಇರುವ ಸಮಸ್ಯೆಗಳ ಕುರಿತು ಅಧಿಕಾರಿಗಳ ಗಮನಕ್ಕೆ ತಂದರು. ಅಧಿಕಾರಿಗಳು ಕೂಡ ರೈತರಿಗೆ ಹಲವು ಪರಿಹಾರೋಪಾಯಗಳನ್ನು ತಿಳಿಸಿದರು.

ಜಿಪಂ ಸಿಇಒ ಆನಂದ್‌ಪ್ರಕಾಶ್ ಮೀನಾ, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಸಾಮಾಜಿಕ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಸಭ್ಯಶ್ರೀ, ತೋಟಗಾರಿಕೆ ಇಲಾಖೆ ಉಪನಿರ್ದೇಶಕರಾದ ಶಿವಪ್ರಸಾದ್, ನಿವೃತ್ತ ಐಪಿಎಸ್ ಅಧಿಕಾರಿ ಯು.ಶರಣಪ್ಪ, ಬಸವರಾಜಪ್ಪ ಇತರರು ಸಮಾಲೋಚನೆಯಲ್ಲಿ ಉಪಸ್ಥಿತರಿದ್ದರು.

# ಮೈನಿಂಗ್ ಹಣದಲ್ಲಿ ಕುಟುಂಬಕ್ಕೆ 2 ಹಸು ವಿತರಣೆ

**ಹುಳಿಯಾರು:** ಚಿಕ್ಕನಾಯಕನಹಳ್ಳಿ ತಾಲೂಕಿಗೆ ಮೀಸಲಾಗಿರುವ ಮೈನಿಂಗ್ ಹಣದಲ್ಲಿ ಪ್ರತಿ ಕುಟುಂಬಕ್ಕೆ ಎರಡೆರಡು ಹಸುಗಳನ್ನು ವಿತರಿಸುವ ಮೂಲಕ ಆರ್ಥಿಕ ಚೈತನ್ಯ ನೀಡಲಾಗುವುದು ಎಂದು ಶಾಸಕ ಸಿ.ಬಿ.ಸುರೇಶ್‌ಬಾಬು ತಿಳಿಸಿದರು.

ಚಿಕ್ಕನಾಯಕನಹಳ್ಳಿ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ, ಗ್ರಾಮ ಪಂಚಾಯ್ತಿ ಮತ್ತು ತಿಮ್ಮನಹಳ್ಳಿ ಹಾಲು ಉತ್ಪಾದಕರ ಮಹಿಳಾ ಸಂಘದ ಸಂಯುಕ್ತ ಆಶ್ರಯದಲ್ಲಿ ಶುಕ್ರವಾರ ತಿಮ್ಮನಹಳ್ಳಿಯಲ್ಲಿ ಹಮ್ಮಿಕೊಂಡಿದ್ದ ತಾಲೂಕು ಮಟ್ಟದ ಹಾಲು ಕರೆಯುವ ಸ್ಪರ್ಧೆ ಮತ್ತು ಕರುಗಳ ಪ್ರದರ್ಶನದ ಬಹುಮಾನ ವಿತರಣಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬಡ ಕುಟುಂಬದ ನೆಮ್ಮದಿಯ ನಿರ್ವಹಣೆಗೆ ಹಾಗೂ ಬಡ ಕುಟುಂಬದ ಮಕ್ಕಳ ವಿದ್ಯಾಭ್ಯಾಸಕ್ಕೆ ಆಸರೆಯಾಗಲು ಹೈನುಗಾರಿಕೆಗೆ ಉತ್ತೇಜನ ನೀಡಬೇಕಿದೆ. ಹಾಗಾಗಿಯೇ ಪಶು ಇಲಾಖೆ ಅಧಿಕಾರಿಗಳೊಂದಿಗೆ ಮನೆಮನೆಗೆ ಹಸು ಕೊಡುವ ಬಗ್ಗೆ ಚರ್ಚಿಸಿದ್ದು ಕಾರ್ಯರೂಪಕ್ಕೆ ತರುವ ನಿಟ್ಟಿನಲ್ಲಿ ಮೈನಿಂಗ್ ಸಭೆಯಲ್ಲಿ ಈ ವಿಷಯ ಪ್ರಸ್ತಾಪಿಸಿ ಹಸು ಕೊಡಿಸುವ ಪ್ರಮಾಣಿಕ ಪ್ರಯತ್ನವನ್ನು ಮಾಡುವುದಾಗಿ ತಿಳಿಸಿದರು. ಮಳೆ ಹೆಚ್ಚಾದರೂ, ಕಡಿಮೆಯಾದರೂ ರೈತನಿಗೆ ಆರ್ಥಿಕ ಪೆಟ್ಟು ಬೀಳುತ್ತದೆ. ಇಂತಹ ಸಂಕಷ್ಟ ಕಾಲದಲ್ಲಿ ಸರ್ಕಾರ ನೆರವಿನ ಹಸ್ತ ಚಾಚಿದರೂ ಸಹ ಸರಿಯಾದ ದಾಖಲೆಗಳಿಲ್ಲದೆ ಪರಿಹಾರ ಪಡೆಯುವಲ್ಲಿ ವಿಫಲರಾಗುತ್ತಿದ್ದಾರೆ. ಈ ನಿಟ್ಟಿನಲ್ಲಿ ತಾಲೂಕಿನಲ್ಲಿ ಕಂದಾಯ ಅದಾಲತ್ ಮಾಡಿ ಒಂದೆ ದಿನ 900 ರಕ್ಕೂ ಹೆಚ್ಚು ಪೌವತಿ ಖಾತೆ ಮಾಡಿಕೊಟ್ಟಿದ್ದೇವೆ.

> **"ಹಸುಗಳನ್ನು ಗುಣಮಟ್ಟದ ಆಹಾರ ಕೊಟ್ಟು ಚೆನ್ನಾಗಿ ಸಾಕಿದಾಗ ಮಾತ್ರ ಹೆಚ್ಚು ಹಾಲು ಮತ್ತು ವರ್ಷಕ್ಕೊಂದು ಕರು ಹಾಕಲು ಸಾಧ್ಯವಾಗುತ್ತದೆ. ಬರಿ ಹಾಲಿನ ಆದಾಯಕ್ಕಿಂತ ಒಳ್ಳೆ ತಳಿಯ ಸೆಮೆನ್ ಹಾಕಿಸಿ ಒಳ್ಳೆಯ ಕರು ಹಾಕಿಸಿಕೊಂಡು ಚೆನ್ನಾಗಿ ಸಾಕಿ ಮಾರಿದರೆ ಹಾಲು ಮಾರುವುದಕ್ಕಿಂತ ಹೆಚ್ಚು ಆದಾಯ ಸಿಗುತ್ತದೆ. ಫ್ಯಾಟ್ ಬರಲು ಹಸಿರು ಮೇವು, ಹಿಂಡಿ, ಬೂಸದ ಜೊತೆಗೆ ಒಣ ಮೇವನ್ನು ಕೊಡಬೇಕು.**
>
> **| ಡಾ.ಎನ್.ಎಸ್.ಬಾಲಚಂದ್ರ,**
> **ಜಂಟಿ ನಿರ್ದೇಶಕ, ಪಶು ಇಲಾಖೆ, ಬೆಂಗಳೂರು**

ಅಲ್ಲದೆ ಬಗರ್‌ಹುಕುಂ ಮಂಜೂರು ಆದ ತಕ್ಷಣ ಫಲಾನುಭವಿಗಳ ಹೆಸರಿಗೆ ಖಾತೆ ಮಾಡಿಕೊಡಲಾಗುವುದು. ಜೊತೆಗೆ ಪ್ರತಿ ಸೋಮವಾರ ಜನ ಸಂಪರ್ಕ ಸಭೆ ನಡೆಸುತ್ತಿದ್ದು ರೈತರು ಈ ಸೌಲಭ್ಯ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು. ಗ್ರಾಪಂ ಅಧ್ಯಕ್ಷೆ ಪಾರ್ವತಮ್ಮ ಅಧ್ಯಕ್ಷತೆ ವಹಿಸಿದ್ದರು. ಪಶು ಇಲಾಖೆಯ ಜಂಟಿ ನಿರ್ದೇಶಕ ಡಾ.ಎನ್.ಎಸ್.ಬಾಲಚಂದ್ರ, ಪಶು ಇಲಾಖೆಯ ಸಹಾಯಕ ನಿರ್ದೇಶಕ ಡಾ.ರೆ.ಮಾ.ನಾಗಭೂಷಣ್, ಗ್ರಾಪಂ ಉಪಾಧ್ಯಕ್ಷ ಭೂತಯ್ಯ, ಹಾಲಿನ ಡೇರಿ ಅಧ್ಯಕ್ಷೆ ಜಯಲಕ್ಷ್ಮೀ, ಉಪಾಧ್ಯಕ್ಷೆ ದ್ರಾಕ್ಷಾಯಿಣಮ್ಮ, ವಿಶೇಷ ಆಹ್ವಾನಿತರಾಗಿ ನಿತ್ಯ 676 ಲೀ. ಹಾಲನ್ನು ಡೇರಿಗೆ ಹಾಕುತ್ತಿರುವ ಕೊರಟಗೆರೆ ತಾಲೂಕಿನ ಹೊಲತಾಳು ಗ್ರಾಮದ ಎ.ಎಸ್. ರಾಜೇಶ್ವರಿ, ಒಂದು ಹಸುವಿನಿಂದ ನಿತ್ಯ ದಾಖಲೆಯ 54 ಲೀ.ಹಾಲು ಕರೆಯುತ್ತಿರುವ ಕೆ.ಎಚ್.ಪ್ರಕಾಶ್, ಶ್ರೀಹರ್ಷ, ತಿಮ್ಮನಹಳ್ಳಿ ಡಾ.ಶಾಂತೇಶ್, ಡಾ.ಮಂಜುನಾಥ್, ಡಾ.ವಿರೂಪಾಕ್ಷ, ಡಾ.ಯಶಾದಿತ್ಯ ಇದ್ದರು.



# ಮಲೆ ಮಹದೇಶ್ವರ ಬೆಟ್ಟದಲ್ಲಿ ಮಹಾಶಿವರಾತ್ರಿ ಹಬ್ಬಕ್ಕೆ ಸಿದ್ಧತೆ

**ಚಾಮರಾಜನಗರ:** ಪ್ರಸಿದ್ದ ಯಾತ್ರಾ ಕ್ಷೇತ್ರ ಹನೂರು ತಾಲೂಕಿನ ಮಲೆ ಮಹದೇಶ್ವರ ಬೆಟ್ಟದಲ್ಲಿ ಮಾರ್ಚ್ 7ರಿಂದ ಪ್ರಾರಂಭವಾಗಲಿರುವ ಮಹಾಶಿವರಾತ್ರಿ ಹಾಗೂ ಏಪ್ರಿಲ್ 6 ರಿಂದ ಆರಂಭವಾಗಲಿರುವ ಯುಗಾದಿ ಜಾತ್ರಾ ಮಹೋತ್ಸವಕ್ಕೆ ಕೈಗೊಳ್ಳಲಾಗುತ್ತಿರುವ ಸಿದ್ದತೆಗಳ ಕುರಿತು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಹಾಗೂ ಹನೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಎಂ.ಆರ್. ಮಂಜುನಾಥ್ ಅವರು ಪರಿಶೀಲನಾ ಸಭೆ ನಡೆಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಜಾತ್ರಾ ಮಹೋತ್ಸವ ಸಂಬಂಧ ಪೂರ್ವ ಸಿದ್ದತಾ ಸಭೆ ನಡೆಸಿದ ಜಿಲ್ಲಾಧಿಕಾರಿಗಳು ಹಾಗೂ ಶಾಸಕರು ಮಹಾಶಿವರಾತ್ರಿ ಜಾತ್ರೆಗೆ ಕ್ಷೇತ್ರಕ್ಕೆ ಜಿಲ್ಲೆಯ ವಿವಿಧ ಭಾಗಗಳಿಂದ ಹೆಚ್ಚು ಸಂಖ್ಯೆಯಲ್ಲಿ ಭಕ್ತಾಧಿಗಳು ಬರುವ ಹಿನ್ನೆಲೆಯಲ್ಲಿ ಶುದ್ದ ಕುಡಿಯುವ ನೀರಿನ ಪೂರೈಕೆಗೆ ಮಾಡಲಾಗಿರುವ ವ್ಯವಸ್ಥೆಗಳ ಬಗ್ಗೆ ಪರಿಶೀಲಿಸಿದರು.

ಮಲೈ ಮಹದೇಶ್ವರ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಎ.ಇ. ರಘು ಅವರು ವಿವರ ನೀಡಿ ಕಾವೇರಿ ನೀರು ಸರಬರಾಜು ಯೋಜನೆಯಿಂದ ನಿರ್ಮಿಸಿರುವ 90 ಲಕ್ಷ ಲೀಟರ್ ಸಾಮರ್ಥ್ಯದ ಟ್ಯಾಂಕ್ ನಲ್ಲಿ ನೀರು ಶೇಖರಣೆ ಮಾಡಿ ನೀರು ಶುದ್ದೀಕರಣ ಘಟಕಕ್ಕೆ ನೀರು ಬಿಟ್ಟು ಶುದ್ದೀಕರಿಸಿ ಸರಬರಾಜು ಮಾಡಲು ಕ್ರಮವಹಿಸಲಾಗಿದೆ. 8 ಸ್ಥಳಗಳಲ್ಲಿ ಶುದ್ದ ಕುಡಿಯುವ ನೀರಿನ ಘಟಕದ ಮೂಲಕ ನೀರು ಪೂರೈಸಲಾಗುತ್ತದೆ. ಪರ ಮಾಡುವ ಸ್ಥಳದಲ್ಲಿ ಟ್ಯಾಂಕರ್ ಮೂಲಕ ಶುದ್ದ ಕುಡಿಯುವ ನೀರು ಸೌಲಭ್ಯ ಕಲ್ಪಿಸಲಾಗುತ್ತಿದೆ. ಪಾದಯಾತ್ರೆಯಲ್ಲಿ ಬರುವ ಭಕ್ತಾಧಿಗಳಿಗೂ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆ ಎಂದರು.

ತಾಳುಬೆಟ್ಟದಿಂದ ಮಹದೇಶ್ವರ ಬೆಟ್ಟದವರೆಗೆ ಭಕ್ತಾಧಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಸಮರ್ಪಕವಾಗಿ ಇರಬೇಕು. ಪ್ಲಾಸ್ಟಿಕ್ ನಿಷೇಧದ ಬಗ್ಗೆ ವ್ಯಾಪಕವಾಗಿ ಭಕ್ತಾಧಿಗಳಿಗೆ ಮನವರಿಕೆ ಮಾಡಿಕೊಡಬೇಕು ಎಂದು ಜಿಲ್ಲಾಧಿಕಾರಿಗಳು ಹಾಗೂ ಶಾಸಕರು ಸೂಚನೆ ನೀಡಿದರು.



ಪಾದಯಾತ್ರೆ ಹಾಗೂ ವಾಹನಗಳ ಮುಖಾಂತರ ಬರುವ ಭಕ್ತಾಧಿಗಳನ್ನು ತಾಳಬೆಟ್ಟದಲ್ಲಿಯೇ ಪ್ಲಾಸ್ಟಿಕ್ ಬಾಟಲ್, ಪ್ಲಾಸ್ಟಿಕ್ ವಸ್ತುಗಳನ್ನು ಕೊಂಡೊಯ್ಯುವುದನ್ನು ನಿಷೇಧಿಸಲು ಮನವರಿಕೆ ಮಾಡಿಕೊಡಲಾಗುತ್ತದೆ. ಪ್ಲಾಸ್ಟಿಕ್ ಹಾಗೂ ತ್ಯಾಜ್ಯಗಳನ್ನು ಹಾಕಲು ಕಸದ ಬುಟ್ಟಿಗಳನ್ನು ಇಡುವ ವ್ಯವಸ್ಥೆ ಮಾಡಲಾಗಿದೆ. ಪಾದಯಾತ್ರೆಗಳಿಗೆ ಹೆಚ್ಚು ಸಂಖ್ಯೆಯಲ್ಲಿ ನೀರಿನ ಟ್ಯಾಂಕ್‌ಗಳನ್ನು ಇಡಲು ಕ್ರಮವಹಿಸಲಾಗಿದೆ ಎಂದು ರಘು ಅವರು ಸಭೆಗೆ ಮಾಹಿತಿ ನೀಡಿದರು.

> **» ಜಿಲ್ಲಾಧಿಕಾರಿಗಳು ಶಾಸಕರಿಂದ ಪರಿಶೀಲನಾ ಸಭೆ**

ಬಿಸಿಲಿನ ತಾಪಮಾನ ಹೆಚ್ಚಾಗಿರುವುದರಿಂದ ಭಕ್ತಾಧಿಗಳಿಗೆ ನೆರಳಿನ ವ್ಯವಸ್ಥೆ ವ್ಯಾಪಕವಾಗಿ ಆಗಬೇಕಿದೆ. ತುರ್ತು ಸಂದರ್ಭಗಳಲ್ಲಿ ಅವಶ್ಯಕತೆ ಇರುವ ಕಡೆ ನೆರಳಿಗೆ ಸೂಕ್ತ ಕ್ರಮವಹಿಸಬೇಕು. ಅಂತರಗಂಗೆ ಸ್ನಾನಘಟ್ಟದಲ್ಲಿ ನೈರ್ಮಲ್ಯ ಕಾಪಾಡಿಕೊಳ್ಳಬೇಕು. ಖಾಯಂ ಶೌಚಾಲಯಗಳ ಜೊತೆಗೆ ತಾತ್ಕಾಲಿಕ ಶೌಚಾಲಯಗಳ ವ್ಯವಸ್ಥೆ ಮಾಡಬೇಕು. ಸ್ನಾನಕ್ಕಾಗಿ ಷವರ್‌ಗಳನ್ನು ಅಳವಡಿಸಬೇಕು. ಸ್ನಾನ ಗೃಹ ಹಾಗೂ ಶೌಚಾಲಯಗಳ ನಿರಂತರ ಸ್ವಚ್ಛತೆಗೆ ಸಿಬ್ಬಂದಿ ನಿಯೋಜಿಸಬೇಕು ಎಂದು ಶಾಸಕರು ಹಾಗೂ ಜಿಲ್ಲಾಧಿಕಾರಿಗಳು ತಿಳಿಸಿದರು.

ಜಾತ್ರಾ ಸಂದರ್ಭದಲ್ಲಿ ನಿತ್ಯ ದಾಸೋಹದ ಜೊತೆಗೆ ವಿಶೇಷ ದಾಸೋಹ ಇರಬೇಕು. ಇದಕ್ಕೆ ಪೂರಕವಾದ ಎಲ್ಲಾ ವ್ಯವಸ್ಥೆಗಳನ್ನು ಪೂರ್ಣಗೊಳಿಸಬೇಕು. ಕೆ.ಎಸ್.ಆರ್.ಟಿಸಿ ವತಿಯಿಂದ ವಿವಿಧ ಭಾಗಗಳಿಂದ ಈ ಬಾರಿ ಹೆಚ್ಚು ಸಂಖ್ಯೆಯಲ್ಲಿ ಬಸ್ಸುಗಳ ಕಾರ್ಯಾಚರಣೆಯಾಗಬೇಕು. ತಮಿಳುನಾಡಿನಿಂದಲೂ ಕ್ಷೇತ್ರಕ್ಕೆ ಬಸ್ಸುಗಳ ಸಂಖ್ಯೆಯಲ್ಲಿ ಹೆಚ್ಚಳವಾಗಬೇಕು ಎಂದು ಸೂಚಿಸಲಾಯಿತು.

ವಾಹನಗಳಿಗೆ ಪಾರ್ಕಿಂಗ್ ಸೌಲಭ್ಯ, ಜಾತ್ರಾ ಆವರಣದಲ್ಲಿ ಸ್ವಚ್ಚತೆ, ವಿದ್ಯುತ್ ದೀಪಾಲಂಕಾರ, ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆ, ನಿರಂತರ ವಿದ್ಯುತ್ ಪೂರೈಕೆ, ಭದ್ರತಾ ವ್ಯವಸ್ಥೆ ಸೇರಿದಂತೆ ಇನ್ನಿತರ ಅಗತ್ಯ ವ್ಯವಸ್ಥೆಗಳ ಸಿದ್ದತೆಯನ್ನು ಶಾಸಕರು ಹಾಗೂ ಜಿಲ್ಲಾಧಿಕಾರಿಗಳು ವಿವರವಾಗಿ ಸಭೆಯಲ್ಲಿ ಪರಿಶೀಲಿಸಿದರು.

ಸಾಲೂರು ಶ್ರೀಗಳಾದ ಶಾಂತಮಲ್ಲಿಕಾರ್ಜುನ ಸ್ವಾಮಿಜೀ ಅವರು ಜಾತ್ರಾ ಸಂಬಂಧ ಅಗತ್ಯ ಸೂಚನೆ ಹಾಗೂ ಸಲಹೆ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಆನಂದ್‌ಪ್ರಕಾಶ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಮಲೈ ಮಹದೇಶ್ವರಸ್ವಾಮಿ ಕ್ಷೇತ್ರಾಭಿವೃದ್ದಿ ಪ್ರಾಧಿಕಾರದ ಉಪ ಕಾರ್ಯದರ್ಶಿ ಚಂದ್ರಶೇಖರ್, ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಎಂಜಿನಿಯರ್ ಮಹೇಶ್, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕಾಧಿಕಾರಿ ಉಮೇಶ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಗಡಿ ಭಾಗಗಳಲ್ಲಿ ನೀತಿಸಂಹಿತೆ ಪಾಲನೆ ಸಂಬಂಧ ಸಭೆ

**ಚಾಮರಾಜನಗರ:** ಬರಲಿರುವ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಅಂತರರಾಜ್ಯ ಗಡಿ ಜಿಲ್ಲೆಗಳ ಭಾಗಗಳಲ್ಲಿ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡುವ ಕುರಿತು ಇಂದು ಚಾಮರಾಜನಗರ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಹಾಗೂ ತಮಿಳುನಾಡು ರಾಜ್ಯದ ಧರ್ಮಪುರಿ ಜಿಲ್ಲಾ ಕಲೆಕ್ಟರ್ ಕೆ. ಶಾಂತಿ ಅವರ ಸಮ್ಮುಖದಲ್ಲಿ ವರ್ಚುವೆಲ್ ಮೂಲಕ ಸಭೆ ನಡೆಯಿತು.

ಲೋಕಸಭಾ ಸಾರ್ವತ್ರಿಕ ಚುನಾವಣೆ ಹಿನ್ನೆಲೆಯಲ್ಲಿ ಮಾದರಿ ನೀತಿಸಂಹಿತೆಯನ್ನು ಅನುಸರಿಸುವ ಸಂದರ್ಭದಲ್ಲಿ ಯಾವುದೇ ಉಲ್ಲಂಘನೆಗೆ ಅವಕಾಶವಾಗದಂತೆ ಉಭಯ ಜಿಲ್ಲೆಗಳ ಅಧಿಕಾರಿಗಳು ನಿರ್ವಹಿಸಬೇಕಿರುವ ಕರ್ತವ್ಯಗಳ ಕುರಿತು ವಿವರವಾಗಿ ಸಮಾಲೋಚಿಸಲಾಯಿತು.

ಗಡಿ ಭಾಗಗಳಲ್ಲಿ ಕಟ್ಟೆಚ್ಚರ ವಹಿಸಿ ಚುನಾವಣಾ ಅಕ್ರಮಗಳಿಗೆ ಅವಕಾಶವಾಗದಂತೆ ನೋಡಿಕೊಳ್ಳಬೇಕು. ಅಕ್ರಮ ಮದ್ಯ, ದಾಖಲೆ ಇಲ್ಲದ ಹಣ, ಉಡುಗೊರೆ, ವಸ್ತುಗಳ ಸಾಗಾಣಿಕೆ ಮೇಲೆ ಹೆಚ್ಚಿನ ನಿಗಾ ಇರಬೇಕು. ಅಕ್ರಮಗಳು ಎಲ್ಲಿಯೇ ಕಂಡು ಬಂದರೂ ತ್ವರಿತವಾಗಿ ಕ್ರಮ ವಹಿಸಬೇಕೆಂಬ ಬಗ್ಗೆ ಸೂಚನೆ ನೀಡಲಾಯಿತು.

ಗಡಿಭಾಗಗಳ ಚೆಕ್‌ಪೋಸ್ಟ್‌ಗಳಲ್ಲಿ ನಿರಂತರ ತಪಾಸಣಾ ಕಾರ್ಯಾಚರಣೆಯಾಗಬೇಕು. ವಾಹನಗಳ ತಪಾಸಣೆ ಆಗಬೇಕು. ಪೊಲೀಸ್, ಅಬಕಾರಿ, ಕಂದಾಯ ಸೇರಿದಂತೆ ವಿವಿಧ ಇಲಾಖೆಗಳ ಉಭಯ ರಾಜ್ಯಗಳ ಅಧಿಕಾರಿಗಳು ಸಮನ್ವಯದಿಂದ ಯಾವುದೇ ಅಕ್ರಮಕ್ಕೆ ಆಸ್ಪದವಾಗದಂತೆ ನೋಡಿಕೊಳ್ಳಬೇಕೆಂದು ತಿಳಿಸಲಾಯಿತು.

ಗಡಿ ಗ್ರಾಮಗಳಲ್ಲಿ ನೀತಿಸಂಹಿತೆ ಕಟ್ಟುನಿಟ್ಟಾಗಿ ಪಾಲನೆಯಾಗಬೇಕು. ಯಾವುದೇ ಚುನಾವಣಾ ಅಕ್ರಮ ನಡೆಯದಂತೆ ಕಣ್ಗಾವಲು ಇರಬೇಕು. ಮುಕ್ತ, ಪಾರದರ್ಶಕ ಹಾಗೂ ನ್ಯಾಯಸಮ್ಮತ ಚುನಾವಣೆಗೆ ಪೂರಕವಾಗಿರುವ ಎಲ್ಲಾ ಕ್ರಮಗಳನ್ನು ಕೈಗೊಳ್ಳುವ ನಿಟ್ಟಿನಲ್ಲಿ ಉಭಯ ಜಿಲ್ಲಾಧಿಕಾರಿಗಳು ವಿವರವಾಗಿ ಚರ್ಚಿಸಿದರು.

ಚಾಮರಾಜನಗರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಧರ್ಮಪುರಿ ಜಿಲ್ಲೆಯ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸ್ಟೀಫನ್ ಜೇಸುಬಾಥಮ್, ಚಾಮರಾಜನಗರ ಜಿಲ್ಲೆಯ ಅಬಕಾರಿ ಉಪ ಆಯುಕ್ತರಾದ ನಾಗಶಯನ, ಪ್ರಾದೇಶಿಕ ಸಾರಿಗೆ ಅಧಿಕಾರಿ ಗಾಯತ್ರಿ ಸೇರಿದಂತೆ ಉಭಯ ಜಿಲ್ಲೆಗಳ ಅಬಕಾರಿ ಪೊಲೀಸ್, ಕಂದಾಯ ಇತರೆ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಇದ್ದರು.



**ಹುಳಿಯಾರು ಹೋಬಳಿಯ ಹೊಯ್ಸಳಕಟ್ಟೆ ವಲಯದ ಮೇಲನಹಳ್ಳಿ ಗ್ರಾಮದ ದುರ್ಗಾಪರಮೇಶ್ವರಿ ದೇವಸ್ಥಾನದ ಜೀರ್ಣೋದ್ಧಾರಕ್ಕೆ ಶ್ರೀ ಕ್ಷೇತ್ರ ಧರ್ಮಸ್ಥಳದಿಂದ 1,50,000 ರೂ ಡಿಡಿಯನ್ನು ಜಿಲ್ಲಾ ನಿರ್ದೇಶಕರಾದ ದಿನೇಶ್ ಅವರು ಕಮಿಟಿಯ ಅಧ್ಯಕ್ಷರಾದ ರಾಮಯ್ಯನವರಿಗೆ ವಿತರಣೆ ಮಾಡಿದರು. ಈ ಸಂದರ್ಭದಲ್ಲಿ ಯೋಜನಾಧಿಕಾರಿಗಳಾದ ರಾಮಚಂದ್ರ, ಗ್ರಾಪಂ ಸದಸ್ಯರಾದ ಮಂಜುಳ, ಶಿಕ್ಷಕ ರಾಜಣ್ಣ, ವಲಯದ ಮೇಲ್ವಿಚಾರಕರಾದ ನರಸಿಂಹರಾಜು, ಸೇವಾಪ್ರತಿನಿಧಿಯರಾದ ಇಂದಿರಾ ಹಾಗು ಕಮಿಟಿಯ ಪದಾಧಿಕಾರಿಗಳು, ಊರಿನ ಗ್ರಾಮಸ್ಥರು, ಸಂಘದ ಸದಸ್ಯರು ಉಪಸ್ಥಿತರಿದ್ದರು.**

## ಅಳಿಯನಿಗೆ ಟಿಕೆಟ್ ಕೊಡಿಸಲು ಸಂಸದರ ಯತ್ನ: ಟೀಕೆ

**ಚಾಮರಾಜನಗರ:** ಸಂಸದ ವಿ.ಶ್ರೀನಿವಾಸ ಪ್ರಸಾದ್ ಅವರಿಗಾಗಿ ಆಯಸ್ಸು, ಹಣ ಕಳೆದುಕೊಂಡಿದ್ದೇವೆ. ಅವರನ್ನು ಬೆಂಬಲಿಸಿದ ಅನೇಕ ದಲಿತ ನಾಯಕರು ಹತಾಶರಾಗಿದ್ದಾರೆ. ಲೋಕಸಭಾ ಚುನಾವಣೆಯಲ್ಲಿ ಚಾಮರಾಜನಗರ ಕ್ಷೇತ್ರದಿಂದ ಅವರು ಸ್ಥಳೀಯ ಆಕಾಂಕ್ಷಿಗಳನ್ನು ಬೆಂಬಲಿಸಬೇಕು ಎಂದು ಬಿಜೆಪಿ ಮುಖಂಡ, ಟಿಕೆಟ್ ಆಕಾಂಕ್ಷಿ ವೆಂಕಟರಮಣಸ್ವಾಮಿ (ಪಾಪು) ಗುರುವಾರ ಒತ್ತಾಯಿಸಿದರು. ನಗರದಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಶ್ರೀನಿವಾಸ ಪ್ರಸಾದ್ ಅವರು ತಮ್ಮ ಅಳಿಯ ಡಾ.ಮೋಹನ್ ಅವರಿಗೆ ಟಿಕೆಟ್ ಕೊಡಿಸಲು ಪ್ರಯತ್ನ ನಡೆಸುತ್ತಿದ್ದು, ಅದನ್ನು ಕೈಬಿಡಬೇಕು ಎಂದು ಹೇಳಿದರು. ವೈದ್ಯ ಹುದ್ದೆಯಲ್ಲಿದ್ದ ಅಳಿಯ ಡಾ.ಮೋಹನ್ ಅವರನ್ನು, ತಮ್ಮ ಸ್ವಾರ್ಥಕ್ಕಾಗಿ ಹುದ್ದೆಗೆ ರಾಜೀನಾಮೆ ಕೊಡಿಸಿ ಚುನಾವಣೆಗೆ ನಿಲ್ಲಿಸಲು ಕರೆ ತರುವ ಅನಿವಾರ್ಯತೆ ಸಂಸದರಿಗೆ ಇರಲಿಲ್ಲ. ಕ್ಷೇತ್ರದಲ್ಲಿ ತುಂಬಾ ಜನ ದಲಿತ ಮುಖಂಡರಿದ್ದು, ಆಕಾಂಕ್ಷಿಗಳೂ ಆಗಿದ್ದಾರೆ. ಅವರನ್ನೇ ಬೆಂಬಲಿಸಬಹುದಿತ್ತು ಎಂದರು. ಕುಟುಂಬ ರಾಜಕಾರಣದ ಬಗ್ಗೆ ಶ್ರೀನಿವಾಸಪ್ರಸಾದ್ ಅವರು ಈ ಹಿಂದೆ ಎಚ್.ಡಿ.ದೇವೇಗೌಡ, ಯಡಿಯೂರಪ್ಪ ಕುಟುಂಬಗಳ ವಿರುದ್ಧ ಮಾತನಾಡುತ್ತಿದ್ದರು. ಆದರೆ, ಈಗ ಅವರೇ ಕುಟುಂಬ ರಾಜಕಾರಣಕ್ಕೆ ಅಂಟಿಕೊಂಡಿರುವುದು ವಿಪರ್ಯಾಸ ಎಂದು ವೆಂಕಟರಮಣಸ್ವಾಮಿ ದೂರಿದರು. ಸಂಸದರ ಮೇಲೆ ನಮಗೆ ಅಪಾರ ಗೌರವವಿದೆ. ಕೂಡಲೇ ಅವರು ತಮ್ಮ ಅಳಿಯನಿಗೆ ಟಿಕೆಟ್ ಕೊಡಿಸುವ ಯತ್ನ ಬಿಟ್ಟು, ಸ್ಥಳೀಯ ಆಕಾಂಕ್ಷಿಗಳನ್ನು ಬೆಂಬಲಿಸಬೇಕು. ವರಿಷ್ಠರು ಕೂಡ ಸ್ಥಳೀಯ ಆಕಾಂಕ್ಷಿಗಳಿಗೆ ಟಿಕೆಟ್ ನೀಡಬೇಕು ಎಂದು ಒತ್ತಾಯಿಸಿದರು. ಬಿಜೆಪಿ ಮುಖಂಡರಾದ ಮುತ್ತಿಗೆ ಮೂರ್ತಿ, ಭಾನುಪ್ರಕಾಶ್ ಇದ್ದರು.



## ಮಾನಸ ಗಂಗೋತ್ರಿ, ಶಾಲೆಯ ಪ್ರವೇಶ ಪರೀಕ್ಷೆ

**ಮಂಡ್ಯ:** ವಿಜಯಪುರ ಜಿಲ್ಲೆಯ ಮಾನಸ ಗಂಗೋತ್ರಿ, ಶಾಲೆಯ 2024-25ನೇ ಸಾಲಿಗೆ ಶೈಕ್ಷಣಿಕ ಪ್ರವೇಶಾತಿ ಪಡೆಯಲು ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ 5ನೇ ತರಗತಿ ಕನ್ನಡ ಹಾಗೂ ಇಂಗ್ಲೀಷ್ ಮಾಧ್ಯಮ ಮತ್ತು ಪ್ರಥಮ ಪಿ.ಯು.ಸಿ ಪ್ರವೇಶ ಪರೀಕ್ಷೆಯನ್ನು ಮಾರ್ಚ್ 3 ಮತ್ತು ಮೇ 19 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಪ್ರವೇಶಾತಿ ಪರೀಕ್ಷೆ ನಡೆಯಲಿದೆ. ಅರ್ಹ ಅಭ್ಯರ್ಥಿಗಳು ಆಯಾ ತಾಲ್ಲೂಕಿನ ಸಹಾಯಕ ನಿರ್ದೇಶಕರ ಕಛೇರಿ, ಸಮಾಜ ಕಲ್ಯಾಣ ಇಲಾಖೆ ಇಲ್ಲಿ ಅರ್ಜಿ ನಮೂನೆಯನ್ನು ಪಡೆದು ಅರ್ಜಿಯನ್ನು ಭರ್ತಿ ಮಾಡಿ ಸದರಿಯವರ ಕಛೇರಿಯಲ್ಲಿಯೇ ಸಲ್ಲಿಸುವುದು, ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಮಂಡ್ಯ, ಹಾಗೂ ಸಂಬಂಧಿಸಿದ ತಾಲ್ಲೂಕುಗಳ ಸಹಾಯಕ ನಿರ್ದೇಶಕರನ್ನು ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

## ನಾಳೆಯಿಂದ ಪಲ್ ಪೋಲಿಯೊ ಲಸಿಕೆ ಕಾರ್ಯಕ್ರಮ

**ಮಂಡ್ಯ:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ವಿವಿಧ ಇಲಾಖೆ, ಸಂಘ ಸಂಸ್ಥೆಗಳ ಸಹಯೋಗದಲ್ಲಿ 5 ವರ್ಷದೊಳಗಿನ ಮಕ್ಕಳಿಗೆ ಪಲ್ಸ್ ಪೋಲಿಯೋ ಹನಿ ಹಾಕುವ ಕಾರ್ಯಕ್ರಮವನ್ನು ಜಿಲ್ಲೆಯಾದ್ಯಂತ ಮಾರ್ಚ್ 3 ರಿಂದ ನಡೆಯಲಿದೆ. ಮಂಡ್ಯ ಜಿಲ್ಲೆಯ ಪಲ್ಸ್ ಪೋಲಿಯೊ ಉದ್ಘಾಟನಾ ಕಾರ್ಯಕ್ರಮವನ್ನು ಮಾರ್ಚ್ 3 ರ ಭಾನುವಾರ ಬೆಳಿಗ್ಗೆ 9.00 ಗಂಟೆಗೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣ, ಹಾಲಹಳ್ಳಿ ಸ್ಲಂ ಬೋರ್ಡ್, ಯತ್ತಗದಹಳ್ಳಿ ರಸ್ತೆ, ಮಂಡ್ಯ ಇಲ್ಲಿ ಏರ್ಪಡಿಸಲಾಗಿದೆ. ಸಾರ್ವಜನಿಕರು ತಮ್ಮ 5 ವರ್ಷದ ಒಳಗಿನ ಮಕ್ಕಳಿಗೆ ತಪ್ಪದೇ ಪೋಲಿಯೋ ಲಸಿಕೆ ಹಾಕಿಸಬೇಕು. ಮಗುವಿನ ಶಾಶ್ವತ ಅಂಗವೈಕಲ್ಯ ತಡೆಯಲು ಎರಡು ಹನಿ ಪಲ್ಸ್ ಪೋಲಿಯೋ ಅತ್ಯಗತ್ಯ ಎಂದು ಜಿಲ್ಲಾ ಆರೋಗ್ಯ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶ

**ರಾಮನಗರ:** ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ವತಿಯಿಂದ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶವನ್ನು ಇದೇ ಮಾ. 2ರ ಶನಿವಾರ ಮಧ್ಯಾಹ್ನ 2 ಗಂಟೆಗೆ ಚನ್ನಪಟ್ಟಣ ಟೌನಿನ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಮೈದಾನದಲ್ಲಿ ಆಯೋಜಿಸಲಾಗಿದೆ. ಉಪ ಮುಖ್ಯಮಂತ್ರಿಗಳು, ಜಲ ಸಂಪನ್ಮೂಲ ಸಚಿವರು ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಕೆ. ಶಿವಕುಮಾರ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಸಾರಿಗೆ ಮತ್ತು ಮುಜರಾಯಿ ಹಾಗೂ ರಾಮನಗರ ಜಿಲ್ಲಾ ಉಸ್ತುವಾರಿ ಸಚಿವರಾದ ರಾಮಲಿಂಗಾರೆಡ್ಡಿ ಹಾಗೂ ಗೃಹ ಸಚಿವರು ಹಾಗೂ ತುಮಕೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಜಿ. ಪರಮೇಶ್ವರ್ ಅವರು ಘನ ಉಪಸ್ಥಿತಿ ವಹಿಸುವರು. ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಮಾಜಿ ಮುಖ್ಯಮಂತ್ರಿಗಳಾದ ಎಚ್.ಡಿ. ಕುಮಾರಸ್ವಾಮಿ ಅವರು ಅಧ್ಯಕ್ಷತೆ ವಹಿಸುವರು.

## ಅಂಚೆ ಮತದಾನಕ್ಕೆ ಅವಕಾಶ

**ಬೆಂಗಳೂರು:** ಅಂಚೆ ಮೂಲಕ ಮತದಾನ ಮಾಡಲು ಇಚ್ಛಿಸುವ ಮಾಧ್ಯಮ ಮಾನ್ಯತಾ ಕಾರ್ಡ್ ಹೊಂದಿರುವ ಮಾಧ್ಯಮ ಪ್ರತಿನಿಧಿಗಳು ಚುನಾವಣಾ ಗುರುತಿನ ಚೀಟಿ ಪ್ರತಿ, ಮಾಧ್ಯಮ ಮಾನ್ಯತಾ ಕಾರ್ಡ್ ಪ್ರತಿ ಹಾಗೂ ಆಧಾರ್ ಕಾರ್ಡ್ ಪ್ರತಿಯನ್ನು ಇಂದು ಸಂಜೆ 5 ಗಂಟೆಯೊಳಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸುವಂತೆ ಕೋರಿದೆ.

## ಶ್ರೀಮುರುಘರಾಜೇಂದ್ರ ವಿದ್ಯಾಸಂಸ್ಥೆಯಲ್ಲಿ 2 ದಿನಗಳ ಜಿಲ್ಲಾ ಮಟ್ಟದ ಮಕ್ಕಳ ನಾಯಕತ್ವ ಶಿಬಿರ

# ವಿದ್ಯಾರ್ಥಿಗಳು ಸೇವಾ ಮನೋಭಾವನೆ ಬೆಳೆಸಿಕೊಳ್ಳಿ : ವೆಂಕಟಪ್ಪನಾಗಪ್ಪಶೆಟ್ಟಿ

**ಚಾಮರಾಜನಗರ:** ವಿದ್ಯಾರ್ಥಿಗಳು ತಮ್ಮ ವಿದ್ಯಾರ್ಥಿ ಜೀವನದಲ್ಲಿ ಸೇವಾ ಮನೋಭಾವನೆಯನ್ನು ಬೆಳೆಸಿಕೊಳ್ಳಿ ಎಂದು ಭಾರತಸೇವಾ ದಳದ ಜಿಲ್ಲಾಧ್ಯಕ್ಷ ವೆಂಕಟಪ್ಪನಾಗಪ್ಪಶೆಟ್ಟಿ ಅವರು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಮರಿಯಾಲ ಗ್ರಾಮದಲ್ಲಿರುವ ಶ್ರೀ ಮುರುಘರಾಜೇಂದ್ರ ವಿದ್ಯಾಸಂಸ್ಥೆಯಲ್ಲಿ ಭಾರತ ಸೇವಾದಳ ಜಿಲ್ಲಾ ಸಮಿತಿ ಚಾಮರಾಜನಗರ, ಶಾಲಾ ಶಿಕ್ಷಣ ಇಲಾಖೆ, ಶ್ರೀ ಮುರುಘರಾಜೇಂದ್ರ ವಿದ್ಯಾಸಂಸ್ಥೆ ಇವರ ಸಹಯೋಗದಲ್ಲಿ ಶುಕ್ರವಾರ ಆಯೋಜಿಸಲಾಗಿದ್ದ 2 ದಿನಗಳ ಜಿಲ್ಲಾ ಮಟ್ಟದ ಮಕ್ಕಳ ನಾಯಕತ್ವ ಶಿಬಿರದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಭಾರತ ಸೇವಾದಳದ ಮುಖ್ಯ ಉದ್ದೇಶ ಸೇವೆಗಾಗಿ ಬಾಳು ಎಂಬುದಾಗಿದೆ. ವಿದ್ಯಾರ್ಥಿಗಳು ಈಗಿನಿಂದಲೇ ಸೇವಾ ಮನೋಭಾವನೆಯನ್ನು ಬೆಳೆಸಿಕೊಳ್ಳಬೇಕು. ವಿದ್ಯಾರ್ಥಿಗಳು ಮುಂದೆ ನೀವು ಯಾವುದೇ ಕ್ಷೇತ್ರವನ್ನು ಆಯ್ಕೆಮಾಡಿಕೊಳ್ಳಿ, ಆ ಕ್ಷೇತ್ರದಲ್ಲಿ ನಿಮ್ಮ ಕೈಲಾದಷ್ಟು ಸಹಾಯ ಮಾಡಿ. ಈ ಸೇವಾ ಮನೋಭಾವನೆ ಮುಂದೊಂದು ದಿನ ಹೆಮ್ಮರವಾಗಿ ಬೆಳೆದು ನಿಮ್ಮ ಭವಿಷ್ಯಕ್ಕೆ ಸಾಕಷ್ಟು ಅನುಕೂಲವಾಗುತ್ತದೆ ಎಂದರು.

ಭಾರತ ಸೇವಾದಳದ ಧ್ಯೇಯೋದ್ದೇಶವನ್ನು ಈಡೇರಿಸಲು ನಿಮ್ಮೆಲ್ಲರ ಸಂಪೂರ್ಣ ಸಹಕಾರ ಅತ್ಯಗತ್ಯ. ಶಿಬಿರದಲ್ಲಿ ಮಕ್ಕಳು ಸಂಪೂರ್ಣವಾಗಿ ಭಾಗವಹಿಸುವ ಮೂಲಕ ನಿಮ್ಮಲ್ಲಿರುವ ನಾಯಕತ್ವ, ಪ್ರತಿಭೆಗಳನ್ನು ಹೊರ ಹಾಕಿ ಪ್ರಶಸ್ತಿಗಳನ್ನು ಪಡೆಯುವ ಮೂಲಕ ಶಿಬಿರವನ್ನು ಯಶಸ್ವಿಗೊಳಿಸಬೇಕು ಎಂದು ತಿಳಿಸಿದರು.

ಭಾರತ ಸೇವಾದಳದ ಕೋಶಾಧ್ಯಕ್ಷ ವಿ.ಶ್ರೀನಿವಾಸ ಪ್ರಸಾದ್ ಅವರು ಮಾತನಾಡಿ, ವಿದ್ಯಾರ್ಥಿಗಳಲ್ಲಿ ಶಿಸ್ತು, ಸಂಯಮ, ಸಮಯ ಪಾಲನೆ, ಛಲ, ಹಠ ಇವೆಲ್ಲವೂ ಕೂಡಾ ಇದ್ದರೆ ನಾಯಕತ್ವದ ಗುಣಗಳು. ಇವೆಲ್ಲವರನ್ನು ಬೆಳೆಸಿಕೊಳ್ಳುವ



ಮೂಲಕ ತಾವು ಉತ್ತಮ ನಾಯಕರಾಗಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಿ ಎಂದರು.

ಶಾಖಾ ನಾಯಕರು, ಸಂಪನ್ಮೂಲ ವ್ಯಕ್ತಿಗಳು ನಿಮಗೆ ಸಾಕಷ್ಟು ಮಾಹಿತಿಗಳನ್ನು ನೀಡುತ್ತಾರೆ. ನೀವು ಅದನ್ನು ಪಡೆಯುವ ಮೂಲಕ ನಾಯಕತ್ವದ ಗುಣಗಳನ್ನು ಬೆಳೆಸಿಕೊಳ್ಳುವುದರೊಂದಿಗೆ ದೇಶ ಪ್ರೇಮವನ್ನು ಹೆಚ್ಚಾಗಿ ಬೆಳೆಸಿಕೊಳ್ಳುವ ಮೂಲಕ ಉತ್ತಮ ನಾಯಕರಾಗಿ ದೇಶಕ್ಕೆ ಮಾದರಿಯಾಗಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮಕ್ಕೂ ಮೊದಲೇ ಧ್ವಜವಂದನೆ ಕಾರ್ಯಕ್ರಮವನ್ನು ಭಾರತ ಸೇವಾದಳದ ಕಾರ್ಯದರ್ಶಿ ವಿ.ಮಹದೇವಯ್ಯ ನೆರವೇರಿಸಿ, ಶಿಬಿರದಲ್ಲಿ ನಡೆಯುವ ಕಾರ್ಯಕ್ರಮದ ಬಗ್ಗೆ ವಿವರಣೆ ನೀಡಿದರು.

ಮುರುಘ ರಾಜೇಂದ್ರ ವಿದ್ಯಾಸಂಸ್ಥೆಯ ಆಡಳಿತಾಧಿಕಾರಿ ಆರ್.ಡಿ.ನಾಗರಾಜು ಅವರು ಮಾತನಾಡಿ, 1923ರಲ್ಲಿ ಪ್ರಾರಂಭವಾದ ಹಿಂದೂಸ್ಥಾನಿ ಸೇವಾದಳ ಮುಂದೆ ಭಾರತ ಸೇವಾದಳ ಎಂದು ನಾಮಕರಣವಾಯಿತು. ಸೇವಾದಳ ಗುಂಪಲ್ಲ, ಸಮೂಹವಲ್ಲ, ಇದು ಸೈನಿಕ ದಳ. ಸ್ವಾತಂತ್ರ?ಯದ ಸಂದರ್ಭದಲ್ಲಿ ಸೇವಾದಳ ಬ್ರಿಟೀಷರ ಕೈಲಿ ಸಾಕಷ್ಟು ಹೊಡೆತ ತಿಂದು, ಕೈಕಾಲು ಮುರಿಸಿಕೊಂಡು, ಎಷ್ಟೇ ನೋವಾದರೂ ಸಹ ಅವರು ಮುನ್ನಡೆದು ಭಾರತಕ್ಕೆ ಸ್ವಾತಂತ್ರ?ಯ ತಂದು ಕೊಡುವಲ್ಲಿ ಹೆಚ್ಚಿನ ಪ್ರಾಮುಖ್ಯತೆ ವಹಿಸಿದೆ. ಅಂದಿನಿಂದಲೂ ಜೀವ ಉಳಿಸಿಕೊಂಡು ಬಂದಿರುವ ಸೇವಾದಳ ಉತ್ತಮವಾಗಿ ಬೆಳೆದು, ಭಾರತದ ಬೆನ್ನೆಲುಬಾಗಬೇಕು. ರಾಷ್ಟ್ರ ಭಕ್ತಿಯನ್ನು ಬೆಳೆಸಿಕೊಳ್ಳಬೇಕು ಎಂದರು.

ಕೇಂದ್ರ ಸಮಿತಿ ಸದಸ್ಯರಾದ ಲಿಂಗರಾಜು ಎಂ.ಬಿ. ರವರು ಗಿಡಕ್ಕೆ ನೀರೆಯುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಜಿಲ್ಲಾ ಸಂಘಟಕರಾದ ಅರುಣ್ .ಈ ಪ್ರಾಸ್ತಾವಿಕ ನುಡಿಗಳನ್ನಾಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಉಪಾಧ್ಯಕ್ಷ ಮಹೇಶ್ ಜಿ.ಬಳಿಗಾರ್, ಸೇವಾದಳದ ತಾಲೂಕು ಅಧಿನಾಯಕ ನಾಗಣ್ಣ, ಮುರುಘರಾಜೇಂದ್ರ ವಿದ್ಯಾಸಂಸ್ಥೆಯ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಮಹದೇವಸ್ವಾಮಿ, ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಮಂಜುನಾಥ್. ಎಸ್., ಭಾರತ ಸೇವಾದಳದ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಜೋಸೆಫ್ ಎನ್., ಎಂ.ಆರ್.ಸ್ವಾಮಿ, ಶಾಖಾ ನಾಯಕಿಯರಾದ ಶ್ರೀಮತಿ ಜ್ಯೋತಿ ಕೆ.ಬಿ., ಅನ್ನಪೂರ್ಣಮ್ಮ, ಮಹೇಶ್ವರಿ, ಮಂಗಳಮ್ಮ, ರ?ಗುಣಂ, ಪುಟ್ಟಮಾದಮ್ಮ, ಪ್ರಮಿಳಾ, ದೀಪಿಕಾ, ಶಾಖಾ ನಾಯಕ ನಾಗರಾಜೇಗೌಡ, ಗುಂಡ್ಲುಪೇಟೆ ಅಧಿನಾಯಕ ಸಿದ್ದಶೆಟ್ಟಿ ಮತ್ತಿತರರಿದ್ದರು.

# ಸಂಜೆ ಟಿಪ್ಸ್




## ಸ್ಟಾರ್ ಸುವರ್ಣದಲ್ಲಿ ಬರ್ತಿದೆ ಕನಸುಗಳನ್ನು ಹೊತ್ತ ವರಲಕ್ಷ್ಮಿಯ ಕಥೆ ಲಕ್ಷ್ಮಿ ಟಿಫನ್ ರೂಮ್

ಹೊಸ ಅಲೆಯ ವಿನೂತನ ಧಾರಾವಾಹಿಗಳನ್ನು ಕನ್ನಡಿಗರಿಗೆ ನೀಡುವಲ್ಲಿ ದಿಟ್ಟ ಹೆಜ್ಜೆ ಇಡುತ್ತಿರುವ ಸ್ಟಾರ್ ಸುವರ್ಣ ವಾಹಿನಿಯು ಇದೀಗ ಲಕ್ಷ್ಮಿ ಟಿಫನ್ ರೂಮ್ ಎಂಬ ಹೊಸ ಧಾರಾವಾಹಿಯನ್ನು ಪ್ರಸಾರ ಮಾಡಲು ಸಜ್ಜಾಗಿದೆ.

ಕಥಾ ನಾಯಕಿ ವರಲಕ್ಷ್ಮಿ ನೇರ ನುಡಿಯನ್ನು ಹೊಂದಿರೋಳು, ಎಂತಹ ಸಂದರ್ಭದಲ್ಲೂ ಈಕೆ ನ್ಯಾಯದ ಪರ ನಿಲ್ಲುವ ಗಟ್ಟಿಗಿತ್ತಿ. ಐಎಎಸ್ ಮಾಡಬೇಕೆಂಬ ಕನಸನ್ನು ಕಂಡಿರುತ್ತಾಳೆ. ಆದರೆ ಪರಿಸ್ಥಿತಿಯ ಕೈಗೊಂಬೆಯಾಗಿ, ಹೆಣ್ಣು ಮಕ್ಕಳು ಕೇವಲ ಅಡುಗೆ ಮನೆಗೆ ಸೀಮಿತ ಎಂಬ ಮನಸ್ಥಿತಿಯಿರುವ ಮನೆತನಕ್ಕೆ ಸೊಸೆಯಾಗಿ ಹೋಗುತ್ತಾಳೆ. ಆ ಮನೆಯ ರೀತಿ ರಿವಾಜುಗಳು, ಕಟ್ಟುಪಾಡುಗಳನ್ನು ಭೇಧಿಸಿ ತನ್ನ ಗಂಡನ ಮನೆಯಲ್ಲಿರುವ ಎಲ್ಲಾ ಸವಾಲುಗಳನ್ನು ಎದುರಿಸಿ, ವರಲಕ್ಷ್ಮಿ ತನ್ನ ಐಎಎಸ್ ಕನಸನ್ನು ನನಸಾಗಿಸುತ್ತಾಳಾ ? ಈ ಮೂರುಗಂಟಿನ ಬಂಧ, ವರು ಕನಸುಗಳನ್ನು ಕಟ್ಟಿಹಾಕುತ್ತಾ? ಎಂಬುದು ಈ ಧಾರಾವಾಹಿಯ ಮುಖ್ಯ ಕಥಾ ಹಂದರ.

ಹೆಣ್ಣೊಬ್ಬಳು ಕೂಡು ಕುಟುಂಬಕ್ಕೆ ಸೊಸೆಯಾಗಿ ಹೋದಾಗ ತನ್ನ ಕನಸನ್ನು ನನಸಾಗಿಸಲು ಏನೆಲ್ಲಾ ಕಷ್ಟಗಳನ್ನು ಎದುರಿಸಬೇಕಾಗುತ್ತೆ ಎಂಬುದನ್ನು ಈ ಕಥೆಯಲ್ಲಿ ಅತ್ಯದ್ಭುತವಾಗಿ ತೋರಿಸಲಾಗಿದೆ.

ಕನ್ನಡ ಚಿತ್ರರಂಗದ ಖ್ಯಾತ ಹಾಸ್ಯ ನಟ ಟೆನ್ನಿಸ್ ಕೃಷ್ಣ ಇದೇ ಮೊದಲ ಬಾರಿಗೆ ಸ್ಟಾರ್ ಸುವರ್ಣ ವಾಹಿನಿಯ ಮೂಲಕ ವಿಶೇಷ ಪಾತ್ರದಲ್ಲಿ ಕಿರುತೆರೆಗೆ ಪಾದಾರ್ಪಣೆ ಮಾಡುತ್ತಿದ್ದಾರೆ. ಜೊತೆಗೆ ಸುನೇತ್ರ ಪಂಡಿತ್, ಅನಂತವೇಲು, ವಚನ್, ಮಧುಮಿತಾ, ವಿಜಯಲತಾ, ಕಾವ್ಯ, ಪ್ರೀತಮ್ ಮಕ್ಕಿಹಾಳಿ, ಭಗತ್ ಸೇರಿದಂತೆ ಇನ್ನು ಅನೇಕ ಕಲಾವಿದರು ಈ ಧಾರಾವಾಹಿಯಲ್ಲಿ ಅಭಿನಯಿಸುತ್ತಿದ್ದಾರೆ. ಶುರುವಾಗ್ತಿದೆ ಪ್ರೀತಿ, ಆಕಾಂಕ್ಷೆಯನ್ನೊಳಗೊಂಡ ವರಲಕ್ಷ್ಮಿಯ ಕಥೆ ಲಕ್ಷ್ಮಿ ಟಿಫನ್ ರೂಮ್ ಇದೇ ಸೋಮವಾರದಿಂದ ಸಂಜೆ 6.30 ಕ್ಕೆ ನಿಮ್ಮ ನೆಚ್ಚಿನ ಸ್ಟಾರ್ ಸುವರ್ಣ ವಾಹಿನಿಯಲ್ಲಿ ತಪ್ಪದೇ ವೀಕ್ಷಿಸಿ.

## ಸ್ನ್ಯಾಕ್ಸ್‌ಗೆ ಪನೀರ್ ಪಕೋಡಾ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಪನೀರ್ - 250 ಗ್ರಾಂ, ಕಡಲೆಹಿಟ್ಟು - 1 ಕಪ್, ಖಾರದ ಪುಡಿ - 1 ಟೀ ಚಮಚ, ಅರಿಸಿನ ಪುಡಿ - ಅರ್ಧ ಚಮಚ, ಗರಂ ಮಸಾಲೆ - 1 ಚಮಚ, ಚಾಟ್ ಮಸಾಲೆ - 1 ಚಮಚ, ಎಣ್ಣೆ - ಕರಿಯಲು, ಉಪ್ಪು - ರುಚಿಗೆ

### ಮಾಡುವ ವಿಧಾನ

ಪಾತ್ರೆಯೊಂದರಲ್ಲಿ ಗರಂ ಮಸಾಲೆ, ಖಾರದಪುಡಿ, ಅರಿಸಿನ ಪುಡಿ, ಚಾಟ್ ಮಸಾಲೆ, ಕಡಲೆಹಿಟ್ಟು ಹಾಗೂ ಉಪ್ಪು ಹಾಕಿ ಸ್ವಲ್ಪ ನೀರು ಸೇರಿಸಿ ಹಿಟ್ಟು ತಯಾರಿಸಿಕೊಳ್ಳಿ. ಈಗ ಕಾರ್ನ್ ಫ್ಲೇಕ್ಸ್‌ಗಳನ್ನು ಪುಡಿ ಮಾಡಿ, ಕಾರ್ನ್ ಫ್ಲೇಕ್ಸ್ ಕ್ರಂಚ್ ತಯಾರಿಸಿಕೊಳ್ಳಿ. ಪ್ಯಾನ್ನೊಂದರಲ್ಲಿ ಎಣ್ಣೆ ಹಾಕಿ ಮಧ್ಯಮ ಉರಿಯಲ್ಲಿ ಬಿಸಿ ಮಾಡಿ. ಪನೀರ್ ಕ್ಯೂಬ್‌ಗಳನ್ನು ತಯಾರಿಸಿಕೊಂಡ ಹಿಟ್ಟಿನಲ್ಲಿ ಅದ್ದಿ, ಅದನ್ನು ಕಾರ್ನ್ ಫ್ಲೇಕ್ಸ್ ಕ್ರಂಚ್‌ನಲ್ಲಿ ಅದ್ದಿ. ಇದನ್ನು ಎಣ್ಣೆಯಲ್ಲಿ ಬಣ್ಣ ಬದಲಾಗುವವರೆಗೆ ಕರಿಯಿರಿ. ಇದನ್ನು ನಿಮ್ಮಿಷ್ಟದ ಸಾಸ್ ಜೊತೆ ಅದ್ದಿಕೊಂಡು ತಿನ್ನಬಹುದು.

## ಲೋಕಸಭೆ ಅಖಾಡಕ್ಕೆ ಅಕ್ಷಯ್ ಕುಮಾರ್?



### ಎಎಪಿ-ಕಾಂಗ್ರೆಸ್ ಮೈತ್ರಿ ವಿರುದ್ಧ ಹೋರಾಡಲು ಬಿಜೆಪಿ ಸ್ಟಾರ್ ಹೀರೋ

ಕೇಂದ್ರ ಚುನಾವಣಾ ಆಯೋಗ ಶೀಘ್ರದಲ್ಲೇ ಲೋಕಸಭೆ ಚುನಾವಣೆಯ ವೇಳಾಪಟ್ಟಿ ಬಿಡುಗಡೆ ಮಾಡುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಎಲ್ಲ ಪಕ್ಷಗಳು ಚುನಾವಣೆಗೆ ಸಜ್ಜಾಗುತ್ತಿವೆ. ಈ ಕ್ರಮದಲ್ಲಿ ಆಡಳಿತಾರೂಢ ಬಿಜೆಪಿ ಪಕ್ಷವು ದೆಹಲಿಯ ಏಳು ಲೋಕಸಭಾ ಸ್ಥಾನಗಳ ಅಭ್ಯರ್ಥಿಗಳ ಕುರಿತು ಚರ್ಚೆಯನ್ನು ಪ್ರಾರಂಭಿಸಿದೆ.

ಅಲ್ಲಿ ಆಮ್ ಆದ್ಮಿ ಪಕ್ಷ (ಎಎಪಿ) ಮತ್ತು ಕಾಂಗ್ರೆಸ್ ಒಟ್ಟಾಗಿ ಸ್ಪರ್ಧಿಸಲು ನಿರ್ಧರಿಸಿವೆ. ಎಎಪಿ ನಾಲ್ಕು ಸ್ಥಾನಗಳಲ್ಲಿ ಮತ್ತು ಕಾಂಗ್ರೆಸ್ ಮೂರು ಸ್ಥಾನಗಳಲ್ಲಿ ಸ್ಪರ್ಧಿಸಲಿದೆ.

2014 ಮತ್ತು 2019ರಲ್ಲಿ ರಾಷ್ಟ್ರ ರಾಜಧಾನಿಯಲ್ಲಿ ಬಿಜೆಪಿ ಏಳು ಸಂಸದೀಯ ಸ್ಥಾನಗಳನ್ನು ಗೆದ್ದಿತ್ತು. ಇತಿಹಾಸ ಪುನರಾವರ್ತನೆಯಾಗುವ ನಿರೀಕ್ಷೆಯಿದೆ. ಈ ಹಿನ್ನೆಲೆಯಲ್ಲಿ ಸೂಕ್ತ ಅಭ್ಯರ್ಥಿಗಳ ಆಯ್ಕೆಗೆ ಕಸರತ್ತು ನಡೆಯುತ್ತಿದೆ. ಈ ಬಾರಿ ಹೊಸಬರಿಗೆ ಅವಕಾಶ ನೀಡಲು ಬಿಜೆಪಿ ನಾಯಕತ್ವ ಚಿಂತನೆ ನಡೆಸಿದೆ ಎನ್ನಲಾಗಿದೆ. ಇನ್ನೊಂದೆಡೆ ಎಎಪಿ-ಕಾಂಗ್ರೆಸ್ ಮೈತ್ರಿಕೂಟ ಈ ಬಾರಿ ಶತಾಯ ಗತಾಯ ದೆಹಲಿಯನ್ನು ವಶಪಡಿಸಿಕೊಳ್ಳಬೇಕೆಂಬ ಪಣತೊಟ್ಟಿವೆ.

ಎಎಪಿ-ಕಾಂಗ್ರೆಸ್ ಮೈತ್ರಿ ವಿರುದ್ಧ ಹೋರಾಡಲು ಬಿಜೆಪಿ ಸ್ಟಾರ್ ಹೀರೋನನ್ನು ಕಣಕ್ಕಿಳಿಸಲಿದೆ ಎನ್ನಲಾಗಿದೆ. ಸ್ಥಳೀಯತೆಯನ್ನು ಗಮನದಲ್ಲಿಟ್ಟುಕೊಂಡು ಬಾಲಿವುಡ್ ಆಕ್ಷನ್ ಹೀರೋ ಅಕ್ಷಯ್ ಕುಮಾರ್ ಅವರನ್ನು ಲೋಕಸಭೆ ಚುನಾವಣೆಯಲ್ಲಿ ಕಣಕ್ಕಿಳಿಸಲು ಬಿಜೆಪಿ ಪ್ಲ್ಯಾನ್ ಮಾಡಿದೆ ಎನ್ನಲಾಗಿದೆ. ಚಾಂದಿನಿ ಚೌಕ್‌ನಿಂದ ಅಕ್ಷಯ್ ಸ್ಪರ್ಧಿಸುವ ಸಾಧ್ಯತೆ ಇದೆ ಎಂದು ವರದಿಯಾಗಿದೆ. ಬಿಜೆಪಿಯ ಹಿರಿಯ ನಾಯಕ ಹಾಗೂ ಮಾಜಿ ಕೇಂದ್ರ ಸಚಿವ ಡಾ.ಹರ್ಷವರ್ಧನ್ 2014 ಮತ್ತು 2019ರಲ್ಲಿ ಎರಡು ಬಾರಿ ಈ ಕ್ಷೇತ್ರದಿಂದ ಗೆದ್ದಿದ್ದರು. ಅಕ್ಷಯ್ ಅವರ ಸ್ಪರ್ಧೆಯ ಬಗ್ಗೆ ಯಾವುದೇ ಅಧಿಕೃತ ಪ್ರಕಟಣೆ ಹೊರಬಿದ್ದಿಲ್ಲ.



## ಯುವತಿಯರಲ್ಲಿ ಗರ್ಭಕಂಠದ ಕ್ಯಾನ್ಸರ್

### ಹೆಲ್ತ್ ಟಿಪ್ಸ್



ಗರ್ಭಕಂಠದ ಕ್ಯಾನ್ಸರ್ ಸಾಮಾನ್ಯವಾಗಿ ವಯಸ್ಸಾದ ಮಹಿಳೆಯರೊಂದಿಗೆ ಸಂಬಂಧಿಸಿದೆ, ಆದರೂ ಇದು 20 ಮತ್ತು 30 ವಯಸ್ಸಿನವರು ಸೇರಿದಂತೆ ಎಲ್ಲಾ ವಯಸ್ಸಿನ ಮಹಿಳೆಯರ ಮೇಲೆ ಪರಿಣಾಮ ಬೀರಬಹುದು. ಇದು ಗಮನಾರ್ಹವಾದ ಆರೋಗ್ಯ ಕಾಳಜಿಯಾಗಿ ಉಳಿದಿದೆ, ವಿಶೇಷವಾಗಿ ಯುವ ಜನಸಂಖ್ಯಾದಲ್ಲಿ. ಯುವತಿಯರಲ್ಲಿ ಗರ್ಭಕಂಠದ ಕ್ಯಾನ್ಸರ್ ಬೆಳವಣಿಗೆಗೆ ಪ್ರಮುಖ ಕಾರಣವೆಂದರೆ ಹ್ಯೂಮನ್ ಪ್ಯಾಪಿಲೋಮವೈರಸ್ (ಎಚ್‌ಪಿವಿ), ಲೈಂಗಿಕವಾಗಿ ಹರಡುವ ಸೋಂಕು - ಗರ್ಭಕಂಠದ ಪ್ರದೇಶದಲ್ಲಿ ಅಸಹಜ ಕೋಶಗಳ ಬೆಳವಣಿಗೆ. ಕಡಿಮೆ ಪ್ರತಿರಕ್ಷಣಾ ವ್ಯವಸ್ಥೆಯನ್ನು ಹೊಂದಿರುವ ವ್ಯಕ್ತಿಗಳು, ಉದಾಹರಣೆಗೆ ಎಚ್‌ಐವಿ/ಏಡ್ಸ್ ಅಥವಾ ಇಮ್ಯುನೊಸಪ್ರೆಸಿವ್ ಔಷಧಗಳನ್ನು ಸೇವಿಸುವವರು ಗರ್ಭಕಂಠದ ಕ್ಯಾನ್ಸರ್‌ಗೆ ಗುರಿಯಾಗುತ್ತಾರೆ. ಮೌಖಿಕ ಗರ್ಭನಿರೋಧಕಗಳ ದೀರ್ಘಾವಧಿಯ ಬಳಕೆಯು ಗರ್ಭಕಂಠದ ಕ್ಯಾನ್ಸರ್‌ಗೆ ಕಾರಣವಾಗಬಹುದು. ಎಚ್‌ಪಿವಿ ಎಂಬುದು ನೇರ ಚರ್ಮದ ಸಂಪರ್ಕದ ಮೂಲಕ ಹರಡಬಹುದಾದ ವೈರಸ್‌ಗಳ ಗುಂಪಾಗಿದೆ, ಮುಖ್ಯವಾಗಿ ಲೈಂಗಿಕ ಸಂಭೋಗದ ಸಮಯದಲ್ಲಿ ಗರ್ಭಕಂಠದ ಎಪಿತೀಲಿಯಲ್ ಕೋಶಗಳನ್ನು ಸೋಂಕು ತರುತ್ತದೆ. ಹೆಚ್ಚಿನ ಸಂದರ್ಭಗಳಲ್ಲಿ, ಪ್ರತಿರಕ್ಷಣಾ ವ್ಯವಸ್ಥೆಯು ಎರಡು ವರ್ಷ ಅಥವಾ ಅದಕ್ಕಿಂತ ಕಡಿಮೆ ಅವಧಿಯಲ್ಲಿ ಎಚ್‌ಪಿವಿ ಸೋಂಕನ್ನು ತೆರವುಗೊಳಿಸಲು ಸಮರ್ಥವಾಗಿದೆ. ಆದರೆ ಕೆಲವು ಪರಿಸ್ಥಿತಿಗಳಲ್ಲಿ, ವೈರಸ್‌ಗಳು ಗರ್ಭಕಂಠದಲ್ಲಿ ಉಳಿಯಬಹುದು, ಇದು ದೀರ್ಘಕಾಲದ ಸೋಂಕಿಗೆ ಕಾರಣವಾಗುತ್ತದೆ. ನಿರಂತರವಾದ ಹೆಚ್ಚಿನ ಅಪಾಯದ ಎಚ್‌ಪಿವಿ ಸೋಂಕು ಗರ್ಭಕಂಠದ ಕೋಶಗಳಲ್ಲಿ ಬದಲಾವಣೆಗಳನ್ನು ಉಂಟುಮಾಡಬಹುದು, ಕಾಲಾನಂತರದಲ್ಲಿ ಪೂರ್ವಭಾವಿ ಗಾಯಗಳಾಗಿ ಬೆಳೆಯಬಹುದು.

ಚಿಕಿತ್ಸೆ ನೀಡದೆ ಬಿಟ್ಟಾಗ, ಈ ಪೂರ್ವಭಾವಿ ಗಾಯಗಳು ಆಕ್ರಮಣಕಾರಿ ಗರ್ಭಕಂಠದ ಕ್ಯಾನ್ಸರ್ ಆಗಿ ಬೆಳೆಯಬಹುದು. ಈ ರೂಪಾಂತರವು ಆನುವಂಶಿಕ ರೂಪಾಂತರಗಳ ಕ್ರಮೇಣ ಶೇಖರಣೆ ಮತ್ತು ಸೋಂಕಿತ ಜೀವಕೋಶಗಳಲ್ಲಿನ ಬದಲಾವಣೆಗಳನ್ನು ಒಳಗೊಂಡಿರುತ್ತದೆ, ಇದು ಕ್ಯಾನ್ಸರ್ ಬೆಳವಣಿಗೆಗೆ ಕಾರಣವಾಗುತ್ತದೆ ಎಂದು ಅಪೋಲೋ ಆಸ್ಪತ್ರೆಯ ಡಾ.ನಂದಾ ರಜನೀಶ್ ತಿಳಿಸಿದ್ದಾರೆ.

ಕಾಲ್ಪಸ್ಕೊಪಿ ಮತ್ತು ಬಯಾಪ್ಸಿ- ಚಿತ್ರಣಕ್ಕಾಗಿ ಬಳಸಲಾಗುತ್ತದೆ, ಅಲ್ಟ್ರಾ ಸ್ಕ್ಯಾನ್‌ಗಳು, ಎಂಆರ್‌ಐ ಅಥವಾ ಸಿಟಿ ಸ್ಕ್ಯಾನ್‌ಗಳನ್ನು ನಡೆಸಲಾಗುತ್ತದೆ. ಆರಂಭಿಕ ಪತ್ತೆಗಾಗಿ- ಶಸ್ತ್ರಚಿಕಿತ್ಸೆಯನ್ನು ಬಳಸಲಾಗುತ್ತದೆ ಮತ್ತು ಕಾರ್ಯವಿಧಾನಗಳು ಸೇರಿವೆ - ಅಸಹಜ ಕೋಶಗಳನ್ನು ಹೊಂದಿರುವ ಅಂಗಾಂಶದ ಕೋನ್-ಆಕಾರದ ಉಂಡೆಯನ್ನು ತೆಗೆದುಹಾಕುತಾರೆ. ಗರ್ಭಕಂಠವು ಗರ್ಭಾಶಯವನ್ನು ತೆಗೆದುಹಾಕುವುದು ಮತ್ತು ಕೆಲವು ಸಂದರ್ಭಗಳಲ್ಲಿ, ಗರ್ಭಕಂಠದಂತಹ ಹತ್ತಿರದ ಅಂಗಾಂಶವನ್ನು ಯೋನಿಯೊಳಗೆ ತೆಗೆಯುವುದು. ಮತ್ತು ಸುತ್ತಮುತ್ತಲಿನ ದುಗ್ಧರಸ ಗ್ರಂಥಿಗಳು. ವಿಕಿರಣ ಚಿಕಿತ್ಸೆಯನ್ನು ಏಕಾಂಗಿಯಾಗಿ ಅಥವಾ ಶಸ್ತ್ರಚಿಕಿತ್ಸೆ ಅಥವಾ ಕೀಮೋಥೆರಪಿಯ ಸಂಯೋಜನೆಯೊಂದಿಗೆ ಚಿಕಿತ್ಸೆಯ ಆಯ್ಕೆಯಾಗಿ ಪರಿಗಣಿಸಬಹುದು. ಬಾಹ್ಯ ಕಿರಣದ ವಿಕಿರಣವು ದೇಹದ ಹೊರಗಿನಿಂದ ಶ್ರೋಣಿಯ ಪ್ರದೇಶಕ್ಕೆ ಗುರಿಯಾಗುತ್ತದೆ. ವಿಕಿರಣಶೀಲ ಮೂಲಗಳನ್ನು ಬಳಸಿಕೊಂಡು ಆಂತರಿಕ ವಿಕಿರಣವನ್ನು ನೇರವಾಗಿ ಗೆಡ್ಡೆಯೊಳಗೆ ಅಥವಾ ಹತ್ತಿರ ಇರಿಸಲಾಗುತ್ತದೆ.

ಕೀಮೋಥೆರಪಿಯನ್ನು ಶಸ್ತ್ರಚಿಕಿತ್ಸೆಯ ಮೊದಲು ಅಥವಾ ನಂತರ ಅಥವಾ ವಿಕಿರಣ ಚಿಕಿತ್ಸೆಯೊಂದಿಗೆ ನೀಡಬಹುದು. ಇದು ಕ್ಯಾನ್ಸರ್ ಕೋಶಗಳನ್ನು ಕೊಲ್ಲಲು ಅಥವಾ ಅವುಗಳ ಬೆಳವಣಿಗೆಯನ್ನು ನಿಲ್ಲಿಸಲು ಔಷಧಗಳನ್ನು ಬಳಸುವುದನ್ನು ಒಳಗೊಂಡಿರುತ್ತದೆ. ಕೀಮೋಥೆರಪಿಯನ್ನು ಸಾಮಾನ್ಯವಾಗಿ ಮುಂದುವರಿದ ಗರ್ಭಕಂಠದ ಕ್ಯಾನ್ಸರ್‌ಗೆ ಚಿಕಿತ್ಸೆ ನೀಡಲು ಅಥವಾ ಕ್ಯಾನ್ಸರ್ ಗರ್ಭಕಂಠದ ಹೊರಗೆ ಹರಡಿದಾಗ ಬಳಸಲಾಗುತ್ತದೆ. ಇಮ್ಯುನೊಥೆರಪಿ ಎನ್ನುವುದು ಕ್ಯಾನ್ಸರ್ ಕೋಶಗಳನ್ನು ಗುರಿಯಾಗಿಸಲು ಮತ್ತು ನಾಶಮಾಡಲು ಪ್ರತಿರಕ್ಷಣಾ ವ್ಯವಸ್ಥೆಯನ್ನು ಉತ್ತೇಜಿಸುವ ಹೊಸ ವಿಧಾನವಾಗಿದೆ. ಮುಂದುವರಿದ ಗರ್ಭಕಂಠದ ಕ್ಯಾನ್ಸರ್‌ಗೆ ಚಿಕಿತ್ಸೆ ನೀಡಲು ಕೆಲವು ಇಮ್ಯುನೊಥೆರಪಿಗಳನ್ನು ಬಳಸಬಹುದು. 25 ರಿಂದ 65 ವರ್ಷ ವಯಸ್ಸಿನ ಮಹಿಳೆಯರು, ವೈದ್ಯರು ಸೂಚಿಸಿದಂತೆ ಪ್ರಾಥಮಿಕ ಎಚ್‌ಪಿವಿ ಪರೀಕ್ಷೆ ಮತ್ತು ಸ್ಕ್ರೀನಿಂಗ್ಗೆ ಒಳಗಾಗಬೇಕು. 11 ರಿಂದ 12 ವರ್ಷ ವಯಸ್ಸಿನ ಹದಿಹರೆಯದವರಿಗೆ ದಿನನಿತ್ಯದ ಎಚ್‌ಪಿವಿ ಲಸಿಕೆಯನ್ನು ನೀಡುವುದು, ಈ ಹಿಂದೆ ಲಸಿಕೆಯನ್ನು ಪಡೆಯದ 26 ವರ್ಷ ವಯಸ್ಸಿನ ವ್ಯಕ್ತಿಗಳಿಗೆ ಕ್ಯಾಚ್-ಅಪ್ ವ್ಯಾಕ್ಸಿನೇಷನ್ ಅಗತ್ಯವಾಗಿದೆ.

## ಗಾಲ್ಫ್ ಟೂರ್ನಮೆಂಟ್ ವಿ ಟೀವಾಕ್




ಪ್ರಮುಖ ಟೆಲಿಕಾಂ ಆಪರೇಟರ್ ವಿ ಎಂಟರ್ಪ್ರೈಸ್ ಅಂಗವಾದ ವಿ ಬಿಸಿನೆಸ್ ತನ್ನ ಮಲ್ಟಿ ಸಿಟಿ ಕಾರ್ಪೊರೇಟ್ ಗಾಲ್ ಪಂದ್ಯಾವಳಿಯ 13ನೇ ಆವೃತ್ತಿಯಾದ ವಿ ಟೀವಾಕ್ 2024 ಅನ್ನು ಆಯೋಜಿಸಿತ್ತು. RoadToVictory ಥೀಮ್ ನಲ್ಲಿ ನಡೆದ ವಿ ಟೀವಾಕ್ 2024ರ ಮೊದಲ ಹಂತದ ಪಂದ್ಯಾವಳಿಯು ಬೆಂಗಳೂರಿನ ಪ್ರೆಸ್ಟೀಜ್ ಗಾಲ್ಫ್ ಶೈರ್ ನಲ್ಲಿ ನಡೆಯಿತು. 70ಕ್ಕೂ ಹೆಚ್ಚು ಹಿರಿಯ ಕಾರ್ಪೊರೇಟ್ ನಾಯಕರು ಈ ಪಂದ್ಯಾವಳಿಯಲ್ಲಿ ಭಾಗವಹಿಸಿದ್ದರು. ವಿ ಟೀವಾಕ್ 2024- ಬೆಂಗಳೂರು ಅಧ್ಯಾಯದಲ್ಲಿ ಟೆಕ್ಸಾಸ್ ಸ್ಕ್ಯಾಂಬಲ್ ಸ್ವರೂಪದಲ್ಲಿ ಆಡಲಾಯಿತು, ಪ್ರತಿ ತಂಡವು ನಾಲ್ಕು ಆಟಗಾರರನ್ನು ಒಳಗೊಂಡಿತ್ತು. ವಿಜೇತರು: ಅರಿಂದಮ್ ಚಟರ್ಜಿ, ಶ್ರೀನಿವಾಸ್ ಕೆ, ಹರೀಶ್ವರ್ ರೆಡ್ಡಿ ಮತ್ತು ರಾಜೇಶ್ ರಾವ್ ಅವರನ್ನೊಳಗೊಂಡ ತಂಡ ಮೊದಲ ಸ್ಥಾನವನ್ನು ಗಳಿಸಿತು. 1ನೇ ರನ್ನರ್ ಅಪ್: ರಾಜೀವ್ ಅಹ್ಲುವಾಲಿಯಾ, ಜತೀಂದರ್ ಸಲ್ವಾನ್, ನಿಲಂಜನ್ ರಾಯ್ ಮತ್ತು ಅತುಲ್ ಉಜಾಗರ್ ಅವರ ತಂಡ, 2ನೇ ರನ್ನರ್ ಅಪ್: ರವೀಂದ್ರ ಟಕ್ಕರ್, ವರುಣ್ ಬೆರ್ರಿ, ಪ್ರದೀಪ್ ಕರ್ ಮತ್ತು ಕಾಜೊ ನಿಶಿಮುರಾ ತಂಡವು ಎರಡನೇ ರನ್ನರ್ ಅಪ್ ಆಯಿತು, ವಾರ್ಷಿಕ ಗಾಲ್ಫ್ ಪಂದ್ಯಾವಳಿ ವಿ ಟೀವಾಕ್ 2024, ಗಾಲ್ಫ್ ಕ್ರೀಡೆಯ ಜೊತೆಗೆ ನೆಟ್ವರ್ಕಿಂಗ್ ಅವಕಾಶಗಳನ್ನು ಒದಗಿಸುತ್ತದೆ. ಮುಂಬರುವ ಮುಂಬೈ ಮತ್ತು ದೆಹಲಿ ಆವೃತ್ತಿಗಳಲ್ಲಿ ಅನೇಕ ಕೈಗಾರಿಕೆಗಳ 150+ ಉನ್ನತ ಸಿಎಕ್ಸ್‌ಒಗಳು ಭಾಗವಹಿಸಲಿದ್ದಾರೆ. ಈ ವರ್ಷದ ಆವೃತ್ತಿಯಲ್ಲಿ ಹೊಸ ವೈಶಿಷ್ಟ್ಯವನ್ನು ಪರಿಚಯಿಸಲಾಗಿದೆ. ಪ್ರತಿ ನಗರದಲ್ಲಿ ವಿ ಟೀವಾಕ್ 2024ರಲ್ಲಿ ಭಾಗವಹಿಸುವವರು ವೃತ್ತಿಪರ ಗಾಲ್ಫ್ ಆಟಗಾರರೊಂದಿಗೆ ಆಡುವ ಅವಕಾಶವನ್ನು ಪಡೆಯುತ್ತಾರೆ. ಬೆಂಗಳೂರು ಆವೃತ್ತಿಯಲ್ಲಿ ಭಾಗವಹಿಸಿದವರಿಗೆ ಮಹಿಳಾ ವೃತ್ತಿಪರ ಗಾಲ್ಫ್ ಟೂರ್ ಆಫ್ ಇಂಡಿಯಾದಲ್ಲಿ 13 ಬಾರಿ ವಿಜೇತರಾಗಿರುವ ವೃತ್ತಿಪರ ಗಾಲ್ಫ್ ಆಟಗಾರ್ತಿ ರಿದ್ಧಿಮಾ ದಿಲವಾರಿ ಅವರೊಂದಿಗೆ ಆಡುವ ಅವಕಾಶ ಸಿಕ್ಕಿತು. ಈ ಸನ್ಶೈನ್ ಲೇಡೀಸ್ ಟೂರ್ ಸದಸ್ಯೆ ಮುಂಬೈಯಲ್ಲೂ ಇರಲಿದ್ದಾರೆ. ದೆಹಲಿಯಲ್ಲಿ ಭಾರತದ ಮಹಿಳಾ ವೃತ್ತಿಪರ ಗಾಲ್ಫ್ ಟೂರ್ನಲ್ಲಿ 19 ಬಾರಿ ವಿಜೇತೆ ಮತ್ತು 2023ರ ಸೀಸನ್ ನ ಆರ್ಡರ್ ಆಫ್ ಮೆರಿಟ್ನಲ್ಲಿ ಎರಡನೇ ಸ್ಥಾನ ಪಡೆದಿರುವ ನೇಹಾ ತ್ರಿಪಾಠಿ ಅವರೊಂದಿಗೆ ಆಡುವ ಅವಕಾಶ ಇದೆ.

ವಿ ಟೀವಾಕ್ 2024ರ 13ನೇ ಆವೃತ್ತಿಯ ಕುರಿತು ಪ್ರತಿಕ್ರಿಯಿಸಿದ ವೊಡಾಫೋನ್ ಐಡಿಯಾ ಲಿಮಿಟೆಡ್ನ ಮುಖ್ಯ ಎಂಟರ್ಪ್ರೈಸ್ ಬ್ಯುಸಿನೆಸ್ ಆಫೀಸರ್ ಅರವಿಂದ್ ನೆವಾಟಿಯಾ, ವಿ ಟೀವಾಕ್ ಕಾರ್ಪೊರೇಟ್ ಕ್ಯಾಲೆಂಡರ್ನಲ್ಲಿ ಬಹು ನಿರೀಕ್ಷಿತ ಕಾರ್ಯಕ್ರಮಗಳಲ್ಲಿ ಒಂದು ಎಂಬ ಖ್ಯಾತಿಯನ್ನು ಗಳಿಸಿದೆ. ವಿ ಟೀವಾಕ್ 2024 ಕೇವಲ ಗಾಲ್ ಪಂದ್ಯಾವಳಿಯಷ್ಟೇ ಅಲ್ಲ, ಬದಲಿಗೆ ಉದ್ಯಮದ ನಾಯಕರನ್ನು ಸಂಪರ್ಕಿಸುವ ಮತ್ತು ಸಂವಹನ ಮಾಡುವ ಅವಕಾಶ ಒದಗಿಸುತ್ತದೆ ಎಂದು ಹೇಳಿದರು.

## ಮದುಮಗಳ ಪಾದಗಳ ಆರೈಕೆ..!

### ಬ್ಯೂಟಿ ಟಿಪ್ಸ್



ಮದುವೆಯ ದಿನ ಎಲ್ಲರ ಕಣ್ಣು ವಧುವಿನ ಮೇಲಿರುತ್ತದೆ. ಹಾಗಾಗಿ ವಧು ತನ್ನ ಸೌಂದರ್ಯದ ಬಗ್ಗೆ ಹೆಚ್ಚು ಕಾಳಜಿ ವಹಿಸುತ್ತಾಳೆ. ಸೌಂದರ್ಯ ಅಂದರೆ ಬರೀ ಮುಖ, ಮಾತ್ರವಲ್ಲ ಕಾಲು ಮತ್ತು ಪಾದಗಳನ್ನು ಕೂಡ ಸುಂದರವಾಗಿ ಕಾಣುವಂತೆ ಇಟ್ಟುಕೊಳ್ಳಬೇಕು. ಹಾಗಾಗಿ ಈ ಟಿಪ್ಸ್ ಅನ್ನು ಅನುಸರಿಸಿ. ★ ಪಾದಗಳನ್ನು ಸ್ಕ್ರಬ್ ಮಾಡಿ. ಎಳ್ಳೆಣ್ಣೆ, ಆಲಿವ್ ಆಯಿಲ್, ತೆಂಗಿನೆಣ್ಣೆ ಇವುಗಳಲ್ಲಿ ಯಾವುದಾರೊಂದು ಎಣ್ಣೆಯನ್ನು ಬಳಸಿ 15 ನಿಮಿಷಗಳ ಕಾಲ ಸ್ಕ್ರಬ್ ಮಾಡಿ. ಬಳಿಕ ವಾಶ್ ಮಾಡಿ ನಿಂಬೆ ರಸ, ಜೇನುತುಪ್ಪ, ರೋಸ್ ವಾಟರ್ ಮಿಕ್ಸ್ ಮಾಡಿ ಕಾಲುಗಳಿಗೆ ಹಚ್ಚಿ ಅರ್ಧ ಗಂಟೆ ಬಿಟ್ಟು ವಾಶ್ ಮಾಡಿ. ★ ಉಗುರಗಳ ಆರೈಕೆ ಮಾಡಿ. ಉಗುರುಗಳ ನೈಲ್ ಪಾಲಿಶ್ ತೆಗೆದು ಎಣ್ಣೆ ಮಸಾಜ್ ಮಾಡಿ. ಹಾಗೇ ಪಾದಗಳಲ್ಲಿ ಬಿರುಕು ಇದ್ದರೆ ಅದನ್ನು ನಿವಾರಿಸಲು ಉಗುರು ಬೆಚ್ಚಗಿನ ನೀರಿನಲ್ಲಿ ಉಪ್ಪು ಮತ್ತು ಶಾಂಪುವನ್ನು ಮಿಕ್ಸ್ ಮಾಡಿ ಪಾದಗಳನ್ನು 20 ನಿಮಿಷ ನೆನೆಸಿ. ಬಳಿಕ ಪಾದಗಳನ್ನು ನಿಧಾನವಾಗಿ ಬ್ರಶ್ ನಿಂದ ಉಜ್ಜಿ. ಇದರಿಂದ ಸತ್ತ ಚರ್ಮಕೋಶಗಳು ನಿವಾರಣೆಯಾಗುತ್ತದೆ. ರಾತ್ರಿ ಕಾಲಿಗೆ ಸಾಕ್ಸ್ ಧರಿಸಿ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಉದ್ಯೋಗ ಅನುಕೂಲ, ಯತ್ನ ಕಾರ್ಯಗಳಲ್ಲಿ ಜಯ, ಅಧಿಕಾರಿಗಳಿಂದ ಸಹಕಾರ, ಮಿತ್ರರಿಂದ ಅನುಕೂಲ.

**ವೃಷಭ:** ದೂರ ಪ್ರದೇಶದಲ್ಲಿ ಉದ್ಯೋಗ ಲಾಭ, ಸ್ಪರ್ಧಾತ್ಮಕ ವಿಷಯಗಳಲ್ಲಿ ಯಶಸ್ಸು, ಶುಭ.

**ಮಿಥುನ:** ಪಿತ್ರಾರ್ಜಿತ ಸ್ವತ್ತಿನ ಸಮಸ್ಯೆ ಬಗೆಹರಿಯುವುದು, ಉದ್ಯೋಗ ನಷ್ಟ, ಪ್ರಯಾಣದಲ್ಲಿ ಅನುಕೂಲ, ಅಧಿಕಾರಿಗಳಿಂದ ನಿಂದನೆ.

**ಕಟಕ:** ವ್ಯಾಪಾರ ವ್ಯವಹಾರದಲ್ಲಿ ವಿಘ್ನ, ಯತ್ನ ಕಾರ್ಯಗಳಲ್ಲಿ ತೊಂದರೆ, ಅಧಿಕ ಒತ್ತಡ,

**ಸಿಂಹ:** ವ್ಯವಹಾರದಲ್ಲಿ ನಷ್ಟ, ಅವಕಾಶ ಕೈ ತಪ್ಪುವುದು, ಪಾಲುದಾರರ ನಡುವೆ ಮನಸ್ತಾಪ, ಅನುಕೂಲ.

**ಕನ್ಯಾ:** ವ್ಯವಹಾರದಲ್ಲಿ ಉತ್ತಮ ಅವಕಾಶ, ಉದ್ಯೋಗ ಲಾಭ, ಆರ್ಥಿಕ ಬೆಳವಣಿಗೆ, ಕೋರ್ಟ್ ಕೇಸುಗಳಲ್ಲಿ ಹಿನ್ನಡೆ, ದಾಂಪತ್ಯದಲ್ಲಿ ಮನಸ್ತಾಪ.

**ತುಲಾ:** ಯತ್ನಕಾರ್ಯಗಳಲ್ಲಿ ಎಳೆದಾಟ, ಉದ್ಯೋಗ ಬದಲಾವಣೆ ಆಲೋಚನೆ, ಆರ್ಥಿಕ ಅವ್ಯವಸ್ಥೆ ಕಾಡುವುದು.

**ವೃಶ್ಚಿಕ:** ವ್ಯಾಪಾರದಲ್ಲಿ ಪ್ರಗತಿ, ವಿದ್ಯಾಭ್ಯಾಸದಲ್ಲಿ ಮಂದತ್ವ, ಸ್ಥಿರಾಸ್ತಿಯಿಂದ ನಷ್ಟ, ದುಸ್ವಪ್ನಗಳು, ಅನಾರೋಗ್ಯ ಸಮಸ್ಯೆ.

**ಧನಸ್ಸು:** ವ್ಯವಹಾರದಲ್ಲಿ ಚೇತರಿಕೆ, ಮೋಸದ ಬಲೆಗೆ ಸಿಲುಕುವಿರಿ, ಅಧಿಕ ಧೈರ್ಯ, ಶತ್ರುಕಾಟದಿಂದ ಮುಕ್ತಿ.

**ಮಕರ:** ಉದ್ಯಮ ವ್ಯವಹಾರದಲ್ಲಿ ಅನುಕೂಲ, ಆರ್ಥಿಕ ಪ್ರಗತಿ, ದುಡುಕಿನ ಮಾತಿನಿಂದ ಸಮಸ್ಯೆ, ವ್ಯವಹಾರದ ಚಿಂತೆ.

**ಕುಂಭ:** ಮಾಟ ಮಂತ್ರ ತಂತ್ರದ ಆತಂಕ, ಆರ್ಥಿಕ ಮುಗ್ಗಟ್ಟು, ಬಂಧು ಬಾಂಧವರೊಂದಿಗೆ ಕಿರಿಕಿರಿ, ಆತಂಕ.

**ಮೀನ:** ಅಧಿಕ ನಷ್ಟ ಮತ್ತು ಖರ್ಚು, ದೂರಪ್ರದೇಶದಲ್ಲಿ ಉತ್ತಮ ಅವಕಾಶ, ಅನಿರೀಕ್ಷಿತ ಧನಾಗಮನ, ಕುಟುಂಬದಲ್ಲಿ ಉತ್ತಮ ಬಾಂಧವ್ಯ.

## ಇಂಟರ್‌ನ್ಯಾಷನಲ್ ರೆಸ್ಕ್ಯೂ ಕ್ಯಾಟ್ ಡೇ




ಪ್ರತಿ ವರ್ಷ ಮಾರ್ಚ್ 2 ರಂದು ಅಂತರರಾಷ್ಟ್ರೀಯ ಪಾರುಗಾಣಿಕಾ ಕ್ಯಾಟ್ ದಿನವನ್ನು ಆಚರಿಸಲಾಗುತ್ತದೆ. ಬೀದಿಗಳಲ್ಲಿ ಸಾಕಷ್ಟು ನಿರಾಶ್ರಿತ ಬೆಕ್ಕುಗಳಿವೆ, ಅಂತಹ ದಿನಕ್ಕಾಗಿ ಜನರು ಕಾಯುತ್ತಿದ್ದಾರೆ, ಅಲ್ಲಿ ಜನರು ಬೀದಿಗಿಳಿದು ತಮ್ಮ ಕುಟುಂಬದ ಸದಸ್ಯರಾಗಿ ದತ್ತು ತೆಗೆದುಕೊಳ್ಳಲು ಬರುತ್ತಾರೆ. ಬೆಕ್ಕನ್ನು ದತ್ತು ಪಡೆಯಲು, ನೀವು ಸಾಕುಪ್ರಾಣಿ ದತ್ತು ಏಜೆನ್ಸಿಗೆ ಭೇಟಿ ನೀಡಬೇಕು ಮತ್ತು ಏಜೆನ್ಸಿಯು ಅವರ ಸರಿಯಾದ ಶ್ರದ್ಧೆ ಮತ್ತು ಎಲ್ಲವನ್ನೂ ಪರಿಶೀಲಿಸಿದ ನಂತರ, ಅವರು ದತ್ತು ಪಡೆಯಲು ಮುಂದುವರಿಯುತ್ತಾರೆ. ಬೆಕ್ಕುಗಳು ತ್ವರಿತ ಪ್ರತಿವರ್ತನ, ಬಲವಾದ ದೇಹ ಮತ್ತು ಚೂಪಾದ ಹಲ್ಲುಗಳನ್ನು ಹೊಂದಿರುವ ದೇಶೀಯ ಜಾತಿಗಳಾಗಿವೆ. 1200 ಃಅ ಯಲ್ಲಿ ಗ್ರೀಸ್ನಲ್ಲಿ ಬೆಕ್ಕನ್ನು ಮೊದಲ ಬಾರಿಗೆ ಸಾಕಲಾಯಿತು. ನಂತರ ಇದನ್ನು ದಕ್ಷಿಣ ಯುರೋಪ್ಗೆ ಪರಿಚಯಿಸಲಾಯಿತು. 5 ನೇ ಶತಮಾನದ ಹೊತ್ತಿಗೆ, ಅವರು ಎಟ್ರುರಿಯಾದಲ್ಲಿನ ವಸಾಹತುಗಳ ಸುತ್ತಲೂ ಕಂಡುಬರುವ ಪರಿಚಿತ ಪ್ರಾಣಿಗಳಾಗಿದ್ದವು. ಅಮೇರಿಕನ್ ಸೊಸೈಟಿ ಫಾರ್ ದಿ ಪ್ರಿವೆನ್ಷನ್ ಆಫ್ ಕ್ರೌರ್ಲ್ಟಿ ಟು ಅನಿಮಲ್ಸ್ (ಂ.ಖ.ಕ.ಅ.ಂ.) ಅನ್ನು 1867 ರಲ್ಲಿ ಹೆನ್ರಿ ಬರ್ಗ್ ಅವರು ಸ್ಥಾಪಿಸಿದರು ಮತ್ತು ಇದು ಎಲ್ಲಾ ಪ್ರಾಣಿಗಳು ಗೌರವಾನ್ವಿತ ಮತ್ತು ದಯೆಯ ಚಿಕಿತ್ಸೆಗೆ ಅರ್ಹವಾಗಿದೆ ಮತ್ತು ಕಾನೂನಿನ ಅಡಿಯಲ್ಲಿ ರಕ್ಷಿಸಲ್ಪಡಬೇಕು ಎಂಬ ಉಪಕ್ರಮದೊಂದಿಗೆ ಮೊದಲ ಮಾನವೀಯ ಸಂಘವಾಗಿದೆ. ಎ.ಎಸ್.ಪಿ.ಸಿ.ಎ. ಪ್ರಾಣಿಗಳ ದತ್ತು ಮತ್ತು ರಕ್ಷಣೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಸಾಮಾನ್ಯವಾಗಿ ಪ್ರಾಣಿಗಳ ರಕ್ಷಣೆಯು ಕಳೆದುಹೋದ ಸಾಕುಪ್ರಾಣಿಗಳನ್ನು ಅವುಗಳ ಮಾಲೀಕರೊಂದಿಗೆ ಮತ್ತೆ ಸೇರಿಸುವ ಮೂಲಕ, ಮನೆಯಿಲ್ಲದ ಸಾಕುಪ್ರಾಣಿಗಳಿಗೆ ಆಶ್ರಯ ನೀಡುವ ಮೂಲಕ ಮತ್ತು ಸಾಕುಪ್ರಾಣಿಗಳಿಗೆ ಹೊಸ ಮನೆಯನ್ನು ಒದಗಿಸುವ ಮೂಲಕ ಸಮುದಾಯದಲ್ಲಿ ಪ್ರಮುಖ ಪಾತ್ರವನ್ನು ವಹಿಸುತ್ತದೆ. ಸಮುದಾಯದಲ್ಲಿ ಪ್ರಾಣಿಗಳ ಸಾಮಾನ್ಯ ಆರೋಗ್ಯ ಮತ್ತು ಯೋಗಕ್ಷೇಮವನ್ನು ಸುಧಾರಿಸಲು ಅವರು ಸಹಾಯ ಮಾಡುತ್ತಾರೆ. ಪ್ರತಿ ವರ್ಷ 6,000,000 ದೇಶೀಯ ಪ್ರಾಣಿಗಳು ಪ್ರಪಂಚದಾದ್ಯಂತ ಗಖ ಪ್ರಾಣಿಗಳ ಆಶ್ರಯವನ್ನು ಪ್ರವೇಶಿಸುತ್ತವೆ, ಅವುಗಳಲ್ಲಿ ಮೂರು ದಶಲಕ್ಷಕ್ಕೂ ಹೆಚ್ಚು ಬೆಕ್ಕುಗಳು. ಪ್ರತಿ ವರ್ಷ ಸುಮಾರು 530,000 ಬೆಕ್ಕುಗಳನ್ನು ಆಶ್ರಯದಲ್ಲಿ ದಯಾಮರಣಗೊಳಿಸಲಾಗುತ್ತದೆ, ಈ ಅಂಕಿ ಅಂಶವು 2011 ಕ್ಕೆ ಹೋಲಿಸಿದರೆ ಕಡಿಮೆಯಾಗಿದೆ, ಅದು ಸುಮಾರು 1,500,000 ಬೆಕ್ಕುಗಳನ್ನು ದಯಾಮರಣಗೊಳಿಸಲಾಯಿತು. ದತ್ತು ಪಡೆಯುತ್ತಿರುವ ಬೆಕ್ಕುಗಳ ಸಂಖ್ಯೆಯಲ್ಲಿನ ಹೆಚ್ಚಳ ಮತ್ತು ದಾರಿತಪ್ಪಿ ಬೆಕ್ಕುಗಳ ಸಂಖ್ಯೆಯಲ್ಲಿನ ಹೆಚ್ಚಳದಿಂದಾಗಿ ಈ ಕುಸಿತವು ತಮ್ಮ ಸಾಕುಪ್ರಾಣಿಗಳೊಂದಿಗೆ ಮತ್ತೆ ಸೇರಿಕೊಳ್ಳುತ್ತದೆ. ಪ್ರತಿ ವರ್ಷ ಸರಿಸುಮಾರು 2,100,000 ಬೆಕ್ಕುಗಳನ್ನು ದತ್ತು ತೆಗೆದುಕೊಳ್ಳಲಾಗುತ್ತದೆ.

# ಕಮ್ಮಿ ಬೆಲೆಗೆ ಅಕ್ಕಿ ನೀಡ್ತೋಕೆ ಮುಂದಾದ ಪಾಕಿಸ್ತಾನ್



ಭಾರತ ಪಾಕಿಸ್ತಾನ ನಡುವೆ ಅಕ್ಕಿ ಮಾರಾಟಕ್ಕೆ ಸಂಬಂಧಪಟ್ಟಂತೆ ಪೈಪೋಟಿ ಶುರುವಾಗಿದ್ದು ಈಗ ಭಾರತದ ಅಕ್ಕಿ ಮಾರ್ಕೆಟ್ ಕಸಿಯೋಕೆ ಪಾಕ್ ದೊಡ್ಡ ಹೆಜ್ಜೆಗಳನ್ನ ಇಡ್ತಿದೆ. ಪಾಕ್ ತಾನು ಬೆಳೆಸಿರೋ ಬಾಸ್ಮತಿ ಅಕ್ಕಿಯನ್ನ ಭಾರತಕ್ಕಿಂತ ಕಡಿಮೆ ಬೆಲೆಗೆ ಮಾರಾಟ ಮಾಡಲು ಮುಂದಾಗಿದೆ ಇದರಿಂದ 2024ರಲ್ಲಿ ಅಂದ್ರೆ, ಈ ವರ್ಷ ಭಾರತದ ಬಾಸ್ಮತಿ ಅಕ್ಕಿ ಎಕ್ಸ್ಪೋರ್ಟ್ ರೇಟ್ ಪಾಕಿಸ್ತಾನಕ್ಕಿಂತ ಇಳಿಕೆಯಾಗೋ ಚಾನ್ಸಸ್ ಇದೆ ಅಂತ ಅಧಿಕಾರಿಗಳು ಹೇಳಿದ್ದಾರೆ?ಅಂದ್ಹಾಗೆ ಭಾರತ ಮತ್ತು ಪಾಕ್ ಇಡೀ ವಿಶ್ವದಲ್ಲೇ ಬಾಸ್ಮತಿ ಅಕ್ಕಿಯ ಪ್ರಮುಖ ರಫ್ತುದಾರ ದೇಶಗಳು. ಈ ವಿಷಯವಾಗಿ ಸದಾ ಭಾರತ ಮತ್ತು ಪಾಕ್ ಮಧ್ಯೆ ಪೈಪೋಟಿ ನಡೀತಾನೇ ಇರುತ್ತೆ. ಎರಡೂ ದೇಶಗಳೂ ತಮ್ಮ ಅಕ್ಕಿಯನ್ನ ಹೆಚ್ಚಾಗಿ ಇರಾನ್, ಇರಾಕ್, ಯೆಮೆನ್, ಸೌದಿ ಅರೇಬಿಯಾ, ಯುಎಇ ಮತ್ತು ಅಮೆರಿಕಕ್ಕೆ ಎಕ್ಸ್ಪೋರ್ಟ್ ಮಾಡ್ತಿದ್ವು. ಆದ್ರೆ, ಬಾಸ್ಮತಿ ರಫ್ತಿನ ಪ್ರಮಾಣದಲ್ಲಿ ಇದುವರೆಗೂ ಭಾರತ ಪ್ರಾಬಲ್ಯ ಸಾಧಿಸಿದೆ.. ವರ್ಷದಿಂದ ವರ್ಷಕ್ಕೆ ಇಂಪ್ರೂಮೆಂಟ್ ಕಾಣ್ತಿದೆ.ಕಳೆದ ವರ್ಷ ಅಂದ್ರೆ, 2023ರಲ್ಲಿ ಭಾರತದ ಬಾಸ್ಮತಿ ರಫ್ತಿನಲ್ಲಿ ಸಿಕ್ಕಾಪಟ್ಟೆ ಪಾಸಿಟಿವ್ ಬೆಳವಣಿಗೆ ಕಂಡುಬಂದಿತ್ತು. ರಫ್ತಿನ ರೇಟು 11.5% ಏರಿಕೆಯಾಗಿ ಭಾರತ ಒಟ್ಟು 4.9 ಮಿಲಿಯನ್ ಮೆಟ್ರಿಕ್ ಟನ್ಗಳಷ್ಟು ಬಾಸ್ಮತಿ ಅಕ್ಕಿ ಎಕ್ಸ್ಪೋರ್ಟ್ ಮಾಡಿತ್ತು. ಖರೀದಿದಾರರು ಬಾಸ್ಮತಿಯನ್ನ ದೊಡ್ಡ ಪ್ರಮಾಣದಲ್ಲಿ ಆಮದು ಮಾಡ್ಕೊಂಡು ಸ್ಟಾಕ್ ಮಾಡಿ ಇಡೋಕೆ ಮುಗಿ ಬೀಳ್ತಿದ್ರಿಂದ ಭಾರತದ ಅಕ್ಕಿ ರಫ್ತು ಹೆಚ್ಚಾಗಿತ್ತು.

# ಅಕ್ರಮ ಹಣ ವರ್ಗಾವಣೆ: ಪೇಟಿಎಂಗೆ ದಂಡ




**ದೆಹಲಿ:** ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಪೇಟಿಎಂ ಪೇಮೆಂಟ್ಸ್ ಬ್ಯಾಂಕ್‌ಗೆ 5.49 ಕೋಟಿ ದಂಡವನ್ನು ಹಣಕಾಸು ಗುಪ್ತಚರ ಘಟಕವು ವಿಧಿಸಿದೆ.

ಫೈನಾನ್ಶಿಯಲ್ ಇಂಟೆಲಿಜೆನ್ಸ್ ಯೂನಿಟ್ -ಇಂಡಿಯಾ (ಎಫ್‌ಐಯು-ಐಎನ್ಡಿ), ಎಂಎಲ್ಎ (ಹಣ ಲಾಂಡರಿಂಗ್ ತಡೆ ಕಾಯ್ದೆ) ಅಡಿಯಲ್ಲಿ ತನ್ನ ಬಾಧ್ಯತೆಗಳ ಉಲ್ಲಂಘನೆಯನ್ನು ಉಲ್ಲೇಖಿಸಿ ಪೇಟಿಎಂ ಪೇಮೆಂಟ್ಸ್ ಬ್ಯಾಂಕ್ ಲಿಮಿಟೆಡ್‌ಗೆ ದಂಡವನ್ನು ವಿಧಿಸಿದೆ. ಅಕ್ರಮ ಚಟುವಟಿಕೆಗಳಲ್ಲಿ ತೊಡಗಿರುವ ಸಂಸ್ಥೆಗಳಿಂದ ಪೇಟಿಎಂ ಪೇಮೆಂಟ್ಸ್ ಬ್ಯಾಂಕ್ನಲ್ಲಿ ನಿರ್ವಹಿಸಲಾದ ಬ್ಯಾಂಕ್ ಖಾತೆಗಳ ಮೂಲಕ ಅಪರಾಧದ ಆದಾಯವನ್ನು ರವಾನಿಸಲಾಗಿದೆ ಎಂದು ಹಣಕಾಸು ಸಚಿವಾಲಯ ಆರೋಪಿಸಿದೆ.

ಜನವರಿ 31 ರಂದು ಭಾರತೀಯ ರಿಸರ್ವ್ ಬ್ಯಾಂಕ್ ಫೆಬ್ರವರಿ 29 ರಿಂದ ಹೊಸ ಠೇವಣಿಗಳನ್ನು ಸ್ವೀಕರಿಸದಂತೆ ನಿರ್ಬಂಧಿಸಿದ ನಂತರ ಈ ಕ್ರಮವು ಜಾರಿಯಾಗಿದೆ.

ಸಚಿವಾಲಯದ ಪ್ರಕಾರ, ಆನ್ಲೈನ್ ಜೂಜಾಟವನ್ನು ಸಂಘಟಿಸುವುದು ಮತ್ತು ಸುಗಮಗೊಳಿಸುವುದು ಸೇರಿದಂತೆ ಹಲವಾರು ಕಾನೂನುಬಾಹಿರ ಕೃತ್ಯಗಳಲ್ಲಿ ತೊಡಗಿರುವ ಕೆಲವು ಘಟಕಗಳು ಮತ್ತು ಅವರ ವ್ಯವಹಾರಗಳ ಜಾಲಕ್ಕೆ ಸಂಬಂಧಿಸಿದಂತೆ ಗುಪ್ತಚರ ಘಟಕವು ಪೇಟಿಎಂ ಸಾಲದಾತರ ಪರಿಶೀಲನೆಯನ್ನು ಪ್ರಾರಂಭಿಸಿದೆ. ಮಾರ್ಚ್ 15 ರ ನಂತರ ಯಾವುದೇ ಗ್ರಾಹಕರ ಖಾತೆಗಳು, ಪ್ರಿಪೇಯ್ಡ್ ಉಪಕರಣಗಳು, ವ್ಯಾಲೆಟ್ಗಳು, ಫಾಸ್ಟ್ಯಾಗ್ಗಳು, ರಾಷ್ಟ್ರೀಯ ಸಾಮಾನ್ಯ ಮೊಬಿಲಿಟಿ ಕಾರ್ಡ್ಗಳು ಇತ್ಯಾದಿಗಳಲ್ಲಿ ಯಾವುದೇ ಹೆಚ್ಚಿನ ಠೇವಣಿ ಅಥವಾ ಕ್ರೆಡಿಟ್ ವಹಿವಾಟುಗಳು ಅಥವಾ ಟಾಪ್-ಅಪ್ಗಳನ್ನು ಅನುಮತಿಸಲಾಗುವುದಿಲ್ಲ ಎಂದು ಆರ್‌ಬಿಐ ಹೇಳಿದೆ.

ಗ್ರಾಹಕರು ತಮ್ಮ ಪೇಟಿಎಂ ಪೇಮೆಂಟ್ಸ್ ಬ್ಯಾಂಕ್ ಖಾತೆಗಳು ಮತ್ತು ವ್ಯಾಲೆಟ್ಗಳಿಂದ ಹಣವನ್ನು ಹಿಂಪಡೆಯಬಹುದು ಅಥವಾ ಆ ಹಣವನ್ನು ಖಾಲಿಯಾಗುವವರೆಗೆ ಬಳಸಬಹುದು. ಆದರೆ ಮಾರ್ಚ್ 15 ರ ನಂತರ ಅವರು ಯಾವುದೇ ಹೊಸ ಹಣವನ್ನು ಸೇರಿಸಲು ಸಾಧ್ಯವಿಲ್ಲ ಎಂದು ಅದು ಹೇಳಿದೆ.

## ಇರಾನ್ ಸಂಸತ್ ಚುನಾವಣೆ : ಶಾಂತಿಯುತ

**ಟೆಹರಾನ್** : ಇರಾನ್ ಸಂಸತ್ ಚುನಾವಣೆಗೆ ಶುಕ್ರವಾರ ಮತದಾನ ಶಾಂತಿಯುತ ನಡೆಯಿತು. 2022ರಲ್ಲಿ ಹಿಜಾಬ್ ವಿವಾದಕ್ಕೆ ಸಂಬಂಧಿಸಿ ಮಹ್ಸಾ ಅಮಿನಿ ಸಾವನ್ನಪ್ಪಿದ ಘಟನೆಯ ಬಳಿಕ ಇರಾನ್ನಲ್ಲಿ ಭಾರೀ ಪ್ರತಿಭಟನೆ ಭುಗಿಲೆದ್ದ ಬಳಿಕ ಈ ಚುನಾವಣೆ ನಡೆಯುತ್ತಿರುವುದು ಹೆಚ್ಚಿನ ಮಹತ್ವವನ್ನು ಪಡೆದಿದೆ. ಇರಾನ್ನ ಸಂಸತ್ನ 290 ಸ್ಥಾನಗಳಿಗೆ ಚುನಾವಣೆ ನಡೆದಿದ್ದು, ಸುಮಾರು 15 ಸಾವಿರ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಈ ಮೊದಲು ಇಸ್ಲಾಮಿಕ್ ಕಾನ್ಸುಲೇಟಿವ್ ಅಸೆಂಬ್ಲಿಎಂದು ಹೆಸರು ಹೊಂದಿದ್ದ ಇರಾನ್ ಸಂಸತ್ ನಾಲ್ಕು ವರ್ಷಗಳ ಅವಧಿಯನ್ನು ಹೊಂದಿದೆ. ಸಂಸತ್ನ ನಾಲ್ಕು ಸ್ಥಾನಗಳನ್ನು ಧಾರ್ಮಿಕ ಅಲ್ಪಸಂಖ್ಯಾತರಿಗೆ ಮೀಸಲಿಡಲಾಗಿದೆ. 290 ಸಂಸತ್ ಸ್ಥಾನಗಳಿಗಲ್ಲದೆ, ಪ್ರಭಾವಶಾಲಿಯಾದ ತಜ್ಞರ ಅಸೆಂಬ್ಲಿಯ 88 ಸ್ಥಾನಗಳಿಗೆ ಮತದಾನ ನಡೆಯಿತು. ಇರಾನ್ ಸಂಸತ್ ಕಾರ್ಯಾಂಗವನ್ನು ನಿರ್ವಹಿಸುತ್ತದೆ, ಒಪ್ಪಂದಗಳು, ಆದೇಶಗಳಗೆ ಅಂಗೀಕರಿಸುವ ಹಾಗೂ ಇತರ ವಿಷಯಗಳನ್ನು ನಿರ್ವಹಿಸುವ ಹೊಣೆಗಾರಿಕೆಯನ್ನು ಹೊಂದಿದೆ. ಆದರೆ ಆಡಳಿತದ ಮೇಲಿನ ಸಂಪೂರ್ಣ ಅಧಿಕಾರವು ಇರಾನಿನ ಸರ್ವೋಚ್ಚ ನಾಯಕ ಅಯಾತೊಲ್ಲಾ ಅಲಿ ಖಮೇನಿ ಅವರ ಕೈಯಲ್ಲಿರುತ್ತದೆ. ಕಳೆದ ಎರಡು ದಶಕಗಳಿಂದ ಕಟ್ಟಾ ಬಲಪಂಥೀಯರು ಇರಾನ್ ಸಂಸತ್ ಮೇಲೆ ನಿಯಂತ್ರಣವನ್ನು ಹೊಂದಿದ್ದಾರೆ.



# ಪಾಲಿಸಿಬಜಾರ್ ಸಲಹಾ ಮಂಡಳಿಗೆ ಗಣ್ಯರ ನೇಮಕ




**ಬೆಂಗಳೂರು:** ಭಾರತೀಯ ವ್ಯವಹಾರಗಳ ವಿಮಾ ಅಗತ್ಯತೆಗಳನ್ನು ಪರಿಹರಿಸಲು ಮೀಸಲಾಗಿರುವ ಕ್ಷಿಪ್ರವಾಗಿ ಬೆಳೆಯುತ್ತಿರುವ ಬ್ರ್ಯಾಂಡ್ ಪಾಲಿಸಿಬಜಾರ್ ಫಾರ್ ಬ್ಯುಸಿನೆಸ್ ತನ್ನ ಸಲಹಾ ಮಂಡಳಿಗೆ ಮೂವರು ಉದ್ಯಮ ಗಣ್ಯರನ್ನು ಸೇರಿಸಿಕೊಂಡಿದೆ.

ದಿನೇಶ್ ವಘೇಲಾ, ಎ.ವಿ. ರಾವ್ ಮತ್ತು ಎಸ್. ನಾಗರಾಜ್ ಅವರನ್ನು ನೂತನವಾಗಿ ಸೇರಿಸಿಕೊಂಡಿದ್ದು, ಕಳೆದ ವರ್ಷಓರಿಯಂಟಲ್ ಇನ್ಶುರೆನ್ಸ್ ಕಂಪನಿ ಲಿಮಿಟೆಡ್ನ ಮಾಜಿ ಜನರಲ್ ಮ್ಯಾನೇಜರ್ ಶ್ರೀ ಅಜಿತ್ ಕುಮಾರ್ ಅವರನ್ನು ನಿಯುಕ್ತಿ ಮಾಡಿಕೊಂಡಿತ್ತು. ಅವರು ಸಾಮಾನ್ಯ ವಿಮಾ ಉದ್ಯಮದಲ್ಲಿ 37 ವರ್ಷಗಳ ಅಮೂಲ್ಯ ಅನುಭವವನ್ನು ಮಂಡಳಿಗೆ ತಂದರು. ಈ ಉದ್ಯಮದ ಪರಿಣತರು ತಮ್ಮೊಂದಿಗೆ ವಿಮೆಯ ವಿವಿಧ ಅಂಶಗಳಲ್ಲಿ ಅನುಭವ ಮತ್ತು ಪರಿಣತಿಯ ಸಂಪತ್ತನ್ನು ತರಲಿದ್ದು, ವ್ಯಾಪಾರ ವಿಮಾ ಭೂದೃಶ್ಯದಲ್ಲಿ ವ್ಯವಹಾರಕ್ಕಾಗಿ ಪಾಲಿಸಿಬಜಾರ್ನ ಸ್ಥಾನವನ್ನು ಇನ್ನಷ್ಟು ಬಲಪಡಿಸುತ್ತಾರೆ ಎಂದು ಮುಖ್ಯಸ್ಥರಾದ ಸಜ್ಜಾ ಪ್ರವೀಣ್ ಚೌಧರಿ ಪ್ರಕಟಣೆಯಲ್ಲಿ ಹೇಳಿದ್ದಾರೆ.

ದಿನೇಶ್ ವಘೇಲಾ ಅವರು ಸಹಾಯಕ ನಿರ್ದೇಶಕ ಮತ್ತು ಮಾರ್ಗದರ್ಶಕರ ಪಾತ್ರವನ್ನು ವಹಿಸುತ್ತಾರೆ. 35 ವರ್ಷಗಳ ಅನುಭವದೊಂದಿಗೆ, ವಘೇಲಾ ವ್ಯವಹಾರಕ್ಕಾಗಿ ಪಾಲಿಸಿಬಜಾರ್ಗೆ ಪರಿಣತಿಯ ವಿಸ್ತಾರ ಮತ್ತು ಒಳನೋಟವನ್ನು ತರುತ್ತಾರೆ.

ವಘೇಲಾ ಅವರ ವೃತ್ತಿಜೀವನವು ಜನರಲ್ ಇನ್ಶೂರೆನ್ಸ್ ಕಾರ್ಪೊರೇಷನ್ (ಜಿಐಸಿ) ನೊಂದಿಗೆ ಗಮನಾರ್ಹವಾದ 25 ವರ್ಷಗಳ ಅನುಭವವನ್ನು ಹೊಂದಿದೆ. ಅಲ್ಲಿ ಅವರು ವಿಮಾ ಕ್ಷೇತ್ರದ ಬೆಳವಣಿಗೆ ಮತ್ತು ಅಭಿವೃದ್ಧಿಗೆ ಗಣನೀಯವಾಗಿ ಕೊಡುಗೆ ನೀಡಿದ್ದಾರೆ. ವಿಮಾ ಉದ್ಯಮದಲ್ಲಿ ಅನುಭವಿ ವೃತ್ತಿಪರರಾಗಿರುವ ರಾವ್ ಅವರು ಸಲಹಾ ಮಂಡಳಿಯ ಸದಸ್ಯರಾಗಿ ಸೇರುತ್ತಾರೆ. ಅವರ ಕಾರ್ಯತಂತ್ರದ ಒಳನೋಟಗಳು ಬ್ರ್ಯಾಂಡ್ನ ಯಶಸ್ಸಿಗೆ ಗಮನಾರ್ಹವಾಗಿ ಕೊಡುಗೆ ನೀಡುತ್ತವೆ ಎಂದು ನಿರೀಕ್ಷಿಸಲಾಗಿದೆ.ನಾಗರಾಜ್ ಅವರು ನಿವೃತ್ತ ಮುಖ್ಯ ಪ್ರಾದೇಶಿಕ ವ್ಯವಸ್ಥಾಪಕರು ಮತ್ತು ಯುನೈಟೆಡ್ ಇಂಡಿಯಾ ಇನ್ಶುರೆನ್ಸ್ ಕಂಪನಿಯಲ್ಲಿ ದೊಡ್ಡ ಕಾರ್ಪೊರೇಟ್ ಮತ್ತು ಬ್ರೋಕರ್ಸ್ ಸೆಲ್ ಮುಖ್ಯಸ್ಥರು, ವ್ಯಾಪಾರದ ಸಲಹಾ ಮಂಡಳಿಗಾಗಿ ಪಾಲಿಸಿಬಜಾರ್ ಅನ್ನು ಸೇರುತ್ತಾರೆ. 38 ವರ್ಷಗಳ ವೃತ್ತಿಜೀವನದೊಂದಿಗೆ, ನಾಗರಾಜ್ ಅವರ ಬಹುಮುಖಿ ಪಾತ್ರಗಳು, ವಿಮೆ, ಕ್ಲೈಮ್ಗಳ ನಿರ್ವಹಣೆ ಮತ್ತು ಮಾರ್ಕೆಟಿಂಗ್ ಸೇರಿದಂತೆ, ನಾವೀನ್ಯತೆಗೆ ಸಮರ್ಪಣೆ ಮತ್ತು ವಿಮಾ ಭೂದೃಶ್ಯದ ಮೇಲೆ ಆಳವಾದ ಪ್ರಭಾವವನ್ನು ಪ್ರತಿಬಿಂಬಿಸುತ್ತವೆ ಎಂದು ವಿವರಿಸಿದ್ದಾರೆ.

# ಢಾಕಾದಲ್ಲಿ ಅಗ್ನಿ ದುರಂತ 44 ಮಂದಿ ಸಜೀವ ದಹನ



**ಢಾಕಾ:** ಬಾಂಗ್ಲಾದೇಶದ ರಾಜಧಾನಿಯ ಏಳು ಮಹಡಿಯ ಕಟ್ಟಡದಲ್ಲಿ ಗುರುವಾರ ರಾತ್ರಿ ಸಂಭವಿಸಿದ ಭೀಕರ ಅಗ್ನಿ ದುರಂತದಲ್ಲಿ ಕನಿಷ್ಠ 44 ಮಂದಿ ಸಜೀವ ದಹನವಾಗಿದ್ದಾರೆ.

ಬೈಲಿ ರಸ್ತೆಯ ಜನಪ್ರಿಯ ಬಿರಿಯಾನಿ ರೆಸ್ಟೋರೆಂಟ್ ನಲ್ಲಿ ಈ ಬೆಂಕಿ ದುರಂತ ರಾತ್ರಿ 9.50ರ ಸುಮಾರಿಗೆ ಸಂಭವಿಸಿದ್ದು, ಮೇಲಿನ ಮಹಡಿಗಳಿಗೆ ಕಾಳ್ಗಿಚ್ಚಿನಂತೆ ಹಬ್ಬಿತು. ಅಸಂಖ್ಯಾತ ಮಂದಿ ಬೆಂಕಿಯ ಕೆನ್ನಾಲಿಗೆಯಲ್ಲಿ ಸಿಲುಕಿಕೊಂಡರು. ಎರಡು ಗಂಟೆಯ ಒಳಗೆ ಬೆಂಕಿಯನ್ನು ತಹಬಂದಿಗೆ ತರಲಾಗಿದೆ. ಕಟ್ಟಡಗಳಲ್ಲಿ ಸಿಕ್ಕಿಹಾಕಿಕೊಂಡ 75 ಮಂದಿಯನ್ನು ರಕ್ಷಿಸಲಾಗಿದೆ ಎಂದು ಅಗ್ನಿಶಾಮಕ ಇಲಾಖೆಯ ಅಧಿಕಾರಿ ಮೊಹ್ಮದ್ ಶಿಹಾಬ್ ಹೇಳಿದ್ದಾರೆ.

ಬೈಲಿ ರಸ್ತೆಯ ಕಟ್ಟಡಗಳಲ್ಲಿ ಪ್ರಮುಖವಾಗಿ ರೆಸ್ಟೋರೆಂಟ್ ಗಳು, ಬಟ್ಟೆ ಅಂಗಡಿಗಳು ಮತ್ತು ಮೊಬೈಲ್ ಶಾಪ್ ಗಳಿವೆ. ಕೆಲವರು ಆರನೇ ಮಹಡಿಯಿಂದ ಕೆಳಕ್ಕೆ ಇಳಿಯಲು ನೀರಿನ ಪೈಪ್ ಗಳನ್ನು ಬಳಸಿದ್ದು, ಈ ವೇಳೆ ಗಾಯಗಳಾಗಿವೆ. ಇತರ ಹಲವು ಮಂದಿ ಮೇಲ್ಛಾವಣಿಯಲ್ಲಿ ಸಿಕ್ಕಿಹಾಕಿಕೊಂಡಿದ್ದು, ನೆರವಿಗಾಗಿ ಮೊರೆ ಇಡುವ ದೃಶ್ಯ ಕಂಡುಬಂದಿತ್ತು.

ಬಹುತೇಕ ಗಾಯಾಳುಗಳು ಚಿಕಿತ್ಸೆ ಪಡೆಯುತ್ತಿರುವ ಢಾಕಾ ಮೆಡಿಕಲ್ ಕಾಲೇಜಿಗೆ ಭೇಟಿ ನೀಡಿದ ಆರೋಗ್ಯ ಸಚಿವ ಸಮಂತ ಲಾಲ್ ಸೇನ್, ಸಾವಿನ ಸಂಖ್ಯೆ ಹೆಚ್ಚಾಗುವ ನಿರೀಕ್ಷೆ ಇದೆ ಎಂದು ಹೇಳಿದ್ದಾರೆ. ಸುಮಾರು 40 ಮಂದಿ ಗಾಯಾಳುಗಳು ನಗರದ ಪ್ರಮುಖ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

## ಜೈಲಿನಲ್ಲಿ ಇಸ್ರೇಲ್ ರಾಯಭಾರಿಯ ಮಗನ ಮೇಲೆ ಖೈದಿಯಿಂದ ಹಲ್ಲೆ

**ನ್ಯೂಯಾರ್ಕ್:** ಇಸ್ರೇಲ್ ರಾಯಭಾರಿಯ ಮಗನಿಗೆ ಅಮೆರಿಕದ ಜೈಲಿನಲ್ಲಿ ಮತ್ತೊಬ್ಬ ಖೈದಿ ಹಲ್ಲೆ ನಡೆಸಿರುವ ಘಟನೆ ನಡೆದಿದೆ. ಇಸ್ರೇಲ್ ರಾಯಭಾರಿಯ ಮಗ 19 ವರ್ಷದ ಮಗ ಅವ್ರಹಾಮ್ ಗಿಲ್ ಹಲ್ಲೆಗೊಳಗಾದ ಯುವಕ. ಮಿಯಾಮಿ-ಡೇಡ್ ಕೌಂಟಿಯ ಜೈಲಿನಲ್ಲಿ ಫೆಬ್ರವರಿ 28ರಂದು ಅವ್ರಹಾಮ್ ಗಿಲ್ ಮೇಲೆ ಮತ್ತೊಬ್ಬ ಖೈದಿ ಹಲ್ಲೆ ನಡೆಸಿದ್ದಾನೆ. ಗಿಲ್ ಬೈಕ್ ಜನವರಿ ಜನವರಿ 27 ರಂದು ಸನ್ನಿ ಐಲ್ಸ್ ಬೀಚ್ ಪೊಲೀಸ್ ಅಧಿಕಾರಿಗೆ ಡಿಕ್ಕಿಯಾಗಿತ್ತು. ಈ ಆರೋಪದಲ್ಲಿ ಗಿಲ್ ನನ್ನು ಬಂಧಿಸಲಾಗಿತ್ತು. ಆರಂಭದಲ್ಲಿ ಗೃಹಬಂಧನದಲ್ಲಿದ್ದ ಗಿಲ್ ಬಳಿಕ ಜೈಲಿಗೆ ಹಾಕಲಾಗಿದೆ. ಸೆಲ್ನಲ್ಲಿ 32 ವರ್ಷದ ಬ್ಲೇಕ್ ಎಲ್ವಿಸ್ ಎರ್ಮಸ್ ಎಂಬ ಖೈದಿಯೊಂದಿಗೆ ಗಿಲ್ ಜಗಳ ಮಾಡಿದ್ದು, ಇದರಿಂದ ಆತ ಗಿಲ್ ಮೇಲೆ ಗಂಭೀರವಾಗಿ ಹಲ್ಲೆ ನಡೆಸಿದ್ದಾನೆ ಎನ್ನಲಾಗಿದೆ.



# '100 ಔಷಧ'ಗಳ ಬೆಲೆ ಇಳಿಕೆ



**ನವದೆಹಲಿ** : ದೇಶದಲ್ಲಿ ರೋಗಗಳಿಗೆ ಚಿಕಿತ್ಸೆ ಪಡೆಯುವುದು ತುಂಬಾ ದುಬಾರಿಯಾಗುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ, ಕೇಂದ್ರ ಸರ್ಕಾರವು ಸಾರ್ವಜನಿಕರಿಗೆ ಪರಿಹಾರ ನೀಡುವ ನಿರ್ಧಾರವನ್ನ ತೆಗೆದುಕೊಂಡಿದೆ. ಎನ್ಪಿಪಿಎ ಅಂದರೆ ರಾಷ್ಟ್ರೀಯ ಔಷಧೀಯ ಬೆಲೆ ಪ್ರಾಧಿಕಾರ 69 ಹೊಸ ಸೂತ್ರೀಕರಣಗಳ ಚಿಲ್ಲರೆ ಬೆಲೆಯನ್ನ ಮತ್ತು ಗರಿಷ್ಠ ಬೆಲೆಯನ್ನ 31ಕ್ಕೆ ನಿಗದಿಪಡಿಸಿದೆ. ಇದರ ನಂತರ, ಕೊಲೆಸ್ಟ್ರಾಲ್, ಸಕ್ಕರೆ, ನೋವು, ಜ್ವರ, ಸೋಂಕು, ಅತಿಯಾದ ರಕ್ತಸ್ರಾವ, ಕ್ಯಾಲ್ಸಿಯಂ, ವಿಟಮಿನ್ ಡಿ 3, ಮಕ್ಕಳ ಪ್ರತಿಜೀವಕಗಳು ಸೇರಿದಂತೆ 100 ಔಷಧಗಳು ಅಗ್ಗವಾಗುತ್ತವೆ ಮತ್ತು ಜನರ ಆರೋಗ್ಯ ವೆಚ್ಚಗಳು ಕಡಿಮೆಯಾಗುತ್ತವೆ. ಕೊಲೆಸ್ಟ್ರಾಲ್, ಸಕ್ಕರೆ (ಮಧುಮೇಹ) ನೋವು, ಜ್ವರ, ಸೋಂಕು, ಅತಿಯಾದ ರಕ್ತಸ್ರಾವವನ್ನು ನಿಲ್ಲಿಸುವುದು, ಕ್ಯಾಲ್ಸಿಯಂ, ವಿಟಮಿನ್ ಡಿ 3, ಮಕ್ಕಳ ಪ್ರತಿಜೀವಕಗಳು ಸೇರಿದಂತೆ ಆಂಟಿವೆನಮ್ ಔಷಧಗಳು ಸಹ ಅಗ್ಗವಾಗುತ್ತವೆ. ಆಂಟಿವೆನಮ್'ನ್ನ ಹಾವು ಕಡಿತಕ್ಕೆ ಚಿಕಿತ್ಸೆ ನೀಡಲು ಬಳಸಲಾಗುತ್ತದೆ. ಎನ್ಪಿಪಿಎ ಇಂಡಿಯಾ 69 ಹೊಸ ಸೂತ್ರೀಕರಣಗಳ ಚಿಲ್ಲರೆ ಬೆಲೆ ಮತ್ತು 31ರ ಗರಿಷ್ಠ ಬೆಲೆಯನ್ನ ನಿಗದಿಪಡಿಸಿದೆ ಮತ್ತು ಅದರ ಬಗ್ಗೆ ಅಧಿಸೂಚನೆಯನ್ನು ಸಹ ಹೊರಡಿಸಲಾಗಿದೆ. ಭಾರತ ಸರ್ಕಾರದ ರಾಸಾಯನಿಕ ಮತ್ತು ರಸಗೊಬ್ಬರ ಸಚಿವಾಲಯದ ಅಡಿಯಲ್ಲಿ ಬರುವ ಔಷಧೀಯ ಇಲಾಖೆಯ ಎನ್ಪಿಪಿಎ ಈ ಅಧಿಸೂಚನೆಯನ್ನ ಹೊರಡಿಸಿದೆ.

# ರಾಮಲಲ್ಲಾನ ದರ್ಶನ ಪಡೆದ ಗರುಡ ದೇವ



**ಅಯೋಧ್ಯೆ** : ಅಯೋಧ್ಯೆಯಲ್ಲಿ ನಿರ್ಮಿಸಲಾದ ಬೃಹತ್ ರಾಮ ಮಂದಿರದ ಪ್ರತಿಷ್ಠಾಪನೆಯ ನಂತರ, ಭಕ್ತರ ಸಂಖ್ಯೆ ಹೆಚ್ಚುತ್ತಿದೆ. ಮನುಷ್ಯರಲ್ಲದೆ, ಪ್ರಾಣಿಗಳು ಮತ್ತು ಪಕ್ಷಿಗಳು ಸಹ ರಾಮಲಲ್ಲಾ ಅವರ ಆಸ್ಥಾನಕ್ಕೆ ಹಾಜರಾಗುವುದನ್ನು ಕಾಣಬಹುದು. ಕೆಲವು ದಿನಗಳ ಹಿಂದೆ ರಾಮಲಾಲಾ ದೇವಸ್ಥಾನದಲ್ಲಿ ಕೋತಿಯೊಂದು ಕಾಣಿಸಿಕೊಂಡಿತ್ತು. ಈಗ ಪಕ್ಷಿಯೊಂದು ದೇವಾಲಯದ ಸುತ್ತಲೂ ಹಾರುತ್ತಿರುವುದು ಕಂಡುಬಂದಿದೆ. ಈ ವಿಡಿಯೋ ಕೂಡ ವೈರಲ್ ಆಗಿದೆ. ಶ್ರೀ ರಾಮನ ಜನ್ಮಸ್ಥಳದಲ್ಲಿ ಕುಳಿತಿರುವ ಬಾಲ ರಾಮನ ಆಸ್ಥಾನದಲ್ಲಿ ಪ್ರದಕ್ಷಿಣೆ ಹಾಕುತ್ತಿರುವ ಗರುಡ ಪಕ್ಷಿಯ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ಈ ವೀಡಿಯೊವನ್ನು ಬಹಳ ಕುತೂಹಲದಿಂದ ವೀಕ್ಷಿಸಲಾಗುತ್ತಿದೆ. ಒಂದು ವಾರದ ಹಿಂದೆ, ಗರ್ಭಗುಡಿಯ ಮೇಲೆ ಗರುಡ ಇದ್ದಕ್ಕಿದ್ದಂತೆ ಕಾಣಿಸಿಕೊಂಡಿದೆ.

## ಟೆಕ್ಸಾಸ್ ನಲ್ಲಿ ಒಂದು ಮಿಲಿಯನ್ ಎಕರೆ ಕಾಡಿಗೆ ವ್ಯಾಪಿಸಿದ ಕಾಡ್ಗಿಚ್ಚು

ಟೆಕ್ಸಾಸ್ ನಲ್ಲಿ ಸಂಭವಿಸಿದ ಕಾಡ್ಗಿಚ್ಚಿನಿಂದ ಸುಮಾರು ಒಂದು ಮಿಲಿಯನ್ ಎಕರೆಗಳಷ್ಟು ಕಾಡು ಸಂಪೂರ್ಣ ಬೆಂಕಿಗಾಹುತಿಯಾಗಿದೆ. ಇದು ಟೆಕ್ಸಾಸ್ ಸ್ಮೋಕ್‌ಹೌಸ್ ಕ್ರೀಕ್ ಫೈರ್ 2006 ರ ಪೂರ್ವ ಅಮರಿಲ್ಲೊ ಕಾಂಪ್ಲೆಕ್ಸ್ ಬೆಂಕಿಯನ್ನು ಮೀರಿಸಿದ್ದು, ಇದುವರೆಗೆ ದಾಖಲಾದ ರಾಜ್ಯದ ಅತಿದೊಡ್ಡ ಕಾಡ್ಗಿಚ್ಚು ಇದಾಗಿದೆ. ಅಗ್ನಿಶಾಮಕ ದಳದ ಅಧಿಕಾರಿಯಗಳು ಶತಪ್ರಯತ್ನ ನಡೆಸಿದರು ಕೇವಲ 3% ಬೆಂಕಿಯನ್ನು ಮಾತ್ರವೇ ನಿಯಂತ್ರಿಸಲು ಸಾಧ್ಯವಾಯಿತು ಎಂದು ಅಗ್ನಿಶಾಮಕ ಅಧಿಕಾರಿಗಳು ತಿಳಿಸಿದ್ದಾರೆ. ಹಚಿನ್ಸನ್ ಕೌಂಟಿಯ ಬೆಂಕಿಯು 83 ವರ್ಷದ ಜಾಯ್ಸ್ ಬ್ಲಾಂಕೆನ್ಶಿಪ್ನ ಜೀವವನ್ನು ಬಲಿ ತೆಗೆದುಕೊಂಡಿತು, ಬೆಂಕಿಯು ಆಕೆಯ ಮನೆಯನ್ನು ಸಂಪೂರ್ಣವಾಗಿ ನಾಶಪಡಿಸಿದೆ ಎಂದು ಅವರ ಸಂಬಂಧಿಕರು ಬಹಿರಂಗಪಡಿಸಿದ್ದಾರೆ. ಬೆಂಕಿಯು ಉತ್ತರ ಟೆಕ್ಸಾಸ್ನಾದ್ಯಂತ ವ್ಯಾಪಕ ನಾಶವನ್ನು ಉಂಟುಮಾಡಿತು. ಈ ಮಾರಣಾಂತಿಕ ಘಟನೆಯು ಟೆಕ್ಸಾಸ್ ಪ್ಯಾನ್ಹ್ಯಾಂಡಲ್ನಲ್ಲಿ ಉಲ್ಬಣಗೊಳ್ಳುತ್ತಿರುವ ಐದು ಮಾರಣಾಂತಿಕ ಕಾಡ್ಗಿಚ್ಚುಗಳಲ್ಲಿ ಒಂದಾಗಿದೆ, ಇದು ಹಲವಾರು ಮನೆಗಳು, ಜಾನುವಾರುಗಳು ಮತ್ತು ಜೀವನೋಪಾಯಕ್ಕೆ ಗಂಭೀರ ಅಪಾಯವನ್ನು ಉಂಟು ಮಾಡುತ್ತದೆ.



## ಜೈಲಿನಿಂದ ಬಿಡುಗಡೆಯಾದ ಎರಡೇ ದಿನಕ್ಕೆ ಮತ್ತೆ ಕಾಶ್ಮೀರ ಪತ್ರಕರ್ತ ಬಂಧನ!



**ಶ್ರೀನಗರ:** ಐದು ವರ್ಷಗಳ ಜೈಲುವಾಸದಿಂದ ಬಿಡುಗಡೆಯಾದ ಎರಡೇ ದಿನಕ್ಕೆ ಮತ್ತೊಂದು ಪ್ರಕರಣದಲ್ಲಿ ಕಾಶ್ಮೀರಿ ಪತ್ರಕರ್ತ ಆಸಿಫ್ ಸುಲ್ತಾನ್ ಅವರನ್ನು ಬಂಧಿಸಲಾಗಿದೆ ಎಂದು ಅಧಿಕಾರಿಗಳು ಶುಕ್ರವಾರ ತಿಳಿಸಿದ್ದಾರೆ. ಸುಲ್ತಾನ್ ಅವರನ್ನು ಗುರುವಾರ ತಡರಾತ್ರಿ ಮತ್ತೆ ಬಂಧಿಸಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ಆಸಿಫ್ ಸುಲ್ತಾನ್ ಸ್ಥಳೀಯ ನಿಯತಕಾಲಿಕೆಯಲ್ಲಿ ವರದಿಗಾರರಾಗಿ ಕೆಲಸ ಮಾಡುತ್ತಿದ್ದಾಗ ಸೆಪ್ಟೆಂಬರ್ 2018 ರಲ್ಲಿ ಕಾನೂನುಬಾಹಿರ ಚಟುವಟಿಕೆಗಳ (ತಡೆಗಟ್ಟುವಿಕೆ) ಕಾಯ್ದೆ ಪ್ರಕರಣದಲ್ಲಿ ಅವರನ್ನು ಮೊದಲ ಬಾರಿಗೆ ಬಂಧಿಸಲಾಯಿತು. ನಿಷೇಧಿತ ಉಗ್ರಗಾಮಿ ಗುಂಪಿಗೆ ಬೆಂಬಲ ನೀಡಿದ್ದಕ್ಕಾಗಿ ಅವರನ್ನು ಬಂಧಿಸಲಾಗಿತ್ತು. ಆದರೆ, ಯಾವುದೇ ಉಗ್ರಗಾಮಿ ಗುಂಪಿನೊಂದಿಗೆ ಸಂಪರ್ಕ ಹೊಂದಿದ್ದಾರೆ ಎಂಬುದನ್ನು ಸಾಬೀತುಪಡಿಸುವಲ್ಲಿ ತನಿಖಾ ಸಂಸ್ಥೆಗಳು ವಿಫಲವಾಗಿವೆ ಎಂದು

ಏಪ್ರಿಲ್ 2022 ರಲ್ಲಿ ಜಮ್ಮು ಮತ್ತು ಕಾಶ್ಮೀರ ಹೈಕೋರ್ಟ್ ಅವರಿಗೆ ಜಾಮೀನು ನೀಡಿತು. ಆದಾಗ್ಯೂ, ಕೆಲ ದಿನಗಳ ಬಳಿಕ ಅವರ ಮೇಲೆ ಮತ್ತೊಂದು ಪ್ರಕರಣ ದಾಖಲಾಗಿತ್ತು. ಮಂಗಳವಾರ ಉತ್ತರ ಪ್ರದೇಶದ ಅಂಬೇಡ್ಕರ್ ನಗರ ಜಿಲ್ಲಾ ಕಾರಾಗೃಹದಿಂದ ಬಿಡುಗಡೆಗೊಂಡ ಅವರು ಗುರುವಾರ ಮನೆಗೆ ತಲುಪಿದ್ದರು. ಆದರೆ, ಅದೇ ರಾತ್ರಿ ಮನೆಗೆ ಮರಳಿದ ನಂತರ ಮತ್ತೊಂದು ಪ್ರಕರಣದಲ್ಲಿ ಬಂಧನಕ್ಕೊಳಗಾಗಿದ್ದರಿಂದ ಕುಟುಂಬದವರ ಸಂತಸ ಅಲ್ಪಕಾಲಿಕವಾಗಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಸಂವಿಧಾನ ಬದಲಾಯಿಸುವ ಷಡ್ಯಂತ್ರ



**ಬೆಂಗಳೂರು:** ಸಂವಿಧಾನವನ್ನು ಬದಲಾಯಿಸುವ ಪ್ರಯತ್ನಗಳು ನಡೆಯುತ್ತಿವೆ ಎಂದು ಭಾನುವಾರ ಹೇಳಿದ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಂಬರುವ ಲೋಕಸಭೆ ಚುನಾವಣೆಯಲ್ಲಿ ಗಟ್ಟಿಯಾಗಿ ಮತ್ತು ಒಗ್ಗಟ್ಟಾಗಿ ನಿಲ್ಲದಿದ್ದರೆ ಭಾರತದಲ್ಲಿ ''ಖಂಡಿತವಾಗಿಯೂ ಸರ್ವಾಧಿಕಾರ'' ಇರುತ್ತದೆ ಎಂದು ಎಚ್ಚರಿಸಿದ್ದಾರೆ.

ಅರಮನೆ ಮೈದಾನದಲ್ಲಿ ನಡೆದ 'ಸಂವಿಧಾನ ಮತ್ತು ರಾಷ್ಟ್ರೀಯ ಏಕತಾ ಸಮಾವೇಶ-2024'ರ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಖರ್ಗೆ, ಸಂವಿಧಾನವನ್ನು ಬದಲಾಯಿಸಲು ಅನೇಕ ಜನರು ಪ್ರಯತ್ನಿಸುತ್ತಿದ್ದಾರೆ.

ಮುಂಬರುವ ಚುನಾವಣೆಯಲ್ಲಿ ಗಟ್ಟಿಯಾಗಿ ಒಗ್ಗಟ್ಟಾಗಿ ನಿಲ್ಲದೇ ಸಂವಿಧಾನಕ್ಕೆ ಧಕ್ಕೆ ಉಂಟಾದರೆ ಮುಂದಿನ ದಿನಗಳಲ್ಲಿ ಈ ದೇಶದಲ್ಲಿ ಸರ್ವಾಧಿಕಾರ ನಡೆಯುವುದು ನಿಶ್ಚಿತ. ನೀವು ಸರ್ವಾಧಿಕಾರವನ್ನು ಬಯಸುತ್ತೀರಾ ಅಥವಾ ನ್ಯಾಯದೊಂದಿಗೆ ಜೀವನ ನಡೆಸಲು ಬಯಸುತ್ತೀರಾ? ಎಂಬುದನ್ನು ನಿರ್ಧರಿಸುವುದು ಪ್ರಮುಖವಾಗಿದೆ ಎಂದರು.

''ಸಂವಿಧಾನ ಉಳಿದರೆ ಈ ದೇಶದ ಏಕತೆ ಉಳಿಯುತ್ತದೆ. ಪ್ರಜಾಪ್ರಭುತ್ವ ಉಳಿದರೆ ಎಲ್ಲರೂ ಸಮೃದ್ಧಿಯಿಂದ ಬದುಕಬಹುದು. ಆದರೆ ಇಂದು ಕೇಂದ್ರದಲ್ಲಿ ಸಂವಿಧಾನವನ್ನು ರಕ್ಷಿಸುವ ಅಥವಾ ಸಂವಿಧಾನವನ್ನು ಗಮನದಲ್ಲಿಟ್ಟುಕೊಂಡು ಕಾರ್ಯನಿರ್ವಹಿಸುವ ಯಾವುದೇ ಸರ್ಕಾರವಿಲ್ಲ. ಅದಕ್ಕಾಗಿ ಸಂವಿಧಾನವನ್ನು ರಕ್ಷಿಸಬೇಕಾಗಿದೆ. ಒಂದು ನಿರ್ದಿಷ್ಟ ಸಿದ್ಧಾಂತವನ್ನು ಹೇರಲು ಪ್ರಯತ್ನಿಸುವ ಮೂಲಕ ನಾಗರಿಕರನ್ನು ದಾರಿ ತಪ್ಪಿಸುವ ಪ್ರಯತ್ನಗಳ ಬಗ್ಗೆ ಜಾಗೃತರಾಗಬೇಕು ಎಂದು ಕರೆ ನೀಡಿದ ಖರ್ಗೆ, ಈಗಿರುವ ಸಂವಿಧಾನವನ್ನು ತೆಗೆದು ಹೊಸ ಸಂವಿಧಾನ ರಚಿಸುವ ಷಡ್ಯಂತ್ರ ನಡೆಯುತ್ತಿದೆ ಎಂದು ಕಿಡಿಕಾರಿದರು.

ಪ್ರಧಾನಿ ನರೇಂದ್ರ ಮೋದಿ ಅವರು 'ಸರ್ಕಾರದ ಗ್ಯಾರಂಟಿ' ಬದಲಿಗೆ 'ನನ್ನ ಗ್ಯಾರಂಟಿ' ಅಥವಾ 'ಬಿಜೆಪಿ ಸರ್ಕಾರದ ಗ್ಯಾರಂಟಿ' ಎನ್ನುವುದನ್ನು ರೂಢಿಸಿಕೊಂಡಿದ್ದಾರೆ. ಇದು ಮೋದಿ ಗ್ಯಾರಂಟಿ ಹೇಗೆ? ದೇಶದ ಜನರು ತೆರಿಗೆ ಪಾವತಿಸಿ ಹಣ ನೀಡಿದಾಗ ಅದು ನಿಮ್ಮದಲ್ಲ, ಈ ರೀತಿ ಒಬ್ಬ ವ್ಯಕ್ತಿ ನಾನು ಮಾಡಿದ್ದೇನೆ ಎಂದು ಹೇಳಿದರೆ ಮುಂದೊಂದು ದಿನ ದೇಶ ಸರ್ವಾಧಿಕಾರದತ್ತ ಸಾಗಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

# ಪ್ಯಾಸೆಂಜರ್ ರೈಲಿನ ಟಿಕೆಟ್ ದರ ಇಳಿಕೆ



ನವದೆಹಲಿ: ರೈಲು ಪ್ರಯಾಣಿಕರಿಗೆ ಭಾರತೀಯ ರೈಲ್ವೆ ಇಲಾಖೆ ಗುಡ್ನ್ಯೂಸ್ ನೀಡಿದೆ. ಮಹತ್ವದ ಪ್ರಕಟಣೆಯಲ್ಲಿ, ಭಾರತೀಯ ರೈಲ್ವೆಯು ಟಿಕೆಟ್ ದರಗಳನ್ನು ಕೋವಿಡ್ ಪೂರ್ವದ ಮಟ್ಟಕ್ಕೆ ಇಳಿಸಲು ನಿರ್ಧರಿಸಿದೆ. ರೈಲು ಟಿಕೆಟ್ ದರಗಳನ್ನು ಇಳಿಸಲು ನಿರ್ಧರಿಸಿರುವುದರಿಂದ ರೈಲ್ವೆ ಪ್ರಯಾಣಿಕರಿಗೆ ತುಸು ರಿಲೀಫ್ ನೀಡಿದಂತಾಗಿದ್ದು, ಕೊರೊನಾ ಸಾಂಕ್ರಾಮಿಕ ರೋಗದ ನಂತರ ಬಹುತೇಕ ವಸ್ತುಗಳಿಗೆ ಬೆಲೆ ಏರಿಕೆ ಆಗಿರುವುದರಿಂದ ಬೇಸತ್ತಿರುವ ರೈಲು ಪ್ರಯಾಣಿಕರಿಗೆ ರೈಲ್ವೆ ಇಲಾಖೆಯ ಈ ನಿರ್ಧಾರ ನೆಮ್ಮದಿ ತಂದಿದೆ. ಫೆ.27ರಿಂದಲೇ ಈ ಬೆಲೆ ಇಳಿಕೆ ನಿಯಮ ಅನ್ವಯವಾಗಿದೆ. ಕೊರೊನಾ ಸಮಯದಲ್ಲಿ ಮೆಮು/ಡೆಮು ಮತ್ತು ಪ್ಯಾಸೆಂಜರ್ ರೈಲು ಪ್ರಯಾಣ ದರವನ್ನು ಹೆಚ್ಚಿಸಿದ್ದ ರೈಲ್ವೆ ಮಂಡಳಿ ಇದೀಗ ಕಡಿಮೆ ಮಾಡಿದ್ದು, ನೈಋತ್ಯ ರೈಲ್ವೆಯ ಬೆಂಗಳೂರು ವಲಯದ 20 (ಹೋಗುವ – ಬರುವ) ಜೋಡಿ ಸ್ಥಳೀಯ ರೈಲು ಪ್ರಯಾಣ ದರವನ್ನು ಇಳಿಸಿದೆ. ಕೋವಿಡ್ ಸಮಯದಲ್ಲಿ ಪ್ಯಾಸೆಂಜರ್ ರೈಲುಗಳನ್ನು ಸ್ಥಗಿತಗೊಳಿಸಲಾಗಿತ್ತು. ಆ ಸಮಯದಲ್ಲಿ ಪ್ಯಾಸೆಂಜರ್ ರೈಲಿನ ಕನಿಷ್ಠ ಟಿಕೆಟ್ ದರವನ್ನು 10 ರೂ.ನಿಂದ 30 ರೂ.ಗೆ ಹೆಚ್ಚಿಸಲಾಗಿತ್ತು. ಇದು ಎಕ್ಸ್ಪ್ರೆಸ್ ರೈಲುಗಳ ದರಕ್ಕೆ ಅನುಗುಣವಾಗಿತ್ತು. ಆದರೆ ಇದೀಗ ಈ ದರವನ್ನು ಇಳಿಕೆ ಮಾಡಲಾಗಿದ್ದು, ರೈಲು ಪ್ರಯಾಣಿಕರಿಗೆ ಹೊರೆ ಕಡಿಮೆಯಾಗಿದೆ. ದರ ಕಡಿತದ ಉಪಕ್ರಮದ ಭಾಗವಾಗಿ, ಎಲ್ಲಾ ಮೇನ್ಲೈನ್ ಎಲೆಕ್ಟ್ರಿಕ್ ಮಲ್ಟಿಪಲ್ ಯುನಿಟ್ (ಒಇಒಗ) ರೈಲುಗಳು ಮತ್ತು 'ಶೂನ್ಯ'ದಿಂದ ಪ್ರಾರಂಭವಾಗುವ ಸಂಖ್ಯೆಗಳನ್ನು ಹೊಂದಿರುವ ರೈಲುಗಳಲ್ಲಿ ಸಾಮಾನ್ಯ ದರ್ಜೆಯ ದರಗಳನ್ನು ಸರಿಸುಮಾರು 50% ರಷ್ಟು ಕಡಿತಗೊಳಿಸಲಾಗಿದೆ.

# ಬೆಂಗಳೂರಿನಲ್ಲಿ ಆಸ್ಟ್ರೇಡ್ ಆಯೋಜಿಸಿದ್ದ ಎಜುಟೆಕ್ ಟ್ರೇಡ್ ಮಿಷನ್ ಟು ಇಂಡಿಯಾ ಮುಕ್ತಾಯ



**ಬೆಂಗಳೂರು:** ಆಸ್ಟ್ರೇಲಿಯನ್ ಟ್ರೇಡ್ ಅಂಡ್ ಇನ್ವೆಸ್ಟ್ಮೆಂಟ್ ಕಮಿಷನ್ (ಆಸ್ಟ್ರೇಡ್) ಆಯೋಜಿಸಿದ್ದ 26 ಫೆಬ್ರವರಿ 2024 ರಿಂದ ಮಾರ್ಚ್ 1 ರವರೆಗೆ ನಡೆದ ಚೊಚ್ಚಲ ಎಜುಟೆಕ್ ಟ್ರೇಡ್ ಮಿಷನ್ ಟು ಇಂಡಿಯಾ 2024 ಯಶಸ್ವಿಯಾಗಿ ಮುಕ್ತಾಯಗೊಂಡಿದೆ. ಈ ಅಪೂರ್ವ ಉಪಕ್ರಮವನ್ನು ಭಾರತದಲ್ಲಿ ವೇಗವಾಗಿ ವಿಸ್ತರಣೆಗೊಳ್ಳುತ್ತಿರುವ ಆನ್ಲೈನ್ ಶಿಕ್ಷಣ ಮಾರುಕಟ್ಟೆಯಲ್ಲಿ ಪಾಲುದಾರಿಕೆ ಹೊಂದಲು ಮತ್ತು ಆಸ್ಟ್ರೇಲಿಯಾ ಮತ್ತು ಭಾರತದ ನಡುವಿನ ಸಹಯೋಗವನ್ನು ಹೆಚ್ಚಿಸುವ ಪಾಲುದಾರಿಕೆಗಳನ್ನು ಉತ್ತೇಜಿಸಲು ವಿನ್ಯಾಸ ಮಾಡಲಾಗಿತ್ತು. ಆಸ್ಟ್ರೇಲಿಯನ್ ಎಡ್ಟೆಕ್ ಕಂಪನಿಗಳು, ವಿಶ್ವವಿದ್ಯಾನಿಲಯಗಳು ಮತ್ತು ತರಬೇತಿ ಸಂಸ್ಥೆಗಳಿಗೆ ಭಾರತೀಯ ಆನ್ಲೈನ್ ಶಿಕ್ಷಣ ಕ್ಷೇತ್ರ ಮತ್ತು ಎಜುಟೆಕ್ ಪರಿಸರ ವ್ಯವಸ್ಥೆಯ ಬಗೆಗಿನ ಮಾಹಿತಿಯನ್ನು ಈ ವೇದಿಕೆಯಲ್ಲಿ ನೀಡಲಾಯಿತು. ಈ ಕಾರ್ಯಕ್ರಮವು ಪ್ರಮುಖ ಪಾಲುದಾರರು, ಸಂಭಾವ್ಯ ಸಹಯೋಗಿಗಳು, ಹೂಡಿಕೆದಾರರು ಮತ್ತು ಗ್ರಾಹಕರೊಂದಿಗೆ ಅರ್ಥಪೂರ್ಣ ಚರ್ಚೆಗಳು ಮತ್ತು ನೆಟ್ವರ್ಕಿಂಗ್ ಅವಕಾಶಗಳನ್ನು ಸಾಧ್ಯವಾಗಿಸಿತು. 2024ರ ಫೆಬ್ರವರಿ 27 ಮತ್ತು 28ರಂದು ಮುಂಬೈನಲ್ಲಿ ನಡೆದ ಇಂಡಿಯಾ ಡಿಜಿಟಲ್ ಶೃಂಗಸಭೆ 2024(ಐಡಿಎಸ್)ಯಲ್ಲಿ ಭಾಗವಹಿಸುವುದು ಮಿಷನ್ನ ಪ್ರಮುಖ ಅಂಶವಾಗಿತ್ತು. ಅದು ಆಸ್ಟ್ರೇಲಿಯಾದ ಪ್ರತಿನಿಧಿಗಳಿಗೆ ಅಮೂಲ್ಯವಾದ ನೆಟ್ವರ್ಕಿಂಗ್ ಅವಕಾಶಗಳನ್ನು ನೀಡಿತು. 5 ಆಸ್ಟ್ರೇಲಿಯನ್ ಎಜುಟೆಕ್ ಸಂಸ್ಥೆಗಳು ಮತ್ತು 3 ಆಸ್ಟ್ರೇಲಿಯನ್ ವಿಶ್ವವಿದ್ಯಾನಿಲಯಗಳ 15 ಪ್ರತಿನಿಧಿಗಳು ಮುಂಬೈ ಮತ್ತು ಬೆಂಗಳೂರಿಗೆ ಭೇಟಿ ನೀಡಿದರು. ಈ ನಗರಗಳನ್ನು ಅವುಗಳ ಉತ್ತಮ ಪರಿಸರ ವ್ಯವಸ್ಥೆಗಳಿಗೆ ಮತ್ತು ಭಾರತೀಯ ಮಾರುಕಟ್ಟೆಯಲ್ಲಿ ಲಭ್ಯವಿರುವ ಉತ್ತಮ ಅವಕಾಶಗಳ ಆಧಾರದಲ್ಲಿ ಆಯ್ಕೆಮಾಡಲಾಗಿತ್ತು.ಈ ಕುರಿತು ಆಸ್ಟ್ರೇಡ್ನ ಹಿರಿಯ ಟ್ರೇಡ್ ಮತ್ತು ಇನ್ವೆಸ್ಟ್ ಮೆಂಟ್ ಕಮಿಷನರ್ ಡಾ ಮೋನಿಕಾ ಕೆನಡಿ, ಭಾರತದಲ್ಲಿ ಆಸ್ಟ್ರೇಲಿಯನ್ ಎಡ್ಟೆಕ್ ಟ್ರೇಡ್ ಮಿಷನ್ 2024 ಅದ್ಭುತ ಯಶಸ್ಸನ್ನು ಕಂಡಿದೆ. ಅದು ಆಸ್ಟ್ರೇಲಿಯಾದ ಕಂಪನಿಗಳಿಗೆ ಭಾರತೀಯ ಮಾರುಕಟ್ಟೆಯನ್ನು ಅನ್ವೇಷಿಸಲು ಮತ್ತು ಸಂಪರ್ಕಗಳನ್ನು ಸಾಧಿಸಲು ಒಂದು ಅನನ್ಯ ವೇದಿಕೆಯನ್ನು ಸೃಷ್ಟಿಸಿತ್ತು ಎಂದು ಹೇಳಿದರು.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ‘ಅವತಾರ ಪುರುಷ 2’ ರಿಲೀಸ್ ಡೇಟ್ ಅನೌನ್ಸ್

ನಿರ್ದೇಶಕ ಸಿಂಪಲ್ ಸುನಿ ಅವರು ‘ಒಂದು ಸರಳ ಪ್ರೇಮಕಥೆ’ ಸಿನಿಮಾದಿಂದ ಗೆಲುವಿನ ನಗೆ ಬೀರಿದ್ದಾರೆ. ಈ ಸಿನಿಮಾ ವಿಮರ್ಶಕರಿಂದ ಹಾಗೂ ಅಭಿಮಾನಿಗಳಿಂದ ಮೆಚ್ಚುಗೆ ಪಡೆದಿದೆ. ಈ ಬೆನ್ನಲ್ಲೇ ಅವರ ನಿರ್ದೇಶನದ ಮತ್ತೊಂದು ಸಿನಿಮಾ ರಿಲೀಸ್‌ಗೆ ರೆಡಿ ಆಗಿದೆ. ‘ಅವತಾರ ಪುರುಷ’ ಚಿತ್ರದ ಮುಂದುವರಿದ ಭಾಗ ‘ಅವತಾರ ಪುರುಷ 2’ ಸಿನಿಮಾ ಬಿಡುಗಡೆ ಆಗುತ್ತಿದೆ. ಈ ಬಗ್ಗೆ ಚಿತ್ರತಂಡದಿಂದ ಅಧಿಕೃತ ಮಾಹಿತಿ ಸಿಕ್ಕಿದೆ. ಶರಣ್ ಹಾಗೂ ಆಶಿಕಾ ರಂಗನಾಥ್ ಈ ಚಿತ್ರದಲ್ಲಿ ಮುಖ್ಯಭೂಮಿಕೆ ನಿರ್ವಹಿಸಿದ್ದಾರೆ. ಪುಷ್ಕರ್ ಮಲ್ಲಿಕಾರ್ಜುನಯ್ಯ ಸಿನಿಮಾ ನಿರ್ಮಾಣ ಮಾಡಿದ್ದಾರೆ.

ಸಿಂಪಲ್ ಸುನಿ ನಿರ್ದೇಶನದ ‘ಅವತಾರ ಪುರುಷ’ ಸಿನಿಮಾ 2022ರ ಮೇ 6ರಂದು ರಿಲೀಸ್ ಆಯಿತು. ಈ ಸಿನಿಮಾದಲ್ಲಿ ಹಾಸ್ಯದ ಜೊತೆ ಸಸ್ಪೆನ್ಸ್ ಕೂಡ ಇತ್ತು. ಸುನಿ ಮಾಟ ಮಂತ್ರದ ಕಥೆಯನ್ನು ಹೇಳಿದ್ದರು. ಅವರ ಚಿತ್ರಗಳಲ್ಲಿ ಲವ್‌ಸ್ಟೋರಿಗಳೇ ಹೆಚ್ಚು ಹೈಲೈಟ್ ಆಗುತ್ತವೆ. ಆದರೆ, ಈ ಚಿತ್ರದಲ್ಲಿ ಅವರು ಹೊಸ ಪ್ರಯೋಗ ಮಾಡಿದ್ದರು. ಒಂದು ದೊಡ್ಡ ಟ್ವಿಸ್ಟ್‌ನಿಂದಿಗೆ ಮೊದಲ ಭಾಗ ಕೊನೆಗೊಂಡಿತ್ತು. ಈಗ ಎರಡನೇ




ಭಾಗದ ರಿಲೀಸ್ ಬಗ್ಗೆ ಮಾಹಿತಿ ನೀಡಲಾಗಿದೆ.

ಮಾರ್ಚ್ 22ರಂದು ‘ಅವತಾರ ಪುರುಷ 2’ ಸಿನಿಮಾ ರಿಲೀಸ್ ಆಗಲಿದೆ. ‘ತ್ರಿಷಂಕು ಪಯಣ’ ಎನ್ನುವ ವಾಕ್ಯ ಪೋಸ್ಟರ್‌ನಲ್ಲಿ ಹೈಲೈಟ್ ಆಗಿದೆ. ಈ ಸಿನಿಮಾ ಯಾವ ರೀತಿಯಲ್ಲಿ ಮೂಡಿ ಬರಲಿದೆ ಎನ್ನುವ ಕುತೂಹಲ ಅಭಿಮಾನಿಗಳಲ್ಲಿ ಮೂಡಿದೆ.



# ‘ವಿದ್ಯಾರ್ಥಿ ವಿದ್ಯಾರ್ಥಿನಿಯರೇ’ ಚಿತ್ರದ ಪೋಸ್ಟರ್ ಅನಾವರಣ!

ಅರುಣ್ ಅಮುಕ್ತ ನಿರ್ದೇಶನದಲ್ಲಿ ಮೂಡಿ ಬಂದಿರುವ ‘ವಿದ್ಯಾರ್ಥಿ ವಿದ್ಯಾರ್ಥಿನಿಯರೇ’ ಚಿತ್ರ ಚಿತ್ರೀಕರಣ ಶುರುವಾದಂದಿನಿಂದಲೂ ಒಂದಲ್ಲ ಒಂದು ರೀತಿಯಲ್ಲಿ ಪ್ರೇಕ್ಷಕರನ್ನು ಸೆಳೆಯುತ್ತಾ ಬಂದಿದೆ. ಅತ್ಯಂತ ಕ್ರಿಯಾಶೀಲವಾಗಿ ಪ್ರೇಕ್ಷಕರನ್ನು ತಲುಪಿಕೊಳ್ಳುವ ನಿಟ್ಟಿನಲ್ಲಿ ನಿರ್ದೇಶಕರ ಪಟ್ಟುಗಳೆಲ್ಲವೂ ಫಲ ಕೊಟ್ಟಿವೆ. ಇದೀಗ ಅದೇ ಹಾದಿಯಲ್ಲಿ ಸಾಗಿ ಬಂದಿರುವ ಚಿತ್ರತಂಡ ಪೋಸ್ಟರ್ ಮತ್ತು ಮೋಷನ್ ಪೋಸ್ಟರ್ ಅನ್ನು ಬಿಡುಗಡೆಗೊಳಿಸಿದೆ.

ಈ ಸಿನಿಮಾ ಶೀರ್ಷಿಕೆ ಕೇಳಿದರೇನೇ ಒಟ್ಟಾರೆ ಕಥಾನಕದ ಬಗೆಗೊಂದು ಸುಳಿವು ಸಿಗುತ್ತದೆ. ಆದರೆ, ಅಂಥಾ ಯಾವ ಅಂದಾಜಿಗೂ ನಿಲುಕದ ಸ್ವರೂಪದಲ್ಲಿ ಈ ಸಿನಿಮಾವನ್ನು ರೂಪಿಸಿರುವ ಭರವಸೆ ನಿರ್ದೇಶಕ ಅರುಣ್ ಅಮುಕ್ತ ಅವರಲ್ಲಿದೆ. ಈ ಹಿಂದೆ ಟೈಟಲ್ ಲಾಂಚ್ ಅನ್ನೂ ಸಹ ಪ್ರೇಕ್ಷಕರನ್ನು ಸೆಳೆಯುವಂತೆ ಮಾಡಿದ್ದ ಚಿತ್ರತಂಡ, ಇಂದು ಬೆಳಗ್ಗೆ ಪೋಸ್ಟರ್ ಹಾಗೂ ಸಂಜೆ ಮೋಷನ್ ಪೋಸ್ಟರ್ ಬಿಡುಗಡೆಗೊಳಿಸಿದೆ. ಇದರ ಸುತ್ತ ಈಗೊಂದಷ್ಟು ನಿರೀಕ್ಷೆ ಮತ್ತು ಚರ್ಚೆ ಹುಟ್ಟಿಕೊಂಡಿದೆ.

ಇದುವರೆಗೂ ಈ ಸಿನಿಮಾದ ಪಾತ್ರವರ್ಗ ಕಾಣಿಸಿರಲಿಲ್ಲ. ಈ ಪೋಸ್ಟರ್ ಹಾಗೂ ಮೋಷನ್ ಪೋಸ್ಟರ್ ಮೂಲಕ ಕೆಲ ಪಾತ್ರಗಳ ದರ್ಶನವಾಗಿದೆ. ಇದರಲ್ಲಿ ಚಂದನ್ ಶೆಟ್ಟಿ, ಭಾವನಾ ಅಪ್ಪು, ಅಮರ್, ಮನಸ್ವಿ, ವಿವಾನ್ ಸುನಿಲ್ ಪುರಾಣಿಕ್, ಅರವಿಂದ ರಾಜ್






ಪ್ರಶಾಂತ್ ಸಂಬರ್ಗಿ ಮುಂತಾದವರು ನಟಿಸಿದ್ದಾರೆ. ಇದರಲ್ಲಿ ನಾಲಕ್ಕು ಪಾತ್ರಗಳು ಈ ಪೋಸ್ಟರ್ ನಲ್ಲಿ ಕಾಣಿಸಿಕೊಂಡಿವೆ. ಅಂದಹಾಗೆ ಇದೊಂದು ಟೀನೇಜ್ ಕಲ್ಟ್ ಸಿನಿಮಾ. ಈಗಾಗಲೇ ಕಾಲೇಜು ಕೇಂದ್ರಿತವಾದ ಒಂದಷ್ಟು ಸಿನಿಮಾಗಳು ತೆರೆಗಂಡು ಗೆದ್ದಿವೆ. ಆ ಸಾಲಿನಲ್ಲಿ ಈ ಚಿತ್ರವನ್ನೂ ದಾಖಲಾಗುವಂತೆ ಮಾಡುವ ನಿಟ್ಟಿನಲ್ಲಿ ಚಿತ್ರತಂಡ ಶ್ರಮ ವಹಿಸುತ್ತಿದೆ.

ಸುಬ್ರಮಣ್ಯ ಕುಕ್ಕೆ ಮತ್ತು ಶಿವಲಿಂಗೇಗೌಡ ಈ ಸಿನಿಮಾವನ್ನು ನಿರ್ಮಾಣ ಮಾಡಿದ್ದಾರೆ. ಕುಮಾರ್ ಗೌಡ ಛಾಯಾಗ್ರಹಣ, ಭರ್ಜರಿ ಚೇತನ್ ಮತ್ತು ವಾಸುಕಿ ವೈಭವ್ ಸಾಹಿತ್ಯ, ಪವನ್ ಗೌಡ ಸಂಕಲನ, ಟೈಗರ್ ಶಿವು, ನರಸಿಂಹ ಸಾಹಸ ನಿರ್ದೇಶನ ಈ ಚಿತ್ರಕ್ಕಿರಲಿದೆ. ಅಮರ್, ಭಾವನಾ, ಮಾನಸಿ, ವಿವಾನ್, ಭವ್ಯ, ಸುನೀಲ್ ಪುರಾಣಿಕ್, ಅರವಿಂದ ರಾವ್, ಸಿಂಚನಾ, ರಘು ರಾಮನಕೊಪ್ಪ, ಪ್ರಶಾಂತ್ ಸಂಬರ್ಗಿ, ಕಾಕ್ರೋಚ್ ಸುಧಿ ಮುಂತಾದವರು ನಟಿಸಿದ್ದಾರೆ. ಇನ್ನುಳಿದಂತೆ ವಿಜೇತ್ ಕೃಷ್ಣ, ವಾಸು ದೀಕ್ಷಿತ್ ಮತ್ತು ಶಶಾಂಕ್ ಶೇಷಗಿರಿ ಸಂಗೀತ ನಿರ್ದೇಶನ ಮಾಡಲಿದ್ದಾರೆ.

ವಿಶೇಷವೆಂದರೆ, ಇದುವರೆಗೂ ಮುಖ್ಯಭೂಮಿಕೆಯಲ್ಲಿ ನಟಿಸಿರುವ ಚಂದನ್ ಶೆಟ್ಟಿ ಪಾತ್ರವನ್ನು ಗೌಪ್ಯವಾಗಿಡಲಾಗಿದೆ. ಶಿವರಾತ್ರಿಯಂದು ಚಂದನ್ ಶೆಟ್ಟಿ ಪಾತ್ರ ಪರಿಚಯ ಮಾಡಲಿರೋ ಮೋಷನ್ ಪೋಸ್ಟರ್ ಲಾಂಚ್ ಆಗಲಿದೆ. ಇದೀಗ ವಿದ್ಯಾರ್ಥಿ ವಿದ್ಯಾರ್ಥಿನಿಯರೇ ಚಿತ್ರ ಚಿತ್ರೀಕರಣದ ಅಂತಿಮ ಘಟ್ಟದಲ್ಲಿದೆ.

# ಸದ್ದಿಲ್ಲದೇ ಹಸೆಮಣೆ ಏರಿದ ‘ಬಿಗ್ ಬಾಸ್’ ಖ್ಯಾತಿಯ ದೀಪಿಕಾ ದಾಸ್



ಕಿರುತೆರೆಯ ಬ್ಯೂಟಿ ದೀಪಿಕಾ ದಾಸ್ ತಮ್ಮ ಅಭಿಮಾನಿಗಳಿಗೆ ಗುಡ್ ನ್ಯೂಸ್ ಕೊಟ್ಟಿದ್ದಾರೆ. ಸದ್ದಿಲ್ಲದೇ ಬಿಗ್ ಬಾಸ್ ಬೆಡಗಿ ಹಸೆಮಣೆ ಏರಿದ್ದಾರೆ. ಮದುವೆಯ ಸುಂದರ ಫೋಟೋಗಳನ್ನು ನಟಿ ಹಂಚಿಕೊಂಡಿದ್ದಾರೆ.



ಕೃಷ್ಣ ರುಕ್ಮಿಣಿ, ನಾಗಿಣಿ ಸೀರಿಯಲ್ ಮೂಲಕ ಮೋಡಿ ಮಾಡಿರುವ ನಟಿ ದೀಪಿಕಾ ದಾಸ್ ಅವರು ಗೋವಾದಲ್ಲಿ ಡೆಸ್ಟಿನೇಷನ್ ವೆಡ್ಡಿಂಗ್ ಆಗಿದ್ದಾರೆ. ಗೋವಾದ ಕಡಲ ತೀರದಲ್ಲಿ ಕರ್ನಾಟಕ ಮೂಲದ ದುಬೈ ಉದ್ಯಮಿಯನ್ನು ನಟಿ ಮದುವೆ ಆಗಿದ್ದಾರೆ.

ದೀಪಿಕಾ ಮದುವೆಯಲ್ಲಿ ಎರಡು ಕುಟುಂಬದ ಸದಸ್ಯರು, ಆಪ್ತರಷ್ಟೇ ಭಾಗಿದ್ದರು. ಮದುವೆಯ ಸುಂದರ ಫೋಟೋಗಳನ್ನು ಶೇರ್ ಮಾಡಿ ಕಾಮೆಂಟ್ ಬಾಕ್ಸ್ ಅನ್ನು ಆಫ್ ಮಾಡಿದ್ದಾರೆ.

ಮೂರು ಫೋಟೋಗಳನ್ನು ಹಂಚಿಕೊಂಡಿರುವ ದೀಪಿಕಾ ದಾಸ್ ‘ಮಿಸ್ಟರ್ ಮಿಸೆಸ್ ಡಿ’ ಎಂದು ಕ್ಯಾಪ್ಷನ್ ನೀಡಿದ್ದಾರೆ. ಡಿ–ದೀಪಿಕಾ ಎಂಬುದು ಎಲ್ಲರಿಗೂ ಗೊತ್ತು. ಹುಡುಗನ ಹೆಸರು ಕೂಡ ‘ಡಿ’ ಅಕ್ಷರಿದಿಂದಲೇ ಶುರುವಾಗಲಿದೆಯಾ? ಗೊತ್ತಿಲ್ಲ. ದೀಪಿಕಾ ದಾಸ್ ಅವರ ಜೊತೆಗೆ ಫೋಟೋದಲ್ಲಿ ಇರುವ ವ್ಯಕ್ತಿ ಯಾರು ಎಂಬುದು ಸದ್ಯಕ್ಕೆ ಗೊತ್ತಾಗಿಲ್ಲ. ದೀಪಿಕಾ ಕೂಡ ಆ ಬಗ್ಗೆ ಮಾಹಿತಿ ನೀಡಿಲ್ಲ. ದೀಪಿಕಾ ಹೊಸ ಬಾಳಿಗೆ ಶುಭವಾಗಲಿ ಎಂದು ಬಿಗ್ ಬಾಸ್ ಸೀಸನ್ 7ರ ವಿನ್ನರ್ ಶೈನ್ ಶೆಟ್ಟಿ ಸೇರಿದಂತೆ ಹಲವರು ಶುಭಕೋರಿದ್ದಾರೆ.

ಗ್ರೇಸ್ ಹ್ಯಾರಿಸ್ ಸ್ಫೋಟಕ ಅರ್ಧಶತಕ

# ಯುಪಿಗೆ 6 ವಿಕೆಟ್‌ಗಳ ಜಯ

**ಬೆಂಗಳೂರು:** ಗ್ರೇಸ್ ಹ್ಯಾರಿಸ್ ಅವರ ಸ್ಫೋಟಕ ಅರ್ಧಶತಕದ ನೆರವಿನಿಂದ ಯುಪಿ ವಾರಿಯರ್ಸ್, ಗುಜರಾತ್ ಜೈಂಟ್ಸ್ ವಿರುದ್ಧ 6 ವಿಕೆಟ್‌ಗಳ ಜಯ ಸಾಧಿಸಿದೆ.

ಟಾಸ್ ಸೋತು ಮೊದಲ ಬ್ಯಾಟ್ ಮಾಡಿದ ಗುಜರಾತ್ ಜೈಂಟ್ಸ್ 5 ವಿಕೆಟ್ ನಷ್ಟಕ್ಕೆ 142 ರನ್ ಗಳಿಸಿತು. ಸುಲಭದ ಸವಾಲನ್ನು ಬೆನ್ನಟ್ಟಿದ ಯುಪಿ ವಾರಿಯರ್ಸ್ 15.4 ಓವರ್‌ಗಳಲ್ಲಿ 4 ವಿಕೆಟ್ ನಷ್ಟಕ್ಕೆ 143 ರನ್ ಹೊಡೆಯುವ ಮೂಲಕ ಟೂರ್ನಿಯಲ್ಲಿ ಸತತ ಎರಡನೇ ಗೆಲುವು ಸಾಧಿಸಿತು.

ಯುಪಿ ಪರ ಗ್ರೇಸ್ ಹ್ಯಾರಿಸ್ ಔಟಾಗದೇ 60 ರನ್ (33 ಎಸೆತ, 9 ಬೌಂಡರಿ, 2 ಸಿಕ್ಸರ್) ಹೊಡೆದರೆ ಆರಂಭಿಕ ಆಟಗಾರ್ತಿ, ನಾಯಕಿ ಅಲಿಸ್ಸಾ ಹೀಲಿ 33 ರನ್ (21 ಎಸೆತ, 7 ಬೌಂಡರಿ) ಹೊಡೆದರು.

ಗುಜರಾತ್ ಜೈಂಟ್ಸ್ ಪರ ಆಶ್ಲೀಗ್ ಗಾರ್ಡ್ನರ್ 30 ರನ್ (17 ಎಸೆತ, 4 ಬೌಂಡರಿ, 1 ಸಿಕ್ಸರ್), ಫೋಬೆ ಲಿಚ್ಫೀಲ್ಡ್ 35 ರನ್ (26 ಎಸೆತ, 4 ಬೌಂಡರಿ, 1 ಸಿಕ್ಸರ್) ಹೊಡೆದರು.

ಸದ್ಯ ಡಬ್ಲ್ಯೂಪಿಎಲ್ ಅಂಕ ಪಟ್ಟಿಯಲ್ಲಿ ತಲಾ 4 ಅಂಕಗಳನ್ನು ಪಡೆದಿದ್ದರೂ ನೆಟ್ ರನ್ ರೇಟ್



ಆಧಾರದಲ್ಲಿ ಡೆಲ್ಲಿ ಮೊದಲ ಸ್ಥಾನ ಪಡೆದರೆ ಆರ್‌ಸಿಬಿ ಎರಡನೇ ಸ್ಥಾನ ಪಡೆದಿದೆ. ಯುಪಿ, ಮುಂಬೈ ಅನುಕ್ರಮವಾಗಿ ಮೂರು ಮತ್ತು ನಾಲ್ಕನೇ ಸ್ಥಾನ ಪಡೆದಿದೆ. ಆಡಿರುವ ಮೂರು ಪಂದ್ಯಗಳನ್ನು ಸೋತಿರುವ ಗುಜರಾತ್ 0 ಅಂಕದೊಂದಿಗೆ ಐದನೇ ಸ್ಥಾನದಲ್ಲಿದೆ.

# ಅಫ್ಘಾನ್ ಮಣಿಸಿ ಮೊದಲ ಟೆಸ್ಟ್ ಗೆದ್ದ ಐರ್ಲೆಂಡ್

ಇಲ್ಲಿ ನಡೆದ ಐರ್ಲೆಂಡ್ ಹಾಗೂ ಅಫ್ಘಾನಿಸ್ತಾನ ಟೆಸ್ಟ್ ಪಂದ್ಯದಲ್ಲಿ ಐರ್ಲೆಂಡ್ ಮೊದಲ ಜಯಗಳಿಸಿದೆ. ಈ ಮೂಲಕ ಸತತ ಏಳು ಸರಣಿ ಸೋಲುಗಳಿಗೆ ಐರ್ಲೆಂಡ್ ತಂಡ ಅಂತ್ಯ ಹಾಡಿದೆ.

ಅಬುಧಾಬಿಯಲ್ಲಿ ಅಫ್ಘಾನಿಸ್ತಾನ ತಂಡವನ್ನು 6 ವಿಕೆಟ್‌ಗಳಿಂದ ಮಣಿಸಿದ ಐರ್ಲೆಂಡ್‌ಗೆ ಇದು ಮೊದಲ ಟೆಸ್ಟ್ ಸರಣಿ ಗೆಲುವಾಗಿದೆ. ಇದಕ್ಕೂ ಮೊದಲು ತಂಡವು 7 ಟೆಸ್ಟ್ ಪಂದ್ಯಗಳನ್ನು ಆಡಿದ್ದು, ಎಲ್ಲದರಲ್ಲೂ ಸೋಲನ್ನು ಎದುರಿಸಿತ್ತು. ಈ ಪಂದ್ಯದಲ್ಲಿ ಗೆಲುವಿಗೆ 111 ರನ್‌ಗಳ ಗುರಿ ಪಡೆದ ಐರ್‌ಲ್ಯಾಂಡ್, ನಾಯಕ ಆಂಡ್ರ್ಯೂ ಬಾಲ್ಬಿರ್ನಿ ಅವರ ಅಜೇಯ ಅರ್ಧಶತಕದ ನೆರವಿನಿಂದ 4 ವಿಕೆಟ್ ಕಳೆದುಕೊಂಡು ಜಯ ಗಳಿಸಿತು.

ಗುರಿ ಬೆನ್ನಟ್ಟಿದ ಐರ್ಲೆಂಡ್ ತಂಡ ಒಂದು ಹಂತದಲ್ಲಿ 13ರನ್‌ಗಳಿಗೆ 3 ವಿಕೆಟ್ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿತ್ತು. ಇಲ್ಲಿಂದ ತಂಡದ ಇನ್ನಿಂಗ್ಸ್ ಜವಬ್ದಾರಿ ಹೊತ್ತ ನಾಯಕ ಆಂಡ್ರ್ಯೂ ಬಲ್ಬಿರ್ನಿ, ಮೊದಲು ಪಾಲ್ ಸ್ಟಿರ್ಲಿರ್ ಂಗ್ ಅವರೊಂದಿಗೆ ನಾಲ್ಕನೇ ವಿಕೆಟ್‌ಗೆ 26 ರನ್‌ಗಳ ಜೊತೆಯಾಟವನ್ನು ಆಡಿದರು. ನಂತರ ಲೋರ್ಕನ್ ಟಕರ್ ಅವರೊಂದಿಗೆ ಐದನೇ ವಿಕೆಟ್‌ಗೆ 72 ರನ್‌ಗಳ ಮ್ಯಾಚ್ ವಿನ್ನಿಂಗ್ ಜೊತೆಯಾಟ ನಡೆಸಿದರು. ಈ ಇನ್ನಿಂಗ್ಸ್‌ನಲ್ಲಿ



ಐರಿಶ್ ನಾಯಕ 96 ಎಸೆತಗಳಲ್ಲಿ ಅಜೇಯ 58 ರನ್ ಕಲೆಹಾಕಿದರು. ಐರ್‌ಲ್ಯಾಂಡ್ ತಂಡವು ವಿಶ್ವ ಟೆಸ್ಟ್ ಚಾಂಪಿಯನ್‌ನ ಭಾಗವಾಗಿಲ್ಲದ ಕಾರಣ ಹೆಚ್ಚಿನ ಸಂದರ್ಭಗಳಲ್ಲಿ ಕೇವಲ 1 ಪಂದ್ಯಗಳ ಟೆಸ್ಟ್ ಸರಣಿಯನ್ನು ಆಡುತ್ತದೆ. ಇದುವರೆಗೆ ತಂಡವು ಶ್ರೀಲಂಕಾ ವಿರುದ್ಧ ಒಮ್ಮೆ ಮಾತ್ರ 2 ಪಂದ್ಯಗಳ ಟೆಸ್ಟ್ ಸರಣಿಯನ್ನು ಆಡಿದೆ. ಈ ಪಂದ್ಯದಲ್ಲಿ ಅಫ್ಘಾನಿಸ್ತಾನದ ತಂಡ ತನ್ನ ಮೊದಲ ಇನಿಂಗ್ಸ್‌ನಲ್ಲಿ ಕೇವಲ 155 ರನ್ ಗಳಿಸಿತ್ತು. ಎರಡನೇ ಇನಿಂಗ್ಸ್‌ನಲ್ಲಿ 218 ರನ್ ಗಳಿಸಿತ್ತು. ಇತ್ತ ಐರ್‌ಲ್ಯಾಂಡ್ ತಂಡ ಮೊದಲ ಇನ್ನಿಂಗ್ಸ್‌ನಲ್ಲಿ 263 ರನ್ ಕಲೆಹಾಕಿ 108 ರನ್‌ಗಳ ಮುನ್ನಡೆ ಗಳಿಸಿತ್ತು. ಆಸ್ಟ್ರೇಲಿಯಾ ತನ್ನ ಮೊದಲ ಟೆಸ್ಟ್ ಗೆಲ್ಲಲು ಒಂದು ಪಂದ್ಯವನ್ನು ತೆಗೆದುಕೊಂಡಿತ್ತು. ಇಂಗ್ಲೆಂಡ್, ಪಾಕಿಸ್ತಾನ ಮತ್ತು ಅಫ್ಘಾನಿಸ್ತಾನ ತಮ್ಮ ಮೊದಲ ಟೆಸ್ಟ್ ಗೆಲ್ಲಲು ಎರಡು ಪಂದ್ಯಗಳನ್ನು ತೆಗೆದುಕೊಂಡಿತ್ತು. ವೆಸ್ಟ್ ಇಂಡೀಸ್ ಆರು ಪಂದ್ಯಗಳನ್ನು ಆಡಿದ್ದರೆ ಐರ್‌ಲ್ಯಾಂಡ್ ಈಗ ಎಂಟು ಪಂದ್ಯಗಳನ್ನು ತೆಗೆದುಕೊಂಡಿದೆ. 25 ಪಂದ್ಯಗಳ ನಂತರ ಭಾರತ ತನ್ನ ಮೊದಲ ಟೆಸ್ಟ್ ಪಂದ್ಯ ಗೆದ್ದಿತ್ತು.

# ಇಡೀ ಸಚಿವ ಸಂಪುಟ ಪಾಕ್ ಪರ ಘೋಷಣೆ ಕೂಗಿದವರ ಪರವಿದೆ

**ಬೆಂಗಳೂರು:** ರಾಜ್ಯಸಭಾ ಚುನಾವಣೆಯಲ್ಲಿ ಗೆಲುವು ಸಾಧಿಸಿದ ನಂತರ ಕಾಂಗ್ರೆಸ್ ಪಕ್ಷದ ನಾಸೀರ್ ಹುಸೇನ್ ಬೆಂಬಲಿಗನೊಬ್ಬ ವಿಧಾನಸೌಧದಲ್ಲೇ ಪಾಕ್ ಪರ ಘೋಷಣೆ ಕೂಗಿದ ಆರೋಪ ಕೇಳಿಬಂದಿದೆ. ಈ ಸಂಬಂಧ ಕಾಂಗ್ರೆಸ್ ಸರ್ಕಾರದ ವಿರುದ್ಧ ವಿಪಕ್ಷ ಬಿಜೆಪಿ ಮುಗಿಬೀಳುತ್ತಿದೆ. ಇಡೀ ಸಚಿವ ಸಂಪುಟ ಪಾಕ್ ಪರ ಘೋಷಣೆ ಕೂಗಿದವರ ಪರವಿದೆ ಎಂದು ವಿಧಾನ ಪರಿಷತ್ ವಿಪಕ್ಷ ನಾಯಕ ಕೋಟ ಶ್ರೀನಿವಾಸ್ ಪೂಜಾರಿ ಆರೋಪಿಸಿದ್ದಾರೆ.

ಬೆಂಗಳೂರಿನ ಬಿಜೆಪಿ ಪ್ರಧಾನ ಕಚೇರಿ ಜಗನ್ನಾಥ ಭವನದಲ್ಲಿ ನಡೆದ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕೋಟ ಶ್ರೀನಿವಾಸ್ ಪೂಜಾರಿ, ವಿಧಾನಸೌಧದಲ್ಲಿ ಪಾಕಿಸ್ತಾನದ ಪರ ಘೋಷಣೆ ಕೂಗಿದ ವಿಚಾರವಾಗಿ ಮಾತನಾಡಿದ ಅವರು, ಅಲ್ಲೊ ಇಲ್ಲೋ ಇಂತಹ ನಡೆಯುತ್ತಿತ್ತು. ನೋವಿನ ಸಂಗತಿ ಅಂದರೆ, ಕೆಂಗಲ್ ಹನುಮಂತಯ್ಯ ಕಟ್ಟಿದ ವಿಧಾನಸೌಧದಲ್ಲಿ ಘೋಷಣೆ ಮೊಳಗಿದೆ ಎಂದರು.

ಪ್ರಕರಣ ನಡೆದ 60 ಗಂಟೆಗಳು ಕಳೆದಿವೆ. ಈವರೆಗೂ ಯಾರನ್ನು ಬಂಧಿಸಿಲ್ಲ. ಇಡೀ ಸಚಿವ ಸಂಪುಟ ಘೋಷಣೆ ಪರ ಕೂಗಿದವರ ಪರವಿದ್ದಾರೆ ಎಂದು ಹೇಳಿದ ಶ್ರೀನಿವಾಸ್ ಪೂಜಾರಿ, ನೀವು (ಕಾಂಗ್ರೆಸ್) ಶತ್ರು ರಾಷ್ಟ್ರ ಅನ್ನುವುದನ್ನು ಒಪ್ಪಿಕೊಳ್ಳಿ ಎಂದರೆ, ಅದು ನಮ್ಮ ನೆರೆ ರಾಷ್ಟ್ರ ಎನ್ನುತ್ತಾರೆ ಎಂದರು. ಬಿಜೆಪಿಗೆ ಪಾಕಿಸ್ತಾನ ಶತ್ರು ರಾಷ್ಟ್ರ ಇರಬಹುದು. ಆದರೆ, ನಮಗಲ್ಲ. ಪಾಕ್ ನಮ್ಮ ನೆರೆಯ ರಾಷ್ಟ್ರ



ಎಂದು ಕಾಂಗ್ರೆಸ್ ಎಂಎಲ್‌ಸಿ ಬಿಕೆ ಹರಿಪ್ರಸಾದ್ ಅವರು ಪರಿಷತ್‌ನಲ್ಲಿ ಹೇಳಿಕೆ ನೀಡಿದ್ದರು.

ರಾಜ್ಯಸಭಾ ಸದಸ್ಯರಾಗಿ ಆಯ್ಕೆಯಾಗಿರುವ ನಾಸೀರ್ ಹುಸೇನ್ ಎಂಬುವವರು ಘಟನೆಯನ್ನು ಖಂಡಿಸುವ ಕೆಲಸ ಮಾಡಿಲ್ಲ ಎಂದು ಆಕ್ರೋಶ ಹೊರಹಾಕಿದ ಶ್ರೀನಿವಾಸ್ ಪೂಜಾರಿ, ನಿನ್ನೆ ನಾವು ರಾಜ್ಯಪಾಲರನ್ನು ಭೇಟಿಯಾಗಿದ್ದೇವೆ. ಅವರು ನ್ಯಾಯ ಕೊಡಿಸುವ ಭರವಸೆ ಕೊಡಿಸುತ್ತೇನೆ ಎಂದಿದ್ದಾರೆ. ಅದು ನಮಗೆ ತೃಪ್ತಿ ತಂದಿದೆ ಎಂದರು.

**ಕೇಂದ್ರ ಸರ್ಕಾರದ ಬಗ್ಗೆ ಜನರಿಗೆ ಸುಳ್ಳು ಮಾಹಿತಿ:** ಅನ್ನಭಾಗ್ಯ ಕಾರ್ಯಕ್ರಮದ ಬಗ್ಗೆ ಮಾತನಾಡಿದ ಕೋಟ ಶ್ರೀನಿವಾಸ್ ಪೂಜಾರಿ, ಕೇಂದ್ರ ಸರ್ಕಾರ ಪ್ರತಿ ತಿಂಗಳು 22 ಲಕ್ಷ ಕ್ವಿಂಟಾಲ್ ಅಕ್ಕಿ ಕಳುಹಿಸುತ್ತಿದೆ. ಆದರೆ, ಸಿದ್ದರಾಮಯ್ಯ ಅವರು ಕೇಂದ್ರ ಸರ್ಕಾರದ ವಿರುದ್ಧ ಜನರಿಗೆ ಸುಳ್ಳು ಹೇಳಿದ್ದಾರೆ. ಕೇಂದ್ರ ಸರ್ಕಾರ ಕೊಡುವ ಅಕ್ಕಿಯಿಂದಲೇ ಕಾಂಗ್ರೆಸ್ ಅನ್ನಭಾಗ್ಯ ಕಾರ್ಯಕ್ರಮ ಮಾಡಿದೆ ಎಂದರು.

ಬಿಜೆಪಿ ಸಂವಿಧಾನ ವಿರೋಧಿ ಅಂತಾರೆ. ಮೊನ್ನೆ ಸುಮಾರು 20 ಕೋಟಿ ರೂಪಾಯಿ ವೆಚ್ಚದಲ್ಲಿ ಸಂವಿಧಾನದ ಸಭೆ ನಡೆಸಿದ್ದಾರೆ. ನಿತಾಶ ಕೌಲ್ ಎಂಬವರನ್ನು ವಿದೇಶದಿಂದ ಕರೆಸಿ ಭಾಷಣ ಮಾಡಿಸಲು ಮುಂದಾಗಿದ್ದರು. ಸಂವಿಧಾನಕ್ಕೆ ಮೋಸ ಮಾಡಿದವರು ಯಾರಾದರೂ ಇದ್ದರೇ, ಅದು ಕಾಂಗ್ರೆಸ್‌ನವರು ಮಾತ್ರ ಎಂದರು.

**ಕಾಂತರಾಜು ವರದಿಯೋ? ಡಾ. ಹೆಗ್ಡೆ ವರದಿಯೋ?:** ಕಾಂತರಾಜು ವರದಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ವೀಕಾರ ಮಾಡಿದ್ದಾರೆ. ಆದರೆ, ಇದು ಕಾಂತರಾಜು ವರದಿಯೋ ಅಥವಾ ಡಾ ಹೆಗ್ಡೆ ವರದಿಯೋ ಅನ್ನೋದನ್ನ ಮೊದಲು ಹೇಳಬೇಕು ಎಂದು ಶ್ರೀನಿವಾಸ್ ಪೂಜಾರಿ ಹೇಳಿದ್ದಾರೆ. ಈ ಹಿಂದೆ ದ್ವಾರಕಾನಾಥ್ ವರದಿ ಕೊಟ್ಟಾಗ ಸರ್ಕಾರಕ್ಕೆ ಸಲ್ಲಿಸುವುದರ ಜತೆಗೆ ವರದಿ ಬಹಿರಂಗ ಮಾಡಿದ್ದರು. ಈಗ ಸಿಎಂ ಸಿದ್ದರಾಮಯ್ಯ ಸಹ ವರದಿಯನ್ನ ಬಹಿರಂಗ ಪಡಿಸದಂತೆ ಹೇಳಿದ್ದಾರೆ ಎಂದರು.

ಸಿಎಂ ಅವರು ರಾಜಕೀಯ ಮಾಡುತ್ತಾ ಇದ್ದಾರೆ ಅಷ್ಟೇ. ಅತ್ತ ದಾವಣಗೆರೆ ಹಾಗೂ ಕನಕಪುರದಿಂದ ಸಿಡಿಲು ಗುಡುಗು ಬಂದಿದೆ. ಶಾಮನೂರು ಶಿವಶಂಕರಪ್ಪ ಹಾಗೂ ಡಿಕೆ ಶಿವಕುಮಾರ್ ಭಯದಿಂದ ಸಿಎಂ ವರದಿ ಮುಚ್ಚಿಟ್ಟಿದ್ದಾರೆ. ಆದರೆ ಸಿದ್ದರಾಮಯ್ಯ ಅವರು ವರದಿ ಬಹಿರಂಗ ಪಡಿಸಿ ಜನರಿಗೆ ಮನವರಿಕೆ ಮಾಡಿಕೊಡಬೇಕು ಎಂದು ಒತ್ತಾಯಿಸಿದರು.

# ಹೈಕೋರ್ಟ್ ಅಂಗಳಕ್ಕೆ ಜಾತಿ ಗಣತಿ ವರದಿ

**ಬೆಂಗಳೂರು:** ರಾಜ್ಯದಲ್ಲಿ ಜಾತಿ ಗಣತಿ ಪ್ರಶ್ನಿಸಿ ಶಿವರಾಜ್ ಕನಶೆಟ್ಟಿ ಸಲ್ಲಿಸಿದ್ದ ಪಿಐಎಲ್ ವಿಚಾರಣೆ ಮಾಡಿದ ಹೈಕೋರ್ಟ್, ಜಾತಿಗಣತಿ ನಡೆಸಿದ 9 ವರ್ಷಗಳ ನಂತರ ವರದಿ ಸಲ್ಲಿಸಲಾಗಿದೆ. ಜಾತಿ ಗಣತಿ ನಡೆಸಲು ಕೇಂದ್ರ ಸರ್ಕಾರಕ್ಕೆ ಮಾತ್ರ ಅಧಿಕಾರವಿದೆ. ರಾಜ್ಯ ಸರ್ಕಾರಕ್ಕೆ ಜಾತಿ ಗಣತಿ ನಡೆಸುವ ಅಧಿಕಾರವಿಲ್ಲ. ಚುನಾವಣೆ ವೇಳೆ ಜಾತಿಗಣತಿ ವರದಿ ಸ್ವೀಕರಿಸಲಾಗಿದೆ. ರಾಜಕೀಯ ಕಾರಣಕ್ಕೆ ಸರ್ಕಾರದಿಂದ ಕ್ರಮವೆಂದು ಆರೋಪಿಸಿ ಅರ್ಜಿದಾರರ ಪರ ಹಿರಿಯ ವಕೀಲ ಜಿ.ಆರ್. ಗುರುಮಠ್ ವಾದ ಮಂಡಿಸಿದ್ದಾರೆ. ಈ ವೇಳೆ ಸಿಎಂ ಸಿದ್ದರಾಮಯ್ಯ ವರದಿ ಸ್ವೀಕರಿಸಿದ ಬಗ್ಗೆ ಮಾಹಿತಿ ಇಲ್ಲ ಎಂದು ಸರ್ಕಾರಿ ವಕೀಲರು ಹೇಳಿದ್ದಾರೆ.

ಸರ್ಕಾರ ವರದಿ ಸ್ವೀಕರಿಸಿದೆಯೇ ಇಲ್ಲವೇ ಎಂಬ ಬಗ್ಗೆ ಪ್ರಮಾಣಪತ್ರ ಸಲ್ಲಿಸಿ ಎಂದು ಸರ್ಕಾರಿ ವಕೀಲರಿಗೆ ಮುಖ್ಯ ನ್ಯಾಯಮೂರ್ತಿ ಎನ್.ವಿ.ಅಂಜಾರಿಯಾ, ನ್ಯಾಯಮೂರ್ತಿ ಟಿ.ಜಿ.ಶಿವಶಂಕರೇಗೌಡ ಅವರಿದ್ದ ಪೀಠ ಸೂಚನೆ ನೀಡಿದ್ದು, ವಿಚಾರಣೆಯನ್ನು ಹೈಕೋರ್ಟ್ ಮಾರ್ಚ್ 5ಕ್ಕೆ ಮುಂದೂಡಿದೆ.



ವಿಧಾನಸೌಧದಲ್ಲಿ ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ಅಧ್ಯಕ್ಷ ಜಯಪ್ರಕಾಶ್ ಹೆಗ್ಡೆ ಅವರಿಂದ ಸಿಎಂ ಸಿದ್ದರಾಮಯ್ಯ ವರದಿ ಸ್ವೀಕರಿಸಿದ್ದಾರೆ. ಸಾಮಾಜಿಕ ಮತ್ತು ಶೈಕ್ಷಣಿಕ ಅಧ್ಯಯನ ವರದಿ ಅಂತಾ ಹೆಸರಿದ್ರೂ, ಸಮೀಕ್ಷೆಯ ಪ್ರಶ್ನಾವಳಿಯಲ್ಲಿ ಜಾತಿ ಯಾವುದು ಅನ್ನೋ ಪ್ರಶ್ನೆ ಇದ್ದುದರಿಂದ ಇದು ಜಾತಿ ಗಣತಿಯೇ ಆಗಿದೆ. ಜಾತಿ ಗಣತಿ ವರದಿ ಸ್ವೀಕರಿಸಿರೋ ಸಿಎಂ ಸಿದ್ದರಾಮಯ್ಯ ಸಂಪುಟ ಸಭೆಯಲ್ಲಿ ವರದಿ ಬಗ್ಗೆ ಚರ್ಚಿಸಿ ಮುಂದಿನ ನಿರ್ಧಾರ ಅಂದಿದ್ದಾರೆ.

ಜಾತಿ ಗಣತಿ ವರದಿ ಮತ್ತೆ ರಾಜ್ಯ ರಾಜಕೀಯದಲ್ಲಿ ದೊಡ್ಡ ಸಂಚಲನ ಎಬ್ಬಿಸಿದೆ. ನಿನ್ನೆ ಜಯಪ್ರಕಾಶ್ ಹೆಗ್ಡೆ ಸಲ್ಲಿಸಿರುವ ವರದಿಗೆ ವೀರಶೈವ ಲಿಂಗಾಯತ ಮಹಾಸಭಾ ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ. ಜಾತಿ ಗಣತಿ ವರದಿ ಸಂಪೂರ್ಣ ಅವೈಜ್ಞಾನಿಕವಾಗಿದೆ. ಗಣತಿಗೆ ನಿಯುಕ್ತರಾದ ಸಿಬ್ಬಂದಿ ಹಲವರ ಮನೆಗಳಿಗೆ ಖುದ್ದು ಭೇಟಿ ನೀಡದೆ ಸರಿಯಾದ ಮಾಹಿತಿಯನ್ನೂ ದಾಖಲಿಸಿಲ್ಲ. ಇದನ್ನು ತರಾತುರಿಯಲ್ಲಿ ಅಂಗೀಕರಿಸಿದರೆ, ಉಪಯೋಗಕ್ಕಿಂತ ಹಾನಿಯೇ ಹೆಚ್ಚಾಗುತ್ತದೆ. ಈ ಹಿನ್ನಲೆಯಲ್ಲಿ ಈ ವರದಿ ತಿರಸ್ಕರಿಸಬೇಕು ಎಂದು ಮಹಾಸಭಾ ಮತ್ತೊಮ್ಮೆ ಒತ್ತಾಯಿಸಿದೆ. ಅಂಗೀಕರಿಸಿದರೆ ರಾಜ್ಯದ ಎಲ್ಲಾ ಹರ-ಗುರು ಚರಮೂರ್ತಿಗಳ ನೇತೃತ್ವದಲ್ಲಿ ರಾಜ್ಯಾದ್ಯಂತ ಹೋರಾಟವನ್ನು ವೀರಶೈವ ಲಿಂಗಾಯತ ಮಹಾಸಭಾ ರೂಪಿಸುವುದು ಅನಿವಾರ್ಯವಾಗುತ್ತದೆ ಎಂದು ಎಚ್ಚರಿಸಿದೆ.

ಜಾತಿಗಣತಿ ವರದಿ ಸಿಎಂ ಸಿದ್ದರಾಮಯ್ಯನವರ ಕೈಸೇರಿದೆ. ಆದ್ರೆ ಜಾತಿಗಣತಿ ವರದಿ ಅವೈಜ್ಞಾನಿಕವಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಆರೋಪಿಸಿದ್ದಾರೆ. ಈಗಾಗಲೇ ಒಕ್ಕಲಿಗ, ಲಿಂಗಾಯತ ಸಮುದಾಯ ವಿರೋಧಿಸಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com